ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 22 ಬುಧವಾರ 2025

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 275 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಪಂಚಗರುಡೋತ್ಸವ ಪೋಸ್ಟರ್ ಬಿಡುಗಡೆ



ಪಂಚಗರುಡೋತ್ಸವ ಕಾರ್ಯಕ್ಕೆ ಶಾಸಕ ಟಿ.ಎಸ್.ಶ್ರೀವತ್ಸ ಚಾಲನೆ ನೀಡಿದರು.

ಮೈಸೂರು,ಜ.21–ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಮಾರ್ಗದರ್ಶನದಲ್ಲಿ ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ದೇವಾಲಯದಲ್ಲಿ ಪಂಚಗರುಡೋತ್ಸವ ಕಾರ್ಯಕ್ಕೆ ಶಾಸಕ ಟಿ.ಎಸ್. ಶ್ರೀವತ್ಸ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿದರು.

ಬಳಿಕ ಅವರು ಮಾತನಾಡಿ, ಲೋಕ ಕಲ್ಯಾಣಕ್ಕಾಗಿ ಎರಡನೆ ಬಾರಿಗೆ ಪಂಚಗರುಡೋತ್ಸವ ಸೇವೆಯನ್ನು ಪ್ರಾರಂಭ ಮಾಡಲಾಗಿದೆ. ಶಾಸ್ತ್ರಗಳಲ್ಲಿ ಉಲ್ಲೇಖವಿರುವಂತೆ ಭಕ್ತಿ ಭಾವದಿಂದ ಸ್ವಾಮಿ ನಿಷ್ಠೆ ಇರುವ ಗರುಡನ ಮೇಲೆ ಬರುವ ಸ್ವಾಮಿ ದರ್ಶನ ಮಾಡುವುದರಿಂದ ನಮ್ಮ ಜೀವನ ಸಾರ್ಥಕವಾಗುತ್ತದೆ. ಆರೋಗ್ಯ ಸುಧಾರಿಸುತ್ತದೆ. ಸಜ್ಜನರ ಸಹವಾಸ ಸದಾ ಇರುತ್ತದೆ. ಲೋಕ ಕಲ್ಯಾಣವಾಗಿ ಸಕಲ ಸೌಭಾಗ್ಯ ದೊರೆಯುತ್ತದೆ ಎಂದರು.

ಪಂಚಗರುಡೋತ್ಸವ ಸೇವೆಯು ಜ.29ರಂದು ಸಂಜೆ 5 ಗಂಟೆಗೆ ಪ್ರಾರಂಭವಾಗಿ ವೇದಿಕೆ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮ, ಸಭಾ ಕಾರ್ಯಕ್ರಮ, ಪಂಚಗರುಡೋತ್ಸವ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಬ್ರಹ್ಮತಂತ್ರಪರ ಕಾಲಮಠದ ಸ್ವಾಮೀಜಿ, ಯತಿರಾಜ ನಾರಾಯಣ ಜೀ, ಸಂಸದ ಯದುವೀರ್ ಒಡೆಯರ್, ಭಾಷ್ಯಂ ಸ್ವಾಮೀಜಿ, ಯೋಗಾ ನರಸಿಂಹನ್, ವೀರರಾಘವನ್, ಪ್ರದೀಪ್, ಶ್ರೀಮತಿ ನಾಗಲಕ್ಷ್ಮಿ, ಜಾನಕಿ ಶೇಷಾದ್ರಿ, ರಾಧಿಕಾ, ರಾಮಸ್ವಾಮಿ ಅಯ್ಯಂಗಾರ್, ಶೇಷಾದ್ರಿ ಅಯ್ಯಂಗಾರ್, ಜಗದೀಶ್, ಪ್ರಸನ್ನ, ಶಾಂತರಾಮ್, ಆನಂದ್, ರಾಜಗೋಪಾಲ್ ಮತ್ತಿತರರಿದ್ದರು.

ಡಾ.ವಿಜಯಾ ದಬ್ಬೆ ಸ್ಮರಣಾರ್ಥ ರಾಜ್ಯ ಮಟ್ಟದ ಸಣ್ಣ ಕತೆ, ಕವನ ಸ್ಪರ್ಧೆ



ವಿಜಯಾ ದಬ್ಬೆ

ಮೈಸೂರು,ಜ.21–ಮೈಸೂರಿನ ಸಮತಾ ಅಧ್ಯಯನ ಕೇಂದ್ರವು ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಸಂಸ್ಥೆಯ ಸ್ಥಾಪಕ ಅಧ್ಯಕ್ಷೆ ಡಾ.ವಿಜಯಾ ದಬ್ಬೆ ಅವರ ಸ್ಮರಣಾರ್ಥ ರಾಜ್ಯ ಮಟ್ಟದ ಸಣ್ಣ ಕತೆ ಮತ್ತು ಕವನ ಸ್ಪರ್ಧೆ ಆಯೋಜಿಸಿದೆ. ಸಣ್ಣಕತೆ ಸ್ಪರ್ಧೆಯಲ್ಲಿ 20ರಿಂದ 40 ವಯೋಮಾನದ ಲೇಖಕಿಯರು, ಕವನ ಸ್ಪರ್ಧೆಯಲ್ಲಿ 20ರಿಂದ 35 ವಯೋಮಾನದ ವಿದ್ಯಾರ್ಥಿ, ಯುವಜನರು ಭಾಗವಹಿಸಬಹುದು. ಸಣ್ಣಕತೆ ಪದಮಿತಿ 2000 ಪದಗಳು. ಒಂದು ಕವನ ಕಳುಹಿಸಬೇಕು. ಈ ಮೊದಲು ಎಲ್ಲಿಯೂ ಪ್ರಕಟ ಆಗಿರಬಾರದು. ವಯಸ್ಸಿನ ಖಚಿತತೆಗೆ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ಆಧಾರ್ ಕಾರ್ಡ್ ಲಗತ್ತಿಸಬೇಕು. ಪ್ರಥಮ ಬಹುಮಾನ 5 ಸಾ.ರೂ., ದ್ವಿತೀಯ ಬಹುಮಾನ 3 ಸಾ.ರೂ., ತೃತೀಯ ಬಹುಮಾನ 2 ಸಾ.ರೂ. ಪ್ರತ್ಯೇಕ ಬಹುಮಾನಗಳಿವೆ. ವಿಜೇತರು ಮತ್ತು ತೀರ್ಪುಗಾರರ ಮೆಚ್ಚುಗೆ ಪಡೆಯುವ ತಲಾ 10 ಸ್ಪರ್ಧಿಗಳಿಗೆ ಮೇ ಕೊನೆಯ ವಾರ ಒಂದು ದಿನದ ಸಾಹಿತ್ಯ ಕಮ್ಮಟ ಆಯೋಜಿಸಲಾಗುವುದು. ಕಥೆ, ಕವನಗಳನ್ನು ಮಾ.15ರೊಳಗೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗೆ ಮೊ. 9449695304 ಸಂಪರ್ಕಿಸಬಹುದು.



ಎಸ್ಪಿಗೆ ಅಭಿನಂದನೆ

ಮೈಸೂರು ಎಸ್ಪಿ ಎನ್.ವಿಷ್ಣುವರ್ಧನ್ ಅವರು ಪದೋನ್ನತಿ ಪಡೆದ ಹಿನ್ನೆಲೆಯಲ್ಲಿ ಚಾಮುಂಡೇಶ್ವರಿ ಬಳಗದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಸಪ್ತಗಿರಿ ಕ್ಷೇಮಾಭಿವೃದ್ಧಿ ಸಂಘದ ವಾರ್ಷಿಕ ಸಮಾರಂಭದಲ್ಲಿ ಸನ್ಮಾನ



ಸಪ್ತಗಿರಿ ಕ್ಷೇಮಾಭಿವೃದ್ಧಿ ಸಂಘದ ವಾರ್ಷಿಕ ಸಮಾರಂಭದಲ್ಲಿ ಸರ್ಕಾರಿ ಸೇವೆಯಲ್ಲಿದ್ದು, ನಿವೃತ್ತರಾದವರಿಗೆ ಮತ್ತು ನೀಲಗಿರಿಯ ಹಿರಿಯರನ್ನು ಅಭಿನಂದಿಸಲಾಯಿತು.

ಮೈಸೂರು, ಜ.21–ಸಪ್ತಗಿರಿ ಕ್ಷೇಮಾಭಿವೃದ್ಧಿ ಸಂಘದ ವಾರ್ಷಿಕ ಸಮಾರಂಭ ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರ್ ಸಭಾಂಗಣದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಕಳೆದ ಬಾರಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅಧಿಕ ಅಂಕಗಳನ್ನು ಗಳಿಸಿದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಗೌರವ ಧನ ನೀಡಿ ಪ್ರೋತ್ಸಾಹಿಸಿ, ಸರ್ಕಾರಿ ಸೇವೆಯಲ್ಲಿದ್ದು, ನಿವೃತ್ತರಾದವರಿಗೆ ಮತ್ತು ನೀಲಗಿರಿಯ ಹಿರಿಯರನ್ನು ಸಹ ಅಭಿನಂದಿಸಲಾಯಿತು. ನಂತರ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು. ಸಪ್ತಗಿರಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜೇಶ್, ನಿವೃತ್ತ ಅಧಿಕಾರಿ ಫ್ರಾಂಕ್ ಲೈನ್, ಉಪನ್ಯಾಸಕ ಪ್ರಹ್ಲಾದ್, ನಿವೃತ್ತ ದೈಹಿಕ ಶಿಕ್ಷಕ ಗುರುಮಾದು, ಎಸ್‌ಬಿಐ ಬ್ಯಾಂಕಿನ ನಿವೃತ್ತ ಮ್ಯಾನೇಜರ್ ಪ್ರೇಮ್‌ಕುಮಾರ್, ನಿವೃತ್ತ ಶಿಕ್ಷಕ ರುದ್ರಸ್ವಾಮಿ ಮತ್ತಿತರರಿದ್ದರು.

ಶ್ರೀ ಮಲೈ ಮಹದೇಶ್ವರ ಪತ್ತಿನ ಸಹಕಾರ ಸಂಘದ ನೂತನ ಪದಾಧಿಕಾರಿಗಳು

ಮೈಸೂರು,ಜ.21–ಮೈಸೂರಿನ ರಾಮಾನುಜ ರಸ್ತೆಯಲ್ಲಿರುವ ಶ್ರೀ ಮಲೈ ಮಹದೇಶ್ವರ ಪತ್ತಿನ ಸಹಕಾರ ಸಂಘದ 5 ವರ್ಷಗಳ ಅವಧಿಗೆ ನಡೆದ ಆಡಳಿತ ಮಂಡಳಿ ಚುನಾವಣೆಯಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಸಾಮಾನ್ಯ ಕ್ಷೇತ್ರದಿಂದ ಎಂ.ಕುಮಾರ್ ಚಿಕ್ಕಳ್ಳಿ, ರಾಜು ದೇವಲಾಪುರ, ಡಿ. ಮೋಹನ್‌ಕುಮಾರ್ ಗೆಜ್ಜಗಳ್ಳಿ, ಕೆ.ಎಸ್. ಮಾದಪ್ಪ ಕೀಳನಪುರ, ಬಸವರಾಜು ಎಂ.ಕೇರ್ಗಳ್ಳಿ, ಎನ್.ಬಿ.ರಾಜು ನಾಗವಾಲ, ಶ್ರೀಕಂಠಮೂರ್ತಿ ಮೈಸೂರು, ಎಸ್.ಶಿವಮೂರ್ತಿ ಚಿಕ್ಕಕಾನ್ಯ, ಎನ್.ಸೋಮಣ್ಣ ದೇವಲಾಪುರ, ಮಹಿಳಾ ಮೀಸಲು ಕ್ಷೇತ್ರದಿಂದ ಶ್ರೀಮತಿ ಎನ್.ಬಿ.ಭಾಗ್ಯ ದೇವಲಾಪುರ, ಶ್ರೀಮತಿ ದಾಕ್ಷಾಯಿಣಿ ಹಡಜನ, ಹಿಂದುಳಿದ ವರ್ಗ ಪ್ರವರ್ಗ ಬಿ ಮೀಸಲು ಕ್ಷೇತ್ರದಿಂದ ನಾಗರಾಜು ಕೂಡನಹಳ್ಳಿ, ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಯತಿರಾಜು ಅವರು ಆಯ್ಕೆಯಾಗಿದ್ದಾರೆ.

ನಿಧನ

ಸಿಸ್ಟರ್ ಜೋವಿತಾ ನೊರೋನ್ಹಾ



ಮೈಸೂರು, ಜ. 21–ಬೆಂಗಳೂರಿನ ಜ್ಯೋತಿನಿವಾಸ್ ಕಾಲೇಜಿನ ನಿವೃತ್ತ ಪ್ರಿನ್ಸಿಪಾಲ್ ಮತ್ತು ದಿವಂಗತ ವೆರಿ ರೆ. ಫಾದರ್ ಡೆನೀಸ್ ನೊರೋನ್ಹಾ ಆಫ್ ಮೈಸೂರು ಡಯೋಸಿಸ್‌ನ ಸಹೋದರಿ ಸಿಸ್ಟರ್ ಜೋವಿತಾ ನೊರೋನ್ಹಾ (83) ಜನವರಿ 19ರಂದು ನಿಧನರಾದರು.

ಇವರು ಕೆಆರ್‌ಓಎಸ್‌ಎಸ್ ಅಂಡ್ ಓಡಿಪಿ, ಮೈಸೂರಿನಲ್ಲಿ ಸೇವೆ ಸಲ್ಲಿಸಿದ್ದರು. ಅಂತ್ಯಕ್ರಿಯೆ ಬೆಂಗಳೂರಿನ ಸೇಂಟ್ ಜೋಸೆಫ್ ಕಾನ್ವೆಂಟ್, ಫ್ರೇಜರ್ ಟೌನ್‌ನಲ್ಲಿ ನೆರವೇರಿಸಲಾಯಿತು ಎಂದು ಮೂಲಗಳು ತಿಳಿಸಿವೆ.

ಅಲ್ಪಸಂಖ್ಯಾತರ ಕಲ್ಯಾಣ ಸೌಲಭ್ಯಗಳ ಅರ್ಹ ಫಲಾನುಭವಿಗಳಿಗೆ ತಲುಪಿಸಲು ಸೂಚನೆ



ಮೈಸೂರು ಡಿಸಿ ಕಚೇರಿಯಲ್ಲಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ನಿಸಾರ್ ಅಹಮ್ಮದ್ ಅಧಿಕಾರಿಗಳ ಸಭೆ ನಡೆಸಿದರು.

ಮೈಸೂರು, ಜ.21– ಅಲ್ಪಸಂಖ್ಯಾತರ ಅಭಿವೃದ್ಧಿಗೆ ಸರ್ಕಾರಗಳು ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಇವುಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು ಎಂದು ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ನಿಸಾರ್ ಅಹಮ್ಮದ್ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಅಲ್ಪಸಂಖ್ಯಾತರ ಅಭಿವೃದ್ಧಿಯ ಸಂಬಂಧ 2024–25ನೇ ಸಾಲಿನ ಜಿಲ್ಲಾ ಮಟ್ಟದ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಲ್ಪಸಂಖ್ಯಾತರ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಿ. ಸರ್ಕಾರಿ ಉರ್ದು ಶಾಲೆಗಳಲ್ಲಿ ಅಲ್ಪಸಂಖ್ಯಾತರ ಮಕ್ಕಳು ಎಷ್ಟು ಜನ ಶಾಲೆ ಬಿಟ್ಟಿದ್ದಾರೆ. ಶಾಲೆ ಬಿಡಲು ಕಾರಣಗಳು ಏನು ಎಂಬುದನ್ನು ಶಿಕ್ಷಣ ಇಲಾಖೆಯ ಅಧಿಕಾರಿಗಳು ಸರ್ವೆ ಮಾಡಬೇಕು. ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಜಿಲ್ಲಾ ನಗರಾಭಿವೃದ್ಧಿ ಕೋಶದ ವತಿಯಿಂದ ವಾಜಪೇಯಿ ನಗರ ವಸತಿ ಯೋಜನೆಯಡಿ ವಸತಿ ವ್ಯವಸ್ಥೆ ಕಲ್ಪಿಸಲು ಯೋಜನೆಯಿದ್ದು, ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಕಲ್ಪಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಉದ್ಯೋಗ ಮತ್ತು ವಿನಿಮಯ ಕೇಂದ್ರದ ವತಿಯಿಂದ ವಿವಿಧ ಕಂಪನಿ ಹಾಗೂ ಕಾರ್ಖಾನೆಗಳಿಗೆ ಅಗತ್ಯವಿರುವ ಹುದ್ದೆಗಳ ಬಗ್ಗೆ ಮಾಹಿತಿ ಪಡೆದು ಆಸಕ್ತಿ ಇರುವ ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸಿಕೊಡಬೇಕು. ತೋಟಗಾರಿಕೆ ಇಲಾಖೆಯಲ್ಲಿ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ, ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಗಳಡಿ ಅಲ್ಪಸಂಖ್ಯಾತರಿಗೆ ಇರುವ ಸೌಲಭ್ಯಗಳನ್ನು ಅರ್ಹರಿಗೆ ನೀಡಬೇಕು. ಅಲ್ಪಸಂಖ್ಯಾತರು ಕೃಷಿ ಮಾಡುತ್ತಿರುವ ಸಂಖ್ಯೆಯ ಮಾಹಿತಿಯನ್ನು ಪಡೆದುಕೊಳ್ಳಿ. ಆಗ ಅವರಿಗೆ ಸೌಲಭ್ಯ ನೀಡಲು ಸಾಧ್ಯವಾಗುತ್ತದೆ ಎಂದರು.

ಅಲ್ಪಸಂಖ್ಯಾತರ ಆಯೋಗದ ಕಾರ್ಯದರ್ಶಿ ಮುಜಿಬುಲ್ಲಾ ಜಫಾರಿ ಮಾತನಾಡಿ, ಈ ಹಿಂದೆ 12 ಅಂಶಗಳ ಕಾರ್ಯಕ್ರಮ ಇತ್ತು. ಈಗ 15 ಅಂಶಗಳ ಕಾರ್ಯಕ್ರಮ ಇದೆ. ಅಲ್ಪಸಂಖ್ಯಾತರ ಆಯೋಗ ಅಭಿವೃದ್ಧಿ ಆಗುತ್ತಿದೆಯೇ ಎಂಬುದನ್ನು ಪರಿಶೀಲಿಸುತ್ತದೆ. ಆಯೋಗಕ್ಕೆ ಸಿವಿಲ್ ಕೋರ್ಟ್‌ನ ಅಧಿಕಾರ ನೀಡಲಾಗಿದೆ. ಯಾವುದೇ ಅಧಿಕಾರಿಯಿಂದ ಮಾಹಿತಿ ಪಡೆಯಬಹುದು. ಮಾಹಿತಿ ನೀಡದೆ ಇದ್ದರೆ ನೋಟಿಸ್ ನೀಡಿ ಮಾಹಿತಿ ಪಡೆಯಬಹುದಾಗಿದೆ ಇಂತಹ ಅಧಿಕಾರ ಆಯೋಗಕ್ಕೆ ಇದೆ. ಆಯೋಗವು ಕೋಮು ಸೌಹಾರ್ದತೆಯನ್ನು ಕಾಪಾಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತದೆ ಎಂದರು. ಸಭೆಯಲ್ಲಿ ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತರೆಡ್ಡಿ, ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್, ಅಧಿಕಾರಿಗಳು ಇದ್ದರು.

> “ಅಲ್ಪಸಂಖ್ಯಾತ ಮಕ್ಕಳಿಗೆ ವಿದ್ಯಾರ್ಥಿವೇತನ ಸಕಾಲದಲ್ಲಿ ದೊರೆಯಬೇಕು. ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಬೇಕು. ಅಲ್ಪಸಂಖ್ಯಾತರ ಹಾಸ್ಟೆಲ್‌ಗಳಲ್ಲಿ ಉತ್ತಮ ಗುಣಮಟ್ಟದ ಆಹಾರ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ಅಲ್ಪಸಂಖ್ಯಾತ ಫಲಾನುಭವಿಗಳಿಗೆ ಬ್ಯಾಂಕ್‌ಗಳು ಸರಳವಾಗಿ ಸಾಲ ಮಂಜೂರಾತಿ ಮಾಡಬೇಕು. ಈ ಬಗ್ಗೆ ಲೀಡ್ ಬ್ಯಾಂಕ್ ಮ್ಯಾನೇಜರ್ ಕ್ರಮವಹಿಸಬೇಕು.
>
> –ನಿಸಾರ್ ಅಹಮ್ಮದ್
> ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ

ಚಿಗುರು ಸಂಜೆ 'ಸೋಮಶ್ರೀ' ಪ್ರಶಸ್ತಿ ಪ್ರದಾನ

ಮೈಸೂರು,ಜ.21–ಶ್ರೀ ಉಮಾಮಹೇಶ್ವರ ನೃತ್ಯ ಕಲಾಕ್ಷೇತ್ರ ಟ್ರಸ್ಟ್ ಸಂಸ್ಥೆಯ ಸಂಸ್ಥಾಪಕರಾದ ಕರ್ನಾಟಕ ಕಲಾಶ್ರೀ ನಾಟ್ಯಚಾರ್ಯ ಟಿ.ಎಸ್.ಸೋಮಶೇಖರ್ ಸಂಸ್ಮರಣಾರ್ಥ 'ನೃತ್ಯ ಸಮರ್ಪಣಾ–2025' ಚಿಗುರು ಸಂಜೆ ಗುರುವಂದನಾ ಭರತನಾಟ್ಯ ಕಾರ್ಯಕ್ರಮವನ್ನು ಗಾನಭಾರತಿ ರಮಾ ಗೋವಿಂದ ರಂಗವೇದಿಕೆಯಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಉದ್ಘಾಟಿಸಿದರು. ಗುರುವಂದನಾ ಕಾರ್ಯಕ್ರಮವನ್ನು ಸಂಸ್ಥೆಯ ಸಂಸ್ಥಾಪಕರ 3ನೇ ತಲೆಮಾರಿನ ಯುವ ಕಲಾವಿದೆಯಾದ ಶ್ರೀಮತಿ ಶಾರಿಕ ಕೌಶಿಕ್‌ರವರು ಮೂರು ನೃತ್ಯ ಬಂಧಗಳನ್ನು ಪ್ರಸ್ತುತಪಡಿಸಿದರು.

ಅದರಲ್ಲೂ ಶ್ರೀ ತ್ಯಾಗರಾಜರ ಕೃತಿ ಸೊಗಸುಗಾ ಮೃದಂಗ ತಾಳಮು, ಈ ಕೃತಿಯಲ್ಲಿನ, ತಾಳ, ಗತಿ, ಯತಿ, ಜತಿ ಮತ್ತು ನವರಸವನ್ನು ಮನೋಜ್ಞವಾಗಿ ಅಭಿನಯಿಸಿದರು.

ಕಾರ್ಯಕ್ರಮದಲ್ಲಿ 'ಸೋಮಶ್ರೀ' ಪ್ರಶಸ್ತಿಯನ್ನು ಬೆಂಗಳೂರಿನ ಅನನ್ಯ ಸ್ಕೂಲ್ ಆಫ್ ಡ್ಯಾನ್ಸ್‌ನ ನಿರ್ದೇಶಕಿ ಬೃಂದಾ ಅವರಿಗೆ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ನಿರ್ದೇಶಕ ಪ್ರೊ. ಕೆ. ರಾಮಮೂರ್ತಿರಾವ್ ಮಾತನಾಡಿ, ಶ್ರೀ ಉಮಾಮಹೇಶ್ವರ ನೃತ್ಯ ಕಲಾ ಕ್ಷೇತ್ರದ ಸಂಸ್ಥಾಪಕರಾದ ಟಿ.ಎಸ್.ಸೋಮಶೇಖರ್‌ರವರ ಅಪೂರ್ವ ಸಾಧನೆ ಬಗ್ಗೆ ತಿಳಿಸಿಕೊಟ್ಟರು. ಶಾಸಕ ಟಿ.ಎಸ್.ಶ್ರೀವತ್ಸ ಎಲ್ಲಾ ಸಹಕಾರದ ಭರವಸೆ ನೀಡಿದರು.

'ಚಿಗುರು ಸಂಜೆ' ಕಾರ್ಯಕ್ರಮವು ವಿ॥ ಶ್ರೀ ಲಕ್ಷ್ಮಿಕುಮಾರ್ ಅವರ ನಿರ್ದೇಶನದಲ್ಲಿ ಸುಮಾರು 40 ವಿದ್ಯಾರ್ಥಿನಿಯರು 1 ಗಂಟೆ 30 ನಿಮಿಷಗಳ ಕಾಲ ವಿವಿಧ ಆಯಾಮಗಳಲ್ಲಿ ಪ್ರದರ್ಶನ ನೀಡಿದರು. ಪುಷ್ಪಾಂಜಲಿ, ವಿವಿಧ ದೇವತೆಗಳ ಶ್ಲೋಕಾಭಿನಯ, ಗಂ ಗಂ ಗಣಪತಿ, ಶಿವಸ್ತುತಿ, ಮಹಾಕಾಳಿ ಎಂಬ ಕೃತಿ, ಹಿಮಶೈಲಜೆ ಸಾಂಪ್ರದಾಯಕ ಹಾಡಿಗೆ ನೃತ್ಯ, ಶ್ರೀಮಹಾವಿಷ್ಣು ಸ್ತೋತ್ರ, ದಶಾವತಾರದ ದೇವರನಾಮ, ಬಸವಣ್ಣನವರ ವಚನ ಮತ್ತು ತಿಲ್ಲಾನದೊಂದಿಗೆ ಸಂಪನ್ನಗೊಳಿಸಿದರು.



ಮೈಸೂರಿನ ಗಾನಭಾರತಿ ರಮಾ ಗೋವಿಂದ ರಂಗವೇದಿಕೆಯಲ್ಲಿ ಕರ್ನಾಟಕ ಕಲಾಶ್ರೀ ನಾಟ್ಯಚಾರ್ಯ ಟಿ.ಎಸ್.ಸೋಮಶೇಖರ್ ಸಂಸ್ಮರಣಾರ್ಥ 'ನೃತ್ಯ ಸಮರ್ಪಣಾ–2025' ಚಿಗುರು ಸಂಜೆ ಗುರುವಂದನಾ ಭರತನಾಟ್ಯ ನಡೆಯಿತು.

ಮೈಸೂರು ಮಹಾನಗರಪಾಲಿಕೆ ನೌಕರರ ಸಹಕಾರ ಸಂಘದ ಶತಮಾನೋತ್ಸವ ಭವನ ಉದ್ಘಾಟನೆ




ಮೈಸೂರಿನ ಚಾಮರಾಜ ಮೊಹಲ್ಲಾದಲ್ಲಿ ಮೈಸೂರು ಮಹಾನಗರಪಾಲಿಕೆ ನೌಕರರ ಸಹಕಾರ ಸಂಘದ ಶತಮಾನೋತ್ಸವ ಭವನವನ್ನು ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್ ಉದ್ಘಾಟಿಸಿದರು.

ಮೈಸೂರು,ಜ.21–ಮೈಸೂರು ಮಹಾನಗರಪಾಲಿಕೆ ನೌಕರರ ಸಹಕಾರ ಸಂಘವು ನೂರು ವರ್ಷಗಳನ್ನು ಪೂರೈಸಿದ ಸಂದರ್ಭದಲ್ಲಿ ಶತಮಾನೋತ್ಸವ ಭವನ ಉದ್ಘಾಟನೆಯಾಗುತ್ತಿರುವುದು ಒಳ್ಳೆಯ ಬೆಳವಣಿಗೆ. ಸಹಕಾರ ಸಂಘ ಹೀಗೆಯೇ ಅಭಿವೃದ್ಧಿ ದಿಕ್ಕಿನಲ್ಲಿ ಮುನ್ನಡೆ ಸಾಧಿಸಲಿ ಎಂದು ನಗರಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್ ಆಶಿಸಿದರು.

ಮೈಸೂರು ಚಾಮರಾಜ ಮೊಹಲ್ಲಾದ ಡಿ.ಸುಬ್ಬಯ್ಯ ರಸ್ತೆಯಲ್ಲಿರುವ ಮೈಸೂರು ಮಹಾನಗರ ಪಾಲಿಕೆ ನೌಕರರ ಸಹಕಾರ ಸಂಘದ ಶತಮಾನೋತ್ಸವ ಭವನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ವೇಳೆ ಮೈಸೂರು ಮಹಾನಗರ ಪಾಲಿಕೆ ನೌಕರರ ಸಂಘದ ಆಡಳಿತ ಮಂಡಳಿ ಅಧ್ಯಕ್ಷ ಜವರೇಗೌಡ, ಉಪಾಧ್ಯಕ್ಷ ಸಿ.ರವಿಶಂಕರ್, ಎಸ್.ಪುಟ್ಟಸ್ವಾಮಿ, ನಿರ್ದೇಶಕರಾದ ಎಂ.ಬಸವಣ್ಣ, ಬಿ.ಭಾಸ್ಕರ್, ಡಿ.ಸುರೇಂದ್ರಕುಮಾರ್, ಶಂಭು, ಎಸ್.ಮಂಜುಕುಮಾರ್, ಮಹದೇವಸ್ವಾಮಿ, ಪಿ.ಶೀಲಾ, ಎಸ್.ಮೈತ್ರಿ, ಬಿ.ರಾಜು, ಕಾರ್ಯದರ್ಶಿ ಎನ್.ಶಿವಕುಮಾರ್, ಎಂ.ಸಿದ್ದಪ್ಪಾಜಿ, ಎಂ.ವಿ. ಮೋಹನ್‌ಕುಮಾರ್, ಎನ್.ಸುರೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.01.2025 ಬುಧವಾರ, ಮಳೆ ನಕ್ಷತ್ರ: ಉತ್ತರಾಷಾಢ 11.01.2025 ರಿಂದ 23.01.2025 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಹೇಮಂತ ಋತು, ಪುಷ್ಯ ಮಾಸ, ಕೃಷ್ಣ ಪಕ್ಷ, ತಿಥಿ: ಅಷ್ಟಮಿ, ನಕ್ಷತ್ರ: ಸ್ವಾತಿ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಡಯಾಬಿಟಿಕ್ ರೆಟಿನೋಪತಿ ಮತ್ತು ಹಿಮ್ಮಡಿ ಮುಳ್ಳು ತಪಾಸಣಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಗೆ.

■ **ಅಯೋಧ್ಯ ಬಾಲರಾಮ ಶಿಲೋದ್ಭವ ಕ್ಷೇತ್ರ :** ಬಾಲರಾಮರ ಪ್ರತಿಷ್ಠಾಪನಾ ಮಹೋತ್ಸವ, ಪೂಜಾ ಕಾರ್ಯಕ್ರಮ, ಸಂಕಲ್ಪ ಕಾರ್ಯಕ್ರಮ, ಉಪಸ್ಥಿತರು : ಶಾಸಕ ಜಿ.ಟಿ. ದೇವೇಗೌಡ, ಸ್ಥಳ: ಹಾರೋಹಳ್ಳಿ, ಗುಜ್ಜೇಗೌಡನಪುರ ಗ್ರಾಮ, ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ

■ **ಮಲಬಾರ್ ಗೋಲ್ಡ್ ಅಂಡ್ ಡೈಮಂಡ್ಸ್ :** ಬ್ರೈಡಲ್ ಜ್ಯೂವೆಲ್ಲರಿ ಶೋ, ಸ್ಥಳ: ಮೈಸೂರು ಶೋರೂಮ್, ಬಿ.ಎನ್. ರಸ್ತೆ, ಬೆಳಗ್ಗೆ 10 ರಿಂದ.

■ **ಸೇಂಟ್ ಫಿಲೋಮಿನಾ ಕಾಲೇಜು :** ಆರೋಗ್ಯ ಮತ್ತು ಸಾಮಾಜಿಕ ಭದ್ರತೆ :ವಯೋವೃದ್ಧರ ಅಗತ್ಯಗಳನ್ನು ಪರಿಹರಿಸುವ ಕುರಿತು ವಿಚಾರ ಸಂಕಿರಣ, ಮುಖ್ಯ ಅತಿಥಿಗಳು :ಹಿರಿಯ ಪ್ರಾಧ್ಯಾಪಕ ಡಾ. ಕೆ.ಜಿ. ಪರಶುರಾಮ, ಡಾ. ಜಾಕೋಬ್ ಕಲ್ಲೆ, ಅಧ್ಯಕ್ಷತೆ : ಡಾ. ಲೂರ್ದ್‌ಪ್ರಸಾದ್, ಡಾ.ರವಿ ಜೆ.ಡಿ. ಸಲ್ಡಾನ್ಹ, ಪ್ರಾಂಶುಪಾಲ ಫಾ.ಜ್ಞಾನಪ್ರಕಾಶಂ, ಡೇವಿಡ್ಸ್ ಸಗಾಯರಾಜ್, ಸ್ಥಳ:ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಹಿಮಾಲಯ ಪ್ರತಿಷ್ಠಾನ :** ನೂತನ ವರ್ಷದ ಯೋಗ ಕ್ಯಾಲೆಂಡರ್ ಬಿಡುಗಡೆ, ಕ್ಯಾಲೆಂಡರ್ ಬಿಡುಗಡೆ :ವಿಧಾನ ಪರಿಷತ್ ಸದಸ್ಯ ಡಾ. ಡಿ. ತಿಮ್ಮಯ್ಯ, ಅಧ್ಯಕ್ಷತೆ : ಸಮಾಜ ಸೇವಕ ಡಾ. ಕೆ. ರಘುರಾಂ ವಾಜಪೇಯಿ, ಮುಖ್ಯ ಅತಿಥಿಗಳು : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಶ್ರೀಹರಿ, ಎನ್.ಶ್ರೀಧರ್ ದೀಕ್ಷಿತ್, ಡಾ. ಲೀಲಾಪ್ರಕಾಶ್, ಎಸ್. ಹೇಮಚಂದ್ರ, ಡಾ. ಪ್ರಭುಶಂಕರ್, ಸ್ಥಳ:ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಬೆಳಗ್ಗೆ 11.30ಕ್ಕೆ.

■ **ಆಚಾರ್ಯ ಗುರುಕುಲ :** ಮಹಾವೀರ ಮಹಾದರ್ಶನ, ಮಹಾಕವಿ ಡಾ. ಲತಾ ರಾಜಶೇಖರ್ ಅವರಿಗೆ ಆಚಾರ್ಯ ಗುರುಕುಲ ಭಗವಾನ್ ಮಹಾವೀರ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ: ಹಿರಿಯ ಸಾಹಿತಿ ಡಾ. ಸಿ.ಪಿ. ಕೃಷ್ಣಕುಮಾರ್, ಅಧ್ಯಕ್ಷತೆ : ವಿದ್ಯಾವಾಚಸ್ಪತಿ ಡಾ. ಎಚ್.ಸಿ. ಮೋಹನಕುಮಾರ ಶಾಸ್ತ್ರಿ, ಅಭಿನಂದಿತರು : ಮಹಾಕವಿ ಡಾ. ಲತಾರಾಜಶೇಖರ್, ಅಭಿನಂದಿಸುವವರು: ಅಂತರರಾಷ್ಟ್ರೀಯ ಜೈನ್ ಮಿಲನ್ ಸಂಘಟಕ ನಾ. ಪ್ರಸನ್ನಕುಮಾರ್, ಉಪಸ್ಥಿತರು : ಡಾ. ಹೆಚ್.ಬಿ. ರಾಜಶೇಖರ್, ಶ್ರೀಮತಿ ಶೀಲಾ ಅನಂತ್‌ರಾಜ್, ಪ್ರತಿಷ್ಠಾಚಾರ್ಯ ಎಸ್.ಎಂ. ಸನ್ಮತಿ ಕುಮಾರ ಶಾಸ್ತ್ರಿ, ಸ್ಥಳ: ಪತ್ರಕರ್ತರ ಭವನ, ಮಧ್ಯಾಹ್ನ 12ಕ್ಕೆ.

■ **ಶ್ರೀ ನಟರಾಜ ಪಬ್ಲಿಕ್ ಸ್ಕೂಲ್:** ವಾರ್ಷಿಕೋತ್ಸವ, ನಟರಾಜೋತ್ಸವ, ಸಾನ್ನಿಧ್ಯ: ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಿಂಡಿಕೇಟ್ ಸದಸ್ಯ ಹೆಚ್.ಎ.ವೆಂಕಟೇಶ್, ಶಾಲಾ ಪ್ರಿನ್ಸಿಪಾಲ್ ಶ್ರೀಮತಿ ಸೌಮ್ಯ ಬಿ.ನಾಯಕ್, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾಂಗಣ, ಸಂಜೆ 4ಕ್ಕೆ.

■ **ಸ್ವದೇಶಿ ಜಾಗರಣ ಮಂಚ್:** ಸ್ವದೇಶಿ ಮೇಳ–2025, ಸಾನ್ನಿಧ್ಯ: ರಾಮಕೃಷ್ಣ ಆಶ್ರಮದ ಶ್ರೀಮತ್ ಸ್ವಾಮಿ ಮುಕ್ತಿದಾನಂದಜೀ ಮಹಾರಾಜ್, ಉದ್ಘಾಟನೆ: ಶಿಲ್ಪಿ ಅರುಣ್ ಯೋಗಿರಾಜ್, ಉಪಸ್ಥಿತರು: ಶಾಸಕರಾದ ಟಿ.ಎಸ್.ಶ್ರೀವತ್ಸ, ಹರೀಶ್‌ಗೌಡ, ಜಿ.ಟಿ.ದೇವೇಗೌಡ, ಸ್ಥಳ: ಮಹಾರಾಜ ಕಾಲೇಜು ಮೈದಾನ, ಸಂಜೆ 5ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು –ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ–ಎಸ್. ರಾಮನಾಥ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಜಯಂತಿ. ವಿ. ಭಟ್, ಅಮೃತಾ ನಿತಿನ್ ಶಾಸ್ತ್ರಿ, ವ್ಯಾಖ್ಯಾನ–ಡಾ. ಕಬ್ಬಿನಾಲೆ ವಸಂತ ಭಾರಧ್ವಾಜ್, 6.50 ರೈತರಿಗೆ ಸಲಹೆ, 7.15 ಆರೋಗ್ಯವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಚಿತ್ರಗೀತೆಗಳು, 9.05 ಗರ್ಭಕಂಠದ ಕ್ಯಾನ್ಸರ್ ಕುರಿತು ಮಾಹಿತಿ, ಪ್ರಾಯೋಜಕರು: ಇಂಡಿಯನ್ ಕ್ಯಾನ್ಸರ್ ಸೊಸೈಟಿ, 9.10 ವೃತ್ತಿ ಮಾರ್ಗದರ್ಶನ ಅಲೈಡ್ ಹೆಲ್ತ್ ಸೈನ್ಸಸ್ ವಿಷಯಗಳಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಮೈಸೂರಿನ ಕಾವೇರಿ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ಸೈನ್ಸಸ್‌ನ ಪ್ರಾಂಶುಪಾಲರಾದ ಡಾ. ಅರವಿಂದ್. ಆರ್. ಎಂ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ : ಉಸ್ತಾದ್ ಅಮ್ಜದ್ ಅಲಿಖಾನ್– ಸರೋದ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಡಾ.ದ್ವಾರಮ್ ವೆಂಕಟಸ್ವಾಮಿ ನಾಯ್ಡು – ವೈಯೋಲಿನ್, 4.00 ಮಹಿಳಾರಂಗ, 4.45 ಹಿಂದಿ ಪಾಠ, ಪ್ರಸ್ತುತಿ : ಆಯೇಷಾ ಸುಲ್ತಾನಾ, 6.50 ಕೃಷಿರಂಗ : ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ. ಪಶು ಆರೋಗ್ಯ ನಿರ್ವಹಣೆ ಕುರಿತು ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ–ಮಂಡ್ಯದ ಪಶುಪಾಲನೆ ಹಾಗೂ ಪಶು ವೈದ್ಯಕೀಯ ಸೇವಾ ಇಲಾಖೆಯ ಮುಖ್ಯ ಪಶು ವೈದ್ಯಾಧಿಕಾರಿ ಡಾ. ಬಿ. ಎನ್. ತ್ರಿನೇಶ್, ಪ್ರಸ್ತುತಿ : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಸಂಜಯ್ ಸುಬ್ರಹ್ಮಣ್ಯಂ, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

■ **ಪರಂಪರೆ:** ಆಧ್ಯಾತ್ಮಿಕ ಉಪನ್ಯಾಸಗಳು, ಡಾ.ವೀಣಾ ಬನ್ನಂಜೆ ಅವರಿಂದ ಆಧ್ಯಾತ್ಮಿಕ ಉಪನ್ಯಾಸ, ವಿಷಯ: ಮಹಾಸಾಧಕ ಸತ್ಯಕಾಮ, ಸ್ಥಳ: ಮೈಸೂರು ಕೆ.ವಾಸುದೇವಾಚಾರ್ಯ ಭವನ (ನಾದಬ್ರಹ್ಮ), ಸಂಜೆ 6ಕ್ಕೆ

■ **ಶ್ರೀ ರಾಮಜ್ಯೋತಿ ಸೇವಾ ಸಮಿತಿ :** ಲಕ್ಷ ದೀಪೋತ್ಸವ, ಉದ್ಘಾಟನೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮುಖ್ಯ ಅತಿಥಿಗಳು : ಚಾಮುಂಡಿಬೆಟ್ಟದ ಪ್ರಧಾನ ಅರ್ಚಕ ಶಶಿಶೇಖರ ದೀಕ್ಷಿತ್, ಸ್ಥಳ: ಶ್ರೀ ವೀರಗಣಪತಿ ದೇವಸ್ಥಾನ, ವೀರನಗೆರೆ, ಸಂಜೆ 6ಕ್ಕೆ.

■ **ಶ್ರುತಿಮಂಜರಿ ಪ್ರತಿಷ್ಠಾನ, ರೋಟರಿ ಪಶ್ಚಿಮ :** ಸಂಜೆ 6ಕ್ಕೆ 27ನೇ ವಾರ್ಷಿಕ ಸಂಗೀತೋತ್ಸವ, ಉದ್ಘಾಟನೆ : ವೀಣಾ ವಿದುಷಿ ರೇವತಿ ಕಾಮತ್, ಅಧ್ಯಕ್ಷತೆ : ರೋಟರಿ ಪಶ್ಚಿಮ ಅಧ್ಯಕ್ಷ ನಾಗೇಶ್ ಅಥರ್ವ, ಸಂಜೆ 7ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದುಷಿ ರೇವತಿ ಕಾಮತ್ ಅವರಿಂದ ವೀಣೆ, ವಿದ್ವಾನ್ ಬಿ.ಆರ್. ಶ್ರೀಧರ್–ಮೃದಂಗ, ವಿದ್ವಾನ್ ಎಂ.ಆರ್. ಮಂಜುನಾಥ್–ಘಟಂ, ಸ್ಥಳ: ರೋಟರಿ ಪಶ್ಚಿಮ ಸಭಾಂಗಣ, ಕಾಮಾಕ್ಷಿ ಆಸ್ಪತ್ರೆ ಎದುರು, ಸರಸ್ವತಿಪುರಂ.

■ **ಜಗದ್ಗುರು ಶ್ರೀ ಶಿವರಾತ್ರೀಶ್ವರ ಆಟೋಚಾಲಕ ಮಾಲೀಕರ ಸಂಘ :** ಅಯೋಧ್ಯೆ ರಾಮಮಂದಿರ ಒಂದು ವರ್ಷದ ಸಂಭ್ರಮಾಚರಣೆ, ಡಾ. ಶ್ರೀ ಶಿವಕುಮಾರ ಸ್ವಾಮಿಗಳ 6ನೇ ವರ್ಷದ ಪುಣ್ಯಸ್ಮರಣೆ, ಉದ್ಘಾಟನೆ: ಶಿಲ್ಪಿ ಅರುಣ್ ಯೋಗಿರಾಜ್, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಎಂ.ಡಿ. ಪಾರ್ಥಸಾರಥಿ, ಮಹೇಶ್, ನಗರ ಪಾಲಿಕೆ ಮಾಜಿ ಸದಸ್ಯ ಬಿ.ವಿ.ಮಂಜುನಾಥ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಚಂದ್ರಶೇಖರ್, ಕೆ.ಆರ್. ಬ್ಯಾಂಕ್ ಅಧ್ಯಕ್ಷ ಬಸಪ್ಪ, ಸ್ಥಳ: ಜೆಎಸ್‌ಎಸ್ ಆಸ್ಪತ್ರೆ ಹಳೇ ಗೇಟ್ ಮುಂಭಾಗ, ರಾಮಾನುಜ ರಸ್ತೆ, ಸಂಜೆ 6.30ಕ್ಕೆ.

■ **ಶ್ರೀರಾಮ ಗೆಳೆಯರ ಬಳಗ :** ಅಯೋಧ್ಯೆ ರಾಮಮಂದಿರ ಒಂದು ವರ್ಷದ ಸಂಭ್ರಮಾಚರಣೆ ಅಂಗವಾಗಿ ವಿಶ್ವ ದೀಪ ಕಾರ್ಯಕ್ರಮ, ಚಾಮುಂಡಿಪುರಂ ವೃತ್ತದಿಂದ ರಾಮಲಿಂಗೇಶ್ವರ ದೇವಸ್ಥಾನದವರೆಗೆ ದೀಪಗಳನ್ನು ಹಚ್ಚುತ್ತಿದ್ದು, ಬಣ್ಣ ಬಣ್ಣದ ರಂಗೋಲಿಯ ಮೂಲಕ ರಾಮನ ಹೆಜ್ಜೆ, ಕಾಮಧೇನುವಿನ ರಂಗೋಲಿ ಚಿತ್ತಾರ, ವರ್ಣರಂಜಿತ ಹೂ ಬಳ್ಳಿಗಳ ಕಲಾಕೃತಿ ಪ್ರದರ್ಶನ, ಸಂಜೆ 6.30ಕ್ಕೆ.

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜನವರಿ 22 ಬುಧವಾರ 2025

45

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 275 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಮಹಿಳೆಯರ ರಕ್ಷಣೆಗೆ ಬದ್ಧ

ಸರ್ಕಾರದ ಸ್ಪಷ್ಟ ಕ್ರಮ: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ಜ.21(ಕೆಎಂಶಿ)– **ಮಹಿಳೆಯರ ಮೇಲೆ ಬಲಾತ್ಕಾರದಂತಹ ಹೀನ ಕೃತ್ಯ ನಡೆಸುವ ಸಮಾಜಘಾತುಕ ಶಕ್ತಿಗಳ ವಿರುದ್ಧ ಗಂಭೀರ ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಎಚ್ಚರಿಸಿದ್ದಾರೆ.**



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ರಕ್ಷಣೆ ದೊರಕಬೇಕು, ಈ ದಿಸೆಯಲ್ಲಿ ಸರ್ಕಾರ ಸ್ಪಷ್ಟ ಕ್ರಮಗಳನ್ನು ಕೈಗೊಳ್ಳಲಿದೆ ಎಂದರು.

ಮಾಧ್ಯಮಗಳಿಗೆ ಪಾಠ: ಅನಾರೋಗ್ಯ ಕಾರಣ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬೆಳಗಾವಿ ಅಧಿವೇಶನಕ್ಕೆ ಬರಲು ಸಾಧ್ಯವಾಗುತ್ತಿಲ್ಲ. ಆದರೆ, ಕೆಲವು ಮಾಧ್ಯಮಗಳು ಸಮಾವೇಶದಿಂದ ದೂರ ಉಳಿದಿದ್ದಾರೆಂಬುದಾಗಿ ಸುದ್ದಿ ತಿರುಚಿ ವರದಿ ಮಾಡುತ್ತಿವೆ. ಇದರಿಂದ ಏನು ಸಂದೇಶ ಹೋಗುತ್ತದೆ. ಪತ್ರಿಕಾ ವೃತ್ತಿ ಘನತೆ ಉಳಿಯುವುದೇ ಎಂದು ಪ್ರಶ್ನಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಂಸದೆ ಪ್ರಿಯಾಂಕಾ ಗಾಂಧಿ, ಕಾರ್ಯಕಾರಿ ಸಮಿತಿ ಸದಸ್ಯರು, ಕಾರ್ಯದರ್ಶಿಗಳು ಸಮಾವೇಶಕ್ಕೆ ಆಗಮಿಸಿದ್ದಾರೆ ಎಂದರು. ಸಮಾಜದಲ್ಲಿ ಸೌಹಾರ್ದತೆ, ಸಮಾನತೆ ಬರಬೇಕು, ಅಸ್ಪೃಶ್ಯತೆ ಹೋಗಲಾಡಿಸ ಬೇಕು ಮತ್ತು ಮಹಿಳೆಯರ ಸ್ವಾತಂತ್ರ್ಯ, ಹಕ್ಕುಗಳ ರಕ್ಷಣೆಯಾಗಬೇಕು ಎಂಬುದನ್ನು ಮಹಾತ್ಮಗಾಂಧಿ ಪ್ರತಿಪಾದಿಸಿದ್ದರು. ಸಮಾಜ ಸುಧಾರಕ ಬಸವಣ್ಣ, ಕನಕದಾಸರ ವಿಚಾರಗಳು ಭಾರತೀಯ ಸಂವಿಧಾನದಲ್ಲಿ ಅಡಕವಾಗಿವೆ, ಗಾಂಧಿ ತತ್ವಾದರ್ಶ ಪುನರ್ ■ 9ನೇ ಪುಟಕ್ಕೆ

ನಮ್ಮ ಪ್ರಿಯಾಂಕಾ ಗಾಂಧಿ ಕಿತ್ತೂರು ಚನ್ನಮ್ಮನಂತೆ!

ಬೆಳಗಾವಿ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶದಲ್ಲಿ ಪ್ರಿಯಾಂಕಾರನ್ನು ಹಾಡಿ ಹೊಗಳಿದ ಮಲ್ಲಿಕಾರ್ಜುನ ಖರ್ಗೆ

ಬೆಳಗಾವಿ, ಜ.21– ಬಿಜೆಪಿ, ಆರ್‌ಎಸ್‌ಎಸ್ ವಿರುದ್ಧ ಶಕ್ತಿಶಾಲಿಯಾಗಿ ಹೋರಾಟ ಮಾಡುವ ಹೆಣ್ಣುಮಗಳು ಪ್ರಿಯಾಂಕಾ ಗಾಂಧಿ. ಅವರು ಮೆತ್ತಗೆ ಕಾಣುತ್ತಾರೆ, ಮುಟ್ಟಿ ನೋಡಿ. ನಮ್ಮ ಕಿತ್ತೂರು ಚನ್ನಮ್ಮ ಪ್ರಿಯಾಂಕಾ ಗಾಂಧಿ. ನಾನೇನು ಹೊಗಳುತ್ತಿಲ್ಲ. ಅವರಿಗೆ ಅಷ್ಟೊಂದು ಶಕ್ತಿ ಇದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಭಿಪ್ರಾಯಪಟ್ಟರು.

ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ತಂದೆ ಕಳೆದುಕೊಂಡಾಗ ಪ್ರಿಯಾಂಕಾ ಅವರಿಗೆ ನಾಲ್ಕೈದು ವರ್ಷ. ತಾಯಿ ರಕ್ಷಣೆಯಲ್ಲಿ ಬೆಳೆದು ಬಂದ ಅವರು ಇಂದು ಈ ಹಂತಕ್ಕೆ ಬಂದು ನಿಂತಿದ್ದಾರೆ. ಪ್ರಿಯಾಂಕಾ ಎಂದೂ ತನ್ನ ಕೊರತೆ, ಕಾಮ್‌ಚೋರಿ ದೇಶಕ್ಕೆ ತೋರಿಸಿದವರಲ್ಲ. ಗಾಂಧಿ ಕುಟುಂಬ ಅಂಥದ್ದು. ಇಂಥ ಕುಟುಂಬಕ್ಕೆ ಮೋದಿ, ಅಮಿತ್ ಶಾ ಮತ್ತು ಅವರ ಚಮಚಾಗಳೂ ಬೈಯ್ಯುತ್ತಾರೆ. ದೇಶದ ಜನ ಹೆದರಬೇಕಿಲ್ಲ. ಬಿಜೆಪಿ ವಿರುದ್ಧ ಹೋರಾಡಲು ನಾವು ಸಿದ್ಧರಾಗಿದ್ದೇವೆ ಎಂದು ಖರ್ಗೆ ಎಚ್ಚರಿಸಿದರು.



ಸುವರ್ಣ ವಿಧಾನಸೌಧದ ಮುಂದೆ ಬಾಪೂಜಿ ಪ್ರತಿಮೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಲೋಕಾರ್ಪಣೆಗೊಳಿಸಿದರು. ಈ ವೇಳೆ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪಸಿಂಗ್ ಸುರ್ಜೇವಾಲ, ಸಚಿವರಾದ ಹೆಚ್.ಕೆ.ಪಾಟೀಲ, ಡಾ.ಜಿ.ಪರಮೇಶ್ವರ, ಸತೀಶ ಜಾರಕಿಹೊಳಿ ಮತ್ತಿತರರು ಉಪಸ್ಥಿತರಿದ್ದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆಗಿದ್ದ ನನ್ನನ್ನ ರಾಷ್ಟ್ರ ಅಧ್ಯಕ್ಷರನ್ನಾಗಿಸಿದ್ದಾರೆ: ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆಗಿದ್ದ ನನ್ನನ್ನ ಇಂದು ಅಖಿಲ ಭಾರತ ಕಾಂಗ್ರೆಸ್ ಪಕ್ಷದ ನಾಯಕನನ್ನಾಗಿ ಮಾಡಿದ್ದಾರೆ. ಇದು ಸಣ್ಣ ಮಾತಲ್ಲ. ಚುನಾವಣೆ ಆದರೂ ನನ್ನೊಂದಿಗೆ ಇದ್ದು ಕೈಜೋಡಿಸಿ, ಸಹಾಯ ಮಾಡಿ ಇಂದು ಆರಿಸಿ ತಂದಿದ್ದಾರೆ. ಅದಕ್ಕಾಗಿ ನಾನು ಅವರಿಗೆಲ್ಲ ಚಿರಋಣಿ ಇದ್ದೇನೆ. ಕರ್ನಾಟಕ ಕಾಂಗ್ರೆಸ್‌ನ ಒಬ್ಬ ಕಾರ್ಯಕರ್ತ ಅಖಿಲ ಭಾರತ ಮಟ್ಟದ ಅಧ್ಯಕ್ಷನಾಗಲು ನಿಮ್ಮೆಲ್ಲರ ಆಶೀರ್ವಾದ ಇಲ್ಲದೇ ಸಾಧ್ಯವಿರಲಿಲ್ಲ. ಇದು ಕಾಂಗ್ರೆಸ್‌ನ ಗುಣ. ಬಿಜೆಪಿಯವರು ಏನೇ ಹೇಳಲಿ, ಬರೀ ಮಾತಲ್ಲಿ ಹೇಳುತ್ತಾರೆ. ಬಿಜೆಪಿ, ಆರ್‌ಎಸ್‌ಎಸ್, ಹಿಂದೂ ಮಹಾಸಭಾದವರು ದಲಿತರ ಜತೆಯಲ್ಲಿ ಯಾವತ್ತೂ ಇಲ್ಲ ಎಂದು ಮಲ್ಲಿಕಾರ್ಜುನ ಖರ್ಗೆ ಹರಿಹಾಯ್ದರು.

ಇವರು ಯಾವಾಗಲೂ ದಲಿತರ ವಿರೋಧಿಗಳು. ರೈತರು, ಬಡವರು, ದಲಿತರ ಬಗ್ಗೆ ಕಾಳಜಿ ಇಲ್ಲ. ಎಂಎಸ್‌ಪಿ ಹೆಚ್ಚು ಮಾಡಲು ■ 9ನೇ ಪುಟಕ್ಕೆ

ಮೈಸೂರು ನಗರಪಾಲಿಕೆಯಲ್ಲಿ ಆರೋಗ್ಯಾಧಿಕಾರಿಯೇ ಪಶುವೈದ್ಯ!

- ಪ್ರತಿಷ್ಠಿತ ಮಹಾನಗರ ಪಾಲಿಕೆಯಲ್ಲಿ ಅವೈಜ್ಞಾನಿಕ ವ್ಯವಸ್ಥೆ
- ಹಿಂದೆ ಮುಂದೆ ನೋಡದೇ ಪಶುವೈದ್ಯರ ಹುದ್ದೆ ರದ್ದು



ಎಂ.ಬಿ.ಪವನ್‌ಮೂರ್ತಿ

ಮೈಸೂರು, ಜ.21–ಮೈಸೂರು ಮಹಾನಗರ ಪಾಲಿಕೆಯಲ್ಲಿ ಜನರ ಆರೋಗ್ಯಾಧಿಕಾರಿಯೇ ಪಶುವೈದ್ಯರಾಗಿದ್ದಾರೆ! ಹೌದು, ಪಶುವೈದ್ಯರು ಮಾಡಬೇಕಾದ ಎಲ್ಲಾ ಕೆಲಸ ಕಾರ್ಯಗಳನ್ನು ಹೆಚ್ಚುವರಿಯಾಗಿ ಆರೋಗ್ಯಾಧಿಕಾರಿಯೇ ಮಾಡುವ ವ್ಯವಸ್ಥೆ ಕೆಲ ವರ್ಷಗಳಿಂದ ಜಾರಿಯಲ್ಲಿದೆ. ಪಾಲಿಕೆಯಲ್ಲಿದ್ದ ಪಶುವೈದ್ಯಾಧಿಕಾರಿ ಹುದ್ದೆಯನ್ನು ರದ್ದು ಮಾಡಿದ್ದೇ ಇದಕ್ಕೆ ಕಾರಣ.

ನಾಗರಿಕರ ಸಾಕು ಪ್ರಾಣಿಗಳ ಆರೋಗ್ಯದ ಮೇಲ್ವಿಚಾರಣೆ ಹಾಗೂ ಗುಣಮಟ್ಟ ಮತ್ತು ಸ್ವಚ್ಛತೆಯಿಂದ ಕೂಡಿದ ಮಾಂಸ ಪೂರೈಕೆ ಮೇಲೆ ನಿಗಾ ವಹಿಸುವ ಕಾರ್ಯವನ್ನು ಪಶುವೈದ್ಯರೆ ಮಾಡಬೇಕು. ಆದರೆ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈ ಜವಾಬ್ದಾರಿ ಮಾನವ ಸಮುದಾಯದ ಆರೋಗ್ಯಕ್ಕೆ ಸಂಬಂಧಿಸಿದ ವೈದ್ಯರ ಹೆಗಲೇರಿದೆ!

> **ಪ್ರಮುಖವಾಗಿ ಸುರಕ್ಷಿತ ಮಾಂಸಾಹಾರ ಮೇಲ್ವಿಚಾರಣೆ ಮಾಡಲು ಪಶುವೈದ್ಯರ ಅಗತ್ಯವಿದೆ. ಪಶುವೈದ್ಯರು ಮತ್ತು ಪಶುವೈದ್ಯಕೀಯ ನಿರೀಕ್ಷಕರನ್ನು ಮೈಸೂರು ಮಹಾನಗರ ಪಾಲಿಕೆಗೆ ಸರ್ಕಾರ ಕೂಡಲೇ ನಿಯೋಜನೆ ಮಾಡಬೇಕು. ಕಸಾಯಿಖಾನೆಯಲ್ಲಿ ಮೇಕೆ–ಕುರಿಗಳ ಮಾಂಸ ಪರಿಶೀಲನೆಯನ್ನು ಆರೋಗ್ಯಾಧಿಕಾರಿ ಮಾಡುವುದು ಸುರಕ್ಷಿತವಲ್ಲ. ಹೋಗಲಿ, ಪಾಲಿಕೆಯಿಂದ ಈಗ ಯಾರಾದರೂ ಕಸಾಯಿಖಾನೆಗೆ ಭೇಟಿ ನೀಡಿ ಪರಿಶೀಲನೆಯಾದರೂ ಮಾಡುತ್ತಿದ್ದಾರೋ ಇಲ್ಲವೋ ಗೊತ್ತಿಲ್ಲ. –ಶಿವಕುಮಾರ್, ಮಾಜಿ ಮೇಯರ್**



ಕೆಲ ವರ್ಷಗಳ ಹಿಂದೆ ಮೈಸೂರು ಮಹಾನಗರ ಪಾಲಿಕೆಯಲ್ಲಿದ್ದ ಪಶುವೈದ್ಯರು ಮತ್ತು ಪಶುವೈದ್ಯಕೀಯ ನಿರೀಕ್ಷಕರ ಹುದ್ದೆಗಳನ್ನು ರದ್ದುಗೊಳಿಸಿರುವ ಹಿನ್ನೆಲೆಯಲ್ಲಿ ಅಂದಿನಿಂದ ಪಾಲಿಕೆಯಲ್ಲಿರುವ ಆರೋಗ್ಯ ವಿಭಾಗವೇ ಪಶು ವೈದ್ಯಕೀಯ ಚಟುವಟಿಕೆಗಳನ್ನು ನಿಭಾಯಿಸುತ್ತಿದೆ. ಆದರೆ ಇಂತಹ ಅವೈಜ್ಞಾನಿಕ ನಡೆಯಿಂದ ಆಗುವ ಎಡವಟ್ಟು ತಕ್ಷಣಕ್ಕೆ ಅರಿವಿಗೆ ಬಾರದಿದ್ದರೂ ದೀರ್ಘಾವಧಿಯಲ್ಲಿ ಗಂಡಾಂತರ ತಂದೊಡ್ಡಬಹುದು. ಹಿಂದಿನ ರಾಜ್ಯ ಸರ್ಕಾರ, ರಾಜ್ಯದ ನಗರಪಾಲಿಕೆಯಲ್ಲಿನ ಪಶುವೈದ್ಯ ಮತ್ತು ಪಶು ವೈದ್ಯಕೀಯ ನಿರೀಕ್ಷಕ, ಈ ಎರಡು ಹುದ್ದೆಗಳನ್ನು ರದ್ದುಪಡಿಸಿದೆ ಎಂದು ಮೂಲಗಳು ತಿಳಿಸಿದ್ದು, ಈ ಕ್ರಮದಿಂದ ಪಶು ವೈದ್ಯಕೀಯ ಕಾರ್ಯ ನಿರ್ವಹಣೆಯು ನಗರದಲ್ಲಿ ಅವೈಜ್ಞಾನಿಕ ರೀತಿಯಲ್ಲಿ ಸಾಗುತ್ತಿದೆ. ಕಸಾಯಿಖಾನೆಯಲ್ಲಿ ಮಾಂಸದ ಗುಣಮಟ್ಟ ದೃಢಿಕರೀಸುವುದು, ಬೀದಿ ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆ, ಬಿಡಾಡಿ ದನಕರುಗಳ ನಿಯಂತ್ರಣ ಹಾಗೂ ನಾಗರಿಕರ ಸಾಕು ಪ್ರಾಣಿಗಳ ಆರೋಗ್ಯದ ಮೇಲ್ವಿಚಾರಣೆಯಲ್ಲಿ ಪಶುವೈದ್ಯರು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಾರೆ. ಆದರೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಅವರೇ ಇಲ್ಲ.

ತಮ್ಮದಲ್ಲದ ಕರ್ತವ್ಯಕ್ಕೆ ನ್ಯಾಯ ಸಲ್ಲಿಸಲು ಸಾಧ್ಯವೇ?: ಬೀದಿ ನಾಯಿಗಳ ಸಂತಾನಹರಣ ಶಸ್ತ್ರಚಿಕಿತ್ಸೆ ಸೇರಿದಂತೆ ಸಾಕು ಹಾಗೂ ಬಿಡಾಡಿ ಪ್ರಾಣಿಗಳ ಲಸಿಕಾ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುವಲ್ಲಿ ಪಶುವೈದ್ಯರ ಪಾತ್ರ ಪ್ರಾಮುಖ್ಯತೆ ಹೊಂದಿದೆ. ಶೈಕ್ಷಣಿಕ ಹಿನ್ನೆಲೆಯೊಂದಿಗೆ ವೃತ್ತಿಪರತೆಯಿಂದ ಸಾಕಷ್ಟು ಅನುಭವ ಇರುವ ಹಿನ್ನೆಲೆಯಲ್ಲಿ ■ 9ನೇ ಪುಟಕ್ಕೆ

50:50ರ ಅನುಪಾತದಡಿ ನಿಯಮ ಬಾಹಿರವಾಗಿ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಗೆ 75,224 ಚದರ ಅಡಿಯಲ್ಲಿ ನಿವೇಶನ ಮಂಜೂರು; ಸಂಬಂಧಿಸಿದ ಮುಡಾ ಮಾಜಿ ಆಯುಕ್ತ, ಇತರರ ವಿರುದ್ಧ

3 ದಿನದಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಕೆಗೆ ಸರ್ಕಾರ ಸೂಚನೆ



ಎಸ್.ಟಿ.ರವಿಕುಮಾರ್

ಮೈಸೂರು, ಜ.21–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಸಾವಿರಾರು ಕೋಟಿ ಬೆಲೆ ಬಾಳುವ ನಿವೇಶನಗಳನ್ನು ನಿಯಮ ಬಾಹಿರವಾಗಿ ಹಂಚಿಕೆ ಮಾಡಿ, ಪ್ರಾಧಿಕಾರ ಮತ್ತು ಸರ್ಕಾರಕ್ಕೆ ಅಗಾಧ ಪ್ರಮಾಣದ ಆರ್ಥಿಕ ನಷ್ಟ ಉಂಟು ಮಾಡಿರುವ ಬ್ರಹ್ಮಾಂಡ ಭ್ರಷ್ಟಾಚಾರ ಕುರಿತಂತೆ ಈಗಾಗಲೇ 3 ಸಂಸ್ಥೆಗಳು ತನಿಖೆ ನಡೆಸುತ್ತಿವೆ. ಇದರ ಬೆನ್ನಲ್ಲೇ ಇದೀಗ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಗೆ ಅಭಿವೃದ್ಧಿಪಡಿಸಿರುವ ಪ್ರತಿಷ್ಠಿತ ಬಡಾವಣೆಗಳಲ್ಲಿ 75,224 ಚದರ ಅಡಿಯಲ್ಲಿ ನಿವೇಶನಗಳನ್ನು, ಕಾನೂನು ಉಲ್ಲಂಘಿಸಿ ಮಂಜೂರು ಮಾಡಿರುವ ಮುಡಾ ಮಾಜಿ ಆಯುಕ್ತ, ಸಂಬಂಧಿಸಿದ ಇತರೆ ಅಧಿಕಾರಿಗಳು, ಸಿಬ್ಬಂದಿ ವಿರುದ್ಧ ಮೂರು ದಿನದಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಸುವಂತೆ ಸರ್ಕಾರ 10–1–2025ರಂದು ಆದೇಶಿಸಿದೆ.

ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ.ಲತಾ ಅವರು ಜ.10ರಂದು ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದು, ಸದರಿ ನಿವೇಶನಗಳನ್ನು ಮಂಜೂರು ಮಾಡಿರುವ ಆಯುಕ್ತ, ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಹೆಸರು, ಹುದ್ದೆ, ಕಾರ್ಯ ನಿರ್ವಹಿಸಿದ ಶಾಖೆ, ಜವಾಬ್ದಾರಿ, ಜನ್ಮ ದಿನಾಂಕ, ನಿವೃತ್ತರಾಗಿದ್ದಲ್ಲಿ ಪ್ರಸ್ತುತ ವಾಸದ ವಿಳಾಸ ಮತ್ತು ಎರವಲು ಸೇವೆ ಪಡೆದಿದ್ದಲ್ಲಿ ■ 9ನೇ ಪುಟಕ್ಕೆ

> **ನಿಯಮ ಬಾಹಿರವಾಗಿ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಯವರಿಗೆ 75,224 ಚದರ ಅಡಿ ನಿವೇಶನಗಳನ್ನು ಮಂಜೂರು ಮಾಡಿ ಲೋಪವೆಸಗಿರುವ ಈ ಹಿಂದಿನ ಮುಡಾ ಆಯುಕ್ತ, ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು 3 ದಿನದೊಳಗಾಗಿ ಸಲ್ಲಿಸುವಂತೆ ಜ.10ರಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿಗಳು ಆದೇಶಿಸಿರುವ ಪತ್ರ ನಮಗೆ ನಿನ್ನೆ (ಸೋಮವಾರ)ಯಷ್ಟೇ ತಲುಪಿದೆ. ಈ ಸಂಬಂಧ ಅಗತ್ಯ ದಾಖಲಾತಿಗಳೊಂದಿಗೆ ಸಂಬಂಧಪಟ್ಟವರ ವಿರುದ್ಧ ದೋಷಾರೋಪಣಾ ಪಟ್ಟಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಗುರುವಾರದ ನಂತರ ನಾವು ಸರ್ಕಾರದ ನಿರ್ದೇಶನದಂತೆ ಸದರಿ ಪ್ರಕರಣದ ಸಂಬಂಧ ಭಾಗಿಯಾಗಿದ್ದವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಪೂರಕ ದಾಖಲೆ ಪ್ರತಿಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸುತ್ತೇವೆ.**
> – ಎ.ಎನ್.ರಘುನಂದನ್, ಆಯುಕ್ತರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ.



ಹಾಡಹಗಲೇ ಕೇರಳ ಉದ್ಯಮಿ ದೋಚಿದ ಪ್ರಕರಣ

ಹವಾಲಾ ಹಣ ವರ್ಗಾವಣೆ ಶಂಕೆ

ಮೈಸೂರು ಮಾರ್ಗ 'ಹವಾಲ' ಆಪರೇಷನ್ಸ್ ಮೇಲೆ ತೀವ್ರ ನಿಗಾ ವಹಿಸಲು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅಧಿಕಾರಿಗಳಿಗೆ ತಾಕೀತು



ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ತಮ್ಮ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.



ಪೊಲೀಸರು ಮೈಸೂರು ನಗರದಾದ್ಯಂತ ರಾತ್ರಿ–ಹಗಲು ಗಸ್ತು ಕಾರ್ಯಾಚರಣೆ ತೀವ್ರಗೊಳಿಸಿ ವಾಹನಗಳ ತಪಾಸಣೆ ನಡೆಸುತ್ತಿದ್ದಾರೆ.

ಮೈಸೂರು, ಜ.21(ಆರ್‌ಕೆ)–ಬ್ಯಾಂಕ್ ಎಟಿಎಂ ಮತ್ತು ಹಾಡಹಗಲೇ ರಸ್ತೆ ದರೋಡೆ ಪ್ರಕರಣಗಳು ರಾಜ್ಯದಾದ್ಯಂತ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮ ವಹಿಸಲು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ಇಂದು ಮೈಸೂರಿನ ನಜರ್‌ಬಾದ್‌ನಲ್ಲಿರುವ ತಮ್ಮ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ದಿನಪೂರ್ತಿ ಸಭೆ ನಡೆಸಿದರು.

ಮೈಸೂರಿನ ಹೊರ ವಲಯದ ಜಯಪುರ ಸಮೀಪ ಸೋಮವಾರ ಬೆಳಗ್ಗೆ ಕೇರಳ ಉದ್ಯಮಿಗಳ ಮೇಲೆ ದುಷ್ಕರ್ಮಿಗಳು ಹಲ್ಲೆ ನಡೆಸಿ ಹಣ, ಕಾರಿನೊಂದಿಗೆ ಪರಾರಿಯಾಗಿರುವ ಪ್ರಕರಣದಲ್ಲಿ ಹವಾಲ ಹಣ ಸಾಗಣೆ ಹಿನ್ನೆಲೆ ಇರಬಹುದೆಂದು ಶಂಕಿಸಲಾಗಿದೆ. ಐವರು ಮುಸುಕುಧಾರಿಗಳಿಂದ ಈ ಕೃತ್ಯ ನಡೆದಿದ್ದು, ಇದರ ಹಿಂದೆ ದೊಡ್ಡ ಗ್ಯಾಂಗೇ ಕಾರ್ಯಾಚರಣೆ ಮಾಡುತ್ತಿರಬಹುದೆಂದು ಹೇಳಲಾಗುತ್ತಿದೆ. ಬೆಂಗಳೂರಿನಿಂದ ಮೈಸೂರು ಮಾರ್ಗವಾಗಿ ಕೇರಳಾಗೆ ಹಣ, ಚಿನ್ನ ಹಾಗೂ ವಜ್ರ ಸಾಗಣೆ ಮಾಡುತ್ತಿದ್ದು, ವಿಷಯ ತಿಳಿದ ದುಷ್ಕರ್ಮಿಗಳು ಹಾಗೂ ಹವಾಲಾ ಹಣ ವರ್ಗಾವಣೆ ದಂಧೆಯಲ್ಲಿ ನಿರತರಾಗಿ ದರೋಡೆ ಮಾಡುತ್ತಿರಬಹುದೆಂದು ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರು ಶಂಕಿಸಿದ್ದಾರೆ. ■ 9ನೇ ಪುಟಕ್ಕೆ

ಕೇರಳ ಉದ್ಯಮಿ ದರೋಡೆ: ಆರೋಪಿಗಳಿಗೆ ಶೋಧ

ಮೈಸೂರು ಹೊರ ವಲಯದಲ್ಲಿ ಕೇರಳ ಉದ್ಯಮಿಗಳ ಮೇಲೆ ಹಲ್ಲೆ ನಡೆಸಿ ನಗದು, ಕಾರು ಅಪಹರಿಸಿದ ದುಷ್ಕರ್ಮಿಗಳ ಪತ್ತೆಗೆ ಜಿಲ್ಲಾ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ. ಸೋಮವಾರ ರಾತ್ರಿಯೇ ಅಪಹರಣವಾಗಿದ್ದ ಉದ್ಯಮಿಗಳ ಫೋರ್ಡ್ ಎಕೋ ಸ್ಪೋರ್ಟ್ ಕಾರು ಮತ್ತು ದರೋಡೆಕೋರರು ಬಂದಿದ್ದ ಟಯೋಟಾ ಇನ್ನೋವಾ ಕಾರು ಜಯಪುರ ಬಳಿ ಅಡ್ಡ ರಸ್ತೆಯಲ್ಲಿ ಪತ್ತೆಯಾಗಿದ್ದು, ತಲೆ ಮರೆಸಿಕೊಂಡಿರುವ ಆರೋಪಿಗಳು ಹಾಗೂ ಅವರು ಬಳಸಿದ್ದ ಮತ್ತೊಂದು ಇನ್ನೋವಾ ಕಾರನ್ನು ಪತ್ತೆ ಮಾಡಿದ ತನಿಖಾ ತಂಡಗಳ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಸುಳಿವಿನ ಜಾಡು ಹಿಡಿದು ಒಂದು ತಂಡ ಕೇರಳಕ್ಕೆ, ಇನ್ನೊಂದು ತಂಡ ತಮಿಳುನಾಡು, ಮತ್ತೊಂದು ತಂಡದ ಪೊಲೀಸರು ಬೆಂಗಳೂರು ತಲುಪಿದ್ದು, ಅಲ್ಲಿನ ಸ್ಥಳೀಯ ಪೊಲೀಸರ ಸಹಕಾರದೊಂದಿಗೆ ತನಿಖೆ ನಡೆಸುತ್ತಿದ್ದಾರೆ. ಈಗಾಗಲೇ ಒಂದು ಹಂತದಲ್ಲಿ ಕೃತ್ಯ ಮಾಡಿದ ಗ್ಯಾಂಗ್‌ನ ಸುಳಿವು ದೊರೆತಿದ್ದು, ಮೂರು ದಿನದೊಳಗಾಗಿ ಪ್ರಕರಣವನ್ನು ಭೇದಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ನಕ್ಕರೆ ಅದೇ ಸ್ವರ್ಗ

ಗುಂಡ : (ಹೋಟೆಲ್‌ನಲ್ಲಿ ತಂಗಿದ್ದ ವೇಳೆ ಮ್ಯಾನೇಜರ್‌ಗೆ ಕರೆ ಮಾಡಿ) ಬೇಗ ಬನ್ನಿ, ನನ್ನ ಹೆಂಡತಿ ರೂಮಿನ ಕಿಟಕಿಯಿಂದ ಧುಮುಕಿ ಸಾಯಬೇಕು ಅಂತಿದ್ದಾಳೆ.

ಹೋಟೆಲ್ ಮ್ಯಾನೇಜರ್ : ಅದಕ್ಕೆ ನಾನೇನು ಮಾಡೋಕಾಗುತ್ತೆ?

ಗುಂಡ : ಕಿಟಕಿ ಬಿಗಿಯಾಗಿದೆ, ಬಂದು ಅದನ್ನು ಸ್ವಲ್ಪ ತೆಗೆಯಿರಿ.

ಮೈಸೂರು ಮಿತ್ರ

ಬುಧವಾರ, 22 ಜನವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಪ್ರಪಂಚ ನೀ ಹೇಗೆ ಇದ್ದರೂ ದೂಷಿಸುತ್ತದೆ. ಶ್ರೀರಾಮನಂತಿದ್ದರು ಸತ್ಯ ಹರಿಶ್ಚಂದ್ರನಂತಾದರೂ... ಆದ್ದರಿಂದ ಲೋಕ ಮೆಚ್ಚಿಸುವ ಹುಚ್ಚು ಬೇಡ. ಸದಾಕಾಲ ನೀನು ನೀನಾಗಿರು...

ವೇದ ಸುಳ್ಳಾದರೂ { ಭಾವಿಸಿದರೆ ಬಳಗ,
ಗಾದೆ ಸುಳ್ಳಾಗದು { ಕೂಡಿಸಿದರೆ ಕಾಸು.

ನಿಮ್ಮ ಪತ್ರಗಳು

ಸತ್ಯಮೇವ ಜಯತೇ!

ಮಾನ್ಯರೆ,

ಯಾವುದೇ ಗಂಭೀರ ಅಪರಾಧ ಎಸಗಿರುವ ಆರೋಪ ಹೊತ್ತ ಆಪಾದಿತನು ಪೊಲೀಸರ ಮುಂದೆ ಶರಣಾಗಬಹುದು ಅಥವಾ ನೇರವಾಗಿ ನ್ಯಾಯಿಕ ದಂಡಾಧಿಕಾರಿಗಳ ಎದುರು ಶರಣಾಗಬಹುದು.

ನ್ಯಾಯಿಕ ದಂಡಾಧಿಕಾರಿಗಳ ಎದುರು ಶರಣಾದ ಆರೋಪಿಗಳನ್ನು ನ್ಯಾಯಾಲಯವು ಮುಂದಿನ ತನಿಖೆಗಾಗಿ ತನಿಖಾಧಿಕಾರಿಯ ವಶಕ್ಕೆ ನೀಡಬಹುದು ಅಥವಾ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಬಹುದು.

ಯಾವುದೇ ಗಂಭೀರ ಅಪರಾಧ ಎಸಗಿದ ಆರೋಪ ಹೊತ್ತ ಆಪಾದಿತರು ಪೊಲೀಸರ ಮುಂದೆ ಶರಣಾದರೆ ಪೊಲೀಸರು ಪ್ರಾಥಮಿಕ ತನಿಖೆ ಮಾಡಿ 24 ತಾಸಿನೊಳಗೆ ನ್ಯಾಯಿಕ ದಂಡಾಧಿಕಾರಿಗಳ ಮುಂದೆ ಹಾಜರುಪಡಿಸಿ ನ್ಯಾಯಾಲಯದ ಅನುಮತಿ ಪಡೆದು ನ್ಯಾಯಾಲಯದ ಆದೇಶದೊಂದಿಗೆ ಆರೋಪಿಗಳನ್ನು ವಶಕ್ಕೆ ಪಡೆದು ತನಿಖೆ ನಡೆಸಬೇಕು. ಇಂತಹ ಆರೋಪಿಗಳು ಎಸಗಿದ ಅಪರಾಧವನ್ನು ಪ್ರತ್ಯಕ್ಷವಾಗಿ ನೋಡಿರುವ ಪ್ರತ್ಯಕ್ಷದರ್ಶಿಗಳಿಂದ ಈ ಆರೋಪಿಗಳ ಗುರುತು ಪತ್ತೆ ಹಚ್ಚುವ ಕೆಲಸ (identification parade) ಪೂರ್ಣ ಆಗುವವರೆಗೆ ಇಂತಹ ಆರೋಪಿಗಳ ಚಹರೆಯನ್ನು ಬಹಿರಂಗ ಪಡಿಸುವಂತಿಲ್ಲ.

ಪೊಲೀಸರು ಈ ಆರೋಪಿತರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವ ಸಮಯದಲ್ಲಿಯೂ ಸಹ ಆರೋಪಿಗಳ ಮುಖಕ್ಕೆ ಮುಸುಕು ಹಾಕಿ ಮುಖ ಚಹರೆಯನ್ನು ಮರೆಮಾಚಬೇಕಾಗಿರುವುದು ಕಡ್ಡಾಯ.

Identification parade ಮುಗಿದು ಆರೋಪಿಗಳನ್ನು ಪ್ರತ್ಯಕ್ಷದರ್ಶಿಗಳು ಗುರುತು ಹಿಡಿದು ಪಂಚನಾಮೆ ಆಗೂವವರೆಗೆ ಈ ಆರೋಪಿತರ ಮುಖಚಹರೆಯನ್ನು ಎಲ್ಲಿಯೂ ಪ್ರದರ್ಶಿಸುವಂತಿಲ್ಲ.

ಕಾನೂನು ಪ್ರಕ್ರಿಯೆಯ ನಿಯಮಗಳು ಹೀಗಿರುವಾಗ ಕೆಂಪು ಉಗ್ರರಾದ ನಕ್ಸಲರ ಮುಖಗಳನ್ನು ಪೊಲೀಸರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಗೃಹಮಂತ್ರಿ ಹಾಗೂ ಮಾಧ್ಯಮಗಳ ಎದುರು ರಾಜೋರೋಷವಾಗಿ ಪ್ರದರ್ಶಿಸಿರುವುದು ಕಾನೂನಿಗೆ ಎಸಗಿದ ಅಪಚಾರ. ಈ ಅಪಚಾರಕ್ಕೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹಮಂತ್ರಿಗಳೂ ಸಾಕ್ಷಿಯಾದುದು ವಿಪರ್ಯಾಸ!

ಪೊಲೀಸರ ಈ ಬೇಜವಾಬ್ದಾರಿ ಕೃತ್ಯದಿಂದಾಗಿ ಈ ಎಲ್ಲಾ ಆರೋಪಿಗಳು ಕಾನೂನಿನ ಕುಣಿಕೆಯಿಂದ ಬಚಾವಾಗಲು ದಾರಿ ಸುಗಮವಾದಂತಾಯಿತು.

ನಕ್ಸಲರನ್ನು ಮೊದಲು ನೋಡಿದ ಪೊಲೀಸರು ಅವರನ್ನು ವಶಕ್ಕೆ ಪಡೆದು ಅವರ ಮುಖಕ್ಕೆ ಮುಸುಕು ತೊಡಿಸಿ ಪ್ರಾಥಮಿಕ ತನಿಖೆ ನಡೆಸಿ 24 ತಾಸಿನೊಳಗೆ ನ್ಯಾಯಿಕ ದಂಡಾಧಿಕಾರಿಗಳ ಎದುರು ಹಾಜರು ಪಡಿಸುವ ಬದಲಾಗಿ ಮುಖ್ಯಮಂತ್ರಿಗಳ ಎದುರು ಹಾಜರು ಪಡಿಸಿದ್ದು ಕಾನೂನು ಬಾಹಿರ. ಇದು ಸಂವಿಧಾನ ಬಾಹಿರವೂ ಹೌದು! ಬೇಜವಾಬ್ದಾರಿಯೂ ಹೌದು!

Identification parade ನಡೆಸಿ ಆರೋಪಿಗಳ ಗುರುತು ಪತ್ತೆ ಹಚ್ಚುವ ಕಾರ್ಯ ಮುಗಿಯುವ ಮುನ್ನವೇ ಈ ಆರೋಪಿತರ ಮುಖಗಳನ್ನು ಬಹಿರಂಗ ಪಡಿಸಿರುವುದರಿಂದ ತನಿಖೆ ದಿಕ್ಕು ತಪ್ಪಲು ಪೊಲೀಸರೇ ಸಹಕರಿಸಿದಂತಾಗಿದೆ. ಟಿವಿ ಹಾಗೂ ದಿನಪತ್ರಿಕೆಗಳಲ್ಲಿ ನಕ್ಸಲೀಯರ ಮುಖಗಳನ್ನು ನೋಡಿರುವ ಯಾವುದೇ ವ್ಯಕ್ತಿಯ ಮುಖೇನ ಸುಳ್ಳು ಸಾಕ್ಷ್ಯವನ್ನು ಸೃಷ್ಟಿಸಲು ಸಾಧ್ಯವಿರುವುದರಿಂದ ಸತ್ಯ, ನ್ಯಾಯ, ನೀತಿಗೆ ಪೊಲೀಸರೇ ಕೊಳ್ಳಿ ಇಟ್ಟಂತಾಗಿದೆ. ಸರಣಿ ಗಂಭೀರ ಅಪರಾಧ ಎಸಗಿದ ಆರೋಪಿಗಳನ್ನು ಮುಖ್ಯಮಂತ್ರಿಗಳ ಎದುರು ನಿಲ್ಲಿಸಿ ಆರತಕ್ಷತೆಯ ಸಮಾರಂಭ ದಂತೆ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಆರೋಪಿಗಳ ಕೈಕುಲುಕಿ ಹೂಗುಚ್ಛ ನೀಡಿ ಉಡುಗೊರೆ ಸಮರ್ಪಿಸಿ ನಗುಮೊಗದಿಂದ ನಡೆದುಕೊಂಡ ದೃಶ್ಯಗಳನ್ನು ನೋಡಿದ ಸಮಾಜವೇ ತಲೆತಗ್ಗಿಸುವಂತಾಗಿದೆ.

ಉಪಸಂಹಾರ: ಜನಸಾಮಾನ್ಯರು ತಪ್ಪು ಮಾಡಿದರೆ ರಾಜ್ಯದ ಮೊರೆಹೋಗಬಹುದು. ರಾಜ್ಯವೇ ತಪ್ಪು ಮಾಡಿದರೆ ಯಾರ ಮೊರೆ ಹೋಗೋಣ ಎಂಬುದು ಯಕ್ಷಪ್ರಶ್ನೆಯಾಗಿದೆ! ಪರಿಸ್ಥಿತಿ ಹೀಗೆಯೇ ಮುಂದುವರಿದರೆ 'ಸತ್ಯಮೇವ ಜಯತೇ' ಎಂಬ ವೇದವಾಕ್ಯಕ್ಕೆ ಬೆಲೆ ಎಲ್ಲಿ?

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

ಶುದ್ಧ ನೀರು ಕುಡಿಯುವ ಘಟಕ ದುರಸ್ತಿಪಡಿಸಿ

ಮಾನ್ಯರೆ,

ಚಾಮರಾಜನಗರ ಜಿಲ್ಲೆಯ ಸಂತೆಮರಳ್ಳಿ ಹೋಬಳಿ, ಚಾಮರಾಜನಗರ ತಾಲೂಕಿನ ಮಸಣಾಪುರ ಮತ್ತು ಚಾಟೀಪುರ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಕೆಟ್ಟು ಹೋಗಿ ಹಲವು ತಿಂಗಳುಗಳಾಗಿದ್ದು, ಇಲ್ಲಿನ ಜನರು ಕುಡಿಯುವ ನೀರಿಗೆ ಹಾಹಾಕಾರ ಪಡುವಂತಾಗಿದೆ. ಸರ್ಕಾರ ಶುದ್ಧವಾದ ಕುಡಿಯುವ ನೀರಿನ ಘಟಕ ಸ್ಥಾಪಿಸಿದ ಬಳಿಕವಾದರೂ ಶುದ್ಧ ನೀರು ದೊರೆಯಲಿದೆ ಎಂದು ಗ್ರಾಮದ ಗ್ರಾಮಸ್ಥರೆಲ್ಲರೂ ನೆಮ್ಮದಿಯಿಂದ ನಿಟ್ಟುಸಿರುಬಿಟ್ಟಿದ್ದರು. ಆದರೆ ಈ ಶುದ್ಧ ನೀರಿನ ಘಟಕ ಸರಿಯಾಗಿ ಮೂರು ತಿಂಗಳು ಸಹ ಕಾರ್ಯ ನಿರ್ವಹಿಸದೇ ಕೆಟ್ಟು ಹೋಗಿ ನೀರು ಬರದಂತಾಗಿದೆ. ಇದರಿಂದ, ನಲ್ಲಿಯಲ್ಲಿ ಕೊಳಕು ಮಿಶ್ರಿತ ನೀರು ಬರುತ್ತಿದ್ದು ಕುಡಿಯಲು ಯೋಗ್ಯವಾಗಿರುವುದಿಲ್ಲ. ಇಂತಹ ಸಂದರ್ಭದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವು ಹಾಳಾಗಿದ್ದು, ಗ್ರಾಮಸ್ಥರು ಪಕ್ಕದ ಹಳ್ಳಿಯಲ್ಲಿ ಹೋಗಿ ಶುದ್ಧ ಕುಡಿಯುವ ನೀರನ್ನು ತುಂಬಿಸಿಕೊಂಡು ಬರುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದುವರೆಗೆ ಸರಿಪಡಿಸುವ ಯಾವ ಕಾರ್ಯವನ್ನು ಸ್ಥಳೀಯ ಸರ್ಕಾರ ಕೈಗೊಂಡಿಲ್ಲ. ಈ ಸಮಸ್ಯೆ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಮನವಿ.

–ಹರೀಶ ಎನ್, ಚಾಟೀಪುರ

ಚಿತ್ರಕೂಟ ಗ್ಯಾಲರಿಯಿಂದ ಕುವೆಂಪು ಇನ್ನೂ ಹತ್ತಿರ

ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿ ಕುವೆಂಪು ಚಿತ್ರಕೂಟ ಗ್ಯಾಲರಿ ಆರಂಭಿಸಿ ರಾಷ್ಟ್ರಕವಿ ಕುವೆಂಪು ಅವರನ್ನು ಕುರಿತ ಸಮಗ್ರ ಅಧ್ಯಯನ ಮತ್ತು ಕುಪ್ಪಳ್ಳಿಯಲ್ಲಿರುವ ಜ್ಞಾನಪೀಠ ಪ್ರಶಸ್ತಿ ಫಲಕ ಮತ್ತು ಅಭಿನಂದನಾ ಪತ್ರದ ಪ್ರತಿಕೃತಿ ಮಾದರಿಯನ್ನು ಗ್ಯಾಲರಿಯಲ್ಲಿ ಸಾರ್ವಜನಿಕರ ಮತ್ತು ವಿದ್ಯಾರ್ಥಿಗಳ ದರ್ಶನಕ್ಕಿಡುವ ಸೌಭಾಗ್ಯ ಕಲ್ಪಿಸುತ್ತಿರುವುದು ಶ್ಲಾಘನೀಯ.

ಕನ್ನಡ ಭಾಷೆಗೆ ಮೊದಲ ಜ್ಞಾನಪೀಠ ಪ್ರಶಸ್ತಿ ತಂದುಕೊಟ್ಟ ಶ್ರೀ ರಾಮಾಯಣ ದರ್ಶನಂ ಹಾಗೂ ಜಯ ಭಾರತ ಜನನಿಯ ತನುಜಾತೆ ರಚಿಸಿ ನೂರು ವರ್ಷಗಳು ತುಂಬಿರುವ ಈ ಹೊತ್ತಿನಲ್ಲಿ ಶಾಶ್ವತವಾದ ಯೋಜನೆ ರೂಪಿಸಬೇಕೆಂಬ ಉದ್ದೇಶ ಹೊಂದಿ ಕನ್ನಡ ಅಧ್ಯಯನ ಸಂಸ್ಥೆಯು ಕುವೆಂಪು ಗ್ಯಾಲರಿಯನ್ನು ನಿರ್ಮಾಣ ಮಾಡುತ್ತಿರುವುದು ಅಭಿನಂದನಾರ್ಹ. ಕುಪ್ಪಳ್ಳಿಯಲ್ಲಿ ಕುವೆಂಪು ಮತ್ತು ತೇಜಸ್ವಿ ಅವರ ಹೆಸರಿನಲ್ಲಿ ಪ್ರಶಸ್ತಿಯನ್ನು ಸ್ಥಾಪಿಸಲು ಕಾರಣರಾಗಿರುವ ಬೆಂಗಳೂರಿನ ಕುವೆಂಪು ವಿಚಾರ ವೇದಿಕೆ ಅಧ್ಯಕ್ಷ ಎಂ.ಸಿ. ನರೇಂದ್ರ ಹಾಗೂ ಕನ್ನಡ ವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ. ಕೆ.ಸಿ.ಶಿವಾರೆಡ್ಡಿ, ಕುವೆಂಪು ಅವರ ಬಗ್ಗೆ ಇಂದಿನ ತಲೆಮಾರಿಗೆ ಸಮಗ್ರ ಅಧ್ಯಯನ ವಸ್ತುಗಳು ದೊರೆಯಬೇಕು ಎಂಬ ಮಹತ್ವಾಕಾಂಕ್ಷೆಯಿಂದ ಚಿತ್ರಕೂಟ ಗ್ಯಾಲರಿಯ ಸಂಪೂರ್ಣ ಹೊಣೆ ಹೊತ್ತು ನಿರ್ಮಿಸಿಕೊಟ್ಟಿರುವುದು ಪ್ರತಿಯೊಬ್ಬರೂ ಮೆಚ್ಚುವಂತದ್ದು.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ವೀರ ತಪಸ್ವಿ ವಿವೇಕಾನಂದ

ಹದಿನೇಳನೆಯ ಶತಮಾನದಲ್ಲಿ ಭಾರತಕ್ಕೆ ವ್ಯಾಪಾರಕ್ಕಾಗಿ ಬಂದಿಳಿದ ಈಸ್ಟ್ ಇಂಡಿಯಾ ಕಂಪನಿ ಭಾರತೀಯರಲ್ಲಿದ್ದ ಅಂತಃಕಲಹಗಳ ದುರ್ಲಾಭವನ್ನು ಪಡೆದುಕೊಂಡು ಸಮಸ್ತ ಭಾರತವನ್ನು ತನ್ನ ಕೈವಶ ಮಾಡಿಕೊಂಡಿತು. ಹತ್ತೊಂಬತ್ತನೆಯ ಶತಮಾನದಲ್ಲಿ ಇಡೀ ದೇಶವು ಒಂದು ವಸಾಹತು ಆಯಿತು. ಎಲ್ಲಾ ಭಾರತೀಯರು ಬ್ರಿಟಿಷರ ಆಳುಗಳಾದರು. ದಾಸ್ಯವೇ ಎಲ್ಲರ ಧರ್ಮವಾಯಿತು. 'ದಾಸನ ಮಾಡಿಕೊ ಎನ್ನ' ಎಂದು ಭಗವಂತನಿಗೆ ಹೇಳುತ್ತಿದ್ದ ಮಾತನ್ನು ಭಾರತೀಯರು ಬ್ರಿಟಿಷರಿಗೆ ಹೇಳುವುದೇ ಆಗ ಸಂಪ್ರದಾಯವಾಗಿ ಬಿಟ್ಟಿತು. ನಮ್ಮ ರಾಜ–ಮಹಾರಾಜರು ಬ್ರಿಟಿಷರ ಗುಲಾಮರಂತೆ ವರ್ತಿಸತೊಡಗಿದರು. ಈಸ್ಟ್ ಇಂಡಿಯಾ ಕಂಪನಿಯ ಕಾಲ ಮುಗಿದು ಬ್ರಿಟನ್ನಿನ ರಾಜರೇ ಭಾರತದ ಚಕ್ರವರ್ತಿಗಳಾದರು. ವಿದ್ಯಾಭ್ಯಾಸದಲ್ಲಿ, ಸಂಸ್ಕೃತಿಯಲ್ಲಿ ಬ್ರಿಟಿಷರನ್ನು ಅನುಸರಿಸುವುದು, ಅನುಕರಿಸುವುದು ಬದುಕಿನ ಪರಮಲಕ್ಷ್ಯವೆಂದು ಜನರು ಭಾವಿಸತೊಡಗಿದರು. ನಮ್ಮ ಭಾಷೆಗಳ ಸಾಹಿತ್ಯವನ್ನು ಪಕ್ಕಕ್ಕೆ ತಳ್ಳಿ ಇಂಗ್ಲಿಷ್ ವಿಜೃಂಭಿಸಿತು. ಸುಸಂಸ್ಕೃತ ಎಂದರೆ ಇಂಗ್ಲಿಷ್ ಭಾಷೆಯಲ್ಲಿ ಮಾತನಾಡುವ ವ್ಯಕ್ತಿ ಎಂಬ ಸಿದ್ಧಾಂತ ಉದಯಿಸಿತು. ಸನಾತನ ಧರ್ಮಕ್ಕೆ ಗ್ಲಾನಿಯುಂಟಾಯಿತು.


ಯದಾ ಯದಾಹಿ ಧರ್ಮಸ್ಯ ಗ್ಲಾನಿರ್ಭವತಿ ಭಾರತ ।
ಅಭ್ಯುತ್ಥಾನಮಧರ್ಮಸ್ಯ ತದಾತ್ಮಾನಂ ಸೃಜಾಮ್ಯಹಮ್ ॥

ಎಂದು ಭಗವದ್ಗೀತೆಯಲ್ಲಿ ಕೊಟ್ಟ ಮಾತಿನಂತೆ ಭಗವಂತನು ಇಲ್ಲಿ ಅವತರಿಸಬೇಕಾಗಿತ್ತು. ಅದಕ್ಕೆ ಅನುಗುಣವಾಗಿ ಬಂಗಾಳದ ಕಾಮಾರಪುಕುರದಲ್ಲಿ ಶ್ರೀರಾಮಕೃಷ್ಣರ ಜನನವಾಯಿತು. ತಂದೆ ತಾಯಿ ಅವರಿಗೆ ಇಟ್ಟಿದ್ದ ಹೆಸರು 'ಗದಾಧರ'. ಭಕ್ತಿಭಾವದಲ್ಲಿ ಮೈಮರೆಯುತ್ತಿದ್ದ ಅವರಿಗೆ ಕಾಳೀಮಾತೆ ಪ್ರತ್ಯಕ್ಷಳಾಗುತ್ತಿದ್ದಳು. ಈ ಜನ್ಮದ ವಿದ್ಯಾಭ್ಯಾಸ ಅವರಿಗೆ ಬೇಕಾಗಲಿಲ್ಲ. ಪೂರ್ವ ಜನ್ಮಗಳ ಪುಣ್ಯದ ಬಲದಿಂದಲೇ ಸಮಾಧಿಯನ್ನು ತಲುಪಿ ನಿರ್ವಿಕಲ್ಪ ಸ್ಥಿತಿಯನ್ನು ಅವರು ಹೊಂದಬಲ್ಲವರಾಗಿದ್ದರು.

ಕಲ್ಕತ್ತೆಯಲ್ಲಿ ಆಗ ಬ್ರಹ್ಮ ಸಮಾಜದ ಅನುಯಾಯಿಗಳು ದೊಡ್ಡ ಸಂಖ್ಯೆಯಲ್ಲಿದ್ದರು. ಅವರೆಲ್ಲ ವೈಚಾರಿಕ ಮನೋಭಾವವನ್ನು ಬೆಳೆಸಿಕೊಂಡಿದ್ದರು. ವಿಗ್ರಹಾರಾಧನೆಯನ್ನು ಒಪ್ಪುತ್ತಿರಲಿಲ್ಲ. ಶ್ರೀರಾಮಕೃಷ್ಣರು ಕಾಳಿಯ ದೇವಾಲಯದಲ್ಲಿ ಅರ್ಚನೆಯನ್ನು ಮಾಡುತ್ತಿದ್ದವರು. ಸಾಕಾರದ ಮೂಲಕ ನಿರಾಕಾರವನ್ನು ತಲುಪುವುದು ಅವರ ಗುರಿ. ಅವರನ್ನು ಕಾಣಲು, ಅವರ ಮಾತನ್ನು ಕೇಳಲು, ಅವರ ಅನುಭವದ ಪರಿಚಯವನ್ನು ಪಡೆದುಕೊಳ್ಳಲು ಬರುತ್ತಿದ್ದ ಅನೇಕರಲ್ಲಿ ನರೇಂದ್ರನೂ ಒಬ್ಬ. ಜಿಜ್ಞಾಸುವೇ ಆಗಿ ಅವರನ್ನು ಪ್ರಶ್ನಿಸಲು ಬಂದಿದ್ದ ನರೇಂದ್ರ ಅವರ ಶಿಷ್ಯನಾಗಿ 'ಸ್ವಾಮಿ ವಿವೇಕಾನಂದ' ಆದುದು ಒಂದು ಅದ್ಭುತ.

ನರೇಂದ್ರನದು ನಿರ್ಭಯ ಸ್ವಭಾವ. ದೇವರ ಬಗೆಗೆ ಯಾರು ಮಾತನಾಡಿದರೂ 'ನೀವು ದೇವರನ್ನು ನೋಡಿದ್ದೀರಾ?' ಎಂದು ಅವನು ಕೇಳುತ್ತಿದ್ದನು. ಅವನ ಪ್ರಶ್ನೆಗಳಿಗೆ ಎಲ್ಲರೂ ತಬ್ಬಿಬ್ಬಾಗುತ್ತಿದ್ದರು. ರವೀಂದ್ರನಾಥ ಠಾಕೂರರ ತಂದೆ ದೇವೇಂದ್ರನಾಥ ಠಾಕೂರರು ಆಗ ಆಧ್ಯಾತ್ಮಿಕ ಜಗತ್ತಿನಲ್ಲಿ ಪ್ರಸಿದ್ಧರು. ಅವರನ್ನು ನರೇಂದ್ರನು 'ನೀವು ದೇವರನ್ನು ಕಂಡಿರುವಿರಾ?' ಎಂದು ಪ್ರಶ್ನಿಸಿದಾಗ ಅವರು ನರೇಂದ್ರನ ತೇಜಃಪುಂಜದಂತಹ ಕಣ್ಣುಗಳನ್ನು ನೋಡಿ, 'ನಾನು ದೇವರನ್ನು ಕಂಡಿಲ್ಲ. ಆದರೆ ನೀನು ಕಾಣಬಹುದು. ನಿನ್ನಲ್ಲಿ ಅಂತಹ ತೇಜಸ್ಸಿದೆ' ಎಂದರಂತೆ. ಶ್ರೀ ರಾಮಕೃಷ್ಣರನ್ನು ನರೇಂದ್ರ ಅದೇ ಪ್ರಶ್ನೆಯನ್ನು ಕೇಳಿದಾಗ ಎಂದೋ ಕಂಡಿರುವುದಷ್ಟೇ ಅಲ್ಲ, ಈಗಲೂ ಕಾಣುತ್ತಿದ್ದೇನೆ' ಎಂದರಂತೆ.

ಯೋ ಮಾಂ ಪಶ್ಯತಿ ಸರ್ವತ್ರ ಸರ್ವಂ ಚ ಮಯಿ ಪಶ್ಯತಿ।
ತಸ್ಯಾಹಂ ನ ಪ್ರಣಶ್ಯಾಮಿ ಸ ಚ ಮೇ ನ ಪ್ರಣಶ್ಯತಿ ॥



(ಯಾವನು ನನ್ನನ್ನು ಎಲ್ಲೆಲ್ಲೂ ಕಾಣುವನೋ, ನನ್ನಲ್ಲಿ ಎಲ್ಲವನ್ನೂ ಕಾಣುವನೋ, ಅವನಿಗೆ ನಾನು ದೂರವಾಗುವುದಿಲ್ಲ. ಅವನೂ ನನಗೆ ಇಲ್ಲವಾಗುವುದಿಲ್ಲ) ಎಂಬ ಭಗವದ್ಗೀತಾವಾಕ್ಯ ಶ್ರೀ ರಾಮಕೃಷ್ಣರಿಗೆ ಪ್ರತ್ಯಕ್ಷಾನುಭವಸಿದ್ಧ. ಅವರು ನರೇಂದ್ರನಿಗೆ ಭಗವದ್ದರ್ಶನವನ್ನು ಮಾಡಿಸಿದ್ದು ಮಾತ್ರವಲ್ಲ, ತಮ್ಮ ತಪಸ್ಸಿನ ಸಮಸ್ತ ಶಕ್ತಿಯನ್ನು ಧಾರೆಯೆರೆದುಕೊಟ್ಟರು.

ಶ್ರೀ ರಾಮಕೃಷ್ಣರು ವಿದೇಹಮುಕ್ತಿಯನ್ನು ಪಡೆದ ಮೇಲೆ ನರೇಂದ್ರನು ಸಂನ್ಯಾಸವನ್ನು ಸ್ವೀಕರಿಸಿದನು. ಆಗ ಸ್ವಾಮಿ ವಿವೇಕಾನಂದ ಎಂಬ ಅಭಿಧಾನವು ಉಂಟಾಯಿತು. ದೇಶದ ವಾಸ್ತವ ಸ್ಥಿತಿಯನ್ನು ಅರಿತುಕೊಳ್ಳಲು ಸ್ವಾಮಿ ವಿವೇಕಾನಂದರು ದೇಶವನ್ನೆಲ್ಲ ಸುತ್ತಿದರು. ಜನರು ಅಜ್ಞಾನ, ಬಡತನ, ಗುಲಾಮಗಿರಿಗಳಿಂದ ಕುಗ್ಗಿ ಹೋಗಿದ್ದುದನ್ನು ಕಂಡರು. ಈ ಶಾಪಗಳಿಂದ ಭಾರತೀಯರನ್ನು ಬಿಡಿಸಬೇಕೆಂದು ಪಣತೊಟ್ಟರು.

ಶ್ರೀ ವಿವೇಕಾನಂದರ ಮೇಧಾಶಕ್ತಿ ಅಪ್ರತಿಮವಾಗಿತ್ತು. ಯಾವುದೇ ಪುಸ್ತಕವನ್ನಾಗಲಿ, ಒಮ್ಮೆ ತಿರುವಿಹಾಕಿದರೆ ಸಾಕು. ಅದರ ಸಮಗ್ರ ಸಾರವು ಅವರ ಬುದ್ಧಿಯಲ್ಲಿ ನಿಂತು ಬಿಡುತ್ತಿತ್ತು. ಅವರು ಅದನ್ನು ಎಂದೂ ಮರೆಯುತ್ತಿರಲಿಲ್ಲ. ಗೀತೆ, ಉಪನಿಷತ್ತುಗಳು ಅವರಿಗೆ ಕರತಲಾಮಲಕವಾಗಿದ್ದವು. ಇಂಗ್ಲಿಷ್ ಭಾಷೆಯ ಮೇಲೆ ಅವರಿಗಿದ್ದ ಪ್ರಭುತ್ವ ಯಾವ ಇಂಗ್ಲಿಷ್ ಪ್ರಾಧ್ಯಾಪಕರಿಗೂ ಇರಲಿಲ್ಲ. ಪಂಡಿತರೊಡನೆ ಅವರು ಸಂಸ್ಕೃತದಲ್ಲೂ ಮಾತನಾಡುತ್ತಿದ್ದರು. ಬಂಗಾಳಿ ಭಾಷೆಯಂತೂ ಅವರ ಮಾತೃಭಾಷೆ ಎಲ್ಲರೂ ತಲೆದೂಗುವಂತಿತ್ತು. ಅವರ ವಿಶಿಷ್ಟ ವಾಗ್‌ವೈಖರಿ ಜೊತೆಗೆ ಮಧುರಕಂಠದಿಂದ ಅವರು ಹಾಡಿದರೆ ಕೇಳಿದವರೆಲ್ಲ ಮುಗ್ಧರಾಗುತ್ತಿದ್ದರು.

ವಿವೇಕಾನಂದರು ವಿಶ್ವವಿದಿತರಾಗುವ ಅವಕಾಶ 1893ರಲ್ಲಿ ಒದಗಿಬಂತು. ಅಮೆರಿಕದ ಚಿಕಾಗೋ ನಗರದಲ್ಲಿ ವಿಶ್ವ ಧರ್ಮ ಸಮ್ಮೇಳನ. ಜಗತ್ತಿನ ಅನೇಕ ಧರ್ಮಗಳ ಗುರುಗಳ ಮಿಲನ. ಆ ಕಾಲದಲ್ಲಿ ವಿಮಾನಗಳು ಇರಲಿಲ್ಲ. ಸಮುದ್ರವನ್ನು ದಾಟಿ ಬೇರೆ ದೇಶಕ್ಕೆ ಹೋಗಲು ಹಡಗನ್ನೇ ಆಶ್ರಯಿಸಬೇಕಾಗಿತ್ತು. ತಿಂಗಳುಗಟ್ಟಲೇ ಪ್ರಯಾಣ. ಅಮೇರಿಕಕ್ಕೆ ಹೋದ ಮೇಲೆ ಚಳಿಯ ಕಾಟ. ಸ್ವಾಮೀಜಿಯವರ ಬಳಿ ಹಣವಿರಲಿಲ್ಲ. ಎಷ್ಟೋ ದಿನ ಕಷ್ಟದಿಂದ ಕಳೆದ ಮೇಲೆ ವಿಶ್ವಧರ್ಮ ಸಮ್ಮೇಳನದ ದಿನ ಬಂದೇ ಬಂತು. ಹಿಂದು ಧರ್ಮದ ಬಗೆಗೆ ಭಾಷಣ ಮಾಡಲು ವೇದಿಕೆಯಲ್ಲಿ ನಿಂತು ಸ್ವಾಮಿ ವಿವೇಕಾನಂದರು Brothers and sisters of America ಎಂದು ಗಂಭೀರಕಂಠದಿಂದ ಸಂಬೋಧಿಸಿದಾಗ ಚಪ್ಪಾಳೆಗಳ ಸುರಿಮಳೆ. ಅನಂತರ ಅವರ ವಾಗ್‌ಝರಿಗೆ ಮನಸೋತ ಪ್ರೇಕ್ಷಕರು. ಸ್ವಾಮಿಗಳು ತಮ್ಮ ಮಾತಿನಲ್ಲಿ ಮಧುರಕಂಠದಿಂದ ಸಂಸ್ಕೃತದ ಪದ್ಯವನ್ನು ಹಾಡಿದರು–

ತ್ರಯೀ ಸಾಂಖ್ಯಂ ಯೋಗ: ಪಶುಪತಿಮತಂ ವೈಷ್ಣವಮಿತಿ
ಪ್ರಭಿನ್ನೇ ಪ್ರಸ್ಥಾನೇ ಪರಮಿದಮದ: ಪಥ್ಯಮಿತಿ ಚ।
ರುಚೀನಾಂ ವೈಚಿತ್ರ್ಯಾದ್ ಯಜುಕುಟಿಲನಾನಾಪಥಜುಷಾಂ
ನೃಣಾಮೇಕೋ ಗಮ್ಯಸ್ತ್ವಮಸಿ ಪಯಸಾಮರ್ಣವಇವ ॥

ಶಿವಮಹಿಮ್ನಃಸ್ತವದ ಈ ಪದ್ಯವು ಶಿಖರಿಣೀ ಛಂದಸ್ಸಿನಲ್ಲಿ ರಚಿತವಾಗಿದೆ. ಸ್ವಾಮಿಗಳ ಕಂಠದಿಂದ ಹೊರಹೊಮ್ಮಿದ ಈ ಪದ್ಯದ ಗಾನವನ್ನು ಕೇಳಿದವರೇ ಧನ್ಯರು. ಇದೊಂದು ಭಾಷಣ ವಿವೇಕಾನಂದರನ್ನು ವಿಶ್ವವಿಖ್ಯಾತರನ್ನಾಗಿ ಮಾಡಿದ್ದು ಅಷ್ಟೇ ಅಲ್ಲ. ಹಿಂದು ಧರ್ಮದ ಹಿರಿಮೆಯನ್ನು ಲೋಕಕ್ಕೆ ಸಾರಿ ಹೇಳಿತು. ಅದಾದ ಮೇಲೆ ವಿವೇಕಾನಂದರಿಗೆ ಬಂದ ಆಹ್ವಾನಗಳಿಗೆ ಲೆಕ್ಕವಿಲ್ಲ. ಅಮೇರಿಕದಲ್ಲಿ ಮಾತ್ರವಲ್ಲ, ಯೂರೋಪಿನಲ್ಲೂ ಅವರ ಮಾತನ್ನು ಆಲಿಸಲು ಜನರು ಕಿಕ್ಕಿರಿದು ಸೇರುತ್ತಿದ್ದರು. ಅನೇಕರು ಅವರ ಶಿಷ್ಯರಾದರು. ಮಾರ್ಗರೇಟ್ ನೋಬೆಲ್ ಎಂಬಾಕೆ ಅವರ ಶಿಷ್ಯೆಯಾಗಿ ದೀಕ್ಷೆಯನ್ನು ಪಡೆದು ಸೋದರಿ ನಿವೇದಿತಾ ಎಂದು ಪ್ರಸಿದ್ಧರಾಗಿ ಭಾರತಕ್ಕೆ ಬಂದು ಅಪಾರ ಸೇವೆಯನ್ನು ಮಾಡಿ ಧನ್ಯರಾದರು. ಭಾರತೀಯರು ವಿವೇಕಾನಂದರಿಂದ ಹೊಸ ಚೈತನ್ಯವನ್ನು ಪಡೆದರು. ಜಗತ್ತು ನಮ್ಮನ್ನು ನೋಡುವ ನಾವು ಜಗತ್ತನ್ನು ನೋಡುವ ದೃಷ್ಟಿಗಳು ಬದಲಾದವು.

ವಿವೇಕಾನಂದ ಸಾಹಿತ್ಯ ಸಮುದ್ರದಷ್ಟಿದೆ. ಅವರು ಈ ಲೋಕದಲ್ಲಿ ಬದುಕಿದ್ದುದು ಕೇವಲ ನಲವತ್ತು ವರ್ಷ. ಬೇರೆಯವರು ನಾನೂರು ವರ್ಷ ಬದುಕಿದ್ದರೂ ಇಲ್ಲಿ ಸಾಧಿಸಲಾಗದಷ್ಟು ಅವರಿಂದ ಸಾಧಿತವಾಯಿತು. ಆ ಸಾಹಿತ್ಯ ಸಮುದ್ರದಲ್ಲಿ ಮುಳುಗಿ ಹುಡುಕಿದರೆ ಅನೇಕ ರತ್ನಗಳು ದೊರಕುತ್ತವೆ. ಅವರದು ಶಾಶ್ವತ ಪ್ರಭಾವವನ್ನು ಬೀರುವ ಸಾಹಿತ್ಯ ಅದನ್ನು ಅನೇಕ ಭಾಷೆಗಳಿಗೆ ಅನುವಾದಿಸಿದ್ದಾರೆ. ಇಂದು ಭಾರತದಲ್ಲಿ ಮಾತ್ರವಲ್ಲ, ಪ್ರಪಂಚದ ಅನೇಕ ರಾಷ್ಟ್ರಗಳಲ್ಲಿ ರಾಮಕೃಷ್ಣಾಶ್ರಮಗಳು, ವಿವೇಕಾನಂದ ಕೇಂದ್ರಗಳು ಸ್ಥಾಪಿತವಾಗಿದ್ದರೆ ಅದಕ್ಕೆ ಕಾರಣ ವಿವೇಕಾನಂದರೇ. ನೂರಾರು ಜನರು ಸ್ವಾರ್ಥವನ್ನು ತ್ಯಜಿಸಿ ಬ್ರಹ್ಮಚಾರಿಗಳೂ ಸಂನ್ಯಾಸಿಗಳೂ ಆಗಿ 'ಆತ್ಮನೋ ಮೋಕ್ಷಾಯ ಜಗದ್ಧಿತಾಯ ಚ ಎಂಬ ಧ್ಯೇಯದಿಂದ ಸಮಾಜ ಸೇವೆಯಲ್ಲಿ ತೊಡಗಿದ್ದರೆ, ಅದಕ್ಕೆ ಕಾರಣ ವಿವೇಕಾನಂದರೇ.

ಬೌದ್ಧ ಮತದ ತತ್ತ್ವಗಳನ್ನು ಬೋಧಿಸಿದ ಗೌತಮ ಬುದ್ಧನು ಕ್ರಾಂತಿಕಾರಕ ಪರಿವರ್ತನೆಗಳನ್ನು ತಂದು ಇಂದಿಗೂ ಪ್ರಪಂಚದಲ್ಲಿ ಪ್ರಭಾವ ಶಾಲಿಯಾಗಿರುವಂತೆ ಸ್ವಾಮಿ ವಿವೇಕಾನಂದರು ಮಾನವೀಯತೆಯೇ ಮೂಲವಾಗಿರುವ, ಸೇವೆಯೇ ಧ್ಯೇಯವಾಗಿರುವ ಧರ್ಮವನ್ನು ಎಲ್ಲ ದೇಶಗಳಲ್ಲಿ ಬೋಧಿಸಿ ಶಾಶ್ವತ ಶಕ್ತಿಯಾಗಿದ್ದಾರೆ. ಅವರ ಕೃತಿಗಳನ್ನು ಎಲ್ಲರೂ ಓದಬೇಕು. ಅವರ ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ವಿವೇಕದಿಂದ ಆನಂದವನ್ನು ಸಾಧಿಸಬೇಕು. ಶ್ರೀ ರಾಮಕೃಷ್ಣರ ತಪಸ್ಸು, ವಿವೇಕಾನಂದರ ತೇಜಸ್ಸು ಭಾರತೀಯರೆಲ್ಲರಿಗೆ ಯಶಸ್ಸನ್ನು ತರುವ ಮಾರ್ಗಗಳು. ಅವನ್ನು ಮರೆಯದೆ ನಾವು ನಮ್ಮತನವನ್ನು ಕಾಪಾಡಿಕೊಳ್ಳಬೇಕು.

ಜನವರಿ ತಿಂಗಳು ವಿವೇಕಾನಂದ ಜಯಂತಿಯ ತಿಂಗಳು. ಈ ತಿಂಗಳಲ್ಲಿ ವಿವೇಕಾನಂದ ಜಯಂತಿ. ಅವರ ಜೀವನ ಚರಿತ್ರೆಯನ್ನು ಓದಲು, ಅವರ ಕೃತಿಗಳನ್ನು ಅಧ್ಯಯನ ಮಾಡಲು ಸಂಕಲ್ಪಿಸುವುದಕ್ಕೆ ಸರಿಯಾದ ಸಮಯ.

ವಿವೇಕಾನಂದಚರಿತಂ ಪವಿತ್ರಂ ಪಗಮಂ ನೃಣಾಮ್।
ದದಾತಿ ಸರ್ವಲೋಕೇಭ್ಯೋ ಧರ್ಮಸಂದೇಶ ಮುತ್ತಮಮ್ ॥

ಬೆಂಗಳೂರಲ್ಲಿ ನಾಳೆಯಿಂದ ಅಂತಾರಾಷ್ಟ್ರೀಯ ಸಿರಿಧಾನ್ಯ ಮೇಳ

ಬೆಂಗಳೂರು: ನಗರದ ಅರಮನೆ ಮೈದಾನದಲ್ಲಿ ಜನವರಿ 23ರಿಂದ ಮೂರು ದಿನಗಳ ಅಂತಾರಾಷ್ಟ್ರೀಯ ಸಿರಿಧಾನ್ಯ ಮೇಳ ಆಯೋಜಿಸಲಾಗಿದ್ದು, ಸುಮಾರು 10 ದೇಶಗಳ ಪ್ರತಿನಿಧಿಗಳು ಮತ್ತು ಭಾರತದ 25ಕ್ಕೂ ಹೆಚ್ಚು ರಾಜ್ಯಗಳ ಕೃಷಿ ಸಚಿವರು ಮತ್ತು ಅಧಿಕಾರಿಗಳು ಭಾಗ ವಹಿಸಲಿದ್ದಾರೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷದಂತೆ ಈ ವರ್ಷವೂ ಸಿರಿಧಾನ್ಯ ಬೆಳೆಯಲು ರೈತರನ್ನು ಪ್ರೋತ್ಸಾಹಿಸುವ ಬಗ್ಗೆ ಹೆಚ್ಚಿನ ಒತ್ತು ನೀಡಲಾಗಿದೆ. ಸಾವಯವ ಮತ್ತು ಸಿರಿ ಧಾನ್ಯ ಉತ್ಪನ್ನಗಳಿಗೆ ಮಾರುಕಟ್ಟೆ ಸಂಪರ್ಕವನ್ನು ಒದಗಿಸಲು ಮೇಳದಲ್ಲಿ ಉತ್ಪಾದಕರು–ಮಾರಾಟಗಾರರ ಸಮಾಲೋಚನಾ ಸಭೆ ನಡೆಯಲಿದೆ ಎಂದರು.

ಮೇಳದಲ್ಲಿ 300 ಮಳಿಗೆಗಳು ಇರಲಿದ್ದು,141 ಖರೀದಿದಾರರು ಮತ್ತು 125 ಮಾರಾಟಗಾರರು ಸಭೆಗೆ ನೋಂದಾಯಿಸಿಕೊಂಡಿದ್ದಾರೆ.

ಭಾರತೀಯ ರಾಗಿ ಸಂಶೋಧನಾ ಸಂಸ್ಥೆ, ಕೇಂದ್ರ ಆಹಾರ ತಾಂತ್ರಿಕ ಸಂಶೋಧನಾ ಸಂಸ್ಥೆ ಮತ್ತಿತರ ಸಂಶೋಧನಾ ಸಂಸ್ಥೆಗಳಿಂದ ಸಿರಿಧಾನ್ಯ



ಸಂಸ್ಕರಣೆ, ಮೌಲ್ಯವರ್ಧನೆ ಮತ್ತು ಇತರ ತಂತ್ರಜ್ಞಾನಗಳ ಪ್ರದರ್ಶನಗಳು ಇರುತ್ತದೆ ಎಂದು ಸಚಿವರು ತಿಳಿಸಿದರು.

ರೈತರು ತಲೆಮಾರುಗಳಿಂದ ಬೆಳೆಸಿಕೊಂಡು ಬಂದಿರುವ ವಿವಿಧ ತಳಿಗಳನ್ನು ಪ್ರದರ್ಶಿಸಲು ಅವಕಾಶ ಕಲ್ಪಿಸಲಾಗಿದೆ. ಸ್ಥಳೀಯ ಕೃಷಿಯಲ್ಲಿ ತೊಡಗಿರುವ ಮೂವತ್ತು ರೈತರು ತಮ್ಮ ಸ್ಥಳೀಯ ಮಾದರಿಗಳನ್ನು ಮೇಳದಲ್ಲಿ ಪ್ರದರ್ಶಿಸಲಿದ್ದಾರೆ. ಮಣ್ಣಿನ ಪ್ರಾಮುಖ್ಯತೆ, ಗುಣಲಕ್ಷಣಗಳು, ವರ್ಗೀಕರಣ ಮತ್ತು ಸ್ವರೂಪದ ಬಗ್ಗೆ ಜಾಗೃತಿ ಮೂಡಿಸುವ ಮಣ್ಣಿನ ಪೆಡನ್ ಪೆವಿಲಿಯನ್ ಈ ಮೇಳದಲ್ಲಿ ವಿಶೇಷ ಆಕರ್ಷಣೆಯಾಗಲಿದೆ. ಕರ್ನಾಟಕದಲ್ಲಿ ಸಿರಿಧಾನ್ಯ ಬೆಳೆಯುವ ಒಟ್ಟು ವಿಸ್ತೀರ್ಣ 18.37 ಲಕ್ಷ ಹೆಕ್ಟೇರ್ ಆಗಿದ್ದು, ಸಿರಿಧಾನ್ಯ ಉತ್ಪಾದನೆಯಲ್ಲಿ ರಾಜಸ್ಥಾನದ ನಂತರ ರಾಜ್ಯವು ದೇಶದಲ್ಲಿ ಎರಡನೇ ಸ್ಥಾನದಲ್ಲಿದೆ ಎಂದು ಚಲುವರಾಯಸ್ವಾಮಿ ಹೇಳಿದರು.

ಅವಧಿ ವಿಸ್ತರಣೆ

ಮೈಸೂರು: 2024–25ನೇ ಸಾಲಿನಲ್ಲಿ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿಹೆಚ್‌ಡಿ ಅಧ್ಯಯನ ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ)ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡುವ ಡಿ ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಫೆ.5ರವರೆಗೆ ವಿಸ್ತರಿಸಲಾಗಿದೆ. ಮಾಹಿತಿಗೆ ದೂ.ಸಂ 8050770004 ಅನ್ನು ಸಂಪರ್ಕಿಸಬಹುದು

ಮೈಸೂರು ಸೆಂಟ್ರಲ್ ಜೈಲ್‌ನಲ್ಲಿ ಮಕರ ಸಂಕ್ರಾಂತಿ ಆಚರಣೆ

ಶ್ರೀರಾಮಕೃಷ್ಣ ಮಠದ ಸ್ವಾಮಿ ಯುಕ್ತೇಶಾನಂದಜೀ ಮಹಾರಾಜ್ ಅವರಿಂದ ಕೈದಿಗಳಿಗೆ ಸನ್ಮಾರ್ಗ ಸಂದೇಶ

ಮೈಸೂರು,ಜ.21–ಭಾರತ ಸರ್ಕಾರದ ಕಾರಾಗೃಹ ಸಚಿವಾಲಯ(ಪಿಎಂಐ) ಮತ್ತು ಮೈಸೂರು ಕೇಂದ್ರ ಕಾರಾಗೃಹದ ಪ್ರಾಧಿಕಾರದ ಅಧಿಕಾರಿಗಳು ಮೈಸೂರು ಕೇಂದ್ರ ಕಾರಾಗೃಹದಲ್ಲಿ ಮಕರ ಸಂಕ್ರಾಂತಿ ಆಚರಿಸಿದರು.

ಶ್ರೀ ರಾಮಕೃಷ್ಣ ಮಠದ ಸ್ವಾಮಿ ಯುಕ್ತೇಶಾನಂದಜೀ ಮಹಾರಾಜ್ ಮುಖ್ಯ ಅತಿಥಿಗಳಾಗಿ ಭಾಗ ವಹಿಸಿದ್ದರು. ಕಾರಾಗೃಹದ ಚೀಫ್ ಸೂಪರಿಂಟೆಂಡೆಂಟ್ ರಮೇಶ್ ಅಧ್ಯಕ್ಷತೆ ವಹಿಸಿದ್ದರು.

ಈ ವೇಳೆ ಸ್ವಾಮಿ ಯುಕ್ತೇಶಾನಂದಜೀ ತಮ್ಮ ಸಂದೇಶದಲ್ಲಿ, ಕೈದಿಗಳು ಸಕಾರಾತ್ಮಕ ಆಲೋಚನೆಗಳನ್ನು ಬೆಳೆಸಿಕೊಳ್ಳಲು ಆಂತರಿಕ ಶಕ್ತಿಯನ್ನು ಬೆಳೆಸಿ ಕೊಳ್ಳಬೇಕೆಂದು ಕರೆ ನೀಡಿದರು. ಒಬ್ಬ ಅಜ್ಜ ತನ್ನ ಮೊಮ್ಮಗನಿಗೆ ಎರಡು ತೋಳಗಳ ಬಗ್ಗೆ ಕಥೆ ಹೇಳುವ ಉದಾಹರಣೆ ನೀಡಿದರು. ಒಂದು ಒಳ್ಳೆಯ ತೋಳ ಮತ್ತು ಇನ್ನೊಂದು ಕೆಟ್ಟ ತೋಳ, ಪರಸ್ಪರ ಜಗಳವಾಡುತ್ತವೆ. ಇವುಗಳಲ್ಲಿ ಯಾವ ತೋಳ ಗೆಲ್ಲುತ್ತದೆ ಎಂದು ತನ್ನ ಮೊಮ್ಮಗನಿಗೆ ಕೇಳಿದನು. ಮೊಮ್ಮಗ ಕೆಟ್ಟ ತೋಳ ಗೆಲ್ಲುತ್ತದೆ ಎಂದು ಉತ್ತರಿಸಿದನು. ಅಜ್ಜ ಹೇಳಿದ್ದು, ಒಳ್ಳೆಯ ಮೌಲ್ಯಗಳನ್ನು ಬೆಳೆಸಿಕೊಂಡ ತೋಳ ಗೆಲ್ಲುತ್ತದೆ. ಆದ್ದರಿಂದ ಅದು ನಮ್ಮಲ್ಲಿ ಪ್ರತಿಯೊಬ್ಬರಲ್ಲಿಯೂ ಇದೆ. ನಮ್ಮ ಸಕಾರಾತ್ಮಕ ಆಲೋಚನೆ ಗಳು ನಮ್ಮನ್ನು ಜೀವನದ ಎಲ್ಲಾ ಕಠಿಣ ರಸ್ತೆಗಳ ಮೂಲಕ ಕರೆದೊಯ್ಯುತ್ತವೆ ಮತ್ತು ಶಾಂತಿಯುತ ಜೀವನವನ್ನು ನಡೆಸಲು ನಮಗೆ ಸಹಾಯ ಮಾಡುತ್ತವೆ ಎಂದರು.



ಮೈಸೂರು ಜೈಲಿನಲ್ಲಿ ಮಕರ ಸಂಕ್ರಾಂತಿ ಆಚರಣೆ ವೇಳೆ ಮಿಲಾಗ್ರಿನ್, ಯುಎಫ್‌ಎಸ್; ಬ್ರದರ್ ಡಾಲ್ಫಿ ಡಿಡಿಎಸ್; ಸ್ವಾಮಿ ಯುಕ್ತೇಶಾನಂದಜಿ ಮಹಾರಾಜ್; ಡಾ.ಮೈಕೆಲ್ ನೊರೊನ್ಹಾ; ನಸಿತಾ; ಜಾಯ್ಸ್ ಮತ್ತು ಬಸವೇಶ್ ಅವರನ್ನು ಚಿತ್ರದಲ್ಲಿ ಕಾಣಬಹುದು.

ಪೋಲೆಂಡ್‌ನ ಇಬ್ಬರು ಯಹೂದಿ ಸಹೋದರಿಯರನ್ನು ಕಾನ್ಸಂಟ್ರೇಶನ್ ಕ್ಯಾಂಪ್‌ಗೆ ಹೇಗೆ ಕರೆದೊಯ್ಯಲಾಯಿತು ಮತ್ತು ಒಬ್ಬರು ಪ್ರಾರ್ಥನೆ ಹಾಗೂ ದೇವರ ಮೇಲಿನ ನಂಬಿಕೆಯಿಂದ ಹೇಗೆ ಬದುಕುಳಿದರು ಎಂಬುದನ್ನು ಸ್ವಾಮೀಜಿ ವಿವರಿಸಿದರು.

ಅಮೆರಿಕದಲ್ಲಿ ಸ್ವಾಮಿ ವಿವೇಕಾನಂದರನ್ನು ಬಂಧಿಸಲು ಪೊಲೀಸರು ಬಯಸಿದಾಗ, ಪ್ರಾರ್ಥನೆ ಮತ್ತು ಧ್ಯಾನ ಮಾಡಲು ಸಮಯ ಸಿಗುತ್ತದೆ ಎಂದು ಸಂತೋಷದಿಂದ ಸ್ವಯಂಪ್ರೇರಿತರಾಗಿ ಬಂಧನಕ್ಕೊಳಗಾಗಲು ಅವರು ಮುಂದೆ ಬಂದರು. ಹೆಚ್ಚು ಸಮಯ ಸೆರೆವಾಸ ವಿಧಿಸಿದರೆ ಉತ್ತಮ ಎಂದು ಹೇಳಿದರು. ಜೈಲುವಾಸಿಗಳು ಪ್ರಾರ್ಥನೆ ಹಾಗೂ ಧ್ಯಾನದಲ್ಲಿ ಹೆಚ್ಚು ಸಮಯ ಕಳೆಯಬೇಕೆಂದು ಸಲಹೆ ನೀಡಿದರು.

ಮುಖ್ಯ ಸೂಪರಿಂಟೆಂಡೆಂಟ್ ರಮೇಶ್ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ, ವಾರಕ್ಕೊಮ್ಮೆ ಡಿಅಡಿಕ್ಷನ್ ಶಿಬಿರವನ್ನು ಆಯೋಜಿಸುವುದು, ಪ್ರತಿ ಧರ್ಮದ ಹಬ್ಬವನ್ನು ಆಚರಿಸುವ ಮೂಲಕ ಜೈಲಿನಲ್ಲಿ ಪಿಎಂಐ ನಡೆಸಿದ ಸುಧಾರಣಾ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಕೈದಿಗಳು ತಮ್ಮ ವೈಯಕ್ತಿಕ ಬೆಳವಣಿಗೆ ಮತ್ತು ಸಮಾಜಕ್ಕೆ ಮರುಸೇರ್ಪಡೆಗೊಳ್ಳಲು ಸ್ವಾಮೀಜಿಯ ಮಾತುಗಳನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಕರೆ ನೀಡಿದರು.

ಪಿಎಂಐ ಆಯೋಜಿಸಿದ್ದ ಗಾಯನ ಸ್ಪರ್ಧೆಯ ವಿಜೇತರಿಗೆ ಬಹುಮಾನಗಳನ್ನು ನೀಡಲಾಯಿತು. ಎಲ್ಲಾ ಕೈದಿಗಳು ಮತ್ತು ಅಧಿಕಾರಿಗಳಿಗೆ ಎಳ್ಳು ಬೆಲ್ಲದ 1000 ಪ್ಯಾಕೆಟ್‌ಗಳನ್ನು ವಿತರಿಸಲಾಯಿತು. ಯುಎಫ್‌ಎಸ್‌ನ ಸೀನಿಯರ್ ಮಿಲಾಗ್ರಿನ್ ಅತ್ಯುತ್ತಮ ಪ್ರಾರ್ಥನೆ ಮತ್ತು ಸ್ವಾಗತ ಭಾಷಣ ಮಾಡಿದರು. ಡಿಡಿಎಸ್‌ನ ಬ್ರದರ್ ಡಾಲ್ಫಿ ಕಾರ್ಯಕ್ರಮ ನಿರೂಪಿಸಿದರು. ಕರ್ನಾಟಕದ ಪಿಎಂಐ ಕಾರ್ಯದರ್ಶಿ ಡಾ. ಮೈಕೆಲ್ ನೊರೊನ್ಹಾ; ಮೈಸೂರು ಕಾರಾಗೃಹದ ಸಹಾಯಕ ಅಧೀಕ್ಷಕಿ ಶ್ರೀಮತಿ ದೀಪು, ನಸಿತಾ, ಜಾಯ್ಸ್ ಇತರರು ಉಪಸ್ಥಿತರಿದ್ದರು. ಬಹಳಷ್ಟು ಕೈದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸ್ವಾಮೀಜಿಯವರು ಸ್ವಾಮಿ ವಿವೇಕಾನಂದ, ರಾಮಕೃಷ್ಣ ಪರಮಹಂಸ ಮತ್ತು ಮಾತಾ ಶಾರದಾದೇವಿ ಅವರ ಕುರಿತಾದ 13 ಪುಸ್ತಕಗಳನ್ನು ಜೈಲು ಗ್ರಂಥಾಲಯಕ್ಕೆ ದಾನ ಮಾಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581/1980 E-mail address: mysoorumithra@gmail.com For advertisements: mysoorumithra@gmail.com

'ಕ್ರೀಡಾ ಮಿತ್ರ'

ಖೋ ಖೋ ವಿಶ್ವಕಪ್‌ನಲ್ಲಿ ಭಾರತದ ಚಾಂಪಿಯನ್‌ಗಳಾದ ಮೈಸೂರಿನ ಚೈತ್ರ, ಮಂಡ್ಯದ ಗೌತಮ್ ಅಭಿನಂದಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ



ನವದೆಹಲಿಯ ಬೃಹತ್ ಕೈಗಾರಿಕಾ ಸಚಿವಾಲಯದಲ್ಲಿ ಮಂಗಳವಾರ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಪುರುಷರ ಹಾಗೂ ಮಹಿಳಾ ಖೋ-ಖೋ ವಿಶ್ವಕಪ್‌ನಲ್ಲಿ ಅತ್ಯುತ್ತಮ ಆಟವಾಡಿ ಭಾರತ ತಂಡ ವಿಶ್ವ ಚಾಂಪಿಯನ್ ಆಗಲು ಕಾರಣಕರ್ತರಾದ ಎಂ.ಕೆ.ಗೌತಮ್ ಹಾಗೂ ಚೈತ್ರಾ ಅವರನ್ನು ಅಭಿನಂದಿಸಿದರು.

ನವದೆಹಲಿ, ಜ.21(ಬಿಎಲ್‌ಯು)- ಪುರುಷರ ಹಾಗೂ ಮಹಿಳಾ ಖೋ-ಖೋ ವಿಶ್ವಕಪ್‌ನಲ್ಲಿ ಅತ್ಯುತ್ತಮವಾಗಿ ಆಟವಾಡಿ ಭಾರತ ತಂಡ ವಿಶ್ವ ಚಾಂಪಿಯನ್ ಆಗಲು ಪ್ರಮುಖ ಪಾತ್ರ ವಹಿಸಿದ ಮೈಸೂರು ಜಿಲ್ಲೆಯ ಚೈತ್ರಾ ಹಾಗೂ ಮಂಡ್ಯ ಜಿಲ್ಲೆಯ ಎಂ.ಕೆ. ಗೌತಮ್ ಅವರನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಭಿನಂದಿಸಿದರು.

ನವದೆಹಲಿಯ ಬೃಹತ್ ಕೈಗಾರಿಕಾ ಸಚಿವಾಲಯದಲ್ಲಿ ಗೌತಮ್ ಹಾಗೂ ಚೈತ್ರಾ ಸೇರಿದಂತೆ ಕೋಚ್‌ಗಳಾದ ಸುಮಿತ್ ಬಾಟಿಯಾ, ವ್ಯವಸ್ಥಾಪಕಿ ರಾಜಕುಮಾರಿ ಅವರನ್ನು ಈ ವೇಳೆ ಕುಮಾರಸ್ವಾಮಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕುಮಾರಸ್ವಾಮಿ, ಗ್ರಾಮೀಣ ಮಕ್ಕಳು ಹೆಚ್ಚಿನ ಪ್ರಮಾಣದಲ್ಲಿ ಕ್ರೀಡಾ ಕ್ಷೇತ್ರಕ್ಕೆ ಬರಬೇಕು. ಇದಕ್ಕೆ ನಮ್ಮಿಂದಾಗುವಷ್ಟು ಪ್ರೋತ್ಸಾಹ ನೀಡುತ್ತೇವೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತದೆ ಎಂದು ಭರವಸೆ ನೀಡಿದರು.

ಕನ್ನಡ ನೆಲದ ಗ್ರಾಮೀಣ ಮಕ್ಕಳಿಬ್ಬರು ಭಾರತಾಂಭೆಯ ಕೀರ್ತಿ ಪತಾಕೆಯನ್ನು ಮುಗಿಲೆತ್ತರಕ್ಕೆ ಹಾರಿಸಿದ್ದಾರೆ. ಈ ಮೂಲಕ ಕನ್ನಡಮ್ಮನ ಕೀರ್ತಿ ಕಿರೀಟಕ್ಕೆ ಮತ್ತಷ್ಟು ಗರಿಗಳನ್ನು ಪೇರಿಸಿದ್ದಾರೆ ಎಂದು ಕುಮಾರಸ್ವಾಮಿ ಪ್ರಶಂಸಿಸಿದರು. ಎಂ.ಕೆ.ಗೌತಮ್ ಅವರು ಮಂಡ್ಯ ಜಿಲ್ಲೆ ಮದ್ದೂರು ತಾಲೂಕಿನ ಡಿ.ಮಲ್ಲಿಗೆರೆ ಗ್ರಾಮದವರಾಗಿದ್ದು, ಚೈತ್ರಾ ಅವರು ಮೈಸೂರು ಜಿಲ್ಲೆ ತಿ.ನರಸೀಪುರ ತಾಲೂಕಿನ ಕುರುಬೂರು ಗ್ರಾಮದವರಾಗಿದ್ದಾರೆ.

ನಾಳೆಯಿಂದ ಮೈಸೂರಲ್ಲಿ ದಕ್ಷಿಣ ವಲಯ ಅಂತರ ವಿವಿ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿ

ಇಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪರಿಂದ ಚಾಲನೆ

ಮೈಸೂರು, ಜ.21(ಜಿಎ)- ಮೈಸೂರು ವಿಶ್ವವಿದ್ಯಾನಿಲಯದ ವತಿಯಿಂದ ಜ.23ರಿಂದ 29ರವರೆಗೆ ನೂತನ ಸಾಲಿನ ದಕ್ಷಿಣ ವಲಯ ಅಂತರ ವಿಶ್ವವಿದ್ಯಾನಿಲಯ ಮಹಿಳೆಯರ ಕ್ರಿಕೆಟ್ ಪಂದ್ಯಾವಳಿಯನ್ನು ನಗರದ ವಿವಿಧ ಕ್ರೀಡಾಂಗಣಗಳಲ್ಲಿ ಆಯೋಜಿಸಲಾಗಿದೆ ಎಂದು ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಸಿ.ವೆಂಕಟೇಶ್ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂದ್ಯಾವಳಿಯಲ್ಲಿ ದಕ್ಷಿಣ ಭಾರತದ 43 ವಿಶ್ವವಿದ್ಯಾನಿಲಯಗಳ ಮಹಿಳಾ ಕ್ರಿಕೆಟ್ ತಂಡಗಳು ಭಾಗವಹಿಸಲಿವೆ. ತಲಾ 25 ಓವರ್‌ಗಳ ನಾಕೌಟ್ ಪಂದ್ಯಾವಳಿ ಇದಾಗಿದ್ದು, ಪಂದ್ಯಾವಳಿಗಾಗಿ ಮಾನಸಗಂಗೋತ್ರಿಯ ಗಂಗೋತ್ರಿ ಗ್ಲೇಡ್ಸ್, ಎಸ್‌ಜೆಸಿಇ ಕ್ಯಾಂಪಸ್, ಮಹಾರಾಜ ಕಾಲೇಜು, ಮಾನಸಗಂಗೋತ್ರಿ ಕಾಫಿ ಬೋರ್ಡ್, ಮಾನಸ ಗಂಗೋತ್ರಿಯ ವಿಲೇಜ್ ಹಾಸ್ಟೆಲ್ ಮೈದಾನಗಳನ್ನು ಕ್ರಿಕೆಟ್ ಪಂದ್ಯಾವಳಿಗೆ ಸಜ್ಜುಗೊಳಿಸಲಾಗಿದೆ ಎಂದರು.

ಈ ಪಂದ್ಯಾವಳಿಗಾಗಿ 700 ಜನ ಮಹಿಳಾ ಕ್ರೀಡಾಪಟುಗಳು ಹಾಗೂ ನೂರಕ್ಕೂ ಹೆಚ್ಚು ತರಬೇತುದಾರರು ಹಾಗೂ ವ್ಯವಸ್ಥಾಪಕರುಗಳು ಭಾಗವಹಿಸಲಿದ್ದು, ಎಲ್ಲಾ ಕ್ರೀಡಾಪಟುಗಳಿಗೂ ಕರಾಮುವಿ ಹಾಗೂ ಮೈಸೂರು ವಿವಿ ಸಮುಚ್ಚಯದಲ್ಲಿ ಅಗತ್ಯ ವಸತಿ ವ್ಯವಸ್ಥೆ ಮಾಡಲಾಗಿದೆ ಎಂದರು.

ಜ.22ರಂದು ಸಂಜೆ 4.30ಕ್ಕೆ ಗಂಗೋತ್ರಿ ಗ್ಲೇಡ್ಸ್ ಮೈದಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪಂದ್ಯಾವಳಿ ಉದ್ಘಾಟಿಸಲಿದ್ದಾರೆ. ಶಾಸಕ ಕೆ.ಹರೀಶ್‌ಗೌಡ ಹಾಗೂ ಕರಾಮುವಿ ಕುಲಪತಿ ಪ್ರೊ ಶರಣಪ್ಪ ವಿ.ಹಲಸೆ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಮೈಸೂರು ವಿವಿ ಕುಲಸಚಿವರಾದ ವಿ.ಆರ್.ಶೈಲಜ ಅಧ್ಯಕ್ಷತೆ ವಹಿಸಲಿದ್ದಾರೆ.

ಜ.29ರಂದು ಬೆಳಿಗ್ಗೆ 8 ಗಂಟೆಯಿಂದ ಗಂಗೋತ್ರಿ ಗ್ಲೇಡ್ಸ್ ಮೈದಾನದಲ್ಲಿ ಅಂತಿಮ ಪಂದ್ಯ ನಡೆಯಲಿದೆ. ಬಳಿಕ ಮಧ್ಯಾಹ್ನ 12.30ಕ್ಕೆ ಪಂದ್ಯಾವಳಿಯ ಬಹುಮಾನ ವಿತರಣಾ ಸಮಾರಂಭ ನಡೆಯಲಿದ್ದು, ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಬಹುಮಾನ ವಿತರಣೆ ಮಾಡಲಿದ್ದಾರೆ. ಕುಲ ಸಚಿವ ಪ್ರೊ.ಕೆ.ಬಿ. ಪ್ರವೀಣ್ ಮುಖ್ಯ ಅತಿಥಿಗಳಾಗಿ ಭಾಗ ವಹಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ಉಪನಿರ್ದೇಶಕ ಡಾ.ಬಿ. ಕೃಷ್ಣಯ್ಯ, ಕ್ರೀಡಾ ತರಬೇತುದಾರರಾದ ಅಶೋಕ್ ಸೋಮಸುಂದರಂ, ಕೃಷ್ಣಕುಮಾರ್, ಯೋಗೀಶ್ ಉಪಸ್ಥಿತರಿದ್ದರು.

ಪುರುಷರ ಬಾಲ್ ಬ್ಯಾಡ್ಮಿಂಟನ್ ಸೀನಿಯರ್ ಚಾಂಪಿಯನ್‌ಶಿಪ್ ಲೀಗ್ ವಿಜೇತರಿಗೆ ಪ್ರಶಸ್ತಿ ಪ್ರದಾನ



ಮೈಸೂರಿನ ಕುಂಬಾರಕೊಪ್ಪಲಿನ ಕೆಂಪೇಗೌಡ ಕ್ರೀಡಾಂಗಣದಲ್ಲಿ ನಡೆದ ರಾಜ್ಯಮಟ್ಟದ ಪುರುಷರ ಬಾಲ್ ಬ್ಯಾಡ್ಮಿಂಟನ್ ಸೀನಿಯರ್ ಚಾಂಪಿಯನ್‌ಶಿಪ್ ಲೀಗ್‌ನಲ್ಲಿ ಪ್ರಥಮ ಸ್ಥಾನ ಪಡೆದ ಆಳ್ವಾಸ್ ತಂಡದವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ಕ್ಲಬ್ ಆಯೋಜಕರಾದ ಕೆ.ವಿ.ಚೇತನ್ ವಿಷಕಂಠಗೌಡರನ್ನೂ ಅಭಿನಂದಿಸಲಾಯಿತು.



ಕ್ರಿಕೆಟ್ ಟೂರ್ನಮೆಂಟ್

ಮೈಸೂರು ಸೌಹಾರ್ದ ಕ್ರಿಕೆಟ್ ಅಸೋಸಿಯೇಷನ್ ವತಿಯಿಂದ ಅಶೋಕಪುರಂನ ರೈಲ್ವೆ ಕ್ರಿಕೆಟ್ ಮೈದಾನದಲ್ಲಿ ಆಯೋಜಿಸಿದ್ದ ಕ್ರಿಕೆಟ್ ಟೂರ್ನಮೆಂಟ್‌ನಲ್ಲಿ ಹಿಮಾಲಯ ಪ್ರತಿಷ್ಠಾನದ ಅಧ್ಯಕ್ಷ ಎನ್.ಅನಂತ ಅವರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಸುರೇಶ್, ಮಧು, ಅನಿಲ್ ಮತ್ತಿತರರಿದ್ದರು.

ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮೈಸೂರು,ಜ.21- 2024-25ನೇ ಸಾಲಿನ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾತಿ ಪಡೆಯಲು ಬಯಸುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ವೆಬ್‌ಸೈಟ್ https://swdhmis.karnataka.gov.in/#/registration ಮೂಲಕ ಜನವರಿ 31ರೊಳಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ದೃಢೀಕೃತ ದಾಖಲೆಗಳನ್ನು ಆಯ್ಕೆ ಮಾಡಿರುವ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪಡುವಾರಹಳ್ಳಿಯ ಆದಿಪಂಪ ರಸ್ತೆ, ಒಂಟಿಕೊಪ್ಪಲು ಪೂರ್ವ ಬಡಾವಣೆಯ ಡಾ.ಬಾಬು ಜಗಜೀವನರಾಂ ಭವನ ಕಟ್ಟಡದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್-1 ಅವರ ದೂ.ಸಂಖ್ಯೆ :0821-2520910 ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್-1 ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್‌ರಿಂದ ತೆಂಗು, ಅಡಿಕೆ ಬೆಳೆಗಾರರ ಸಮಸ್ಯೆಗೆ ಪರಿಹಾರ ಭರವಸೆ

ಬೆಂಗಳೂರು,ಜ.21(ಕೆಎಂಶಿ)-ಕರ್ನಾಟಕದ ತೆಂಗು ಮತ್ತು ಅಡಿಕೆ ಬೆಳೆಗಾರರ ಸಮಸ್ಯೆ ಸೇರಿದಂತೆ ಕೃಷಿ ಕ್ಷೇತ್ರದಲ್ಲಿನ ನ್ಯೂನ್ಯತೆಗಳ ಪರಿಹಾರಕ್ಕೆ ಗಮನ ನೀಡುವುದಾಗಿ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭರವಸೆ ನೀಡಿದ್ದಾರೆ.



ರಾಜ್ಯದ ಕೊಬ್ಬರಿ ಮತ್ತು ಅಡಿಕೆ ಬೆಳೆಗಾರರು ಸೇರಿದಂತೆ ಕೃಷಿ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರೊಂದಿಗೆ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಹತ್ವದ ಮಾತುಕತೆ ನಡೆಸಿದರು.

ರಾಜ್ಯದಲ್ಲಿ ತೆಂಗು ಬೆಳೆಗಾರರ ಸಮಾವೇಶ ನಡೆಸುವ ಮೂಲಕ ಪರಿಹಾರೋಪಾಯ ಕಂಡುಕೊಳ್ಳಲು ಒಲವು ತೋರಿದ ಕೇಂದ್ರ ಕೃಷಿ ಸಚಿವರು, ಬೆಳೆಗಾರರು ಸಮಸ್ಯೆಗಳ ಬಗ್ಗೆ ವಿಸ್ತೃತ ಚರ್ಚೆ ನಡೆಸಲಿ, ನಂತರ ಪರಿಹಾರ ಕೈಗೊಳ್ಳೋಣ ಎಂದು ತಿಳಿಸಿದರು.

ಸಾಗಾಣಿಕೆ ವೆಚ್ಚವೇ ತೆಂಗು ಬೆಳೆಗಾರರ ದೊಡ್ಡ ಸಮಸ್ಯೆಯಾಗಿದೆ. ರೈತನ ಬಹುತೇಕ ಆದಾಯ ಸಾಗಾಣಿಕೆಗೇ ವ್ಯಯವಾಗುತ್ತಿದೆ. ನ್ಯಾಯಯುತ ಬೆಲೆ ಕೊಡಿಸುವುದಲ್ಲದೆ, ಸಾಗಣೆ ವ್ಯವಸ್ಥೆಯೂ ಕೈಗೆಟಕುವಂತೆ ಮಾಡಲು ಕೃಷಿ ಸಚಿವಾಲಯದ ನೆರವಿನ ಅಗತ್ಯವಿದೆ ಎಂದು ಕುಮಾರಸ್ವಾಮಿ ಮನವಿ ಮಾಡಿದರು.

ಮಧ್ಯವರ್ತಿಗಳ ಹಾವಳಿಯಿಂದ ರೈತರನ್ನು ರಕ್ಷಿಸಬೇಕಿದೆ. ಕೇಂದ್ರದ ಕಾರ್ಯಕ್ರಮಗಳು ತಲುಪದಂತಾಗಿದ್ದು ಶಾಶ್ವತ ಪರಿಹಾರ ಕಂಡುಕೊಳ್ಳಬೇಕಿದೆ. ಬೆಳೆಗಳ ದಾಸ್ತಾನು ಹಾಗೂ ಉತ್ತಮ ಬೆಲೆ ಖಾತರಿಯ ಅಗತ್ಯವಿದೆ ಎಂದು ಪ್ರತಿಪಾದಿಸಿದರು.

ರಸಗೊಬ್ಬರ ಸಬ್ಸಿಡಿ ಡಿಬಿಟಿ ಮೂಲಕ ವಿಳಂಬವಿಲ್ಲದೆ ಫಲಾನುಭವಿಗಳಿಗೆ ತಲುಪಿಸುವುದು, ಅಧಿಕಾರಶಾಹಿಯ ಅನಗತ್ಯ ಹಸ್ತಕ್ಷೇಪದಿಂದ ರಕ್ಷಿಸುವುದು ಸೇರಿದಂತೆ ಹಲವು ಕಾರ್ಯಗಳು ಆಗಬೇಕಿವೆ ಎಂದು ಕೃಷಿ ಸಚಿವರಿಗೆ ಮನವರಿಕೆ ಮಾಡಿಕೊಟ್ಟರು. ಮನವಿಗೆ ಸ್ಪಂದಿಸಿದ ಕೇಂದ್ರ ಕೃಷಿ ಸಚಿವರು, ಅಡಿಕೆ ರೋಗಗಳ ಪರಿಹಾರಕ್ಕೆ 67 ಕೋಟಿ ರೂ.ಗಳನ್ನು ಮುಂದಿನ ಬಜೆಟ್‌ನಲ್ಲಿ ಘೋಷಿಸಲಾಗುವುದು ಎಂದು ತಿಳಿಸಿದರು.

ದಿನಗೂಲಿ ಕಾರ್ಮಿಕರ ಮೇಲೆ ದೌರ್ಜನ್ಯ

ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಮತ್ತೊಂದು ಕೇಸ್ ದಾಖಲು

ಬೆಂಗಳೂರು: ಬೆಂಗಳೂರು ರಾಜರಾಜೇಶ್ವರಿನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಅವರಿಗೆ ಹೊಸ ಸಂಕಷ್ಟ ಎದುರಾಗಿದ್ದು, ದಿನಗೂಲಿ ಕಾರ್ಮಿಕರ ಮೇಲೆ ದೌರ್ಜನ್ಯ ಎಸಗಿದ ಆರೋಪದ ಮೇಲೆ ಮತ್ತೊಂದು ಎಫ್‌ಐಆರ್ ದಾಖಲಾಗಿದೆ.



ಮುನಿರತ್ನ ಹಾಗೂ ಇತರ ಆರು ಜನ, ಕಟ್ಟಡ ನಿರ್ಮಾಣ ಕಾರ್ಮಿಕರ ಮೇಲೆ ದೌರ್ಜನ್ಯ ಎಸಗಿದ್ದು, ತಾತ್ಕಾಲಿಕ ಶೆಡ್‌ಗಳನ್ನು ಕೆಡವಿದ್ದಾರೆ ಮತ್ತು ಮಹಿಳೆಯರ ಗೌರವಕ್ಕೆ ಧಕ್ಕೆ ತಂದಿದ್ದಾರೆ ಎಂದು ಆರೋಪಿಸಿ 20 ವರ್ಷದ ದಿನಗೂಲಿ ಕಾರ್ಮಿಕ ಮಹಿಳೆಯೊಬ್ಬರು ಪೊಲೀಸರಿಗೆ ದೂರು ನೀಡಿದ್ದಾರೆ.

ದೂರಿನ ಆಧಾರದ ಮೇಲೆ ಪೊಲೀಸರು, ಶಾಸಕ ಮುನಿರತ್ನ, ವಸಂತ ಕುಮಾರ್, ಚೆನ್ನಕೇಶವ, ನವೀನ್, ಶ್ರೀರಾಮ, ಪೀಣ್ಯ ಕಿಟ್ಟಿ ಮತ್ತು ಪೀಣ್ಯ ಗಂಗಾ ವಿರುದ್ಧ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ.

ಪೀಣ್ಯದ ಎಸ್‌ಆರ್‌ಎಸ್ ವೃತ್ತದ ಪೀಣ್ಯ ಪ್ರಥಮ ದರ್ಜೆ ಕಾಲೇಜು ಬಳಿಯಿರುವ ಅಕ್ಕಮಹಾದೇವಿ ಸ್ಲಂನಲ್ಲಿ ಸುಮಾರು 50ಕ್ಕೂ ಹೆಚ್ಚು ಕುಟುಂಬಗಳು ವಾಸವಾಗಿವೆ. ಶಾಸಕ ಮುನಿರತ್ನ ಮತ್ತು ಸಹಚರರು ಜೆಸಿಬಿ ತಂದು ಏಕಾಏಕಿ ಎಲ್ಲರ ಮನೆಯನ್ನು ನೆಲಸಮ ಮಾಡಿದ್ದಾರೆ ಎಂದು ಗಂಭೀರ ಆರೋಪ ಮಾಡಲಾಗಿದೆ.

ಸೋಮವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಶಾಸಕ ಮುನಿರತ್ನ ತಮ್ಮ ಸಹಚರರೊಂದಿಗೆ ಕೊಳೆಗೇರಿಗೆ ಜೆಸಿಬಿಗಳೊಂದಿಗೆ ಆಗಮಿಸಿ ತಾತ್ಕಾಲಿಕ ಶೆಡ್‌ಗಳನ್ನು ಕೆಡವಿದರು. ಸ್ಥಳೀಯ ನಿವಾಸಿಗಳು ಈ ಕ್ರಮವನ್ನು ಪ್ರಶ್ನಿಸಿದರು. ಆದರೆ ಮುನಿರತ್ನ ಅವರನ್ನು ನಿಂದಿಸಲು ಪ್ರಾರಂಭಿಸಿದರು ಮತ್ತು ಉತ್ತರ ಕರ್ನಾಟಕದ ನಿಮ್ಮ ನಿಮ್ಮ ಊರುಗಳಿಗೆ ತೆರಳುವಂತೆ ಸೂಚಿಸಿದರು. ಕೆಲವು ಮಹಿಳೆಯರಿಗೆ ಒದೆಯುವ ಮೂಲಕ ಹಲ್ಲೆ ನಡೆಸಿದ್ದಾರೆ ಎಂದು ಎಫ್‌ಐಆರ್‌ನಲ್ಲಿ ತಿಳಿಸಲಾಗಿದೆ.

ಶಾಸಕ ಮತ್ತು ಇತರ ಆರು ಜನರ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ(ದೌರ್ಜನ್ಯ ತಡೆ) ಕಾಯ್ದೆಯಡಿಯಲ್ಲಿ ಹಾಗೂ ಸೆಕ್ಷನ್ 324 (ಕಿಡಿಗೇಡಿತನ), 74 (ಮಹಿಳೆಯ ಮೇಲೆ ಹಲ್ಲೆ), 351 (ಕ್ರಿಮಿನಲ್ ಬೆದರಿಕೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಆರ್‌ಎಂಸಿ ಯಾರ್ಡ್ ಪೊಲೀಸರು ತಿಳಿಸಿದ್ದಾರೆ.

ಸೈಬರ್ ಅಪರಾಧ ಮಾಹಿತಿ ಒಳಗೊಂಡ ಕ್ಯಾಲೆಂಡರ್



ಸೈಬರ್ ಅಪರಾಧ, ಅದರಿಂದ ಪಾರಾಗುವ ಬಗೆಯ ಕುರಿತು ಜನರಿಗೆ ಉಪಯುಕ್ತ ಮಾಹಿತಿ ಒಳಗೊಂಡ ಕೆಎಂಪಿಕೆ ಟ್ರಸ್ಟ್ ಹೊರತಂದಿರುವ 2025ರ ಕ್ಯಾಲೆಂಡರ್ ಅನ್ನು ರಾಜ್ಯ ಅಂತರಿಕ ಭದ್ರತಾ ವಿಭಾಗದ ಎಸ್ಪಿ ಎ.ಎನ್.ಪ್ರಕಾಶ್‌ಗೌಡ ಬಿಡುಗಡೆಗೊಳಿಸಿದರು. ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ರಾಘವೇಂದ್ರ, ದುರ್ಗಾಪ್ರಸಾದ್, ಬಾಲಾಜಿ, ಸಚಿನ್ ನಾಯಕ್ ಇದ್ದರು.

ಜ.24ರಂದು ಮೈಸೂರಲ್ಲಿ ವಿಚಾರ ಸಂಕಿರಣ

ಮೈಸೂರು,ಜ.21-ಎಸ್‌ಡಿಎಂ ಇನ್ಸ್ಟಿಟ್ಯೂಟ್ ಫಾರ್ ಮ್ಯಾನೇಜ್ಮೆಂಟ್ ಡೆವಲಪ್ಮೆಂಟ್ ಸಂಸ್ಥೆಯಲ್ಲಿ 'ವ್ಯಾಪಾರ ಕಾರ್ಯಾಚರಣೆಗಳು ಮತ್ತು ಸೇವೆಗಳು 2025' ಕುರಿತು ಜ.24ರಂದು ಬೆಳಗ್ಗೆ 10 ಗಂಟೆಗೆ ಸಂಸ್ಥೆಯ ಆವರಣದಲ್ಲಿ ವಿಚಾರ ಸಂಕಿರಣ ಆಯೋಜಿಲಾಗಿದೆ. ಉದ್ಯಮ ನಾಯಕರು, ಶಿಕ್ಷಣ ತಜ್ಞರು, ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ, ಆಧುನಿಕ ವ್ಯವಹಾರ ಆಪರೇಶನ್ಸ್ ಮತ್ತು ಸೇವೆಗಳನ್ನು ರೂಪಿಸುವಲ್ಲಿ ತಂತ್ರಜ್ಞಾನವು ಹೇಗೆ ಪರಿಣಾಮ ಬೀರುತ್ತದೆ ಎಂಬುದರ ಕುರಿತು ಅವರು ಅನುಭವಗಳನ್ನು ಹಂಚಿಕೊಳ್ಳಲು ಅವಕಾಶ ಕಲ್ಪಿಸುತ್ತಿದೆ. ವಿಚಾರ ಸಂಕಿರಣವು ಬದಲಾಗುತ್ತಿರುವ ವ್ಯವಹಾರ ದೃಷ್ಟಿಕೋನವನ್ನು ಗಮನದಲ್ಲಿಟ್ಟುಕೊಂಡು, ಭೌತಿಕ ಮತ್ತು ಡಿಜಿಟಲ್ ವ್ಯವಸ್ಥೆಗಳ ಏಕರೀಕರಣವು ಹೊಸ ಅವಕಾಶಗಳನ್ನು ತೆರೆಯುತ್ತಿರುವುದರ ಜೊತೆಗೆ ಅನೇಕ ಅವಶ್ಯಕತೆಗಳನ್ನು ಎದುರಿಸುವ ಪ್ರಕ್ರಿಯೆಯನ್ನು ವಿವರಿಸುವತ್ತ ಗಮನಹರಿಸುತ್ತದೆ. ಕಾರ್ಯಕ್ರಮದಲ್ಲಿ 'ಉದ್ಯಮದಲ್ಲಿ ಸ್ವಯಂಚಾಲನೆ: ಅಡ್ಡಿಗಳನ್ನು ಮೀರಿ ಶಕ್ತಿಗಳನ್ನು ಅನ್ಲಾಕ್ ಮಾಡುವುದು', 'ವ್ಯವಹಾರ ನಿರ್ವಹಣೆ ಮತ್ತು ಸೇವೆಗಳಲ್ಲಿ ಇಂಡಸ್ಟ್ರಿ 4.0: ಅವಕಾಶಗಳು ಮತ್ತು ಸವಾಲುಗಳು', 'ಸರ್ಕ್ಯುಲರ್ ಸಪ್ಲೈ ಚೈನ್: ಟೇಕ್-ಮೇಕ್-ಡಿಸ್ಪೋಸ್ ಚಕ್ರವನ್ನು ಮುರಿಯುವುದು' ಮತ್ತು 'ನೆಟ್ವರ್ಕಿಂಗ್ ಅವಕಾಶಗಳು: ಉದ್ಯಮ ತಜ್ಞರು, ನಾಯಕರು ಮತ್ತು ನೇಮಕಾತಿದಾರರೊಂದಿಗೆ ಸಂಪರ್ಕ ಸಾಧಿಸಲು ವಿಶೇಷ ವೇದಿಕೆ' ವಿಷಯಗಳ ಕುರಿತು ಚರ್ಚೆ ಆಯೋಜಿಸಲಾಗಿದೆ.

ಜ.25ರಂದು ಮಾತಂಗ ಮಹೋತ್ಸವ

ಮೈಸೂರು, ಜ.21(ಜಿಎ)-ಮಾತಂಗ ಉತ್ಸವ ಸಮಿತಿ ವತಿಯಿಂದ ಜ.25ರಂದು ಸಂಜೆ 5 ಗಂಟೆಗೆ ನಗರದ ಗುರು ರೆಸಿಡೆನ್ಸಿ ಪಕ್ಕದ ಗೋವಿಂದ ರಾವ್ ಸ್ಮಾರಕ ಭವನದಲ್ಲಿ ಮಾತಂಗ ಮಹೋತ್ಸವ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಕರ್ನಾಟಕ ಪ್ರಮುಖ್ ಪ್ರಸನ್ ಈ ವಿಷಯ ತಿಳಿಸಿ, ಮಾತಂಗರು ಪುರಾಣದ ಮಹತ್ವ ಉಳ್ಳವರಾಗಿದ್ದಾರೆ. ಆ ಕಾರ್ಯಕ್ರಮದಲ್ಲಿ ಉತ್ತರ ಕರ್ನಾ ಟಕದ ಪರಿಯೋಜಕ ಪ್ರಮುಖ್ ಸ್ವತಂತ್ರ ಶಿಂಧೆ ಹಾಗೂ ಮಾತಂಗ ಮುನಿ ವಿರಚಿತ ಬೃಹದ್ದೇಶಿ (ಪರಿಷ್ಕೃತ ಆವೃತ್ತಿ) ಗ್ರಂಥ ಸಂಪಾದಕರಾದ ವಿದ್ವಾಂಸ ಡಾ.ರಾ.ಸ.ನಂದಕುಮಾರ್, ವಿಭಾಗ ಸಂಯೋಜಕರಾದ ರಾಧಾಕೃಷ್ಣ ವೇದಿಕೆಯಲ್ಲಿರುವರು ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ಆನಂದ್‌ಕುಮಾರ್, ಶ್ರೀನಿವಾಸ್ ಉಪಸ್ಥಿತರಿದ್ದರು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಜ. 21- ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಜನವರಿ 23ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ದೂ. 0821-4259259 ಸಂಪರ್ಕಿಸಬಹುದು.

ಬೆಂಗಳೂರಲ್ಲಿ ಮಹಿಳೆ ಮೇಲೆ ಗ್ಯಾಂಗ್ ರೇಪ್

ಆಭರಣ, ಮೊಬೈಲ್ ಕಸಿದು ದುಷ್ಕರ್ಮಿಗಳು ಪರಾರಿ

ಬೆಂಗಳೂರು: ನಗರದ ಜನನಿಬಿಡ ಕೆಆರ್ ಮಾರುಕಟ್ಟೆ ಬಳಿಯೇ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿರುವ ಆಘಾತಕಾರಿ ಘಟನೆ ವರದಿಯಾಗಿದ್ದು, ಈ ಸಂಬಂಧ ಎಸ್‌ಜೆ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ತಮಿಳುನಾಡು ಮೂಲದ ಮಹಿಳೆಯೊಬ್ಬರ ಮೇಲೆ ಕೆಆರ್ ಮಾರುಕಟ್ಟೆ ಗೋಡೌನ್ ಸ್ಟ್ರೀಟ್‌ನಲ್ಲಿ ಇಬ್ಬರು ವ್ಯಕ್ತಿಗಳು ಅತ್ಯಾಚಾರ ಎಸಗಿದ್ದಾರೆ. ಬಳಿಕ ಮಹಿಳೆಯ ಬಳಿಯಿದ್ದ ಚಿನ್ನದ ಆಭರಣಗಳು ಮತ್ತು ಮೊಬೈಲ್ ಕಸಿದುಕೊಂಡಿದ್ದಾರೆ. ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತರನ್ನು ಶರವಣ ಮತ್ತು ಗಣೇಶ್ ಎಂದು ಗುರುತಿಸಲಾಗಿದೆ.

ಪತಿಯೊಂದಿಗೆ ಜಗಳವಾಡಿಕೊಂಡಿದ್ದ ಮಹಿಳೆ ತಮಿಳುನಾಡಿನಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದರು. ಕೆಆರ್ ಮಾರುಕಟ್ಟೆಯಲ್ಲಿ ಯಲಹಂಕಕ್ಕೆ ತೆರಳಲು ಬಸ್‌ಗಾಗಿ ಕಾಯುತ್ತಿದ್ದ ವೇಳೆ ಈ ಇಬ್ಬರು ಆರೋಪಿಗಳು ಬಂದಿದ್ದಾರೆ. ಬಸ್ ಎಲ್ಲಿ ಸಿಗುತ್ತದೆ ಎಂದು ವಿಚಾರಿಸುತ್ತಿದ್ದ ಮಹಿಳೆಯನ್ನು ಆರೋಪಿಗಳು ತೋರಿಸುತ್ತೇವೆ ಎಂದು ಹೇಳಿ ಸಮೀಪದಲ್ಲೇ ಇದ್ದ ಗೋಡೌನ್ ಸ್ಟ್ರೀಟ್‌ಗೆ ಕರೆದೊಯ್ದಿದ್ದಾರೆ. ಬಳಿಕ ಅತ್ಯಾಚಾರ ಎಸಗಿದ್ದಾರೆ ಎಂದು ವರದಿಯಾಗಿದೆ. ಈ ಸಂಬಂಧ ಸಂತ್ರಸ್ತೆ ದೂರು ನೀಡಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ

ಚಿತ್ರಕಥೆ, ಚಿತ್ರಗೀತೆ ರಚನೆಯಲ್ಲಿ ಎಐ ಬಳಸಿಕೊಳ್ಳುವ ಮುನ್ನ ಸಾಧಕ-ಬಾಧಕಗಳ ಪರಾಮರ್ಶಿಸಬೇಕು

ಕನ್ನಡ ಸಾಹಿತ್ಯ, ಚಿತ್ರಕಥೆ ವಿಚಾರ ಸಂಕಿರಣದಲ್ಲಿ ಚಲನಚಿತ್ರ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಸಲಹೆ

ಮೈಸೂರು,ಜ.21(ಬಿಎಲ್‌ಯು)- ಚಿತ್ರಕಥೆ, ಚಿತ್ರಗೀತೆ ಹಾಗೂ ಸಂಭಾಷಣೆ ಬರೆಯಲು ಕೃತಕ ಬುದ್ಧಿಮತ್ತೆ (ಎಐ) ಬಳಸಿಕೊಳ್ಳುವ ಮುನ್ನ ಅದರ ಸಾಧಕ-ಬಾಧಕದ ಬಗ್ಗೆ ಚರ್ಚೆ ಆಗಬೇಕು ಎಂದು ಚಲನಚಿತ್ರ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಸಲಹೆ ನೀಡಿದರು.

ಮೈಸೂರಿನ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಯುಜಿಸಿ ಅಧ್ಯಯನ ಕೇಂದ್ರದ ಸಭಾಂಗಣದಲ್ಲಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಮತ್ತು ಚಿತ್ರಕಥೆ ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದ ಅವರು, ಚಿತ್ರಕಥೆ, ಚಿತ್ರಗೀತೆ ಹಾಗೂ ಸಂಭಾಷಣೆ ಬರೆಯಲು ಈಗ ಎಐ ಬಳಸಿಕೊಳ್ಳಬಹುದು. ಆದರೆ ಇದರ ಸಾಧಕ-ಬಾಧಕದ ಬಗ್ಗೆ ಚರ್ಚೆ ಆಗಬೇಕು. ಆ ನಂತರ ಈ ಪ್ರಯೋಗ ಮಾಡಬೇಕು ಎಂದು ಹೇಳಿದರು.



ಮೈಸೂರಿನ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಯುಜಿಸಿ ಅಧ್ಯಯನ ಕೇಂದ್ರದ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಿದ್ದ ಕನ್ನಡ ಸಾಹಿತ್ಯ ಮತ್ತು ಚಿತ್ರಕಥೆ ಕುರಿತ ವಿಚಾರ ಸಂಕಿರಣವನ್ನು ಚಲನಚಿತ್ರ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಉದ್ಘಾಟಿಸಿದರು.

> "ಸಿನಿಮಾ ನಿರ್ದೇಶಕ ಸಾಹಿತ್ಯದ ಕೃತಿ ಆಯ್ಕೆ ಮಾಡಿಕೊಂಡ ಸಂದರ್ಭದಲ್ಲಿ ಲೇಖಕನೊಂದಿಗೆ ಸಂವಾದ ನಡೆಸಿ ಎಲ್ಲೆಲ್ಲಿ ಬದಲಾವಣೆ ಮಾಡುತ್ತೇನೆ ಎಂದು ಸ್ಪಷ್ಟವಾಗಿ ತಿಳಿಸಬೇಕು. ನಾಟಕ ಹಾಗೂ ಸಾಹಿತ್ಯಕ್ಕೆ ಸೆನ್ಸಾರ್ ಇರುವುದಿಲ್ಲ. ಆದರೆ ಸಿನಿಮಾಗೆ ಸೆನ್ಸಾರ್ ಮಂಡಳಿ ಇರುತ್ತದೆ. ಸೆನ್ಸಾರ್ ಮಂಡಳಿ ಎಷ್ಟೇ ಚಾಪೆ ಹಾಸಿದರೂ ಸಿನಿಮಾದವರು ರಂಗೋಲಿ ಕೆಳಗೆ ನುಸುಳುವುದನ್ನು ಕರಗತ ಮಾಡಿಕೊಂಡಿರುತ್ತಾರೆ.
> -ನಾಗತಿಹಳ್ಳಿ ಚಂದ್ರಶೇಖರ್

ಸಾಹಿತ್ಯ ಹಾಗೂ ಚಲನಚಿತ್ರದ ನಡುವೆ ಸೇತುವೆ ಕಟ್ಟುವುದು ಬಹಳ ಕಷ್ಟ, ಇದು ಸಮುದ್ರಕ್ಕೆ ಸೇತುವೆ ಕಟ್ಟಿದಷ್ಟೆ ಸವಾಲಾಗಿರುತ್ತದೆ. ಹಾಗೆಂದ ಮಾತ್ರಕ್ಕೆ ಸೇತುವೆ ನಿರ್ಮಿಸದೆ ಇರಬಾರದು ಎಂದರು.

ಸಿನಿಮಾ ಹಾಗೂ ಸಾಹಿತ್ಯಕ್ಕೆ ತನ್ನದೆ ಆದ ಜವಾಬ್ದಾರಿ ಇದೆ. ಇವೆರಡರ ಸಂಬಂಧ ಹೆಚ್ಚಾದರೆ ಸಮಾಜಕ್ಕೆ ಹೊಸ ಉತ್ಪನ್ನ ನೀಡಬಹುದು. ಈ ಮೂಲಕ ಸಿನಿಮಾ ಹಾಗೂ ಸಾಹಿತ್ಯದ ನಡುವೆ ಸೇತುವೆ ನಿರ್ಮಾಣ ಮಾಡಿ ಇವೆರಡರ ಘನತೆ ಹೆಚ್ಚಿಸಬೇಕು ಎಂದು ನಾಗತಿಹಳ್ಳಿ ಚಂದ್ರಶೇಖರ್ ಹೇಳಿದರು.

ಮಾಧ್ಯಮದಲ್ಲಿ ಯಾವುದೇ ತಾರತಮ್ಯ ಮಾಡಬಾರದು. ಎರಡನ್ನು ಸಮಾನ ದೃಷ್ಟಿಯಿಂದ ನೋಡಬೇಕು. ಆದರೆ ಸಿನಿಮಾ ಹಾಗೂ ಸಾಹಿತಿಗಳ ನಡುವೆ ಒಂದು ದೊಡ್ಡ ಗೋಡೆ ಇದೆ. ಇದು ಅಸ್ಪೃಶ್ಯತೆ ಮಾದರಿಯಂತಾಗಿದೆ. ಒಬ್ಬರಿಗೊಬ್ಬರು ಪರಸ್ಪರ ಹೊಂದಾಣಿಕೆಯಲ್ಲಿ ಸಾಗುವುದಿಲ್ಲ. ಇವರಿಬ್ಬರ ನಡುವಿನ ಸಂಬಂಧ ಉತ್ತಮವಾದರೆ ಸಮಾಜಕ್ಕೆ ಹೊಸ ಆಯಾಮ ನೀಡಬಹುದು ಎಂದು ಅಭಿಪ್ರಾಯಪಟ್ಟರು.

ಕಥೆ ಮತ್ತು ಕಾದಂಬರಿ ಬರೆಯುವ ಸಂದರ್ಭದಲ್ಲಿ ಸಿನಿಮಾಗಾಗಿ ಬರೆಯದೆ ಸಾಹಿತ್ಯದ ಬದ್ಧತೆ, ವ್ಯಾಕರಣ ಹಾಗೂ ಇಂದಿನ ಪ್ರಸ್ತುತತೆ ಗಮನಿಸಿ ಬರೆಯಬೇಕು. ಎಸ್.ಎಲ್.ಭೈರಪ್ಪ ಅವರ ಕಾದಂಬರಿಯನ್ನು ಸಿನಿಮಾದಲ್ಲಿ ಯಥಾವತ್ತಾಗಿ ಬಳಸಲು ಸಾಧ್ಯವಿಲ್ಲ. ಶ್ರೇಷ್ಠ ಕೃತಿ ಎಂದ ಮಾತ್ರಕ್ಕೆ ಹಾಗೆಯೇ ಭಟ್ಟಿ ಇಳಿಸಲು ಸಾಧ್ಯವಿಲ್ಲ. ಏಕೆಂದರೆ ಸಿನಿಮಾ ವ್ಯಾಕರಣ ಹಾಗೂ ಆಯಾಮಗಳು ಬೇರೆಯಾಗಿರುತ್ತದೆ ಎಂದು ನಾಗತಿಹಳ್ಳಿ ಚಂದ್ರಶೇಖರ್ ಸ್ಪಷ್ಟಪಡಿಸಿದರು.

ಬರಹಗಾರ ತನ್ನ ಅನುಭವ ಹಾಗೂ ಕಲ್ಪನೆಯ ವಿಚಾರಗಳನ್ನು ಏಕಾಂಗಿಯಾಗಿ ಚಿಂತಿಸಿ, ವಿಶ್ಲೇಷಿಸಿ ಬರೆಯುತ್ತಾರೆ. ಆದರೆ ಸಿನಿಮಾ ಮಾಡುವಾಗ ನಿರ್ದೇಶಕ ಹತ್ತಾರು ಜನರನ್ನು ಕಟ್ಟಿಕೊಳ್ಳುತ್ತಾನೆ. ತಾಂತ್ರಿಕತೆಗೆ ಆದ್ಯತೆ ನೀಡಿ ಎಲ್ಲಾ ಸವಾಲು ಹೆದರಿಸುತ್ತಾನೆ ಎಂದರು.

ಸಾಹಿತ್ಯದಲ್ಲಿ ಶೇಕಡ 95ರಷ್ಟು ವಿಚಾರವಿದ್ದರೆ, ಶೇಕಡ 5ರಷ್ಟು ವ್ಯವಹಾರವಿರುತ್ತದೆ. ಅದೇ ಸಿನಿಮಾದಲ್ಲಿ ಶೇಕಡ 95ರಷ್ಟು ವ್ಯವಹಾರವಿದ್ದರೆ ಶೇಕಡ 5 ರಷ್ಟು ವಿಚಾರವಿರುತ್ತದೆ. ಈ ಹಿನ್ನೆಲೆಯಲ್ಲಿ ಸಾಹಿತಿ ಹಾಗೂ ಚಿತ್ರ ಸಾಹಿತಿ ನಡುವೆ ಬಹಳಷ್ಟು ಅಂತರವಿದೆ ಎಂದು ಅಭಿಪ್ರಾಯಪಟ್ಟರು.

ಅಪರ ಜಿಲ್ಲಾಧಿಕಾರಿ ಡಾ.ಶಿವರಾಜ್ ಮಾತನಾಡಿ, ಈ ದಿನದ ಚಿತ್ರರಂಗದ ಪ್ರಯೋಗಗಳನ್ನು ನಾಗತಿ ಹಳ್ಳಿ ಚಂದ್ರಶೇಖರ್ ಹಲವು ವರ್ಷಗಳ ಹಿಂದೆಯೇ ಮಾಡಿ ಯಶಸ್ವಿಯಾಗಿದ್ದಾರೆ ಎಂದರು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕಿ ಪ್ರೊ.ಎನ್.ಕೆ.ಲೋಲಾಕ್ಷಿ, ಮಾನವೀಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕಿ ಪ್ರೊ.ಎಸ್.ಎನ್.ಮಾಲಿನಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮಂಡ್ಯದಲ್ಲಿ ಮನೆ, ಸರಗಳ್ಳರ ಬಂಧನ

ಆರೋಪಿಗಳಿಂದ 42 ಲಕ್ಷ ರೂ.ಗಳ ನಗ ನಾಣ್ಯ ವಶ



ಸುದ್ದಿಗೋಷ್ಠಿಯಲ್ಲಿ ವಿವರ ನೀಡುತ್ತಿರುವ ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ.

ಮಂಡ್ಯ, ಜ.21– ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಸರಗಳ್ಳತನ ಹಾಗೂ ಮನೆಗಳ್ಳತನ ಮಾಡಿದ್ದ ಖದೀಮರನ್ನು ಹಲಗೂರು ಹಾಗೂ ಕೆ.ಎಂ. ದೊಡ್ಡಿ ಪೊಲೀಸರು ಬಂಧಿಸಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ತಿಳಿಸಿದರು.

ನಗರದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 2 ಪ್ರಕರಣಗಳಲ್ಲಿ ಬಂಧಿತ ಆರೋಪಿಗಳಿಂದ ಒಟ್ಟು 42 ಲಕ್ಷ ರೂ. ಮೌಲ್ಯದ ಮಾಲುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವಿವರಿಸಿದರು.

ಆಗಸ್ಟ್ 22, 2024ರಲ್ಲಿ ಮಳವಳ್ಳಿ ತಾಲೂಕು ಅಗಸನಪುರ ಗ್ರಾಮದ ಚಿಕ್ಕಸುವಣ್ಣ ಅವರ ಮನೆಯ ಬೀಗವನ್ನು ಹೊಡೆದು ಒಳಕ್ಕೆ ನುಗ್ಗಿ, ಮನೆಯ ಬೀರುವಿನಲ್ಲಿದ್ದ ಒಟ್ಟು 45 ಗ್ರಾಂ ಚಿನ್ನದ ಆಭರಣಗಳು (ಒಟ್ಟು ಬೆಲೆ 2,02,500) ಹಾಗೂ 5 ಕೆಜಿ. 403 ಗ್ರಾಂ ಬೆಳ್ಳಿ ಆಭರಣಗಳು ಹಾಗೂ 35,000 ನಗದು ಕಳವು ಮಾಡಿದ್ದ ಆರೋಪಿ ಮೈಸೂರಿನ ವಿದ್ಯಾರಣ್ಯಪುರಂನ ಅನಂತ ಆಲಿಯಾಸ್ ಗುರುವ ಆಲಿಯಾಸ್ ಮೆಡ್ಡ ಎಂಬಾತನನ್ನು ಹಲಗೂರು ಪೊಲೀಸರು ಬಂಧಿಸಿದ್ದಾರೆ ಎಂದು ವಿವರಿಸಿದರು.

ಈ ಆರೋಪಿಯು ತನ್ನ ಸಹಚರರೊಂದಿಗೆ ಸೇರಿ 5 ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದ, ಹಲಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ–3, ಬೆಳಕವಾಡಿ ಠಾಣಾ ವ್ಯಾಪ್ತಿಯಲ್ಲಿ–1, ಕಿರುಗಾವಲು ಠಾಣಾ ವ್ಯಾಪ್ತಿಯಲ್ಲಿ–1 ಪ್ರಕರಣವನ್ನು ಭೇದಿಸಲಾಗಿದೆ. ಈ ಪ್ರಕರಣದ ಪತ್ತೆಗಾಗಿ ಮಂಡ್ಯ ಜಿಲ್ಲಾ ಅಪರ ಪೊಲೀಸ್ ಅಧೀಕ್ಷಕರಾದ ತಿಮ್ಮಯ್ಯ ಎಸ್.ಇ, ಗಂಗಾಧರಸ್ವಾಮಿ, ಮಳವಳ್ಳಿ ಉಪವಿಭಾಗದ ಪೊಲೀಸ್ ಉಪಾಧೀಕ್ಷ ಕೆ.ವಿ.ಕೃಷ್ಣಪ್ಪ ಮಾರ್ಗದರ್ಶನದಲ್ಲಿ ಹಾಗೂ ಹಲಗೂರು ವೃತ್ತ ನಿರೀಕ್ಷಕ ಶ್ರೀಧರ್ ನೇತೃತ್ವದಲ್ಲಿ ಕಿರುಗಾವಲು ಪೊಲೀಸ್ ಠಾಣಾ ಪಿಎಸ್ಐ ರವಿಕುಮಾರ್, ಹಲಗೂರು ಪೊಲೀಸ್ ಠಾಣಾ ಪಿಎಸ್ಐ ಮಹೇಂದ್ರ ಹಾಗೂ ಸಿಬ್ಬಂದಿ ಸಿ.ಹೆಚ್.ಸಿ ಸಿಬ್ಬಂದಿಯವರಾದ ರಿಯಾಜ್ ಪಾಷ, ಪ್ರಭುಸ್ವಾಮಿ, ನಾಗೇಂದ್ರ ಕೃಷ್ಣಮೂರ್ತಿ, ರವಿಕಿರಣ್, ಲೋಕೇಶ್, ಸಿಪಿಸಿಯವರಾದ ಸಿದ್ದರಾಜು, ಶ್ರೀನಿವಾಸ್, ಮಧುಕಿರಣ್, ಶಿವಕುಮಾರ್ ಮಹದೇವಸ್ವಾಮಿಯವರನ್ನೊಳಗೊಂಡ ತಂಡವನ್ನು ರಚನೆ ಮಾಡಲಾಗಿತ್ತು ಎಂದರು.

ಆರೋಪಿಯಿಂದ ಒಟ್ಟು 301 ಗ್ರಾಂ. ತೂಕದ ಚಿನ್ನದ ಒಡವೆಗಳು (ಒಟ್ಟು ಮೌಲ್ಯ 22,37,634 (ಇಪ್ಪತ್ತೆರಡು ಲಕ್ಷದ ಮೂವತ್ತೇಳು ಸಾವಿರದ ಆರುನೂರ ಮುವತ್ತ ನಾಲ್ಕು ರೂಪಾಯಿಗಳು) ಹಾಗೂ ಕೃತ್ಯಕ್ಕೆ ಉಪಯೋಗಿಸಿದ್ದ ಒಂದು ಬೈಕ್‌ನ್ನು ವಶಕ್ಕೆ ಪಡೆದು ಕೊಳ್ಳಲಾಗಿದೆ ಎಂದು ತಿಳಿಸಿದರು.

ಕಳೆದ ಡಿ.31ರಂದು ಮದ್ದೂರು ತಾಲೂಕಿನ ಕುರಿಕೆಂಪನದೊಡ್ಡಿ ಗ್ರಾಮದ ಸವಿತಾ ಕೋಂ ಮಾದೇಗೌಡ ಅವರು ತಮ್ಮ ಟೀ ಅಂಗಡಿಯಲ್ಲಿದ್ದಾಗ ಇಬ್ಬರು ಅಪರಿಚಿತರು ಬೈಕ್‌ನಲ್ಲಿ ಬಂದು ಟೀ ಕೇಳುವ ನೆಪದಲ್ಲಿ ಸವಿತಾ ಅವರ ಕತ್ತಿನಲ್ಲಿದ್ದ 26 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರವನ್ನು ಕಿತ್ತುಕೊಂಡು ಹೋಗಿದ್ದರು. ಈ ಬಗ್ಗೆ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಈ ಪ್ರಕರಣದ ಆರೋಪಿಗಳ ಪತ್ತೆಯ ಬಗ್ಗೆ ಮಂಡ್ಯ ಜಿಲ್ಲಾ ಅಪರ ಪೊಲೀಸ್ ಅಧೀಕ್ಷಕರಾದ ಸಿ.ಇ.ತಿಮ್ಮಯ್ಯ, ಎಸ್.ಇ. ಗಂಗಾಧರಸ್ವಾಮಿ, ಮಳವಳ್ಳಿ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರಾದ ವಿ.ಕೃಷ್ಣಪ್ಪ ಅವರ ಮಾರ್ಗದರ್ಶನದಲ್ಲಿ ಕೆ.ಎಂ.ದೊಡ್ಡಿ ಠಾಣೆಯ ಆರಕ್ಷಕ ನಿರೀಕ್ಷಕ ಎಸ್.ಆನಂದ್, ಪಿಎಸ್ಐ ದೇವರಾಜು ಮತ್ತು ಹೆಡ್ ಕಾನ್ಸ್‌ಟೇಬಲ್‌ಗಳಾದ ನಟರಾಜು, ಮಹೇಶ್, ರಾಜಶೇಖರ್, ಪೊಲೀಸ್ ಕಾನ್ಸ್‌ಟೇಬಲ್‌ಗಳಾದ ವಿಠಲ್ ಕುಂಬಾರ, ಅರುಣ್, ಸುಬ್ಬ ಮಣಿ, ಚೇತನ, ರವಿಕಿರಣ್, ಲೋಕೇಶ್ ಮತ್ತು ವಾಸುದೇ ಅವರನ್ನೊಳಗೊಂಡ ತಂಡ ರಚನೆ ಮಾಡಲಾಗಿತ್ತು ಎಂದು ಹೇಳಿದರು.

ಈ ತಂಡವು ಪತ್ತೆ ಕಾರ್ಯ ಕೈಗೊಂಡು ಆರೋಪಿತರಾದ ಬೆಂಗಳೂರಿನಲ್ಲಿ ಬಾರ್‌ನಲ್ಲಿ ಸಪ್ಲೈಯರ್ ಕೆಲಸ ಮಾಡುತ್ತಿದ್ದ ಮಂಡ್ಯ ತಾಲೂಕಿನ ಮುತ್ತೇಗೆರೆ ಗ್ರಾಮದವರಾದ ಸುದೀಪ್ ಹೆಚ್.ಪಿ.ಬಿನ್ ಪುಟ್ಟಸ್ವಾಮಿಗೌಡ (21ವರ್ಷ ಬೆಂಗಳೂರಿನಲ್ಲಿ ಆಟೋ ಡ್ರೈವರ್), ಹೆಚ್.ಆರ್.ಚೇತನ ಬಿನ್ ರಾಮಲಿಂಗೇಗೌಡ, ವ್ಯವಸಾಯ ಮಾಡಿಕೊಂಡಿದ್ದ ದರ್ಶನ್ ಬಿನ್ ಸಣ್ಣಲಿಂಗೇಗೌಡ, ಕಿರಣ್ ಕುಮಾರ್ ಬಿನ್ ಲೇಟ್ ಚಂದ್ರಶೇಖರ್ ಹಾಗೂ ಎಂ.ಆರ್.ಚೇತನ್ ಬಿನ್ ರಮೇಶ್ ಎಂಬುವವರನ್ನು ಬಂಧಿಸಲಾಗಿದೆ. ಈ ಆರೋಪಿಗಳು ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯ ಪ್ರಕರಣವು ಸೇರಿದಂತೆ ಮಂಡ್ಯ ಜಿಲ್ಲೆಯ ನಾಗಮಂಗಲ ಗ್ರಾಮಾಂತರ–2, ಮಂಡ್ಯ ಗ್ರಾಮಾಂತರ–2, ಶ್ರೀರಂಗಪಟ್ಟಣ ಗ್ರಾಮಾಂತರ–1, ಮದ್ದೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 1 ಪ್ರಕರಣದಲ್ಲಿ ಭಾಗಿಯಾಗಿದ್ದರು ಎಂದು ತಿಳಿಸಿದರು.

ಈ ಆರೋಪಿಗಳಿಂದ 278 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರಗಳು, 20 ಗ್ರಾಂ ತೂಕದ ಬೆಳ್ಳಿಯ ಕಡಗಗಳನ್ನು ವಶಕ್ಕೆ ಪಡೆಯಲಾಗಿದೆ ಹಾಗೂ ಕೃತ್ಯಕ್ಕೆ ಉಪಯೋಗಿಸಿದ 2 ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿಯವರ ಯಶಸ್ವಿ ಕಾರ್ಯಾಚರಣೆ ಯಲ್ಲಿ ಮಂಡ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿಯವರು ಶ್ಲಾಘಿಸಿ, ಪ್ರಶಂಸಿಸಿದ್ದಾರೆ.

ಹಳ್ಳಕ್ಕೆ ಗೂಡ್ಸ್ ಟೆಂಪೋ ಉರುಳಿ ಮಹಿಳೆ ಸಾವು, 15 ಮಂದಿಗೆ ಗಾಯ

ನಾಮಕರಣ ಮುಗಿಸಿ ಹಿಂತಿರುಗುತ್ತಿದ್ದಾಗ ದುರಂತ



ಕೆ.ಆರ್.ಪೇಟೆ, ಜ.21– ನಾಮಕರಣಕ್ಕೆಂದು ಹುಬ್ಬನಹಳ್ಳಿಯಮ್ಮ ಶಕ್ತಿ ದೇವತೆಯ ಶ್ರೀ ಕ್ಷೇತ್ರಕ್ಕೆ ಹೋಗಿ ಹೋಗಿ ಹಿಂತಿರುಗುವ ವೇಳೆ ಗೂಡ್ಸ್ ಟೆಂಪೋ ಹಳ್ಳಕ್ಕೆ ಉರುಳಿ ಬಿದ್ದ ಪರಿಣಾಮ ಓರ್ವ ಮಹಿಳೆ ಸ್ಥಳದಲ್ಲಿಯೇ ಮೃತಪಟ್ಟಿದ್ದು, 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಘಟನೆ ತಾಲೂಕಿನ ಹುಬ್ಬನಹಳ್ಳಿ ಗ್ರಾಮದ ಕೆರೆ ಏರಿಮೇಲೆ ಸಂಭವಿಸಿದೆ.

ಹುರುಳಿ ಗಂಗನಹಳ್ಳಿ ಗ್ರಾಮದ ಅಂಬುಜ (52) ಮೃತ ದುರ್ದೈವಿ.

ಗೂಡ್ಸ್ ಟೆಂಪೋದಲ್ಲಿದ್ದ ಹುರುಳಿ ಗಂಗನಹಳ್ಳಿ ಗ್ರಾಮದ ಪದ್ಮಮ್ಮ, ರಾಜೇಶ್, ಪ್ರತಾಪ್ ಸೇರಿದಂತೆ 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಎಲ್ಲರಿಗೂ ಸಂತೇಬಾಚಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಚನ್ನರಾಯಪಟ್ಟಣ ಹಾಗೂ ಹಾಸನ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಹುರುಳಿ ಗ್ರಾಮದ ಸಂಬಂಧಿಗಳು ಮಗುವೊಂದರ ನಾಮಕರಣಕ್ಕೆಂದು ಹುಬ್ಬನಹಳ್ಳಿಯಮ್ಮ ಶಕ್ತಿ ದೇವತೆಯ ಶ್ರೀ ಕ್ಷೇತ್ರಕ್ಕೆ ತೆರಳಿ ಪೂಜೆ ಮುಗಿಸಿಕೊಂಡು ಹಿಂತಿರುಗುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿ ಗೂಡ್ಸ್ ಟೆಂಪೋ ಹಳ್ಳಕ್ಕೆ ಉರುಳಿ ಬಿದ್ದ ಪರಿಣಾಮ ದುರಂತ ಸಂಭವಿಸಿದೆ.

ಘಟನಾ ಸ್ಥಳಕ್ಕೆ ಸರ್ಕಲ್ ಇನ್ಸ್‌ಪೆಕ್ಟರ್ ಸುಮಾರಾಣಿ, ಸಬ್ ಇನ್ಸ್‌ಪೆಕ್ಟರ್ ನವೀನ್ ಮತ್ತಿತರರು ಭೇಟಿ ನೀಡಿ ಪರಿಶೀಲನೆ ನಡೆಸಿ ಘಟನೆ ಕುರಿತು ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

ತಡೆಗೋಡೆ ನಿರ್ಮಾಣಕ್ಕೆ ಆಗ್ರಹ: ಹುಬ್ಬನಹಳ್ಳಿ ಗ್ರಾಮದ ಕೆರೆಗೆ ತಡೆಗೋಡೆ ಇಲ್ಲದೇ ಇರುವುದೇ ಈ ಅಪಘಾತಕ್ಕೆ ಕಾರಣವಾಗಿದೆ. ಕೂಡಲೇ ಸಂಬಂದಪಟ್ಟ ಇಲಾಖೆಯ ಅಧಿಕಾರಿಗಳು ಹುಬ್ಬನಹಳ್ಳಿ ಕೆರೆ ಏರಿಯ ಮೇಲೆ ತಡೆಗೋಡೆ ನಿರ್ಮಿಸುವ ಮೂಲಕ ಅಪಘಾತವನ್ನು ತಪ್ಪಿಸಬೇಕು ಎಂದು ಹುಬ್ಬನಹಳ್ಳಿ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಜ.31,ಕೋರಮಂಡಲ್ ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ನುರಿಯುವಿಕೆಗೆ ಅಂತಿಮ ದಿನಾಂಕ

ಕಿಕ್ಕೇರಿ: ಸಮೀಪದ ಕೋರಮಂಡಲ್ ಸಕ್ಕರೆ ಕಾರ್ಖಾನೆ ಪ್ರಸಕ್ತ 2024–25ರ ಹಂಗಾಮಿನ ಕಬ್ಬು ನುರಿಯುವಿಕೆಗೆ ಕಬ್ಬು ಸರಬರಾಜು ಮಾಡಲು ರೈತರಿಗೆ ಜ.31 ಅಂತಿಮ ದಿನವಾಗಿದೆ ಎಂದು ಕಾರ್ಖಾನೆ ಹಿರಿಯ ಉಪಾಧ್ಯಕ್ಷ ರವಿರೆಡ್ಡಿ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನಲ್ಲಿ ಕಬ್ಬು ಅರೆಯಲು ಕಬ್ಬು ಪೂರೈಕೆ ಪ್ರಮಾಣ ಕಾರ್ಖಾನೆ ವ್ಯಾಪ್ತಿಯಲ್ಲಿ ಗಣನೀಯವಾಗಿ ದಿನದಿಂದ ದಿನಕ್ಕೆ ಇಳಿಮುಖವಾಗುತ್ತಿದೆ. ಈ ಹಿನ್ನೆಲೆಯಲ್ಲಿ ರೈತರು ತಮ್ಮ ತಾಕುಗಳಲ್ಲಿ ಉಳಿದಿರುವ ಎಲ್ಲಾ ಕಬ್ಬನ್ನು ಜ.31ರ ಸಂಜೆ 6ರೊಳಗೆ ಕಬ್ಬನ್ನು ಸರಬರಾಜು ಮಾಡಲು ಪ್ರಕಟಣೆಯಲ್ಲಿ ಕೋರಿದ್ದಾರೆ.

ತದನಂತರ ಕಬ್ಬು ಉಳಿದರೆ ಕಾರ್ಖಾನೆ ಜವಾಬ್ದಾರರಾಗುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಯಾವುದೇ ಸಮಸ್ಯೆಗಳಿಲ್ಲದೆ ಕಾರ್ಖಾನೆಯಲ್ಲಿ ಕಬ್ಬು ಅರೆಯಲು ಸಹಕರಿಸಿದ ರೈತರಿಗೆ ಕಬ್ಬು ಕಟಾವುದಾರರು, ಸಾಗಾಣಿಕೆದಾರರು, ಕಾರ್ಖಾನೆ ಸಿಬ್ಬಂದಿಗಳು, ಆಡಳಿತ ಮಂಡಳಿ, ಕಾರ್ಮಿಕ ವರ್ಗದವರು ಕೃತಜ್ಞತೆ ಸಲ್ಲಿಸಿದ್ದಾರೆ.

ಜ.26ರಂದು ಕಸಾಪ ಸಮ್ಮೇಳನ ಯಶಸ್ಸಿಗೆ ಕಾರಣಕರ್ತರಾದವರಿಗೆ ಅಭಿನಂದನಾ ಸಮಾರಂಭ



ಮಂಡ್ಯ,ಜ.21– ಜಿಲ್ಲೆಯಲ್ಲಿ ನಡೆದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಭೂತ ಪೂರ್ವ ಯಶಸ್ಸಿಗೆ ಕಾರಣಕರ್ತರಾದವರಿಗೆ ಅಭಿನಂದನೆ ಸಲ್ಲಿಸಲು ಮಂಡ್ಯ ಜಿಲ್ಲಾ ನಾಗರೀಕ ಅಭಿನಂದನಾ ಸಮಿತಿ ಮತ್ತು ನೇಗಿಲ ಯೋಗಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ಜನವರಿ 26ರಂದು ಸಂಜೆ 6 ಗಂಟೆಗೆ ನಗರದ ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಅಭಿನಂದನಾ ಸಮಾರಂಭ ಮತ್ತು ರಸಸಂಜೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಶಾಸಕ ಹಾಗೂ ಸಮಿತಿಯ ಪೋಷಕ ಜಿ.ಬಿ.ಶಿವಕುಮಾರ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಕಾರಣರಾದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ಕಸಾಪ ರಾಜ್ಯಾಧ್ಯಕ್ಷ ಮಹೇಶ್ ಜೋಶಿ, ಸಂಚಾಲಕರಾಗಿದ್ದ ಡಾ.ಮೀರಾಶಿವಲಿಂಗಯ್ಯ ಹಾಗೂ ಶಾಸಕರು, ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿ ನಮ್ಮ ಜವಾಬ್ದಾರಿ ಮೆರೆಯುವ ಕಾರ್ಯಕ್ರಮ ಇದಾಗಿದೆ ಎಂದರು.

ಮಂಡ್ಯ ಜಿಲ್ಲಾ ನಾಗರೀಕ ಅಭಿನಂದನಾ ಸಮಿತಿಯ ಅಧ್ಯಕ್ಷ ಹಾಗೂ ಮಾಜಿ ಶಾಸಕ ಹೆಚ್.ಬಿ.ರಾಮು ಮಾತನಾಡಿ, ಅಭಿನಂದನಾ ಸಮಾರಂಭ ಮತ್ತು ರಸಸಂಜೆ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಆದಿಚುಂಚನಗಿರಿ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥ ಸ್ವಾಮೀಜಿ ವಹಿಸಲಿದ್ದು, 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ನಾಡೋಜ ಡಾ.ಗೊ.ರು.ಚನ್ನಬಸಪ್ಪ ಅಧ್ಯಕ್ಷತೆ ವಹಿಸಿ, ಸಮ್ಮೇಳನ ಯಶಸ್ಸಿಗೆ ಕಾರಣರಾದ ಜಿಲ್ಲೆಯ ಉಸ್ತುವಾರಿ ಮಂತ್ರಿ ಎನ್.ಚಲುವರಾಯಸ್ವಾಮಿ, ಶಾಸಕರು, ಜಿಲ್ಲಾಡಳಿತ ಮತ್ತು ಕಸಾಪ ಪ್ರಮುಖರನ್ನು ಸನ್ಮಾನಿಸುವರು ಎಂದು ಹೇಳಿದರು.

ಅಭಿನಂದನಾ ಕಾರ್ಯಕ್ರಮದ ನಂತರ ಖ್ಯಾತ ಗಾಯಕರಾದ ಹೇಮಂತ್, ಶಮಿತಾ ಮಲ್ನಾಡ್ ಮತ್ತು ಹರ್ಷ ತಂಡದಿಂದ ರಸಸಂಜೆ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಪಕ್ಷಾತೀತ ಮತ್ತು ಜಾತ್ಯಾತೀತವಾಗಿ ನಡೆಯುವ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಸಿದ್ದಗಂಗಾ ಶ್ರೀಗಳ ಪುಣ್ಯ ಸ್ಮರಣೆ ದಿನವನ್ನು ಸರ್ಕಾರ ದಾಸೋಹ ದಿನವನ್ನಾಗಿ ಆಚರಿಸಲಿ



ಪಾಂಡವಪುರ, ಜ.21– ತ್ರಿವಿಧ ದಾಸೋಹಿ, ನಡೆದಾಡುವ ದೇವರು ಡಾ.ಶ್ರೀಶಿವಕುಮಾರ ಸ್ವಾಮೀಜಿ ಅವರ 6ನೇ ವರ್ಷದ ಪುಣ್ಯಸ್ಮರಣೆ ದಿನವನ್ನು ರಾಜ್ಯ ಸರಕಾರ ದಾಸೋಹ ದಿನ ಎಂಬುದಾಗಿ ಅಧಿಕೃತವಾಗಿ ಘೋಷಣೆ ಮಾಡಬೇಕು ಎಂದು ಅಖಿಲ ಭಾರತ ವೀರಶೈವಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ತಾಳಶಾಸನ ಎಸ್.ಆನಂದ್ ಒತ್ತಾಯಿಸಿದರು.

ಪಟ್ಟಣದ ಐದು ದೀಪದ ವೃತ್ತದಲ್ಲಿ ತಾಲೂಕು ಅಖಿಲ ಭಾರತ ವೀರಶೈವಲಿಂಗಾಯತ ಘಟಕದ ತಾಲೂಕು ಅಧ್ಯಕ್ಷ ಶಿವಕುಮಾರ್ ನೇತೃತ್ವದಲ್ಲಿ ತ್ರಿವಿಧ ದಾಸೋಹಿ ಡಾ.ಶ್ರೀ ಶಿವಕುಮಾರಸ್ವಾಮೀಜಿ ಅವರ 6ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಶಿವಕುಮಾರಸ್ವಾಮೀಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಬಳಿಕ ಅನ್ನದಾಸೋಹ ಮಾಡಿ ಬಳಿಕ ಅವರು ಮಾತನಾಡಿದರು. ಮುಖಂಡ ಎಸ್.ಎ.ಮಲ್ಲೇಶ್, ಶಿವಕುಮಾರ್, ಜಯಣ್ಣ, ಮೀನಾಕ್ಷಿ, ಹರೀಶ್, ಕಲಿ ಗಣೇಶ್, ಎಸ್.ಎ.ಮಲ್ಲೇಶ್, ಪುರಸಭೆ ಅಧ್ಯಕ್ಷೆ ಜ್ಯೋತಿಲಕ್ಷ್ಮಿ, ಉಪಾಧ್ಯಕ್ಷ ಅಶೋಕ್, ತಹಸೀಲ್ದಾರ್ ಸಂತೋಷ್‌ಕುಮಾರ್, ಟಿಎಪಿಸಿಎಂಎಸ್ ನಿರ್ದೇಶಕ ರಾಮಕೃಷ್ಣೇಗೌಡ, ಜಿಲ್ಲಾಖಜಾಂಚಿ ಈರಣ್ಣ ಹಾಜರಿದ್ದರು.

ಕೊಪ್ಪದಲ್ಲಿ ನೂತನ ವ್ಯವಸಾಯ ಸೇವಾ ಸಹಕಾರ ಸಂಘ ಕಟ್ಟಡ ಉದ್ಘಾಟನೆ



ವ್ಯವಸಾಯ ಸೇವಾ ಸಹಕಾರ ಸಂಘದ ನೂತನ ಕಟ್ಟಡದ ಉದ್ಘಾಟಿಸುತ್ತಿರುವ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ.

ಮಂಡ್ಯ: ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಅವರು ಕೊಪ್ಪದಲ್ಲಿ ನಿರ್ಮಿಸಲಾಗಿದ್ದ ನೂತನ ವ್ಯವಸಾಯ ಸೇವಾ ಸಹಕಾರ ಸಂಘ ಕಟ್ಟಡದ ಉದ್ಘಾಟನೆಯನ್ನು ನೆರವೇರಿಸಿದರು,

ನಂತರ ಮಾತನಾಡಿದ ಅವರು ಕಳೆದ ಐದು ವರ್ಷದಿಂದ ದುರಸ್ಥಿಯಲ್ಲಿ ಇದ್ದ ಕೊಪ್ಪ ವ್ಯವಸಾಯ ಸೇವಾ ಸಹಕಾರಿ ಸಂಘದ ಕಟ್ಟಡವನ್ನು ಕೆಡವಿ, ರೈತರಿಗೆ ಸಾರ್ವಜನಿಕರು ಅನುಕೂಲವಾಗುವಂತೆ ನೂತನ ಕಟ್ಟಡ ನಿರ್ಮಿಸಿರುವುದು ಸಂತಸ ಎಂದು ಹೇಳಿದರು.

ವ್ಯವಸಾಯ ಸಂಘದ ಸದಸ್ಯರು ವಿವಿಧ ಬೇಡಿಕೆಗಳನ್ನು ಕೃಷಿ ಸಚಿವರ ಮುಂದಿಟ್ಟರು, ಮುಂದಿನ ದಿನಗಳಲ್ಲಿ ಎಲ್ಲ ಸಮಸ್ಯೆಗಳನ್ನೂ ಬಗೆಹರಿಸುವ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಜೋಗಿ ಗೌಡ, ಡಿಸಿಸಿ ಬ್ಯಾಂಕ್ ನಿರ್ದೇಶಕ ಸಂತೋಷ್, ಕೆ.ಆರ್.ಪೇಟೆ ಮಾಜಿ ಶಾಸಕ ಚಂದ್ರಶೇಖರ್ ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಕೆ.ಆರ್.ಪೇಟೆ ಪಿಎಲ್‌ಡಿ ಬ್ಯಾಂಕಿನ ವಾಣಿಜ್ಯ ಸಂಕೀರ್ಣ ಉದ್ಘಾಟನೆ



ವಾಣಿಜ್ಯ ಸಂಕೀರ್ಣ ಮಳಿಗೆಗಳನ್ನು ಉದ್ಘಾಟಿಸುತ್ತಿರುವ ಶಾಸಕ ಹೆಚ್.ಟಿ.ಮಂಜು.

ಕೆ.ಆರ್.ಪೇಟೆ, ಜ.21–ಪಟ್ಟಣದ ಡಿಸಿಸಿ ಬ್ಯಾಂಕ್ ತಾಲೂಕು ಶಾಖೆಯ ಪಕ್ಕದಲ್ಲಿ ಪಿಎಲ್‌ಡಿ ಬ್ಯಾಂಕಿನ ವತಿಯಿಂದ ಸುಮಾರು 30 ಲಕ್ಷ ರೂ. ಗಳ ವೆಚ್ಚದಲ್ಲಿ ನಿರ್ಮಿಸಲಾಗಿರುವ ನೂತನ ವಾಣಿಜ್ಯ ಸಂಕೀರ್ಣ ಮಳಿಗೆಗಳನ್ನು ಶಾಸಕ ಹೆಚ್.ಟಿ.ಮಂಜು ಲೋಕಾರ್ಪಣೆ ಮಾಡಿದರು.

ಬಳಿಕ ಮಾತನಾಡಿದ ಅವರು ಪಿಎಲ್‌ಡಿ ಬ್ಯಾಂಕ್ ಶೇ.100ರಷ್ಟು ರೈತರಿಗೆ ಮಾತ್ರ ಮೀಸಲಾದ ಬ್ಯಾಂಕ್ ಆಗಿದೆ. ರೈತರ ಹಿತ ಕಾಯುವ ಕೆಲಸ ಮಾಡುತ್ತಾ ಬರುತ್ತಿದೆ. ಕೋಟ್ಯಾಂತರ ರೂಪಾಯಿಗಳ ವ್ಯವಹಾರ ಹೊಂದಿರುವ ಬ್ಯಾಂಕ್ ಸುಮಾರು 5 ಸಾವಿರಕ್ಕೂ ಅಧಿಕ ಷೇರುದಾರರನ್ನು ಒಳಗೊಂಡಿದೆ. ಸರ್ಕಾರವು ಸಾಲ ಮನ್ನಾ ಯೋಜನೆಯನ್ನು ಜಾರಿಗೆ ತಂದ ಹಿನ್ನೆಲೆಯಲ್ಲಿ ಪಿಎಲ್‌ಡಿ ಬ್ಯಾಂಕಿನ ಸಾಲವೂ ಮನ್ನಾ ಆಗುತ್ತದೆ ಎಂಬ ಕಾರಣದಿಂದ ಹಾಗೂ ಕೋವಿಡ್ ಹಿನ್ನೆಲೆಯಲ್ಲಿ ಸಕಾಲಕ್ಕೆ ವಸೂಲಾತಿ ಸರಿಯಾಗಿ ಆಗದೇ ನಷ್ಟದಲ್ಲಿರುವ ಬ್ಯಾಂಕ್‌ನ್ನು ಸುಸ್ಥಿತಿಗೆ ತರಲು ಆಡಳಿತ ಮಂಡಳಿಯ ವರ್ಗದವರು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತಿದ್ದಾರೆ ಎಂದರು.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಿ.ಆರ್.ಶಿವಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ರಾಜ್ಯ ಸಹಕಾರ ಮಹಾಮಂಡಲದ ನಿರ್ದೇಶಕ ಎಸ್.ಎಲ್.ಮೋಹನ್, ತಿಮ್ಮರಾಯಿಗೌಡ, ಉಪಾಧ್ಯಕ್ಷ ನಾಗರಾಜು, ಮಾಜಿ ಅಧ್ಯಕ್ಷರಾದ ಕ್ಯಾಬಲಗೆರೆ ಪುರ ಪುಟ್ಟಸ್ವಾಮಿಗೌಡ, ರಾಧಾ ಈಶ್ವರಪ್ರಸಾದ್, ಅಗಸರಹಳ್ಳಿ ಗೋವಿಂದರಾಜು, ಚಂದ್ರೇಗೌಡ, ಕಮಲಮ್ಮ ರಾಮಕೃಷ್ಣ, ಜಯಶೀಲರಾಮೇಗೌಡ, ಎಜಾಸ್‌ಪಾಷಾ, ರಾಜಾನಾಯಕ್, ಲಕ್ಷ್ಮೀಪುರ ಚಂದ್ರೇಗೌಡ, ಬಣ್ಣೇನಹಳ್ಳಿ ಧನಂಜಯ, ಅಂಜನಿಗೌಡ, ಪುರಸಭಾ ಅಧ್ಯಕ್ಷೆ ಪಂಕಜಾಪ್ರಕಾಶ್ ಹಾಗೂ ಉಪಾಧ್ಯಕ್ಷೆ ಸೌಭಾಗ್ಯ ಉಮೇಶ್, ಸ್ಥಾಯಿ ಸಮಿತಿ ಅಧ್ಯಕ್ಷ ಕೆ.ಆರ್.ರವೀಂದ್ರಬಾಬು, ಡಿ.ಪ್ರೇಮ್‌ಕುಮಾರ್, ಪ್ರಮೋದ್, ಸುಗುಣರಮೇಶ್, ಇಂದ್ರಾಣಿ ವಿಶ್ವನಾಥ್, ನಾಗೇಶ್, ಅರಕುಪ್ಪೆ ಪ್ರತಾಪ್ ಇದ್ದರು.

ತ್ಯಾಗರಾಜರ ಆರಾಧನ ಮಹೋತ್ಸವ



ಪಾಂಡವಪುರ ಪಟ್ಟಣದಲ್ಲಿ ತ್ಯಾಗರಾಜರ ಆರಾಧನ ಮಹೋತ್ಸವದ ಅಂಗವಾಗಿ ತ್ಯಾಗರಾಜರ ಆರಾಧನ ಸೇವಾ ಸಮಿತಿಯ ವತಿಯಿಂದ ತ್ಯಾಗರಾಜರ ಮೆರವಣಿಗೆ ವಿಜೃಂಭಣೆಯಿಂದ ನಡೆಯಿತು. ಆರಾಧನ ಸಮಿತಿಯ ರಘು, ತಮ್ಮಣ್ಣ, ತೋಪಯ್ಯ, ಟಿ.ಕುಮಾರ್, ತಿಮ್ಮರಾಜು, ಪ್ರತೀಸ್, ಸ್ವಾಮಿ, ಕುಮಾರ್, ಮಂಜು, ಚಂದು, ಬೆಟ್ಟಪ್ಪ, ಹನುಮ, ಶಿವಕುಮಾರ್, ನಾಗೇಂದ್ರ, ಬಸವರಾಜ ಸೇರಿದಂತೆ ಹಲವರು ಭಾಗವಹಿಸಿದ್ದರು.

ಸಿ.ಸುರೇಶ್‌ಗೆ ಪಿಹೆಚ್.ಡಿ



ಭಾರತೀನಗರ, ಜ.21– ಇಲ್ಲಿಗೆ ಸಮೀಪದ ಚಿಕ್ಕರಸಿನಕೆರೆ ಗ್ರಾಮದ ಸಿ.ಸುರೇಶ್ ಅವರಿಗೆ ಕುಪ್ಪಂ ಆಂಧ್ರಪ್ರದೇಶದ ದ್ರಾವಿಡಿಯನ್ ವಿಶ್ವವಿದ್ಯಾಲಯ ಪಿಹೆಚ್.ಡಿ ನೀಡಿದೆ.

ಗೌರಿಬಿದನೂರು ಎಇಎಸ್ ನ್ಯಾಷನಲ್ ಕಾಲೇಜಿನ ಡಾ.ಇ.ಎ.ಪರಮೇಶ್ವರ ಗುಪ್ತ ಅವರ ಮಾರ್ಗದರ್ಶನಲ್ಲಿ ಸಂಶೋಧನೆ ನಡೆಸಿ ಸಾದರ ಪಡಿಸಿದ ಪ್ರಬಂಧವನ್ನು ಪಿಹೆಚ್.ಡಿ ಪದವಿಗೆ ಅಂಗೀಕರಿಸಲಾಗಿದೆ. ಸಿ.ಸುರೇಶ್ ಅವರು ಮದ್ದೂರು ಪಟ್ಟಣದ ಮಹಿಳಾ ಸರ್ಕಾರಿ ಕಾಲೇಜಿನ ಸಹ ಪ್ರಾಧ್ಯಾಪಕರಾಗಿ ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದಾರೆ.

ಮಹಾನ್ ವ್ಯಕ್ತಿಗಳ ಸ್ಮರಣೆಗಾಗಿ ಜಯಂತಿಗಳ ಆಚರಣೆ

ಮಂಡ್ಯ,ಜ.21– ಸಾಮಾಜದಲ್ಲಿ ಜಾತಿ ವ್ಯವಸ್ಥೆ, ಮೇಲು ಕೀಳು ಮತ್ತು ಇನ್ನಿತರ ಮೂಢ ನಂಬಿಕೆಗಳ ಹೋಗಲಾಡಿಸಲು ಹಾಗೂ ಸಾಮಾಜದ ಅಂಕು ಡೊಂಕುಗಳನ್ನು ತಿದ್ದಿದ ಮಹಾನ್ ವ್ಯಕ್ತಿಗಳ ಸ್ಮರಣೆಗಾಗಿ ಹಾಗೂ ಅವರು ನೀಡಿದ ಕೊಡುಗೆಗಳನ್ನು ಯುವ ಜನತೆ ಅನುಸರಿಸಲು ಜಯಂತಿಗಳನ್ನು ಕರ್ನಾಟಕ ಸರ್ಕಾರ ಆಚರಿಸುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂಬಿಗರ ಚೌಡಯ್ಯ ಜಯಂತಿಯನ್ನು ಉದ್ಘಾಟಿಸಿ ಅವರು ಮಾತನಾಡಿದ ಅವರು, ಸಮಾಜವನ್ನು ತಿದ್ದುವ ಉದ್ದೇಶದಿಂದ ಅಂಬಿಗರ ಚೌಡಯ್ಯನವರು ಅನೇಕ ವಚನಗಳನ್ನು ರಚಿಸಿ ಸಾಮಾಜಕ್ಕೆ ತಿಳಿಸಿದ್ದು, ಅವರ ರಚಿಸಿರುವ ವಾಚನಗಳಲ್ಲಿ ಇರುವ ತತ್ವ ಮತ್ತು ಆದರ್ಶಗಳನ್ನು ಯುವಜನತೆ ತಮ್ಮ ವ್ಯಕ್ತಿತ್ವದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್ ಮಾತನಾಡಿ, ಸಾಮಾಜವನ್ನು ತಿದ್ದಿದ ಮಹನೀಯ ವಚನಕಾರರಲ್ಲಿ ಅಂಬಿಗರ ಚೌಡಯ್ಯನವರು ಸಹ ಒಬ್ಬರು, ಇಂತಹ ಮಹಾನ್ ಚೇತನರ ಬದುಕು ನಮ್ಮೆಲ್ಲರಿಗೂ ಆದರ್ಶ. ಅವರ ವಚನಗಳ ಆಶಯವನ್ನು ಅರಿತುಕೊಂಡು ಅದರಂತೆ ಬದುಕೋಣ ಎಂದು ತಿಳಿಸಿದರು.

ಹಿರಿಯ ಸಾಹಿತಿ ಡಾ.ಪ್ರದೀಪ್ ಕುಮಾರ್ ಹೆಬ್ರಿ ಮಾತನಾಡಿ, ಮಹನಿಯರ ಜಯಂತಿಗಳನ್ನು ಸರ್ಕಾರ ರಾಜ್ಯದಾದ್ಯಂತ ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ ಸಂಗತಿ, ಕಾಯಕವನ್ನೇ ಬದುಕಿನ ಅವಿಭಾಜ್ಯ ಅಂಗವಾಗಿಸಿಕೊಂಡು ಜಗತ್ತಿನ ಎಲ್ಲರನ್ನೂ ಸಮಾನ ಪ್ರೀತಿಯಿಂದ ಕಂಡವರು ವಚನಕಾರರು. ಜಾತಿ ಮತ ಧರ್ಮ ಪಂಥಗಳ ಅಂಗು ತೊರೆದು ನಾವು ಮೂಲತಃ ಮಾನವ ಧರ್ಮಿಯರು ಎಂದು ಪ್ರತಿಪಾದಿಸಿದವರು ಅಂಬಿಗರ ಚೌಡಯ್ಯನವರು ಎಂದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಿ.ವಿ.ನಂದೀಶ್, ನಗರಸಭೆ ಉಪಾಧ್ಯಕ್ಷ ಅರುಣ್ ಕುಮಾರ್, ವಿವಿಧ ಸಂಘಗಳ ಮುಖಂಡರಾದ ದೇವರಾಜ್, ಗಾಯಿತ್ರಿ, ಟಿ.ಕೃಷ್ಣ, ಕೆ.ತಮ್ಮಣ್ಣ, ದೇವಾನಂದ್ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.


ಮೆರವಣಿಗೆ: ಅಂಬಿಗರ ಚೌಡಯ್ಯ ಜಯಂತಿ ಅಂಗವಾಗಿ ಅಂಬಿಗರ ಚೌಡಯ್ಯನವರ ಭಾವಚಿತ್ರವನ್ನಿಟ್ಟು ಜಿಲ್ಲಾಧಿಕಾರಿಗಳ ಕಚೇರಿಯಿಂದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದವರೆಗೂ ಮೆರವಣಿಗೆಯನ್ನು ಹಮ್ಮಿಕೊಳ್ಳಲಾಗಿತ್ತು.

ಇಂದು ಮಂಡ್ಯದ ಕೆಲವೆಡೆ ವಿದ್ಯುತ್ ವ್ಯತ್ಯಯ



ಮಂಡ್ಯ, ಜ.21– ಚಿಕ್ಕ ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಜನವರಿ 22 ರಂದು ಬೆಳಿಗ್ಗೆ 9ರಿಂದ ಸಂಜೆ 5ಗಂಟೆಯವರೆಗೆ ಚಿಕ್ಕ ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದ ವ್ಯಾಪ್ತಿಗೆ ಒಳಪಡುವ ಪ್ರದೇಶಗಳು ನಗರ ಪ್ರದೇಶಗಳು ಶಂಕರಪುರ, ಜೈನ ಸ್ಟ್ರೀಟ್, ಬೀಡಿ ಕಾಲೋನಿ, ಜಬರ್ ಸರ್ಕಲ್, ಹೊಳಲು ವೃತ್ತ, ವಿನಾಯಕನಂದ ಬಡಾವಣೆ, ಗ್ರಾಮಾಂತರ ಪ್ರದೇಶಗಳು ಗೋಪಾಲಪುರ, ಚಿಕ್ಕಮಂಡ್ಯ ಸಾತನೂರು, ಕೊಮ್ಮೇರಹಳ್ಳಿ, ಹುಲಿವಾನ, ಕೆ.ಗೌಡಗೆರೆ. ಹೆಚ್. ಮಲ್ಲಿಗೆರೆ, ಎಸ್.ಐ.ಕೋಡಿಹಳ್ಳಿ, ಹೆಚ್. ಕೋಡಿಹಳ್ಳಿ, ಸಂಪಹಳ್ಳಿ, ಗೊರವಾಲೆ, ಬಿ.ಹೊಸಹಳ್ಳಿ, ಬೀರಗೌಡನಹಳ್ಳಿ ಹಾಗೂ ಈ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಚಾವಿಸನಿನಿ, ಕಾ ಮತ್ತು ಪಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಶ್ರೀನಿವಾಸ ಬಸ್ ಮಾಲೀಕ ಸತ್ಯಪ್ಪ ನಿಧನ



ಕೆ.ಆರ್.ಪೇಟೆ, ಜ.21– ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಶ್ರೀ ಕುಮಾರ ಚಂದ್ರಶೇಖರನಾಥ ಸ್ವಾಮೀಜಿ ಅವರ ಪೂರ್ವಾಶ್ರಮದ ಕಿರಿಯ ಸಹೋದರ ಸಮಾಜ ಸೇವಕರಾದ ಬಸ್ ಸತ್ಯಪ್ಪ(90) ನಿಧನರಾದರು.

ಮೃತರು ಪತ್ನಿ ಲೀಲಾವತಿ, ಪುತ್ರರಾದ ವಿಜಯಕುಮಾರ್, ಗಜೇಂದ್ರ ಸೊಸೆಯಂದರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸತ್ಯಪ್ಪ ಅವರು ಬಸ್ ವ್ಯವಸ್ಥೆ ಇಲ್ಲದ ಸಮಯದಲ್ಲಿ ಗ್ರಾಮೀಣ ಭಾಗಗಳಿಗೆ ಶ್ರೀನಿವಾಸ (ಎಸ್‌ಬಿಟಿ) ಬಸ್ ಸೌಲಭ್ಯವನ್ನು ಕಲ್ಪಿಸಿ ಪ್ರಯಾಣಿಕರು ಹಾಗೂ ಶ್ರೀಸಾಮಾನ್ಯರ ಸುಗಮ ಸಂಚಾರ ಹಾಗೂ ಓಡಾಟಕ್ಕೆ ಅನುಕೂಲ ಮಾಡಿಕೊಡುವ ಮೂಲಕ ತಾಲೂಕಿನಲ್ಲಿ ಜನಪ್ರಿಯರಾಗಿದ್ದರು. ಅಗ್ರಹಾರಬಾಚಹಳ್ಳಿ ರಸ್ತೆಯಲ್ಲಿರುವ ಬನುಮೇನಹಳ್ಳಿ ಬಳಿ ಇರುವ ಮೃತರ ತೋಟದಲ್ಲಿ ಅಂತ್ಯಸಂಸ್ಕಾರ ನಡೆಯಿತು.

ಡೇರಿಗಳ ಅಭಿವೃದ್ಧಿಗೆ ಹಣ ನೀಡುವಂತೆ ಮಾಡಿದ್ದೇ ನಾನು

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರಿಂದ ಮನ್‌ಮುಲ್ ನಿರ್ದೇಶಕರ ಚುನಾವಣಾ ಪ್ರಚಾರ



ಮಂಡ್ಯ ಹಾಲು ಒಕ್ಕೂಟದ ಚುನಾವಣೆಯ ಹಿನ್ನೆಲೆಯಲ್ಲಿ ಪಾಂಡವಪುರ ತಾಲೂಕಿನ ಎನ್‌ಡಿಎ ಮೈತ್ರಿ ಅಭ್ಯರ್ಥಿ ಸಿ.ಶಿವಕುಮಾರ್ ಅವರ ಪರವಾಗಿ ನಡೆದ ಚುನಾವಣೆ ಪ್ರಚಾರ ಸಭೆಯನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಉದ್ಘಾಟಿಸಿದರು.

ಪಾಂಡವಪುರ, ಜ.21– ಶಾಸಕನಾಗಿದ್ದ ಸಂದರ್ಭದಲ್ಲಿ ರೈತ ಪರವಾಗಿ ಕೆಲಸ ಮಾಡಿದ್ದೇನೆ. ಸರಕಾರದಿಂದ ಅನುಮೋದನೆ ಪಡೆದು ಡೇರಿಗಳ ಅಭಿವೃದ್ಧಿಗೆ ಅನುದಾನ ನೀಡಿದ ಮೊದಲ ಶಾಸಕ ನಾನೇ ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಹೇಳಿದರು.

ಮನ್‌ಮುಲ್ ನಿರ್ದೇಶಕರ ಚುನಾವಣೆಯ ಹಿನ್ನೆಲೆಯಲ್ಲಿ ಕ್ಷೇತ್ರದ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ ಸಿ.ಶಿವಕುಮಾರ್ ಪರವಾಗಿ ಮೈಸೂರಿನ ದಂಡಿನ ಮಾರಮ್ಮ ದೇವಸ್ಥಾನದ ಆವರಣದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕನಾಗಿದ್ದ ವೇಳೆ ಹೈನುಗಾರಿಕೆಗೆ ಉತ್ತೇಜನೆ ನೀಡುವ ಕೆಲಸ ಮಾಡಿದ್ದೇವೆ. ಶಾಸಕರ ಅನುದಾನವನ್ನು ಡೇರಿಗಳ ಅಭಿವೃದ್ಧಿಗೆ ನೀಡಲು ಸಾಧ್ಯವಿರಲಿಲ್ಲ. ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಡೇರಿಗಳಿಗೆ 5 ಲಕ್ಷದ ವರೆಗೆ ಶಾಸಕರ ಅನುದಾನ ನೀಡುವಂತೆ ಕ್ರಮವಹಿಸಿ ಡೇರಿಗಳ ಅಭಿವೃದ್ಧಿಗೆ ಕ್ರಮವಹಿಸಿದ್ದೇನೆ ಎಂದು ತಿಳಿಸಿದರು.

ಎಚ್.ಡಿ.ಕುಮಾರಸ್ವಾಮಿ–ಯಡಿಯೂರಪ್ಪನವರ ಸರಕಾರ ಇದ್ದಂತಹ ಸಂದರ್ಭದಲ್ಲಿ ಹೈನೋದ್ಯಮವನ್ನು ಉತ್ತೇಜನೆ ನೀಡುವ ಉದ್ದೇಶದಿಂದ ಹಾಲಿಗೆ ಪ್ರೋತ್ಸಾಹ ಧನ ನೀಡಲು ಆರಂಭಿಸಿದರು, ನಮ್ಮ ಸರಕಾರದಲ್ಲಿ ಪ್ರತಿ ತಿಂಗಳು ಹಾಲಿನ ಪ್ರೋತ್ಸಾಹ ಧನ ಬಿಡುಗಡೆ ಮಾಡುತ್ತಿದ್ದರು. ಆದರೆ, ಈಗಿನ ಸರಕಾರ ಹಾಲಿನ ಪ್ರೋತ್ಸಾಹ ಧನವನ್ನು ನೀಡಲು ಹಿಂದೇಟು ಹಾಕುತ್ತಿದೆ. 6 ತಿಂಗಳು ಕಳೆದರು ಹಾಲಿಗೆ ಪ್ರೋತ್ಸಾಹ ಧನ ಬಿಡುಗಡೆ ಮಾಡಿಲ್ಲ, ಈ ಸರಕಾರ ಇನ್ನಷ್ಟು ರೈತರ ಬೊಕ್ಕಸಕ್ಕೆ ಕನ್ನಹಾಕಲಿದೆಯೋ ಎಂದು ಹರಿಹಾಯ್ದರು.

ಜಿಪಂ ಮಾಜಿ ಸದಸ್ಯ ಎಚ್.ತ್ಯಾಗರಾಜು ಮಾತನಾಡಿ, ಚುನಾವಣೆಯ ಎಂದರೆ ಪರಸ್ಪರ ನಂಬಿಕೆ ಇರಬೇಕು ಆಗಮಾತ್ರ ಪಕ್ಷ ಬೆಳೆಯಲು ಸಾಧ್ಯವಾಗುತ್ತದೆ. ಸಿ.ಎಸ್.ಪುಟ್ಟರಾಜು ಅವರ ಕುಟುಂಬ ಪಕ್ಷ ಸಂಘಟನೆಗೆ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿರುವ ಶಿವಕುಮಾರ್ ಅವರು ಕೆಲಸ ಮಾಡುವ ಉತ್ಸಾಹಕರಾಗಿದ್ದು ಇಂತಹ ವ್ಯಕ್ತಿಗಳಿಗೆ ಒಂದು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.

ಚುನಾವಣೆಯ ಎನ್‌ಡಿಎ ಮೈತ್ರಿ ಅಭ್ಯರ್ಥಿ ಸಿ.ಶಿವಕುಮಾರ್ ಮಾತನಾಡಿ ತಮಗೆ ಮತ ನೀಡುವಂತೆ ಮತದಾರರಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಜೆಡಿಎಸ್ ಅಧ್ಯಕ್ಷ ಎಸ್.ಎ.ಮಲ್ಲೇಶ್, ಪುರಸಭೆ ಅಧ್ಯಕ್ಷೆ ಜ್ಯೋತಿಲಕ್ಷ್ಮಿ, ಶ್ರೀರಂಗಪಟ್ಟಣ ಬಿಜೆಪಿ ಮುಖಂಡ ಸಚ್ಚಿದಾನಂದ, ಡಿಸಿಸಿ ಬ್ಯಾಂಕ್ ನಿರ್ದೇಶಕ ಗುರುಸ್ವಾಮಿ, ನಂಜೇಗೌಡ, ರಾಧಕೃಷ್ಣ, ಆನಂದ್, ಸುಶೀಲಮ್ಮ, ಗವಿಗೌಡ, ಎಂ.ಸಿ.ಯಶ್ವಂತ್‌ಕುಮಾರ್, ಮನ್‌ಮುಲ್ ಮಾಜಿ ನಿರ್ದೇಶಕ ಜಿ.ಇ.ರವಿಕುಮಾರ್, ಗಿರೀಗೌಡ, ಸ್ವಾಮೀಗೌಡ ಸೇರಿದಂತೆ ಅನೇಕ ಮುಖಂಡರು ಇದ್ದರು.

ನಾಗಮೋಹನ್ ದಾಸ್ ಆಯೋಗ ಭೇಟಿ ಮಾಡಿದ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ

ಮಾದಿಗ ಸೇರಿ ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು ಮೀಸಲಾತಿಗೆ ಆಗ್ರಹ

ಮೈಸೂರು,ಜ.21(ಬಿಎಲ್‌ಯು)– ಸುಪ್ರೀಂಕೋರ್ಟ್‌ನ ಏಳು ನ್ಯಾಯಮೂರ್ತಿಗಳ ಸಂವಿಧಾನ ಪೀಠ ನೀಡಿರುವ ತೀರ್ಪಿನ ಅನ್ವಯ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗ ಹಾಗೂ ಜೆ.ಮಾಧುಸ್ವಾಮಿ ಸಮಿತಿ ಶಿಫಾರಸಿನಂತೆ ಪರಿಶಿಷ್ಟ ಜಾತಿಯೊಳಗಿನ ಮಾದಿಗ ಮತ್ತು ಸಂಬಂಧಿತ ಜಾತಿಗಳಿಗೆ ಶೇಕಡ 6ರಷ್ಟು ಮೀಸಲಾತಿ ನೀಡಲು ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ, ನ್ಯಾಯಮೂರ್ತಿ ನಾಗಮೋಹನ್ ದಾಸ್ ಏಕವ್ಯಕ್ತಿ ವಿಚಾರಣಾ ಆಯೋಗಕ್ಕೆ ಮನವಿ ಮಾಡಿದೆ.

ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷರೂ ಆದ ಹಿರಿಯ ವಕೀಲ ಎಸ್.ಅರುಣ್ ಕುಮಾರ್ ನೇತೃತ್ವದ ನಿಯೋಗ ಬೆಂಗಳೂರಿನ ನೃಪತುಂಗ ರಸ್ತೆಯಲ್ಲಿರುವ ನಾಗಮೋಹನ್ ದಾಸ್ ಅವರ ಕಚೇರಿಯಲ್ಲಿ ಭೇಟಿ ಮಾಡಿ ಲಿಖಿತ ಮನವಿ ಸಲ್ಲಿಸಿತು.

ಈಗಾಗಲೇ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಿರುವ ನ್ಯಾಯಮೂರ್ತಿ ಎ.ಜೆ.ಸದಾಶಿವ ಹಾಗೂ ಜೆ.ಸಿ.ಮಾಧುಸ್ವಾಮಿ ಸಮಿತಿ ನೀಡಿರುವ ವರದಿಯನ್ನು ಚಾಚೂ ತಪ್ಪದೆ ಜಾರಿಗೊಳಿಸಬೇಕೆಂದು ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರನ್ನು ಒತ್ತಾಯಿಸಿದ ವೇದಿಕೆ ಈ ಸಂಬಂಧ ಹಲವು ಅಂಶಗಳನ್ನು ಅವರ ಗಮನಕ್ಕೆ ತಂದಿತು.

ಸರ್ವೋಚ್ಛ ನ್ಯಾಯಾಲಯವು ದೇವಿಂದರ್ ಸಿಂಗ್ ಮತ್ತು ಪಂಜಾಬ್ ರಾಜ್ಯ ಸರ್ಕಾರದ ನಡುವಿನ ಪ್ರಕರಣದಲ್ಲಿ ಆಗಸ್ಟ್ 1, 2024ರಂದು ನೀಡಿರುವ ತೀರ್ಪಿನ ಪ್ರಕಾರ ಪರಿಶಿಷ್ಟ ಜಾತಿಯವರಿಗೆ ನೀಡುವ ಒಳ ಮೀಸಲಾತಿ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಇಲ್ಲ. ಅಲ್ಲದೆ ಭಾರತೀಯ ಸಂವಿಧಾನದ 341ರ ಕಾಯ್ದೆ ಉಲ್ಲಂಘನೆ ಕೂಡ ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದೆ ಎಂದು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಒಳಗಿರುವ ಹಿಂದುಳಿದ ಹಾಗೂ ತೀರಾ ಹಿಂದುಳಿದ ಜಾತಿಗಳ ಪ್ರಾಯೋಗಿಕ ದತ್ತಾಂಶವನ್ನು ಆಯಾ ರಾಜ್ಯ ಸರ್ಕಾರ ಹೊಂದಿರಬೇಕು. ರಾಜಕೀಯ ಪಕ್ಷಗಳು ತಮಗೆ ಲಾಭ ಮಾಡಿಕೊಳ್ಳಲು ನಡೆಸುವ ಪ್ರಯತ್ನಗಳಿಗೆ ಪೂರಕವಾಗಿ ಒಳಮೀಸಲಾತಿ ಅನುಷ್ಠಾನ ಮಾಡಬಾರದು ಎಂದು ಸುಪ್ರೀಂಕೋರ್ಟ್ ತಾಕೀತು ಮಾಡಿದೆ ಎಂದು ಹೇಳಿದ್ದಾರೆ.

ಕರ್ನಾಟಕದ ಪರಿಶಿಷ್ಟ ಜಾತಿಯೊಳಗಿನ ಪ್ರಾಯೋಗಿಕ ದತ್ತಾಂಶಗಳನ್ನು ಸಂಗ್ರಹಿಸಲು 2005ರಲ್ಲಿ ನಿವೃತ್ತ ನ್ಯಾಯಮೂರ್ತಿ ಎ.ಜೆ.ಸದಾಶಿವ ನೇತೃತ್ವದಲ್ಲಿ ಆಯೋಗ ರಚನೆ ಮಾಡಿತ್ತು. ಸಮಗ್ರ ಸಮೀಕ್ಷೆ ನಡೆಸಿದ ಆಯೋಗ ಹಲವು ಆಯಾಮಗಳಲ್ಲಿ ಪರಾಮರ್ಶಿಸಿತು. ಜೊತೆಗೆ ಪರಿಶಿಷ್ಟ ಜಾತಿಯೊಳಗಿನ ಹಿಂದುಳಿದ ಹಾಗೂ ಅತೀ ಹಿಂದುಳಿದ ವರ್ಗಗಳ ವಿವರಗಳನ್ನು ರಾಜ್ಯ ಸರ್ಕಾರದ ಇಲಾಖೆಗಳಿಂದ ಪಡೆದು, ಪ್ರತಿಯೊಂದು ಸಮುದಾಯದ ಜನಸಂಖ್ಯೆ ಸಹ ದಾಖಲಿಸಿದ ಎ.ಜೆ.ಸದಾಶಿವ ಆಯೋಗ ಏಳು ವರ್ಷಗಳ ನಂತರ 2012ರಲ್ಲಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಿತು ಎಂದು ವಿವರಿಸಿದರು.

2023ರಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಸದಾಶಿವ ಆಯೋಗದ ವರದಿಯನ್ನು ಅಂಗಿಕರಿಸಿ, ಮರು ಪರಿಶೀಲನೆಗೆ ಒಳಪಡಿಸಲು ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ನೇತೃತ್ವದ ಸಮಿತಿ ರಚನೆ ಮಾಡಿತು. ಜೊತೆಗೆ ಈಗಿರುವ ಶೇಕಡ 15ರ ಮೀಸಲಾತಿ ಹೆಚ್ಚಿಸುವ ಅಗತ್ಯವಿದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಲು ಸೂಚನೆ ನೀಡಿತು. ಈ ವೇಳೆ ಸದಾಶಿವ ಆಯೋಗದ ಆಯ್ದ ಭಾಗಗಳನ್ನು ಸಂಗ್ರಹಿಸಿದ ಸಮಿತಿ ಹಲವು ದತ್ತಾಂಶಗಳೊಂದಿಗೆ ಮಿಳಿತಗೊಳಿಸಿ ವರದಿ ತಯಾರಿಸಿತು. ಈ ಮೂಲಕ ಪರಿಶಿಷ್ಟ ಜಾತಿ ಮೀಸಲಾತಿ ಪ್ರಮಾಣವನ್ನು ಶೇಕಡ 15ರಿಂದ 17 ಹೆಚ್ಚಳ ಮಾಡುವ ಅಗತ್ಯವಿದೆ ಎಂದು ಶಿಫಾರಸು ಮಾಡಿತ್ತು.

ಇದಲ್ಲದೆ ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣವನ್ನು ಶೇಕಡ 3ರಿಂದ 7ಕ್ಕೆ ಏರಿಕೆ ಮಾಡಬೇಕು. ಇದರಲ್ಲಿ ಮಾದಿಗ ಸಮುದಾಯಕ್ಕೆ ಶೇಕಡ 6, ಹೊಲೆಯ ಸಮುದಾಯಕ್ಕೆ 5.5, ಭೋವಿ ಸಮುದಾಯಕ್ಕೆ 4.5, ಅಲೆಮಾರಿಗಳ ಸಮುದಾಯಕ್ಕೆ ಶೇಕಡ 1ರಷ್ಟು ವಿಂಗಡಿಸಿ ಮೀಸಲಾತಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಿ ಸಚಿವ ಸಂಪುಟದಲ್ಲಿ ಇದನ್ನು ಅಂಗೀಕಾರ ಕೂಡ ಮಾಡಲಾಗಿತ್ತು ಎಂದರು.

- ಸದಾಶಿವ ಆಯೋಗ ವರದಿ ಜಾರಿಗೆ ಒತ್ತಾಯ
- ಮಾಧುಸ್ವಾಮಿ ಸಮಿತಿ ವರದಿ ಪರಿಗಣಿಸಲೂ ಕೋರಿಕೆ
- ಪಟ್ಟಭದ್ರ ಹಿತಾಸಕ್ತಿಗಳಿಂದ ಆಗಾಗ ಗೊಂದಲ
- ಜಾತಿ ಪ್ರಮಾಣ ಪತ್ರ ನೀಡಲು ನೋಡಲ್ ಅಧಿಕಾರಿ ನೇಮಿಸಿ
- ನಕಲಿ ಜಾತಿ ಪ್ರಮಾಣ ಪತ್ರಕ್ಕೆ ಕಡಿವಾಣ ಹಾಕಲು ಮನವಿ



ಮಾದಿಗ ಹಾಗೂ ಸಂಬಂಧಿತ ಜಾತಿಗಳಿಗೆ ಶೇ.6ರಷ್ಟು ಮೀಸಲಾತಿ ನೀಡುವ ಸಂಬಂಧ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಮೈಸೂರಿನ ಹಿರಿಯ ವಕೀಲ ಎಸ್.ಅರುಣ್‌ಕುಮಾರ್ ನೇತೃತ್ವದ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆಯವರು ನ್ಯಾಯಮೂರ್ತಿ ನಾಗಮೋಹನ್‌ದಾಸ್ ಏಕವ್ಯಕ್ತಿ ವಿಚಾರಣಾ ಆಯೋಗಕ್ಕೆ ಮನವಿ ಮಾಡಿದರು.

ಕೆಲ ಪಟ್ಟಭದ್ರ ಹಿತಾಸಕ್ತಿಗಳಿಂದ ಆಗಾಗ ಗೊಂದಲ ಸೃಷ್ಟಿ

ಆದಿ ಕರ್ನಾಟಕ, ಆದಿ ಆಂಧ್ರ ಮತ್ತು ಆದಿ ದ್ರಾವಿಡ ಸಮುದಾಯಗಳು ಪರಿಶಿಷ್ಟ ಜಾತಿ ಪಟ್ಟಿಯಲ್ಲಿದ್ದು, ಈ ವರ್ಗದವರ ಜನಸಂಖ್ಯೆ ವಿವರಗಳು 2011ರ ಜನಗಣತಿಯಲ್ಲಿ ಲಭ್ಯವಿದೆ. ಆದರೆ ಉಪ ಜಾತಿಗಳ ಜನಸಂಖ್ಯೆ ವಿವರಗಳು ಲಭ್ಯವಿಲ್ಲ. ಉಪ ಜಾತಿಗಳ ಜನಸಂಖ್ಯೆ ಮಾಹಿತಿ ಸಂಗ್ರಹಿಸುವಂತೆ ರಾಜ್ಯ ಸರ್ಕಾರ ಆಯೋಗಕ್ಕೆ ಸೂಚಿಸಿದೆ. ಆದರೆ ಉಪ ಜಾತಿಗಳ ಜನರನ್ನು ಲೆಕ್ಕ ಹಾಕುವುದು ಆಯೋಗದ ಕಾರ್ಯ ವ್ಯಾಪ್ತಿಗೆ ಬರುವುದಿಲ್ಲ. ಈ ಹಿನ್ನೆಲೆಯಲ್ಲಿ ಇತ್ತೀಚಿನ ಜಾತಿ ಗಣತಿ ಅಂಕಿ ಅಂಶಗಳನ್ನು ಆಧರಿಸಿ ಸಲಹೆ ನೀಡಬಹುದೇ ಹೊರತು, ಜನಗಣತಿ ಮಾಡುವಂತಿಲ್ಲ. ಒಂದು ವೇಳೆ ಮಾಡಿದರೆ ಅದು ಕಾನೂನುಬಾಹಿರವಾಗುತ್ತದೆ ಎಂದು ವೇದಿಕೆ ಸ್ಪಷ್ಟಪಡಿಸಿದೆ.

ಪರಿಶಿಷ್ಟ ಜಾತಿಯ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಒಳ ಮೀಸಲಾತಿಗೆ ಸಂಬಂಧಿಸಿದಂತೆ ಆದಿ ಕರ್ನಾಟಕ, ಆದಿ ಆಂಧ್ರ ಮತ್ತು ಆದಿ ದ್ರಾವಿಡ ವಿಚಾರಗಳನ್ನು ಮುಂದಿಟ್ಟು ಸಮಾಜದಲ್ಲಿ ಗೊಂದಲ ಮೂಡಿಸಿ ಸಮಾಜವನ್ನು ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಪರಿಶಿಷ್ಟ ಜಾತಿ ಪ್ರಮಾಣ ಪತ್ರಗಳನ್ನು ನೀಡಲು ರಾಜ್ಯದ ಪ್ರತಿ ಜಿಲ್ಲೆಯಲ್ಲೂ ನೋಡಲ್ ಅಧಿಕಾರಿ ನಿಯೋಜಿಸಲು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಬೇಕು. ನಕಲಿ ಜಾತಿ ಪ್ರಮಾಣ ಪತ್ರ ಪಡೆದು ಸರ್ಕಾರಿ ಸವಲತ್ತು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ಯಾವುದೇ ವ್ಯಕ್ತಿಗೆ ಸೌಲಭ್ಯ ಸಿಗದಂತೆ ಮಾಡಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಆದಿ ಕರ್ನಾಟಕ, ಆದಿ ಆಂಧ್ರ ಮತ್ತು ಆದಿ ದ್ರಾವಿಡ ಸಮುದಾಯಗಳಿಗೆ ಸಂಬಂಧಿಸಿದಂತೆ ಅಗತ್ಯ ತಿದ್ದುಪಡಿ ಮಾಡಿ, ಇದನ್ನು 2025/2026 ರಲ್ಲಿ ನಡೆಯುವ ರಾಷ್ಟ್ರೀಯ ಜನಗಣತಿಯಲ್ಲಿ ಸೇರ್ಪಡೆ ಮಾಡಲು ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಕೋರಿದ್ದಾರೆ.

ಅಲ್ಲದೆ ಈಗ ನಡೆಸುವ ರಾಷ್ಟ್ರೀಯ ಜನಗಣತಿಯಲ್ಲಿ ಲಭ್ಯವಾಗುವ ಹೊಸ ಅಂಕಿ ಅಂಶಗಳನ್ನು ಆಧರಿಸಿ ಪರಿಶಿಷ್ಟ ಜಾತಿಯವರಿಗೆ ನೀಡುವ ಮೀಸಲಾತಿ ಶೇಕಡವಾರು ಪ್ರಮಾಣವನ್ನ ಬದಲಿಸುವಂತೆ ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಒಟ್ಟಾರೆ ಮಾದಿಗ ಮತ್ತು ಸಂಬಂಧಿತ ಜಾತಿಗಳಿಗೆ ನ್ಯಾಯಯುತವಾಗಿ ಸಲ್ಲಬೇಕಾದ ಶೇಕಡ 6 ಮೀಸಲಾತಿಯನ್ನು ಮಾದಿಗ ಸಮಾಜಕ್ಕೆ ನೀಡುವಂತೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಏಕವ್ಯಕ್ತಿ ವಿಚಾರಣಾ ಆಯೋಗಕ್ಕೆ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಕೋರಿಕೆ ಸಲ್ಲಿಸಿದೆ.

ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ನೀಡಲು ಸದಾಶಿವ ಆಯೋಗದ ವರದಿ ಜಾರಿಗೊಳಿಸುವುದಾಗಿ 2023 ರಲ್ಲಿ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಭರವಸೆ ನೀಡಿತು. ತರುವಾಯ ಅಧಿಕಾರಕ್ಕೆ ಬಂದ ನಂತರ 2024 ರಂದು ಸಚಿವ ಸಂಪುಟದಲ್ಲಿ ಅಂಗೀಕಾರ ಮಾಡಿತು. ನಂತರ ಆರ್ಟಿಕಲ್ 341ಕ್ಕೆ ತಿದ್ದುಪಡಿ ತರಲು ಪೂರಕವಾಗಿ ಪ್ರವರ್ಗ 3 ಅನ್ನು ಸೇರಿಸಿ ಕೇಂದ್ರ ಸರ್ಕಾರಕ್ಕೆ ವರದಿ ಕೂಡ ಸಲ್ಲಿಸಿತು ಎಂದು ವೇದಿಕೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರಿಗೆ ವಿವರಣೆ ನೀಡಿದೆ.

ಸದಾಶಿವ ಆಯೋಗವು ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ನೀಡಲು 4 ವಿಭಾಗಗಳಾಗಿ ವರ್ಗೀಕರಿಸಿದೆ ಮಾದಿಗ ಮತ್ತು ಅದರ ಉಪ ಜಾತಿಗಳು, ಹೊಲೆಯ ಮತ್ತು ಅದರ ಉಪ ಜಾತಿಗಳು, ಭೋವಿ, ಲಂಬಾಣಿ, ಕೊರಮ ಮತ್ತು ಕೊರಚ ಹಾಗೂ ಅಲೆಮಾರಿ ಜನಾಂಗವೆಂದು ವರ್ಗೀಕರಣ ಮಾಡಿದೆ ಎಂದು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ಜಾರಿಗೊಳಿಸಲು ಪ್ರಾಯೋಗಿಕ ದತ್ತಾಂಶ ಪರಿಗಣಿಸಬೇಕು ಎಂದು ಸುಪ್ರೀಂ ಕೋರ್ಟ್ ಒತ್ತಿ ಹೇಳಿರುವ ಹಿನ್ನೆಲೆಯಲ್ಲಿ ಸದಾಶಿವ ಆಯೋಗ ಹಾಗೂ ಮಾಧುಸ್ವಾಮಿ ಸಮಿತಿ ವರದಿಯನ್ನೆ ಜಾರಿಗೊಳಿಸಲು ರಾಜ್ಯ ಸರ್ಕಾರಕ್ಕೆ ಯಾವುದೇ ಕಾನೂನಾತ್ಮಕ ಅಡಚಣೆ ಇರುವುದಿಲ್ಲ ಎಂದು ವೇದಿಕೆ ಅಭಿಪ್ರಾಯಪಟ್ಟಿದೆ.

ಹಿರಿಯ ವಕೀಲರೂ ಆದ ವೇದಿಕೆ ಅಧ್ಯಕ್ಷ ಎಸ್.ಅರುಣ್ ಕುಮಾರ್ ನೇತೃತ್ವದ ನಿಯೋಗದಲ್ಲಿ ವೇದಿಕೆ ಉಪಾಧ್ಯಕ್ಷ ಎಂ.ದಾಸಯ್ಯ, ಶಿವಕುಮಾರ್ ಎಂ.ಬೆಳ್ತೂರು, ಪ್ರಧಾನ ಕಾರ್ಯದರ್ಶಿ ಬೂದಿತಿಟ್ಟು ರಾಜೇಂದ್ರ, ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಮಾಳಪ್ಪ ಕುರ್ಕಿ, ಎಂ.ಆರ್. ಸುರೇಂದ್ರಕುಮಾರ್, ಬೀಸನಹಳ್ಳಿ ಜಂಬುಪ್ಪ, ಎನ್.ಚಂದ್ರಪ್ಪ, ಶಿವಪ್ಪ ಎನ್.ಚಿಕ್ಕಣ್ಣನವರ್, ಸಿದ್ದಯ್ಯ, ರಂಗದಾಮಯ್ಯ, ನರಹರಿ, ಶಿವಕುಮಾರ್ ಎ.ದೊಡ್ಡಮನಿ ಹಾಗೂ ಖಜಾಂಚಿ ಚಂದ್ರಸೇನಾ ಸಾಗರ್ ಹಾಜರಿದ್ದರು.

ಸಂಸದ ಯದುವೀರ್ ಒಡೆಯರ್‌ಗೆ ಅಭಿನಂದನೆ...




ಮೈಸೂರಿನ ಗಾಂಧಿ ಚೌಕದಲ್ಲಿನ ನಯನಜ ಕ್ಷತ್ರಿಯ ಕನ್ನಡಿಗರ ಶ್ರೀರಾಮಮಂದಿರ ಟ್ರಸ್ಟ್ ವತಿಯಿಂದ ಸದ್ಗುರು ಶ್ರೀ ತ್ಯಾಗರಾಜ ಸ್ವಾಮಿಗಳ 175ನೇ ಆರಾಧನಾ ಮಹೋತ್ಸವದ ಹಿನ್ನೆಲೆ ಏರ್ಪಡಿಸಿದ್ದ ಸಂಗೀತ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಂಸದ ಯದುವೀರ್ ಒಡೆಯರ್ ಅವರನ್ನು ಅಭಿನಂದಿಸಲಾಯಿತು. ಟ್ರಸ್ಟ್‌ನ ಗೌರವಾಧ್ಯಕ್ಷ ಕೆ.ಸುಂದರ ಮೂರ್ತಿ, ಅಧ್ಯಕ್ಷ ಎಂ.ಕುಮಾರ್, ಉಪಾಧ್ಯಕ್ಷ ಶ್ರೀನಿಧಿ, ಟ್ರಸ್ಟಿಗಳಾದ ಗುಂಡಣ್ಣ, ಶಿವಣ್ಣ, ಎಂ.ಪಿ.ಶೇಷಾದ್ರಿ, ಶಿವಕುಮಾರ್, ನರೇಶ್, ರವೀಂದ್ರ, ಗಂಗಾಧರ, ಗೋಪಿನಾಥ್, ನಜರ್‌ಬಾದ್ ರವಿ, ವೆಂಕಟರಾಜು, ಪ್ರಕಾಶ್, ಶ್ರೀನಿವಾಸ್, ಮೈ.ನಾ.ಲೋಕೇಶ್ ಹಾಜರಿದ್ದರು.

ಶ್ರೀನಗರ ಬಡಾವಣೆಯಲ್ಲಿ ಅದ್ಧೂರಿ ಹನುಮಂತೋತ್ಸವ

ಮೈಸೂರು,ಜ.21–ಹನುಮ ಜಯಂತಿ ಮತ್ತು ಶ್ರೀರಾಮಲಲ್ಲಾ ಸ್ಥಾಪನ ವಾರ್ಷಿಕೋತ್ಸವದ ಅಂಗವಾಗಿ ಮೈಸೂರಿನ ಶ್ರೀನಗರದ ಬಡಾವಣೆಯಲ್ಲಿ ಶ್ರೀ ಹನುಮಂತೋತ್ಸವವನ್ನು ಆಯೋಜಿಸಲಾಗಿತ್ತು.

ಸಾಮೂಹಿಕ ಹನುಮಾನ್ ಚಾಲೀಸ ಪಠಣ, ಗೋ ಪೂಜೆ, ಹಿಂದೂ ರಾಷ್ಟ ಮತ್ತು ವಸುದೈವ ಕುಟುಂಬಕಂ ಸಂಕಲ್ಪದೊಂದಿಗೆ ಶ್ರೀ ಚಿನ್ಮಯಾನಂದ ಸರಸ್ವತಿ ಸ್ವಾಮೀಜಿ, ವಕೀಲ ಕೇಶವಮೂರ್ತಿ ಪುಷ್ಪಾರ್ಚನೆ ಮಾಡುವ ಮೂಲಕ ಶ್ರೀರಾಮ ಲಕ್ಷ್ಮಣ ಸೀತಾಸಹಿತ ಮತ್ತು ಆಂಜನೇಯಸ್ವಾಮಿ ಭವ್ಯ ವಿಗ್ರಹವನ್ನು ಬಡಾವಣೆ ಮುಖ್ಯ ರಸ್ತೆಗಳಲ್ಲಿ ಅದ್ದೂರಿ ಮೆರವಣಿಗೆ ಜರುಗಿತು.

ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ. ದೇವೇಗೌಡ ಮತ್ತು ಬಿಜೆಪಿ ಮುಖಂಡ ಕವೀಶ್‌ಗೌಡ ಆಂಜನೇಯಸ್ವಾಮಿಗೆ ಪುಷ್ಪಾರ್ಚನೆ ಮಾಡಿದರು. ಬಡಾವಣೆ ಸದ್ಭಕ್ತ ನಿವಾಸಿಗಳು, ರಾಷ್ಟ್ರೀಯವಾದಿ ಯುವಾ ಬಳಗ, ಹನುಮಂತೋತ್ಸವ ಸಮಿತಿ ಮತ್ತು ಶ್ರೀ ವರಸಿದ್ಧಿ ವಿನಾಯಕ ಸೇವಾ ಸಮಿತಿ ಕಾರ್ಯಕರ್ತರು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಪದಾಧಿಕಾರಿಗಳು ಈ ವೇಳೆ ಉಪಸ್ಥಿತರಿದ್ದರು.



ಹನುಮ ಜಯಂತಿ ಮತ್ತು ಶ್ರೀರಾಮಲಲ್ಲಾ ಸ್ಥಾಪನ ವಾರ್ಷಿಕೋತ್ಸವದ ಅಂಗವಾಗಿ ಮೈಸೂರಿನ ಶ್ರೀನಗರದ ಬಡಾವಣೆಯಲ್ಲಿ ಆಯೋಜಿಸಿದ್ದ ಶ್ರೀ ಹನುಮಂತೋತ್ಸವ ಮೆರವಣಿಗೆಯಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಭಾಗವಹಿಸಿದ್ದರು.

ಜ.24, ರಾಜ್ಯಾದ್ಯಂತ 'ರುದ್ರ ಗರುಡ ಪುರಾಣ' ಚಿತ್ರ ಬಿಡುಗಡೆ

ಮೈಸೂರು, ಜ.21(ಜಿಎ)–'ರುದ್ರ ಗರುಡ ಪುರಾಣ' ಚಲನಚಿತ್ರ ಜ.24ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ. ಈಗಾಗಲೇ ಬಿಡುಗಡೆ ಮಾಡಿರುವ ಟೀಸರ್, ಟ್ರೈಲರ್‌ಗಳಿಗೆ ಉತ್ತಮ ಸ್ಪಂದನೆ ದೊರೆತಿದ್ದು, ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ನಿರೀಕ್ಷಣೆಯಲ್ಲಿದ್ದೇವೆ ಎಂದು ನಿರ್ದೇಶಕ ನಂದೀಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ತಮ್ಮ ಎರಡನೇ ಚಿತ್ರವಾಗಿದೆ. ಗರುಡ ಪುರಾಣದ ಅನೇಕ ಅಂಶ ಇದು ಒಳಗೊಂಡಿದೆ. ಕನ್ನಡ ಚಿತ್ರಗಳು ಉಳಿಯಬೇಕೆಂದರೆ ಪ್ರೇಕ್ಷಕರು ಚಿತ್ರ ಮಂದಿರಕ್ಕೆ ಬಂದು ಚಿತ್ರ ವೀಕ್ಷಿಸಬೇಕು. ಚಿತ್ರಮಂದಿರಗಳ ಸಂಖ್ಯೆ ಕಡಿಮೆ ಆಗುತ್ತಿದ್ದರೂ ಮಲ್ಟಿಪ್ಲೆಕ್ಸ್‌ಗಳ ಸಂಖ್ಯೆ ಹೆಚ್ಚುತ್ತಿರುವುದು ಹಾಗೂ ಪ್ರೇಕ್ಷಕರ ಸಂಖ್ಯೆ ಕಡಿಮೆ ಆಗದಿರುವುದು ಸ್ವಾಗತಾರ್ಹ ಎಂದರು.

ಚಿತ್ರನಟ ರಿಷಿ ಮಾತನಾಡಿ, ಇದೊಂದು ಆಕ್ಷನ್, ಥ್ರಿಲ್ಲರ್ ಚಿತ್ರವಾಗಿದ್ದು, ಜಗತ್ತಿನ ಆಗು ಹೋಗುಗಳ ಸುತ್ತ ಸಾಗುತ್ತದೆ ಎಂದರು.

ಬಳಿಕ, ನಾಯಕಿ ನಟಿ ಪ್ರಿಯಾಂಕಾ ಕುಮಾರ್ ಮಾತನಾಡಿ, ತಾವು ಶಿವಮೊಗ್ಗದಲ್ಲಿ ಜನಸಿದ್ದರೂ ಮೈಸೂರಿನಲ್ಲಿಯೇ ಓದಿದ್ದು, ಮೈಸೂರಿನ ಹುಡುಗಿ. ಈ ಚಿತ್ರದ ಬಗ್ಗೆ ಸಾಕಷ್ಟು ನಿರೀಕ್ಷೆ ಇರಿಸಿ ಕೊಂಡಿದ್ದು, ಪ್ರೇಕ್ಷಕರು ಪ್ರೋತ್ಸಾಹಿಸಬೇಕೆಂದರು. ಸುದ್ದಿಗೋಷ್ಠಿಯಲ್ಲಿ ನಿರ್ಮಾಪಕ ಲೋಹಿತ್, ಆಕರ್ಷ್ ಉಪಸ್ಥಿತರಿದ್ದರು.

ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ

ಮೈಸೂರು, ಜ.21–ಜನವರಿ 22, 23, 24, 28, 29 ಮತ್ತು 30ರಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಜಂಟಿ ಪ್ರವೇಶ ಪರೀಕ್ಷೆ (JEE main)ನಡೆಯಲಿದ್ದು, ಸದರಿ ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಭಾರತೀಯ ಸುರಕ್ಷಾ ಸಂಹಿತೆ 2023 ಸೆಕ್ಷನ್ 163 ರೀತ್ಯ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳು: ION Digital Zone, IDZ hebbal jyothirgamaya Mansion, 299/D, Hebbal Industrial Area, Opp Bharath Cancer Hosptial, mysuru ಹಾಗೂ Chandana resources center, Sathagalli KSRTC bus stand cpmlex, 3rd Floor, Mahadevapura main road ಉದಯಗಿರಿಯಲ್ಲಿ ಪರೀಕ್ಷೆ ನಡೆಯುವುದು ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ಆಯುರ್ವೇದ ತಪಾಸಣಾ ಶಿಬಿರ

ಮೈಸೂರು,ಜ.21–ಮೈಸೂರಿನ ಜಯನಗರದ ಶ್ರೀರಾಮಮಂದಿರ ಟ್ರಸ್ಟ್, ಮೈಸೂರು ಅಯ್ಯರ್ ಅಸೋಸಿಯೇಷನ್, ಆಯುರ್ವೇದ ಅಕಾಡೆಮಿ ವತಿಯಿಂದ ಜ.26ರಂದು ಶ್ರೀರಾಮ ಮಂದಿರದಲ್ಲಿ ಉಚಿತ ಆಯುರ್ವೇದ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆವರೆಗೂ ನಡೆಯುವ ಶಿಬಿರದಲ್ಲಿ ಸಕ್ಕರೆ ಕಾಯಿಲೆ, ಮೈಗ್ರೇನ್, ಮಂಡಿನೋವು, ಅಧಿಕ ರಕ್ತದೊತ್ತಡ, ಮೂಲವ್ಯಾಧಿ, ಕೀಲು ನೋವು, ಆಸ್ತಮಾ, ಮುಟ್ಟಿನ ಸಮಸ್ಯೆ ಹಾಗೂ ಚರ್ಮದ ಸಮಸ್ಯೆ ಸೇರಿದಂತೆ ಮತ್ತಿತರ ಆರೋಗ್ಯ ಸಮಸ್ಯೆಗಳಿಗೆ ಉಚಿತವಾಗಿ ತಪಾಸಣೆ ಮಾಡಿ, ಔಷಧಿಗಳನ್ನು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗೆ 9480166072 ಸಂಪರ್ಕಿಸಿ ಎಂದು ಎಂದು ಟ್ರಸ್ಟ್ ಅಧ್ಯಕ್ಷ ಅರುಣ್ ಶರ್ಮಾ ತಿಳಿಸಿದ್ದಾರೆ.

ಪಿಂಚಣಿ, ಗ್ರಾಚ್ಯುಟಿಗಾಗಿ ಅರ್ಜಿ ಸಲ್ಲಿಸಿ; ನಿವೃತ್ತ ಪೊಲೀಸ್ ಅಧಿಕಾರಿಗಳಿಗೆ ಸೂಚನೆ

ಬೆಂಗಳೂರು: ಪಿಂಚಣಿ, ಗ್ರಾಚ್ಯುಟಿ ಇತ್ಯಾದಿಗಳಿಗೆ ಅರ್ಜಿ ಸಲ್ಲಿಸುವಂತೆ ಹಿರಿಯ ಭಾರತೀಯ ಪೊಲೀಸ್ ಸೇವೆ ಅಧಿಕಾರಿ ಮತ್ತು ಜೈಲು ಹಾಗೂ ತಿದ್ದುಪಡಿ ಸೇವೆಗಳ ಪೊಲೀಸ್ ಮಹಾನಿರ್ದೇಶಕಿ (ಡಿಜಿಪಿ) ಮಾಲಿನಿ ಕೃಷ್ಣಮೂರ್ತಿ, ಬಳ್ಳಾರಿಯ ಪೊಲೀಸ್ ಮಹಾ ನಿರೀಕ್ಷಕ (ಐಜಿಪಿ) ಬಿ.ಎಸ್. ಲೋಕೇಶ್ ಕುಮಾರ್ ಅವರಿಗೆ ಸರ್ಕಾರ ಹೊರಡಿಸಿರುವ ಅಧಿಸೂಚನೆಯು ರಾಜ್ಯದ ಐಪಿಎಸ್ ಕೇಡರ್‌ನಲ್ಲಿ ಗೊಂದಲ ಸೃಷ್ಟಿಸಿದೆ.

ಪೊಲೀಸ್ ಪಡೆ ಮುಖ್ಯಸ್ಥ (ಎಚ್‌ಒಪಿಎಫ್), ಪೊಲೀಸ್ ಮಹಾನಿರ್ದೇಶಕ (ಡಿಜಿ ಮತ್ತು ಐಜಿಪಿ) ಅಲೋಕ್ ಮೋಹನ್ ಸೇರಿದಂತೆ ಮೂವರು ಐಪಿಎಸ್ ಅಧಿಕಾರಿಗಳು ಈ ವರ್ಷ ನಿವೃತ್ತರಾಗಲಿದ್ದಾರೆ. ಆದರೆ ಜುಲೈ 10, 2024ರಂದು ಹೊರಡಿಸಲಾದ ಡಿಪಿಎಆರ್ ಅಧಿಸೂಚನೆಯನ್ನು ಈ ಇಬ್ಬರು ಐಪಿಎಸ್ ಅಧಿಕಾರಿಗಳಿಗೆ ಮಾತ್ರ ಏಕೆ ನೀಡಲಾಗಿದೆ ಎಂದು ಮೂಲಗಳು ಪ್ರಶ್ನಿಸಿವೆ. ಪ್ರವೀಣ್ ಸೂದ್ ಅವರನ್ನು ಸಿಬಿಐ ನಿರ್ದೇಶಕರನ್ನಾಗಿ ನೇಮಿಸಿದ ನಂತರ ಮೇ 2023 ರಲ್ಲಿ ಅಲೋಕ್ ಮೋಹನ್ ಅವರನ್ನು ಡಿಜಿ ಮತ್ತು ಐಜಿಪಿಯಾಗಿ ನೇಮಿಸಲಾಯಿತು. 2023ರ ಆಗಸ್ಟ್‌ನಲ್ಲಿ ಅವರ ನೇಮಕಾತಿಯನ್ನು ಕ್ರಮಬದ್ಧಗೊಳಿಸಲಾಯಿತು. 1987ರ ಬ್ಯಾಚ್‌ನ ಅಲೋಕ್ ಮೋಹನ್, 1993ರ ಬ್ಯಾಚ್‌ನ ಮಾಲಿನಿ ಕೃಷ್ಣಮೂರ್ತಿ ಮತ್ತು 2005ರ ಬ್ಯಾಚ್‌ನ ಲೋಕೇಶ್ ಕುಮಾರ್ ಈ ವರ್ಷ ನಿವೃತ್ತರಾಗುತ್ತಿದ್ದಾರೆ. ನಾಗರಿಕ ಪಟ್ಟಿಯ ಪ್ರಕಾರ, ಮೋಹನ್ ಮತ್ತು ಕುಮಾರ್ ಏಪ್ರಿಲ್ 30ರಂದು ಮತ್ತು ಕೃಷ್ಣಮೂರ್ತಿ ಜುಲೈ 31 ರಂದು ನಿವೃತ್ತರಾಗಲಿದ್ದಾರೆ.

1958ರ ಅಖಿಲ ಭಾರತ ಸೇವಾ ನಿಯಮಗಳ ಪ್ರಕಾರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಮುಂದಿನ ವರ್ಷ ನಿವೃತ್ತರಾಗುವ ಕ್ಲಾಸ್ ಒನ್ ಅಧಿಕಾರಿಗಳಿಗೆ ನಿವೃತ್ತಿ ದಿನಾಂಕಕ್ಕೆ ಆರು ತಿಂಗಳ ಮೊದಲು ಪಿಂಚಣಿ, ಗ್ರಾಚ್ಯುಟಿ, ಮ್ಯುಟೇಶನ್, ಗುಂಪು ವಿಮೆ ಮತ್ತು ಇತರ ಪ್ರಯೋಜನಗಳಿಗಾಗಿ ಅರ್ಜಿಗಳನ್ನು DPARಗೆ ಸಲ್ಲಿಸಲು ಸುಮಾರು ಒಂದು ವರ್ಷ ಮುಂಚಿತವಾಗಿ ಅಧಿಸೂಚನೆಯನ್ನು ಹೊರಡಿಸುತ್ತದೆ. ಏಕೆಂದರೆ ಸೂಕ್ತ ಸಮಯದಲ್ಲಿ ಪಿಂಚಣಿದಾರರ ಪ್ರಯೋಜನಗಳನ್ನು ಪಡೆಯಲು ಇಲಾಖೆಯು ಕರ್ನಾಟಕದ ಪ್ರಧಾನ ಲೆಕ್ಕಪತ್ರ ಜನರಲ್‌ಗೆ ನೋ ಡ್ಯೂ (No Dues Certificate) ಕೊಡಲು ಅನುವು ಮಾಡಿಕೊಡುತ್ತದೆ ಎಂದು ಹೇಳಲಾಗಿದೆ.


ಪಿಎಚ್.ಡಿ. ಪದವಿ

ಮೈಸೂರು,ಜ.21–ಡಾ.ಜೆ.ಎಸ್. ಆಶಾದೇವಿ ಅವರ ಮಾರ್ಗದರ್ಶನದಲ್ಲಿ ಎಸ್.ಸ್ನೇಹಾ ಜೆನೆಟಿಕ್ಸ್ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿ.ಎಚ್.ಡಿ ಪದವಿಗೆ ಅಂಗೀಕರಿಸಿದೆ.



ದೇಶ - ವಿದೇಶ

ಎರಡನೇ ಅವಧಿಗೆ ಟ್ರಂಪ್: ದಾಖಲೆ ರಹಿತ 7.25 ಲಕ್ಷ ಭಾರತೀಯರ ಭವಿಷ್ಯ ಅತಂತ್ರ



ವಾಷಿಂಗ್ಟನ್: ಡೊನಾಲ್ಡ್ ಟ್ರಂಪ್ ಅವರು ಎರಡನೇ ಅವಧಿಗೆ ಶ್ವೇತಭವನಕ್ಕೆ ಮರಳುತ್ತಿದ್ದಂತೆ ಸುಮಾರು 7,25,000 ಭಾರತೀಯರು ಸೇರಿದಂತೆ ಅಮೆರಿಕದಲ್ಲಿ ನೆಲೆಸಿರುವ ಲಕ್ಷಾಂತರ ದಾಖಲೆರಹಿತ ವಲಸಿಗರ ಭವಿಷ್ಯ ಅತಂತ್ರವಾಗಿದೆ. ಅಕ್ರಮ ವಲಸೆ ಸಂಬಂಧ ಕಠಿಣ ಕ್ರಮ ತೆಗೆದುಕೊಳ್ಳುವುದಾಗಿ ಚುನಾವಣಾ ಪ್ರಚಾರದ ವೇಳೆ ಟ್ರಂಪ್ ಭರವಸೆ ನೀಡಿದ್ದರು. ಪ್ರಮಾಣ ವಚನ ಸ್ವೀಕರಿಸಿದ ನಂತರ ಉದ್ಘಾಟನಾ ಭಾಷಣದಲ್ಲಿಯೂ ಟ್ರಂಪ್ ಇದನ್ನು ಪುನರುಚ್ಚರಿಸಿದ್ದಾರೆ.

ಅಕ್ರಮ ವಲಸೆಯನ್ನು ನಿಲ್ಲಿಸುವುದು ನಮ್ಮ ಮೊದಲ ಜವಾಬ್ದಾರಿಯಾಗಿದೆ. ಇದಕ್ಕಾಗಿ ನಾವು ಆಕ್ರಮಿಸುವುದಿಲ್ಲ, ಅತಿಕ್ರಮಿಸುವುದಿಲ್ಲ, ವಶಪಡಿಸಿಕೊಳ್ಳುವುದೂ ಇಲ್ಲ. ನಾವು ಮತ್ತೊಮ್ಮೆ ಸ್ವತಂತ್ರ ಮತ್ತು ಹೆಮ್ಮೆಯ ರಾಷ್ಟ್ರವನ್ನು ಕಟ್ಟುತ್ತೇವೆ. ಇದು ಪ್ರಮಾಣವಚನ ಸ್ವೀಕರಿಸಿದ ಮರುದಿನದಿಂದಲೇ ಪ್ರಾರಂಭವಾಗುತ್ತದೆ ಎಂದು ಶಪಥ ಮಾಡಿದ್ದಾರೆ. ನಮ್ಮ ಗಡಿಗಳನ್ನು ಪುನಃಸ್ಥಾಪಿಸಲು ಇದು ಸೂಕ್ತ ಸಮಯ ಎಂದಿದ್ದಾರೆ. ಮೆಕ್ಸಿಕೋ (40 ಲಕ್ಷ) ಮತ್ತು ಎಲ್ ಸಾಲ್ವಡಾರ್(7.50 ಲಕ್ಷ) ನಂತರ ಅಮೆರಿಕದಲ್ಲಿ ದಾಖಲೆಗಳಿಲ್ಲದೇ ವಾಸಿಸುತ್ತಿರುವ 3ನೇ ಅತಿದೊಡ್ಡ ಸಮೂಹ ಭಾರತೀಯರದ್ದು(7.25 ಲಕ್ಷ) ಎಂದು ವರದಿ ತಿಳಿಸಿದೆ.

ಗರಿಯಾಬಂದ್‌ನಲ್ಲಿ ಭಾರಿ ಎನ್‌ಕೌಂಟರ್: 14 ನಕ್ಸಲರ ಹತ್ಯೆ

ಭುವನೇಶ್ವರ್: ಛತ್ತೀಸ್‌ಗಢದ ಗರಿಯಾಬಂದ್ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ಮಂಗಳವಾರ ನಡೆಸಿದ ಎನ್ ಕೌಂಟರ್‌ನಲ್ಲಿ ಕನಿಷ್ಠ 14 ನಕ್ಸಲರು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.




ಸೋಮವಾರ ಕೂಡ ಕಾರ್ಯಾಚರಣೆ ನಡೆದು ಇಬ್ಬರು ಮಹಿಳಾ ನಕ್ಸಲರನ್ನು ಹತ್ಯೆ ಮಾಡಲಾಗಿತ್ತು. ಒಬ್ಬ ಕೋಬ್ರಾ ಜವಾನ್ ಗಾಯಗೊಂಡಿದ್ದರು.

ಛತ್ತೀಸ್‌ಗಢ–ಒಡಿಶಾ ಗಡಿಯಲ್ಲಿರುವ ಮೈನ್‌ಪುರ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಸೋಮವಾರ ತಡರಾತ್ರಿ ಮತ್ತು ಮಂಗಳವಾರ ಮುಂಜಾನೆ ಗುಂಡಿನ ಚಕಮಕಿ ನಡೆದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಜಿಲ್ಲಾ ಮೀಸಲು ಗಾರ್ಡ್ (ಡಿಆರ್‌ಜಿ), ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್), ಛತ್ತೀಸ್‌ಗಢದ ಕೋಬ್ರಾ ಮತ್ತು ಒಡಿಶಾದ ವಿಶೇಷ ಕಾರ್ಯಾಚರಣೆ ಗುಂಪು (ಎಸ್‌ಒಜಿ) ಯ ಭದ್ರತಾ ಸಿಬ್ಬಂದಿ ಜಂಟಿಯಾಗಿ ಕಾರ್ಯಾಚರಣೆ ನಡೆಸಿದ್ದಾರೆ. ಒಟ್ಟು 10 ತಂಡಗಳು ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದವು.

ಟರ್ಕಿ: ರೆಸಾರ್ಟ್ ಹೋಟೆಲ್‌ನಲ್ಲಿ ಅಗ್ನಿ ಅವಘಡ; 66 ಮಂದಿ ಸಾವು

ಅಂಕರ(ಟರ್ಕಿ): ಟರ್ಕಿಯ ಸ್ಕೈ ರೆಸಾರ್ಟ್ ಹೋಟೆಲ್‌ನಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, 66 ಮಂದಿ ಮೃತಪಟ್ಟು, 45ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಬೆಳಗಿನ ಜಾವ 3.27ರ ಸುಮಾರಿಗೆ ಬೊಲು ಪ್ರಾಂತ್ಯದ ಕಾರ್ತಲ್ಕ್ಯ ರೆಸಾರ್ಟ್‌ನ ಹೋಟೆಲ್‌ವೊಂದರಲ್ಲಿ ಈ ಅವಘಡ ಸಂಭವಿಸಿದೆ ಎಂದು ಎಂದು ಆಂತರಿಕ ಸಚಿವ ಅಲಿ ಯೆರ್ಲಿಕಾಯಾ ತಿಳಿಸಿದ್ದಾರೆ. ದುರದೃಷ್ಟವಶಾತ್ ಮೃತರ ಸಂಖ್ಯೆ 66ಕ್ಕೆ ಏರಿಕೆಯಾಗಿದೆ. ಗಾಯಾಳುಗಳ ಸಂಖ್ಯೆ 45 ಆಗಿದೆ. ಮೃತರ ಆತ್ಮಕ್ಕೆ ದೇವರು ಶಾಂತಿ ನೀಡಲಿ ಮತ್ತು ಗಾಯಾಳುಗಳು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುವುದಾಗಿ ಅವರು ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.



267 ಮಂದಿ ತುರ್ತು ರಕ್ಷಣಾ ಕಾರ್ಯಾಚರಣಾದಲ್ಲಿ ನಿರತರಾಗಿದ್ದಾರೆ. ಈ ರೆಸಾರ್ಟ್ ಚಳಿಗಾಲದಲ್ಲಿ ಪ್ರವಾಸಿಗರ ಅತ್ಯಂತ ನೆಚ್ಚಿನ ಸ್ಥಳವಾಗಿದೆ. ಅದರಲ್ಲೂ ಶಾಲಾ ರಜಾದಿನಗಳಲ್ಲಿ (ಜನವರಿ, ಫೆಬ್ರುವರಿ) ಹಾಲಿಡೇ ಕಳೆಯಲು ಅಚ್ಚುಮೆಚ್ಚಿನ ಸ್ಥಳವಾಗಿದೆ. ಹೋಟೆಲ್‌ನಲ್ಲಿ ಸುಮಾರು 234 ಅತಿಥಿಗಳು ತಂಗಿದ್ದರು. ಆತಂಕದಲ್ಲಿ ಕಟ್ಟಡದಿಂದ ಜಿಗಿದ ಇಬ್ಬರು ಅಸುನೀಗಿದ್ದಾರೆ ಎಂದು ಬೊಲು ಗವರ್ನರ್ ಅಬ್ದುಲ್ ಅಜೀಜ್ ತಿಳಿಸಿದ್ದಾರೆ.

ಪುಷ್ಪ–2, ಗೇಮ್ ಚೇಂಜರ್' ನಿರ್ಮಾಪಕರ ನಿವಾಸ, ಕಚೇರಿ ಮೇಲೆ ಐಟಿ ರೇಡ್

ಹೈದರಾಬಾದ್: ಟಾಲಿವುಡ್‌ನ ನಿರ್ಮಾಪಕ, ವಿತರಕ ದಿಲ್ ರಾಜು, 'ಪುಷ್ಪ–2 ನಿರ್ಮಾಪಕರ ಕಚೇರಿ ಹಾಗೂ ನಿವಾಸದ ಮೇಲೆ ಆದಾಯ ತೆರಿಗೆ ಅಧಿಕಾರಿಗಳು ಮಂಗಳವಾರ ಮುಂಜಾನೆ ದಾಳಿ ನಡೆಸಿದ್ದಾರೆ.



55 ತಂಡಗಳು ನಿರ್ಮಾಪಕ ದಿಲ್ ರಾಜು ಅವರ ನಿವಾಸ ಮತ್ತು ಜುಬಿಲಿ ಹಿಲ್ಸ್ ಮತ್ತು ಬಂಜಾರಾ ಹಿಲ್ಸ್‌ನಲ್ಲಿರುವ ಮ್ಯಾಂಗೋ ಆಫೀಸ್ ಸೇರಿದಂತೆ ವಿವಿಧೆಡೆ ದಾಳಿ ನಡೆಸಿ ಪರಿಶೀಲನೆ ನಡೆಸಿದೆ. ದಿಲ್ ರಾಜು ಅವರ ಪಾಲುದಾರ ಸಹೋದರ ಶಿರೀಶ್, ಪುತ್ರಿ ಹಂಶಿತಾ ರೆಡ್ಡಿ ಮತ್ತು ಸಂಬಂಧಿಕರ ನಿವಾಸ ಮೇಲೂ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ ಎಂದು ವರದಿ ತಿಳಿಸಿದೆ. ಇತ್ತೀಚೆಗೆ ಪುಷ್ಪ–2 ಸಿನಿಮಾವನ್ನು ನಿರ್ಮಾಣ ಮಾಡಿರುವ ಟಾಲಿವುಡ್ ದೈತ್ಯ ನಿರ್ಮಾಣ ಸಂಸ್ಥೆ ಮೈತ್ರಿ ಮೂವಿ ಮೇಕರ್ಸ್‌ನ ನವೀನ್ ಯೆರ್ನೇನಿ, ರವಿಶಂಕರ್ ಅವರ ನಿವಾಸ ಹಾಗೂ ಮೈತ್ರಿ ಮೂವಿ ಮೇಕರ್ಸ್ ಕಚೇರಿಗಳ ಮೇಲೆ ದಾಳಿ ನಡೆಸಿದೆ. ದಿಲ್ ರಾಜು ಇತ್ತೀಚೆಗೆ ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್, ಬ್ಯಾನರ್ ಅಡಿಯಲ್ಲಿ ಗೇಮ್ ಚೇಂಜರ್ ಹಾಗೂ ಸಂಕ್ರಾಂತಿ ಕಿ ವಸ್ತುನ್ನಾಮ್ ಸಿನಿಮಾವನ್ನು ನಿರ್ಮಾಣ ಮಾಡಿದ್ದರು.

WHOನಿಂದ ಅಮೆರಿಕ ನಿರ್ಗಮನ: ಆದೇಶಕ್ಕೆ ಡೊನಾಲ್ಡ್ ಟ್ರಂಪ್ ಅಂಕಿತ

ನ್ಯೂಯಾರ್ಕ್: ವಿಶ್ವ ಆರೋಗ್ಯ ಸಂಸ್ಥೆಯಿಂದ ಅಮೆರಿಕ ದೇಶ ಹೊರ ಬರುವ ಆದೇಶಕ್ಕೆ ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಂಕಿತ ಹಾಕಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆಯು COVID–19 ಸಾಂಕ್ರಾಮಿಕ ರೋಗ ಮತ್ತು ಇತರ ಅಂತಾರಾಷ್ಟ್ರೀಯ ಆರೋಗ್ಯ ಬಿಕ್ಕಟ್ಟುಗಳನ್ನು ನಿರ್ವಹಿಸುವಲ್ಲಿ ವಿಫಲವಾಗಿದೆ ಎಂದು ಅಮೆರಿಕದ 47ನೇ ಅಧ್ಯಕ್ಷರಾಗಿ ಪದಗ್ರಹಣದ ಬೆನ್ನಲ್ಲೇ ಡೊನಾಲ್ಡ್ ಟ್ರಂಪ್ ಹೇಳಿದ್ದರು. ಅಮೆರಿಕವು ವಿಶ್ವ ಆರೋಗ್ಯ ಸಂಸ್ಥೆಯಿಂದ ಹೊರಬರಲಿದೆ ಎಂದು ಘೋಷಿಸಿದ್ದರು. ಸದಸ್ಯ ರಾಷ್ಟ್ರಗಳ ರಾಜಕೀಯ ಪ್ರಭಾವದಿಂದ WHO ಸ್ವತಂತ್ರವಾಗಿ ಕಾರ್ಯನಿರ್ವಹಿಸಲು ವಿಫಲವಾಗಿದೆ. ಅಮೆರಿಕವು ವಿಶ್ವ ಆರೋಗ್ಯ ಸಂಸ್ಥೆಯಿಂದ ಅಧಿಕೃತವಾಗಿ ನಿರ್ಗಮಿಸುತ್ತದೆ. ಡಬ್ಲ್ಯುಎಚ್‌ಒ ನಮ್ಮನ್ನು ಅಳಿಸಿ ಹಾಕಲು ನೋಡಿತು, ಎಲ್ಲರೂ ನಮ್ಮನ್ನು ತುಳಿಯಲು ನೋಡಿದರು, ಆದರೆ ಇದು ಇನ್ನು ಮುಂದೆ ನಡೆಯುವುದಿಲ್ಲ ಎಂದು ಹೇಳಿದ್ದಾರೆ. ವಿಶ್ವಸಂಸ್ಥೆಗೆ ಚೀನಾಕ್ಕಿಂತ ಹೆಚ್ಚಿನ ಹಣವನ್ನು ಅಮೆರಿಕ ಪಾವತಿಸುತ್ತಿತ್ತು. ಬಿಡೆನ್ ಆಡಳಿತದ ಅವಧಿಯಲ್ಲಿ ಅಮೆರಿಕವು WHOಗೆ ಅತಿದೊಡ್ಡ ನಿಧಿ ನೀಡುವ ದೇಶವಾಗಿ ಮುಂದುವರಿದಿತ್ತು. ಅಮೆರಿಕವು ಡಬ್ಲ್ಯುಎಚ್‌ಒಗೆ ಅತಿದೊಡ್ಡ ಆರ್ಥಿಕ ಬೆಂಬಲವಾಗಿತ್ತು. ಡಬ್ಲ್ಯುಎಚ್‌ಒನ ಒಟ್ಟು ನಿಧಿಯ ಶೇ.18ರಷ್ಟು ಕೊಡುಗೆಯನ್ನು ಅಮೆರಿಕ ನೀಡುತ್ತಿತ್ತು.

ಕುಶಾಲನಗರದಲ್ಲಿ ಸಿದ್ಧಗಂಗಾ ಶ್ರೀಗಳ ಪುಣ್ಯಸ್ಮರಣೆ

ದಾಸೋಹ ದಿನಾಚರಣೆಯಲ್ಲಿ ಶರಣ ಸಾಹಿತ್ಯ ಪರಿಷತ್‌ನಿಂದ ಕಾಯಕಶ್ರೀ ಪ್ರಶಸ್ತಿ ಪ್ರದಾನ



ಕುಶಾಲನಗರದ ಸೋಮೇಶ್ವರ ದೇವಾಲಯದಲ್ಲಿ ನಡೆದ ಸಿದ್ಧಗಂಗಾ ಶ್ರೀಗಳ ಸ್ಮರಣೆ ಕಾರ್ಯಕ್ರಮದಲ್ಲಿ ಕೃಷಿಕ ಜೆಮ್ಸಿ ಪೊನ್ನಪ್ಪ, ನಿವೃತ್ತ ಕಂದಾಯಾಧಿಕಾರಿ ಎಂ.ಬಿ.ಬಸವರಾಜು, ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷೆ ನೇತ್ರಾವತಿ ಅವರಿಗೆ ಕಾಯಕಶ್ರೀ ಪ್ರಶಸ್ತಿ ನೀಡಲಾಯಿತು.

ಕುಶಾಲನಗರ, ಜ.21–ನಡೆದಾಡುವ ದೇವರೆಂದೇ ಭಕ್ತವಲಯದಲ್ಲಿ ಹೆಸರಾಗಿದ್ದ ಸಿದ್ಧಗಂಗಾ ಮಠದ ಡಾ.ಶ್ರೀ ಶಿವಕುಮಾರಸ್ವಾಮೀಜಿ ಅವರ 6ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಪಟ್ಟಣದಲ್ಲಿ ಮಂಗಳವಾರ ದಾಸೋಹ ದಿನವಾಗಿ ಆಚರಿಸಲಾಯಿತು.

ಪಟ್ಟಣದ ಸೋಮೇಶ್ವರ ದೇವಾಲಯದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ವತಿಯಿಂದ ನಡೆದ ಶ್ರೀಗಳ ಸ್ಮರಣೆ ಅಂಗವಾಗಿ ಕುಶಾಲನಗರದ ಕಾಫಿ ಕೃಷಿಕ ಜೆಮ್ಸಿ ಪೊನ್ನಪ್ಪ, ನಿವೃತ್ತ ಕಂದಾಯಾಧಿಕಾರಿ ಎಂ.ಬಿ. ಬಸವರಾಜು ಹಾಗೂ ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷೆ ನೇತ್ರಾವತಿ ಅವರಿಗೆ ಕಾಯಕಶ್ರೀ ಪ್ರಶಸ್ತಿ ನೀಡಲಾಯಿತು.

ಈ ಸಂದರ್ಭ ಮಾತನಾಡಿದ ಕಾಫಿ ಬೆಳೆಗಾರ ಜೆಮ್ಸಿ ಪೊನ್ನಪ್ಪ, ಸಿದ್ಧಗಂಗಾ ಮಠದಲ್ಲಿ ಅನ್ನ, ಆಶ್ರಯ ಪಡೆದವರು ಧನ್ಯರು. ಜಾತಿ ಮತಗಳ ಬೇಧವೆಣಿಸದೇ ಎಲ್ಲಾ ಧರ್ಮಗಳ ಬಡ ಮಕ್ಕಳಿಗೆ ತ್ರಿವಿಧ ದಾಸೋಹದ ಕಾಯಕ ಮಾಡಿದ ಶಿವಕುಮಾರಸ್ವಾಮೀಜಿ ಭೂಮಿ ಇರುವ ತನಕ ಸ್ಮರಣೀಯರು ಎಂದರು. ಕುಶಾಲನಗರ ಗಣಪತಿ ದೇವಾಲಯ ಅಭಿವೃದ್ಧಿ ಸಮಿತಿ ಅಧ್ಯಕ್ಷ ಎಂ.ಕೆ.ದಿನೇಶ್ ಮಾತನಾಡಿ, ಡಾ. ಶಿವಕುಮಾರಸ್ವಾಮೀಜಿ ಇಡೀ ನಾಡು ಕಂಡ ಶ್ರೇಷ್ಠ ಸಂತ. ಇಡೀ ನಾಡು ಬರಗಾಲಕ್ಕೆ ತುತ್ತಾಗಿ ತತ್ತರಿಸಿದ ಸಂದರ್ಭ ಜೋಳಿಗೆ ಹಿಡಿದು ಭಿಕ್ಷೆ ಬೇಡಿ ಬಡ ಮಕ್ಕಳನ್ನು ಪೋಷಿಸಿ ವಿದ್ಯೆ ನೀಡಿ ಅವರ ಬದುಕಿಗೆ ಬೆಳಕಾದ ಮಹಾ ಮಹಿಮ ಎಂದು ಸ್ಮರಿಸಿದರು.

ಶಿಕ್ಷಕ ಹುಲುಸೆ ಬಸವರಾಜು ಶ್ರೀ ಶಿವಕುಮಾರಸ್ವಾಮೀಜಿ ಹಾಗೂ ಸಿದ್ಧಗಂಗಾ ಕ್ಷೇತ್ರದ ಕುರಿತು ಮಾತನಾಡಿದರು. ಬಸವನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಂಗೀತಾ ಶಿಕ್ಷಕ ಪುಟ್ಟರಾಜು ಹಾಗೂ ಅಕ್ಕನ ಬಳಗದ ಸದಸ್ಯರು ವಚನ ಗಾಯನ ಮಾಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಮೂರ್ತಿ, ಕಾರ್ಯದರ್ಶಿ ಬಿ.ನಟರಾಜು, ಕೋಶಾಧಿಕಾರಿ ಪರಮೇಶ್, ವೀರಶೈವ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ದೀಪಿಕಾ ಕರುಣ, ಕಾರ್ಯದರ್ಶಿ ಮಮತಾ ರವೀಶ್, ಕುಶಾಲನಗರ ತಾಲೂಕು ವೀರಶೈವ ಸಮಾಜದ ಅಧ್ಯಕ್ಷ ಮಧುಸೂದನ್, ವಿವೇಕಾನಂದ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎನ್.ಎನ್.ಶಂಭುಲಿಂಗಪ್ಪ, ಬಸವೇಶ್ವರ ದೇವಾಲಯ ಸಮಿತಿ ಅಧ್ಯಕ್ಷ ನಂದೀಶ್, ಕೂಡಿಗೆ ಸರ್ಕಾರಿ ಆಸ್ಪತ್ರೆ ವೈದ್ಯಾಧಿಕಾರಿ ಡಾ.ದೀಪಿಕಾ ಮೂರ್ತಿ, ಕದಳಿ ವೇದಿಕೆ ಕುಶಾಲನಗರ ತಾಲೂಕು ಅಧ್ಯಕ್ಷೆ ಹೇಮಲತಾ, ಗೌರವಾಧ್ಯಕ್ಷೆ ವಿಜಯಾ ಪಾಲಾಕ್ಷ, ಕೋಶಾಧಿಕಾರಿ ವೇದಾವತಿ, ಮಾಜಿ ಅಧ್ಯಕ್ಷೆ ಲೇಖನಾ ಧರ್ಮೇಂದ್ರ, ಸುಶೀಲಾ ಪುಟ್ಟರಾಜು, ಸರೋಜ ಆರಾಧ್ಯ, ಪುರಸಭೆ ಸದಸ್ಯ ಎಂ.ಬಿ.ಸುರೇಶ್, ಗುಮ್ಮನಕೊಲ್ಲಿ ಲೋಕೇಶ್, ಜಿಲ್ಲಾ ಫೋಟೋಗ್ರಾಫರ್ಸ್ ಸಂಘದ ಅಧ್ಯಕ್ಷ ಆವರ್ತಿ ಮಹದೇವಪ್ಪ, ನಿವೃತ್ತ ಶಿಕ್ಷಕ ಗಣೇಶ್, ಶಿರದನಹಳ್ಳಿ ಮಹದೇವಪ್ಪ, ಕೊಡಗರಹಳ್ಳಿ ಪಿಡಿಓ ರವೀಶ್, ಮನುದೇವಿ ಮೊದಲಾದವರಿದ್ದರು.

ಗುಡ್ಡೆಹೊಸೂರು ವೃತ್ತದಲ್ಲಿ ದಾಸೋಹ ದಿನಾಚರಣೆ



ಗುಡ್ಡೆಹೊಸೂರು ಡಾ.ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಸಿದ್ಧಗಂಗಾ ಶ್ರೀಗಳ ಪುಣ್ಯಸ್ಮರಣೆ ಹಾಗೂ ದಾಸೋಹ ದಿನ ಆಚರಿಸಲಾಯಿತು.

ಕುಶಾಲನಗರ, ಜ.21–ಪಟ್ಟಣದ ರಾಷ್ಟ್ರೀಯ ಹೆದ್ದಾರಿಯ ಗುಡ್ಡೆಹೊಸೂರು ಡಾ.ಶಿವಕುಮಾರ ಸ್ವಾಮೀಜಿ ವೃತ್ತದಲ್ಲಿ ಶ್ರೀಗಳ ಪುಣ್ಯಸ್ಮರಣೆ ಹಾಗೂ ದಾಸೋಹ ಕಾರ್ಯಕ್ರಮ ನಡೆಯಿತು.

ವೃತ್ತದಲ್ಲಿ ವಿವಿಧ ಪುಷ್ಪಗಳಿಂದ ಅಲಂಕರಿಸಿ ಸಿದ್ಧಗಂಗಾ ಶ್ರೀಗಳ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭ ಗುಡ್ಡೆಹೊಸೂರು ವೀರಶೈವ ಸಮಾಜದ ಅಧ್ಯಕ್ಷ ಬಿ.ಸಿ.ಮಲ್ಲಿಕಾರ್ಜುನ ಮಾತನಾಡಿ, ಶಿವಕುಮಾರ ಸ್ವಾಮೀಜಿ ಇದ್ದಷ್ಟು ದಿನ ನಾಡು ಸುಭಿಕ್ಷವಾಗಿತ್ತು. ಎಲ್ಲರೂ ಶ್ರೀಗಳ ಆದರ್ಶಗಳನ್ನು ಪಾಲಿಸಬೇಕು ಎಂದರು.

ಶ್ರೀ ಸಿದ್ಧಗಂಗಾ ಭಕ್ತ ಮಂಡಳಿ ಅಧ್ಯಕ್ಷ ಕೆ.ಎಸ್. ಮೂರ್ತಿ ಮಾತನಾಡಿ, ಸಿದ್ಧಗಂಗಾ ಕ್ಷೇತ್ರ ಇಡೀ ನಾಡಿನ ಪರಮ ಪುಣ್ಯ ಕ್ಷೇತ್ರವಾಗಿದೆ. ಡಾ.ಶಿವಕುಮಾರ ಸ್ವಾಮೀಜಿ ಎಲ್ಲಾ ಕಾಲಕ್ಕೂ ಪ್ರಾತಃಸ್ಮರಣೀಯರಾಗಿ ಉಳಿಯಲಿದ್ದಾರೆ. ಶ್ರೀಗಳ ಹೆಸರಲ್ಲಿ ವೃತ್ತ ಮಾಡಲು ಸಹಕರಿಸಿದ ಎಲ್ಲರನ್ನೂ ಈ ಸಂದರ್ಭ ಸ್ಮರಿಸಿದರು.

ಗುಡ್ಡೆಹೊಸೂರು ಗ್ರಾಪಂ ಅಧ್ಯಕ್ಷ ಪ್ರವೀಣ್, ಪಿಡಿಓ ಸುಮೇಶ್, ಸದಸ್ಯರಾದ ಲಕ್ಷ್ಮಣ್, ನಾರಾಯಣ್, ಭಕ್ತ ಮಂಡಳಿ ಸಂಚಾಲಕ ಬಿ.ನಟರಾಜು, ಗುಡ್ಡೆಹೊಸೂರು ವೀರಶೈವ ಸಮಾಜದ ಕಾರ್ಯದರ್ಶಿ ದಾಕ್ಷಾಯಿಣಿ, ನಿರ್ದೇಶಕರಾದ ಶುಭ ಶೇಖರ್, ಕಾಶಿ, ಶೋಭಾ, ಕವಿತಾ, ವೈಶಾಲಿ, ಷಣ್ಮುಖಿ, ಬಿ.ಟಿ.ಪ್ರಸನ್ನ, ಸಾಗರ್, ನವೀನ್ ಮೊದಲಾದವರಿದ್ದರು. ಶಿರಂಗಾಲದ ಉಮಾ ಮಹೇಶ್ವರ ದೇವಾಲಯದ ಅರ್ಚಕ ಸಚಿನ್ ಪೂಜಾ ಕಾರ್ಯ ನಡೆಸಿಕೊಟ್ಟರು.

ಮಹಿಳೆ ಕೊಲೆಗೈದವನಿಗೆ ಜೀವಾವಧಿ ಶಿಕ್ಷೆ

ಮಡಿಕೇರಿ, ಜ.21–ಮಹಿಳೆ ಕೊಲೆಗೈದ ಅಪರಾಧಿಗೆ ಮಡಿಕೇರಿ 1ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಜೀವಾವಧಿ ಜೈಲು ಶಿಕ್ಷೆ ಮತ್ತು 25 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ.

ಸೋಮವಾರಪೇಟೆ ತಾಲೂಕಿನ ಮಾದಾಪುರದ ಟಿ.ಪಿ.ಪೂವಯ್ಯ ಅಲಿಯಾಸ್ ಬೊಳ್ಳು ಎಂಬಾತ ಶಿಕ್ಷೆಗೆ ಒಳಗಾಗಿದ್ದು, ಮೃತ ಮಹಿಳೆ ಪುತ್ರನಿಗೆ ಕಾನೂನು ಸೇವೆಗಳ ಪ್ರಾಧಿಕಾರ ಸೂಕ್ತ ಪರಿಹಾರ ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

ಪ್ರಕರಣ: ಸೋಮವಾರಪೇಟೆ ತಾಲೂಕಿನ ಜಂಬೂರು ಗ್ರಾಮದ ಜಂಬೂರು ಬಾಣೆ ನಿವಾಸಿ ಓ.ಡಿ.ಪೊನ್ನಪ್ಪ ಅವರ ಬಾಡಿಗೆ ಮನೆಯಲ್ಲಿ ಮಹಿಳೆ ಸಾಯಿರಾ, ತನ್ನ ಇಬ್ಬರು ಮಕ್ಕಳೊಂದಿಗೆ ವಾಸವಾಗಿದ್ದರು. ಈ ನಡುವೆ ಸಾಯಿರಾಗೆ ಟಿ.ಪಿ.ಪೂವಯ್ಯ ಪರಿಚಯವಾಗಿದ್ದು, ಇಬ್ಬರ ನಡುವೆ ಸ್ನೇಹ ಬೆಳೆದಿತ್ತು ಮೊದಲ ಪತಿ ಮೃತಪಟ್ಟಿದ್ದು, 2ನೇ ಪತಿ ಕಿರುಕುಳ ನೀಡುತ್ತಾನೆ ಎಂದು ಸಾಯಿರಾ ಟಿ.ಪಿ.ಪೂವಯ್ಯ ಬಳಿ ಹೇಳಿಕೊಂಡಿದ್ದಳು. ಪತಿಯ ವಿರುದ್ಧ ಸ್ಥಳೀಯ ಮಾದಾಪುರ ಪೊಲೀಸ್ ಉಪಠಾಣೆಯಲ್ಲಿ ದೂರು ದಾಖಲಿಸಲು ಸಾಯಿರಾಳಿಗೆ ಸಹಕರಿಸಿದ್ದ.

ಈ ನಡುವೆ 2022ರ ನ.14ರಂದು ಸಾಯಿರಾ ಮನೆಗೆ ಅವರ ಸಂಬಂಧಿ ರಿಶಾದ್ ಎಂಬಾತ ಬಂದು ಉಳಿದುಕೊಂಡಿದ್ದ. ಮರುದಿನ ಟಿ.ಪಿ.ಪೂವಯ್ಯ, ಸಾಯಿರಾ ಮನೆಗೆ ಬಂದಾಗ ರಿಶಾದ್ ಇರುವುದನ್ನು ಕಂಡು ಆತನೊಂದಿಗೆ ಅನೈತಿಕ ಸಂಬಂಧ ಹೊಂದಿದ್ದೀಯಾ ಎಂದು ಸಾಯಿರಾ ಜೊತೆ ಜಗಳ ತೆಗೆದು ಚಾಕುವಿನಿಂದ ಇರಿದು ಗಂಭೀರ ಗಾಯಗೊಳಿಸಿ ಪರಾರಿಯಾಗಿದ್ದ. ಈ ವೇಳೆ ಸಾಯಿರಾಳ ಪುತ್ರ ಘಟನೆ ಕಂಡು ಅಕ್ಕಪಕ್ಕದವರಿಗೆ ವಿಚಾರವನ್ನು ತಿಳಿಸಿದ್ದ. ಬಳಿಕ ಸಾಯಿರಾಳನ್ನು ಮಡಿಕೇರಿ ಜಿಲ್ಲಾಸ್ಪತ್ರೆಗೆ ಕರೆತರುವಷ್ಟರಲ್ಲಿ ಆಕೆ ಮೃತಪಟ್ಟಿದ್ದಳು.

ಈ ಸಂಬಂಧ ಸೋಮವಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ತನಿಖೆ ನಡೆಸಿದ ಪೊಲೀಸರು, ಮಡಿಕೇರಿ 1ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ ಟಿ.ಪಿ.ಪೂವಯ್ಯಗೆ ಜೀವಾವಧಿ ಶಿಕ್ಷೆ ಮತ್ತು 25 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ. ಸರ್ಕಾರಿ ಅಭಿಯೋಜಕ ಎಸ್.ಪಿ.ದೇವೇಂದ್ರ ವಾದ ಮಂಡಿಸಿದ್ದರು.

ವಿವಿಧೆಡೆ ದರೋಡೆ ಪ್ರಕರಣ: ಎಸ್‌ಪಿ ನೇತೃತ್ವದಲ್ಲಿ ಸಭೆ



ಮಡಿಕೇರಿಯಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಾತನಾಡಿದರು.

ಮಡಿಕೇರಿ, ಜ.21–ರಾಜ್ಯದ ವಿವಿಧೆಡೆ ದರೋಡೆ ಪ್ರಕರಣಗಳು ಹೆಚ್ಚಾಗುತ್ತಿರುವ ಬೆನ್ನಲ್ಲೇ ಕೊಡಗು ಜಿಲ್ಲಾ ಪೊಲೀಸ್ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ.

ನಗರದಲ್ಲಿ ಮಂಗಳವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ನೇತೃತ್ವದಲ್ಲಿ ಜಿಲ್ಲೆಯ ವಿವಿಧ ಬ್ಯಾಂಕ್ ಅಧಿಕಾರಿಗಳು, ಖಾಸಗಿ ಹಣಕಾಸು ಸಂಸ್ಥೆಗಳು ಹಾಗೂ ಆಭರಣದ ಅಂಗಡಿಗಳ ಮಾಲೀಕರ ಸಭೆ ನಡೆಸಲಾಯಿತು.

ಸಭೆಯಲ್ಲಿ ಎಸ್‌ಪಿ ಕೆ.ರಾಮರಾಜನ್, ಎಲ್ಲಾ ಸಂಸ್ಥೆಗಳಲ್ಲಿ ಕೈಗೊಳ್ಳಬೇಕಾದ ಭದ್ರತಾ ವ್ಯವಸ್ಥೆ, ಅಪರಾಧ ಪ್ರಕರಣವನ್ನು ತಡೆಗಟ್ಟುವಲ್ಲಿ ಪರಸ್ಪರ ಸಹಕಾರ, ಪೊಲೀಸರ ಪಾತ್ರ ಇತ್ಯಾದಿ ವಿಚಾರ ಕುರಿತು ಚರ್ಚಿಸಿ ಸಲಹೆಗಳನ್ನು ನೀಡಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರ್ ರಾಜ್ ಹಾಗೂ ವಿವಿಧ ವಿಭಾಗಗಳ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಸುಂಟಿಕೊಪ್ಪ ನೂತನ ಠಾಣಾಧಿಕಾರಿ ಜಗದೀಶ್



ಸುಂಟಿಕೊಪ್ಪ, ಜ.21–ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿಯಾಗಿ ಜಗದೀಶ್ ಅಧಿಕಾರ ವಹಿಸಿಕೊಂಡರು.

ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಚಂದ್ರಶೇಖರ್ ಅವರು ವೃತ್ತ ನಿರೀಕ್ಷಕರಾಗಿ ಮುಂಬಡ್ತಿ ಹೊಂದಿದ ಹಿನ್ನೆಲೆ ತೆರವಾದ ಸ್ಥಾನಕ್ಕೆ ಜಗದೀಶ್ ನೂತನ ಠಾಣಾಧಿಕಾರಿಯಾಗಿ ನಿಯೋಜನೆಗೊಂಡಿದ್ದಾರೆ.

ಟೀ ಅಂಗಡಿ ಮೇಲೆ ಕಾಡಾನೆ ದಾಳಿ



ಅತ್ತಿಮಂಗಲದಲ್ಲಿ ಟೀ ಅಂಗಡಿ ಮೇಲೆ ಕಾಡಾನೆ ದಾಳಿ ನಡೆಸಿ, ವಸ್ತುಗಳನ್ನು ನಾಶಗೊಳಿಸಿರುವುದು.

ಸಿದ್ದಾಪುರ, ಜ.21–ಮುಖ್ಯರಸ್ತೆ ಬದಿಯಲ್ಲಿದ್ದ ಟೀ ಅಂಗಡಿ ಮೇಲೆ ಕಾಡಾನೆ ದಾಳಿ ಮಾಡಿ ವಸ್ತುಗಳನ್ನು ತುಳಿದು ನಾಶಗೊಳಿಸಿ ಆತಂಕ ಸೃಷ್ಟಿಸಿದ ಘಟನೆ ಕುಶಾಲನಗರ ತಾಲೂಕಿನ ನೆಲ್ಯಹುದಿಕೇರಿ ಸಮೀಪದ ಅತ್ತಿಮಂಗಲದಲ್ಲಿ ನಡೆದಿದೆ. ಕಾಫಿ ತೋಟದಿಂದ ಮುಖ್ಯರಸ್ತೆಗೆ ಮರಿಯೊಂದಿಗೆ ಬಂದ ಕಾಡಾನೆ ಪಕ್ಕದಲ್ಲಿದ್ದ ಟೀ ಅಂಗಡಿ ಮೇಲೆ ದಾಳಿ ಮಾಡಿದೆ. ಈ ವೇಳೆ ಅಂಗಡಿಯಲ್ಲಿದ್ದ ಜಬ್ಬಾರ್ ಹಾಗೂ ಈತನ ಪತ್ನಿ ಓಡಿ ಹೋಗಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಅಂಗಡಿಯಲ್ಲಿದ್ದ ತಿಂಡಿ ಪದಾರ್ಥ ಹಾಗೂ ಸಾಮಗ್ರಿಗಳನ್ನು ಎಳೆದು ಬಿಸಾಡಿದ ಕಾಡಾನೆ ಮತ್ತೆ ಕಾಫಿ ತೋಟದೊಳಗೆ ನುಸುಳಿದೆ.

ಕಾಡಾನೆ ದಾಳಿಯಿಂದ ಪಾರಾಗಲು ಯತ್ನಿಸಿದ ಜಬ್ಬಾರ್‌ಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ವಿದ್ಯಾರ್ಥಿಗಳು ಶಾಲೆಗೆ ತೆರಳುವ ಸಮಯವಾಗಿದ್ದರಿಂದ ಸ್ಥಳೀಯರು ಭಯಭೀತರಾಗಿದ್ದಾರೆ. ಕಾಡಾನೆಗಳನ್ನು ಕಾಡಿಗಟ್ಟಬೇಕೆಂದು ಸ್ಥಳೀಯರು ಅರಣ್ಯ ಇಲಾಖೆಯನ್ನು ಒತ್ತಾಯಿಸಿದ್ದಾರೆ.

ಸಿದ್ಧಗಂಗಾ ಶ್ರೀಗಳ ಪುಣ್ಯಸ್ಮರಣೆ



ಕೊಳ್ಳೇಗಾಲದಲ್ಲಿ ಡಾ.ಶ್ರೀ ಶಿವಕುಮಾರಸ್ವಾಮೀಜಿ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ನಡೆಸಲಾಯಿತು.

ಕೊಳ್ಳೇಗಾಲ, ಜ.21– ತ್ರಿವಿಧ ದಾಸೋಹಿ, ಕರ್ನಾಟಕ ರತ್ನ ಸಿದ್ಧಗಂಗಾ ಡಾ.ಶ್ರೀ ಶಿವಕುಮಾರಸ್ವಾಮೀಜಿ ಅವರ 6ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮವನ್ನು ಮೋದಿ ಟೀ ಸ್ಟಾಲ್ ಬಳಗದ ವತಿಯಿಂದ ಪಟ್ಟಣದಲ್ಲಿ ಮಂಗಳವಾರ ನಡೆಸಲಾಯಿತು.

ಪಟ್ಟಣದ ಜನನಿ ಆಸ್ಪತ್ರೆ ಸಮೀಪದಲ್ಲಿ ಸಿದ್ಧಗಂಗಾಶ್ರೀಗಳ ಭಾವಚಿತ್ರಕ್ಕೆ ದಾಸೋಹ ಮಠದ ಶ್ರೀ ಶಿವಪ್ಪಸ್ವಾಮೀಜಿ, ಮುಳ್ಳೂರು ಮಠಾಧೀಶರಾದ ಶ್ರೀ ಮಲ್ಲಣ್ಣಸ್ವಾಮೀಜಿ, ಹೊಂಡರಬಾಳು ಮಠದ ಶ್ರೀ ಮಹಾಂತ ದೇವರು ಸ್ವಾಮೀಜಿ ಪೂಜಾ ಕಾರ್ಯ ನೆರವೇರಿಸಿದರು. ಇದೇ ವೇಳೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು.

ಮೋದಿ ಟೀ ಸ್ಟಾಲ್ ಬಳಗದ ಗೌರವಾಧ್ಯಕ್ಷ ಅಧ್ಯಕ್ಷ ಬಸವರಾಜಪ್ಪ ಮಾತನಾಡಿ, ಶ್ರೀ ಶಿವಕುಮಾರಸ್ವಾಮೀಜಿ ಪುಣ್ಯಸ್ಮರಣೆಯನ್ನು ಕಳೆದ 6 ವರ್ಷಗಳಿಂದ ಬಳಗದ ವತಿಯಿಂದ ದಾಸೋಹ ದಿನವಾಗಿ ಆಚರಿಸಲಾಗುತ್ತಿದೆ. ಅಲ್ಲದೇ, ಎಲ್ಲಾ ಭಕ್ತರ ಸಹಕಾರದಿಂದ 15 ವರ್ಷಗಳಿಂದ ಸಿದ್ಧಗಂಗಾ ಶ್ರೀಗಳ ಜಯಂತಿ ಮಹೋತ್ಸವವನ್ನು ಆಚರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಐಟಿಐ ಮಹೇಶ್ ಮತ್ತು ತಂಡದವರಿಂದ ಭಜನೆ ಕಾರ್ಯಕ್ರಮ ನಡೆಯಿತು. ಮೋದಿ ಟೀ ಸ್ಟಾಲ್ ಬಳಗದ ಅಧ್ಯಕ್ಷ ಮಹದೇವಸ್ವಾಮಿ, ಗುರುಸ್ವಾಮಿ ಬೂದಿತಿಟ್ಟು, ಅಚ್ಗಾಲ್ ಮಹದೇವಸ್ವಾಮಿ, ಮಹದೇಶ್ ಮಾಸ್ಟರ್, ಜಿಪಂ ಮಾಜಿ ಸದಸ್ಯ ಕಮಲ್, ಲೋಕೇಶ್ ಲಯನ್ಸ್, ಬಿಂದು ಲೋಕೇಶ್, ಆಲಹಳ್ಳಿ ಕುಮಾರ್, ಜೆಸಿಬಿ ಲೋಕೇಶ್, ಭ್ರಮರಾಂಬ ಪ್ರಕಾಶ್, ರಾಜೇಶ್, ಭತ್ತ ಲೋಕೇಶ್, ವೀರಶೈವ ನೌಕರರ ಸಂಘದ ಅಧ್ಯಕ್ಷ ಮಲ್ಲೇಶಪ್ಪ, ನಗರಸಭೆ ಸದಸ್ಯ ಪ್ರಕಾಶ್, ರಾಮಕೃಷ್ಣ, ಜಿ.ಪಿ.ಶಿವಕುಮಾರ್, ಅ.ಭಾ.ವೀ.ಲಿಂ ಮಹಾಸಭೆ ತಾಲೂಕು ಅಧ್ಯಕ್ಷ ತಿಮ್ಮರಾಜೀಪುರ ಪುಟ್ಟಣ್ಣ, ಉಪಾಧ್ಯಕ್ಷ ತಿಮ್ಮರಾಜಿಪುರ ರಾಜು, ಕಾರ್ಯದರ್ಶಿ ಮಹೇಶ್, ನಾಗರಿಕರ ಹಿತರಕ್ಷಣಾ ಸಮಿತಿ ನಟರಾಜು ಮಾಳಿಗೆ ಇದ್ದರು.

ಗೋವುಗಳ ಮೇಲಿನ ಹಲ್ಲೆ ಖಂಡಿಸಿ ಪ್ರತಿಭಟನೆ

ಚಾಮರಾಜನಗರದಲ್ಲಿ ಗೋವಿಗೆ ಪೂಜೆ ಸಲ್ಲಿಸಿ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು



ಚಾಮರಾಜನಗರದಲ್ಲಿ ಗೋವುಗಳ ಮೇಲಿನ ಹಲ್ಲೆ ಖಂಡಿಸಿ ಗೋ ಸಂರಕ್ಷಣಾ ಸಮಿತಿ ವತಿಯಿಂದ ಪ್ರತಿಭಟನೆ ನಡೆಸಲಾಯಿತು

ಚಾಮರಾಜನಗರ, ಜ.21 ಬೆಂಗಳೂರಿನ ಚಾಮರಾಜಪೇಟೆ ಹಾಗೂ ನಂಜನಗೂಡಿನ ನಂಜುಂಡೇಶ್ವರ ದೇವಸ್ಥಾನದ ಮುಂಭಾಗ ನಡೆದ ಗೋವುಗಳ ಮೇಲಿನ ಹಲ್ಲೆ ಖಂಡಿಸಿ ಗೋ ಸಂರಕ್ಷಣಾ ಸಮಿತಿ ವತಿಯಿಂದ ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಸಮಾವೇಶಗೊಂಡ ಪ್ರತಿಭಟನಾಕಾರರು, ಗೋವಿಗೆ ಪೂಜೆ ಸಲ್ಲಿಸಿದರು. ಬಳಿಕ ಮೆರವಣಿಗೆ ಮೂಲಕ ಭುವನೇಶ್ವರಿ ವೃತ್ತಕ್ಕೆ ತೆರಳಿ ಹಸುಗಳ ಮೇಲೆ ವಿಕೃತಿ ಮೆರೆದಿರುವ ದುಷ್ಕರ್ಮಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಗೋ ಸಂರಕ್ಷಣಾ ಸಮಿತಿ ರಾಜ್ಯ ಸಂಯೋಜಕ ಮಹೇಶ್ ಕಡಿದಾಳ್ ಮಾತನಾಡಿ, ಗೋವುಗಳ ಮೇಲೆ ಹಲ್ಲೆ ನಡೆಸುವ ಮೂಲಕ ಸನಾತನ ಧರ್ಮದ ವಿರುದ್ಧ ಧರ್ಮ ವಿರೋಧಿ ಕೆಲಸ ಮಾಡಲಾಗುತ್ತಿದೆ. ಇತ್ತೀಚೆಗೆ ಗೋವುಗಳನ್ನು ಬಹಿರಂಗವಾಗಿಯೇ ಕೊಲ್ಲಲಾಗುತ್ತಿದೆ. ಇದು ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಮೂರು ಹಸುಗಳ ಕೆಚ್ಚಲನ್ನು ಕೊಯ್ದಿರುವುದು ಹಾಗೂ ನಂಜನಗೂಡಿನಲ್ಲಿ ಒಂದು ಗೋವಿನ ಮೇಲೆ ಹಲ್ಲೆ ಮಾಡಿರುವುದು ಸಮಾಜಘಾತುಕ ಕೆಲಸವಾಗಿದೆ. ಇದೊಂದು ಆಕಸ್ಮಿಕವಾಗಿ ನಡೆದಿರುವ ಘಟನೆ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿಕೆ ನೀಡುವುದು ಸರಿಯಲ್ಲ. ಹಿಂದೂ ವಿರೋಧಿ ನೀತಿ ಅನುಸರಿಸುತ್ತಿರುವ ಹಂತಕರ ವಿರುದ್ಧ ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು. ಮುಂದಿನ ದಿನಗಳಲ್ಲಿ ಈ ರೀತಿಯ ಘಟನೆಗಳು ನಡೆಯದಂತೆ ಕ್ರಮ ವಹಿಸಬೇಕು. ಬೆಂಗಳೂರಿನಲ್ಲಿ ಹಸುವಿನ ಕೆಚ್ಚಲು ಕತ್ತರಿಸಿದ ಆರೋಪಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ಕೊಡಸೋಗೆ ಶಿವಪ್ರಕಾಶ್, ಚುಡಾ ಮಾಜಿ ಅಧ್ಯಕ್ಷ ಕುಲಗಾಣ ಶಾಂತಮೂರ್ತಿ, ನಗರಸಭೆ ಉಪಾಧ್ಯಕ್ಷೆ ಮಮತಾ, ಮುಖಂಡರಾದ ನೂರೊಂದುಶೆಟ್ಟಿ, ಮಂಜುನಾಥ್, ಬಾಲಸುಬ್ರಹ್ಮಣ್ಯ, ಮನೋಜ್‌ಕುಮಾರ್, ಸಂಘಟನೆ ಪದಾಧಿಕಾರಿಗಳು ಭಾಗವಹಿಸಿದ್ದರು.

ಕಾಡುಹಂದಿ ಬೇಟೆಗಾರನ ಬಂಧನ...




ಎಲ್ಲೇಮಾಳ ಅರಣ್ಯ ವಲಯದಲ್ಲಿ ಕಾಡುಹಂದಿ ಬೇಟೆಯಾಡಿದ್ದ ಹನೂರು ತಾಲೂಕಿನ ಅಜ್ಜೀಪುರ ಗ್ರಾಮದ ಪಳನಿಸ್ವಾಮಿ ಅಲಿಯಾಸ್ ಸೇತುನನ್ನು ಹನೂರು ವಲಯ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ. ಉಪ ವಲಯ ಅರಣ್ಯಾಧಿಕಾರಿ ಬಿ.ಎಸ್.ನಂದೀಶ್, ಗಸ್ತು ಅರಣ್ಯ ಪಾಲಕರಾದ ಅನಿಲ್ ಕುಮಾರ್, ಚಿನ್ನಸ್ವಾಮಿ, ವಿ.ಪ್ರಭು, ಇಟಿಎಫ್ ವಾಚರ್ ಪ್ರಭುಸ್ವಾಮಿ, ಸಿಬ್ಬಂದಿ ಇದ್ದರು.

ಶಿವರಾಮು ನಿಧನ



ಯಳಂದೂರು, ಜ.21–ಶಿಕ್ಷಕ ಅಣ್ಣೂರುಕೇರಿ ಮಂಜುನಾಥ ಅವರ ಸೋದರ ಮಾವ ಗುಂಡ್ಲುಪೇಟೆ ತಾಲೂಕಿನ ಅಣ್ಣೂರುಕೇರಿ ನಿವಾಸಿ ಶಿವರಾಮು (56) ಮಂಗಳವಾರ ಮುಂಜಾನೆ ನಿಧನರಾದರು. ಮೃತರು ತಾಯಿ, ಪತ್ನಿ, ಮೂವರು ಪುತ್ರಿಯರು, ಪುತ್ರ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿತು. ಶಾಸಕರಾದ ಗಣೇಶ್ ಪ್ರಸಾದ್, ಸಿ.ಪುಟ್ಟರಂಗಶೆಟ್ಟಿ ಸಂತಾಪ ಸೂಚಿಸಿದ್ದಾರೆ.

ಗುಂಡ್ಲುಪೇಟೆಯಲ್ಲಿ ಪ್ರಸಾದ ವಿನಿಯೋಗ



ಗುಂಡ್ಲುಪೇಟೆ ಬಸವೇಶ್ವರ ವೃತ್ತದಲ್ಲಿ ಶ್ರೀ ಶಿವಕುಮಾರಸ್ವಾಮೀಜಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಗುಂಡ್ಲುಪೇಟೆ, ಜ.21–ದಾಸೋಹ ದಿನಾಚರಣೆ ಅಂಗವಾಗಿ ಪಟ್ಟಣದಲ್ಲಿ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ನಾನಾ ಸಂಘಟನೆಗಳ ವತಿಯಿಂದ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಪುಣ್ಯಸ್ಮರಣೆ ಆಯೋಜಿಸಲಾಯಿತು.

ಮಹಾಸಭಾ ಯುವ ಘಟಕದ ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಸಿದ್ಧಗಂಗಾ ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಸಾವಿರಾರು ಭಕ್ತರಿಗೆ ಪ್ರಸಾದ ವಿನಿಯೋಗಿಸಲಾಯಿತು. ಇದೇ ವೇಳೆ ವೀರಶೈವ ಯುವಕರ ಸಂಘದ ವತಿಯಿಂದ ಪಟ್ಟಣದ ಜೆಎಸ್‌ಎಸ್ ಕಾಲೇಜಿನ ಎದುರು ಶಿವಕುಮಾರಸ್ವಾಮೀಜಿ ಅವರ ಪುಣ್ಯಸ್ಮರಣೆ ಮಾಡಲಾಯಿತು.



ಸುತ್ತೂರು ಜಾತ್ರೆ ಪ್ರಚಾರ ರಥಕ್ಕೆ ಸ್ವಾಗತ...

ಸುತ್ತೂರು ಜಾತ್ರೆ ಪ್ರಚಾರ ರಥವನ್ನು ಯಳಂದೂರು ತಾಲೂಕಿನ ಅಗರ ಗ್ರಾಮದಲ್ಲಿ ಸ್ವಾಗತಿಸಲಾಯಿತು. ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಜಿ.ಮಹದೇವಪ್ಪ, ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ವಿ.ಮಲ್ಲಿಕಾರ್ಜುನಸ್ವಾಮಿ, ಕಾರ್ಯದರ್ಶಿ ಗೌಡಹಳ್ಳಿ ರವಿ, ತಾಲೂಕು ಕಾರ್ಯದರ್ಶಿ ಪ್ರಭುಸ್ವಾಮಿ, ಬಸವಣ್ಣ, ರೋಟರಿ ತಾಲೂಕು ಅಧ್ಯಕ್ಷ ವೈ.ಎನ್.ಪ್ರಕಾಶ್, ನಿವೃತ್ತ ಶಿಕ್ಷಕ ಶಿವಕುಮಾರಸ್ವಾಮಿ, ಮನು, ರುದ್ರೇಶ್, ಶ್ರೀಕಂಠಮೂರ್ತಿ, ನಾಗಪ್ಪ, ಸುಬ್ಬಣ್ಣ, ರಾಜಪ್ಪ, ಮಂಜು, ಸಿದ್ದರಾಜು, ಭರತ್, ಪಂಚಾಕ್ಷರಿ ಇದ್ದರು.

ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಇಬ್ಬರ ಬಂಧನ

ಯಳಂದೂರು, ಜ.21– ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದ ಇಬ್ಬರನ್ನು ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರು ಮಾಲು ಸಮೇತ ಸೋಮವಾರ ರಾತ್ರಿ ಬಂಧಿಸಿದ್ದಾರೆ.

ಮದ್ದೂರು ಗ್ರಾಮದ ಅಸ್ಲಾಂ ಪಾಷ ಹಾಗೂ ಮುಳ್ಳೂರು ಗ್ರಾಮದ ಸುದೀಪ್ ಬಂಧಿತರು. ಈ ಇಬ್ಬರು ಆಟೋದಲ್ಲಿ ತಾಲೂಕಿನ ಮಾಂಬಳ್ಳಿ ಗ್ರಾಮದ ಕಿನಕಹಳ್ಳಿ ಕ್ರಾಸ್ ಬಳಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸುತ್ತಿದ್ದರು. ಈ ವೇಳೆ ಆಹಾರ ಇಲಾಖೆ ನಿರೀಕ್ಷಕ ಬಿಸಲಯ್ಯ, ಮಾಂಬಳ್ಳಿ ಪೊಲೀಸ್ ಠಾಣೆ ಪೊಲೀಸರೊಂದಿಗೆ ದಾಳಿ ನಡೆಸಿದ್ದಾರೆ.

ನಂತರ 7 ಚೀಲಗಳಲ್ಲಿದ್ದ 6670 ರೂ. ಮೌಲ್ಯದ ಅಕ್ಕಿ ಹಾಗೂ ಆಟೋವನ್ನು ವಶಕ್ಕೆ ಪಡೆಯಲಾಗಿದೆ. ಈ ಸಂಬಂಧ ಮಾಂಬಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾರ್ಯಾಚರಣೆಯಲ್ಲಿ ಪಿಎಸ್‌ಐ ಕರಿಬಸಪ್ಪ, ಮುಖ್ಯಪೇದೆಗಳಾದ ಪರಶಿವಮೂರ್ತಿ, ಕಿಶೋರ್, ಪೇದೆಗಳಾದ ಶಿವಕುಮಾರ್, ಬಸವರಾಜ್ ಗುತ್ತಲ್ ಹಾಗೂ ಆಹಾರ ಇಲಾಖೆ ಸಿಬ್ಬಂದಿ ಭಾಗವಹಿಸಿದ್ದರು.



ಮಾಂಬಳ್ಳಿ ಗ್ರಾಮದ ಕಿನಕಹಳ್ಳಿ ಕ್ರಾಸ್ ಬಳಿ ಅಕ್ರಮವಾಗಿ ಸಾಗಿಸುತ್ತಿದ್ದ ಪಡಿತರ ಅಕ್ಕಿಯನ್ನು ವಶಪಡಿಸಿಕೊಂಡಿರುವುದು.

ಅಸಲಿ ಗಾಂಧಿಯವರ ಹಾಡಿನಲ್ಲಿ ಪುಕ್ಕಟೆ ಪ್ರಚಾರ ಪಡೆಯುತ್ತಿರುವ ಕಾಂಗ್ರೆಸ್; ಹೆಚ್.ಡಿ.ಕುಮಾರಸ್ವಾಮಿ ಕಿಡಿ

● ರಾಜ್ಯದಲ್ಲಿ ಹೆಚ್ಚಿದ ಅಪರಾಧ ಕೃತ್ಯಗಳು; ಇದೇನಾ ಗಾಂಧಿ ಮಾರ್ಗದಲ್ಲಿ ಆಡಳಿತಾ ನಡೆಸೋ ರೀತಿ ● ಉಪ್ಪಿನ ಸತ್ಯಾಗ್ರಹವನ್ನೇ ತಿರುಚಿದ ಕಾಂಗ್ರೆಸ್; ಸಚಿವರ ನೇರ ಆರೋಪ



ನವದೆಹಲಿ, ಜ.21– ನಕಲಿ ಗಾಂಧಿಗಳ ಪಕ್ಷ ಈಗ ಬೆಳಗಾವಿಯಲ್ಲಿ ಅಸಲಿ ಗಾಂಧಿಯವರ ಹಾಡಿನಲ್ಲಿ ಪುಕ್ಕಟೆ ಪ್ರಚಾರ ಪಡೆಯುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಲೇವಡಿ ಮಾಡಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ಅತ್ಯಾಚಾರ, ದರೋಡೆಗಳು ನಡೆಯುತ್ತಿವೆ. ಅಪರಾಧ ಚಟುವಟಿಕೆಗಳು ಮಿತಿ ಮೀರಿವೆ. ಕಾನೂನು ಸುವ್ಯವಸ್ಥೆ ಹದಗೆಟ್ಟು ಜನರಿಗೆ ಭದ್ರತೆ ಇಲ್ಲದಾಗಿದೆ. ಸರ್ಕಾರದಲ್ಲಿ ಒಬ್ಬ ತಹಶಿಲ್ದಾರ್, ಉಪ ವಿಭಾಗಾಧಿಕಾರಿಯನ್ನು ನಿಯಂತ್ರಣ ಮಾಡಲು ಇವರಿಗೆ ಆಗುತ್ತಿಲ್ಲ. ಕಾನೂನು ಸುವ್ಯವಸ್ಥೆ ಮೇಲೆ ನಿಯಂತ್ರಣ ಇಲ್ಲ. ಕಾಂಗ್ರೆಸ್ಸಿನವರು ಕರ್ನಾಟಕವನ್ನು ಸಂಪೂರ್ಣ ಮುಗಿಸಲಿಕ್ಕೇ ಬಂದಿದ್ದಾರೆ. ಇದೇನಾ ಗಾಂಧಿ ತತ್ವದ ಆಡಳಿತ ಸಿದ್ದರಾಮಯ್ಯನವರೇ ಎಂದು ಗುಡುಗಿದ್ದಾರೆ.

ರಾಜ್ಯದಲ್ಲಿ ಗರ್ಭಿಣಿಯರ ಸರಣಿ ಸಾವಿನ ಪ್ರಕರಣಗಳ ವಾಸ್ತವಾಂಶವನ್ನು ಜನರ ಮುಂದೆ ಇಟ್ಟಿಲ್ಲ, ಯಾಕೆ. ಯಾಕೆ ಅಷ್ಟು ಜನ ತಾಯಂದಿರು, ನವಜಾತ ಶಿಶುಗಳು ಬಲಿಯಾದದ್ದು ಇಲ್ಲಿಯೂ 40 ಪರ್ಸೆಂಟ್ ಕಮಿಷನ್ ಎನ್ನುವ ಮಾತು ಕೇಳಿ ಬರುತ್ತಿದೆ. ರಾಜ್ಯದ ಜನರ ತೆರಿಗೆ ಹಣವನ್ನು ಯಾವ ರೀತಿ ಬಳಕೆ ಮಾಡುತ್ತಿದ್ದೀರಿ ನಿಮಗೆ ಆತ್ಮಸಾಕ್ಷಿ ಎನ್ನುವುದು ಇದೆಯಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇ– ಖಾತಾ ಹೆಸರಲ್ಲೂ ಸರಕಾರ ಲೂಟಿ ಹೊಡೆಯುತ್ತಿದೆ. ರೇರಾ ಬಗ್ಗೆಯೂ ಜನ ಅನುಮಾನದಿಂದ ಮಾತಾಡುತ್ತಿದ್ದಾರೆ. ಈಗಿನ ಕಾಂಗ್ರೆಸ್ ಪಕ್ಷಕ್ಕೆ ಮಹಾತ್ಮ ಗಾಂಧೀಜಿ ಅವರ ಹೆಸರು ಹೇಳುವ ಯೋಗ್ಯತೆ ಇಲ್ಲ. ಈಗಿನ ಕಾಂಗ್ರೆಸ್ ಹಾಗೂ ಸ್ವಾತಂತ್ರ್ಯಪೂರ್ವ ಕಾಂಗ್ರೆಸ್ ಬೇರೆ ಬೇರೆ. ಇವರು ಮೊನ್ನೆ ಬೆಳಗಾವಿಯಲ್ಲಿ ಅರ್ಧಕ್ಕೆ ಅಂತ್ಯವಾಗಿದ್ದ ಅಧಿವೇಶನದ ಜಾಹೀರಾತಿನಲ್ಲಿ ಭಾರತದ ಕಳಸವಾದ ಜಮ್ಮು–ಕಾಶ್ಮೀರದ ಭೂಪಟವೇ ಇರಲಿಲ್ಲ. ಇಂಥವರು ದೇಶ ಜೋಡಿಸುವವರಾ, ಕಾಂಗ್ರೆಸ್ ಪಕ್ಷಕ್ಕೆ ಅಂತಿಮವಾದ ಚರಮಗೀತೆ ಕರ್ನಾಟಕದಲ್ಲಿ ಆಗುತ್ತದೆ, ನೋಡುತ್ತೀರಿ ಎಂದು ಕಿಡಿಕಾರಿದರು.

ಹಿಂದಿನ ಸರಕಾರದ ಅವಧಿಯಲ್ಲಿ ಅತ್ಯಾಚಾರ ಪ್ರಕರಣಗಳು ಆಗಿಯೇ ಇರಲಿಲ್ಲವಾ? ಎಂದು ಸಿಎಂ ಸಿದ್ದರಾಮಯ್ಯ ಹೊಣೆಗೇಡಿತನದ ಹೇಳಿಕೆ ನೀಡಿದ್ದಾರೆ. ಹಿಂದೆ ಅತ್ಯಾಚಾರ ಪ್ರಕರಣಗಳು ನಡೆದಿವೆ, ಈಗಲೂ ನಡೆಯಲಿ ಎನ್ನುವುದು ಅವರ ಭಾವನೆಯೇ ಹಿಂದೆ ಆಗಿರುವ ಕೆಟ್ಟದ್ದನ್ನು ಸರಿಪಡಿಸುವುದು ಮುಖ್ಯವೇ ಹೊರತು ತಮ್ಮ ವೈಫಲ್ಯ ಮುಚ್ಚಿಕೊಳ್ಳುವುದಲ್ಲ. ಸಿಎಂ ಅಪರಾಧ ನಿಯಂತ್ರಣ ಮಾಡುವುದು ಬಿಟ್ಟು ಸಬೂಬು ಹೇಳುತ್ತಿದ್ದಾರೆ. ಇವರು ಎರಡನೇ ಬಾರಿ ಸಿಎಂ ಆಗಿದ್ದಾರೆ. ಗ್ಯಾಂಗ್ ರೇಪ್ ಪ್ರಕರಣಗಳ ಜತೆಗೆ ಕಾನೂನು ಸುವ್ಯವಸ್ಥೆ ಏನಾಗಿದೆ, ಆಡಳಿತ ಎಷ್ಟರ ಮಟ್ಟಿಗೆ ಕುಸಿದಿದೆ ಎಂದು ಹೇಳಲು ಸಾಧ್ಯವೇ ಇಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಗಾಂಧಿ ಹೆಸರು ಹೈಜಾಕ್: ಬಾಪು, ಸಂವಿಧಾನ, ಅಂಬೇಡ್ಕರ್ ಬಗ್ಗೆ ಕಾಂಗ್ರೆಸ್ ಈಗ ನೆನಪು ಮಾಡಿಕೊಳ್ಳುತ್ತಿರುವುದು ಹಾಸ್ಯಾಸ್ಪದ. ಇವರು ಏನು ಸಾಧನೆ ಮಾಡಿದ್ದಾರೆ. ಗಾಂಧಿ ಅವರ ಹೆಸರು ಹೈಜಾಕ್ ಮಾಡಿದ್ದಾರೆ. ಗಾಂಧಿ ಕುಟುಂಬ ಎಂದರೆ ಮಹಾತ್ಮಾ ಗಾಂಧಿ ಕುಟುಂಬ ಅಲ್ಲ. ಇಂದಿರಾ ಗಾಂಧಿ ಅವರು ಬಂದ ಮೇಲೆ ಗಾಂಧಿ ಹೆಸರನ್ನು ಹೈಜಾಕ್ ಮಾಡಿದ್ದಾರೆ. ಈಗ ಇರುವವರು ಯಾರೂ ಗಾಂಧಿಗಳಲ್ಲ ಎಂದರು.

ಮೋದಿ ಕೊಡುಗೆ ದೊಡ್ಡದು: ನಮ್ಮ ಸಂವಿಧಾನಕ್ಕೆ ಯಾರಿಂದ ಅಪಚಾರ ಆಗಿದೆ ಎನ್ನುವುದು ದೇಶಕ್ಕೇ ಗೊತ್ತಿದೆ. ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ಎಷ್ಟು ಹಿಂಸೆ ಕೊಟ್ಟಿದೆ ಎನ್ನುವುದಕ್ಕೆ ಸುದೀರ್ಘ ಇತಿಹಾಸವಿದೆ. ಇವತ್ತು ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಅಂಬೇಡ್ಕರ್ ಅವರ ಹೆಸರು ಚಿರಸ್ಥಾಯಿ ಆಗುವ ರೀತಿಯಲ್ಲಿ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಜಾಹೀರಾತು ಮೂಲಕ ಗಾಂಧೀಜಿಗೆ ಅಪಚಾರ

ಕಾಂಗ್ರೆಸ್ ಪಕ್ಷ ಮಹಾತ್ಮ ಗಾಂಧೀಜಿ ಮತ್ತು ಅವರ ನೇತೃತ್ವದಲ್ಲಿ ನಡೆದ ಐತಿಹಾಸಿಕ ಉಪ್ಪಿನ ಸತ್ಯಾಗ್ರಹಕ್ಕೆ ಅಪಚಾರ ಎಸಗಿದೆ. ಸತ್ಯಾಗ್ರಹದಲ್ಲಿ ಮಹಾತ್ಮರನ್ನು ಹಿಂಬಾಲಿಸಿದ್ದ ಮಹಾನ್ ಸ್ವಾತಂತ್ರ್ಯ ಹೋರಾಟಗಾರ ಚಿತ್ರಗಳನ್ನು ತಿರುಚಿದೆ. ಮಹಾತ್ಮರ ಹಿಂದೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸತ್ಯಾಗ್ರಹದಲ್ಲಿ ಭಾಗಿ ಆಗಿದ್ದರು ಎನ್ನುವಂತೆ ತಿರುಚಿ ಪತ್ರಿಕೆಗಳಿಗೆ ಜಾಹೀರಾತು ನೀಡಲಾಗಿದೆ. ಇತಿಹಾಸವನ್ನು ಕಾಂಗ್ರೆಸ್ ಹೇಗೆ ತಿರುಚಿದೆ ಎನ್ನುವುದಕ್ಕೆ ಇದೇ ಸಾಕ್ಷಿ.

- ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

ಆರು ಮಂದಿ ಡಿವೈಎಸ್ಪಿ, 45 ಮಂದಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ

ಮೈಸೂರು, ಜ.21(ಎಸ್‌ಪಿಎನ್)– ಪೊಲೀಸ್ ಸಿಬ್ಬಂದಿ ಮಂಡಳಿ ಸಭೆಯ ನಿರ್ಣಯದಂತೆ 6 ಮಂದಿ ಡಿವೈಎಸ್ಪಿ (ಸಿವಿಲ್), 35ಮಂದಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಮಂಗಳವಾರ ಆದೇಶಿಸಿದೆ.

ಕೊಡಗು ಜಿಲ್ಲೆಯ ವಿರಾಜಪೇಟೆ ಉಪವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಡಿವೈಎಸ್ಪಿ ಆರ್.ಮೋಹನ್‌ಕುಮಾರ್ ಅವರನ್ನು ರಾಜ್ಯ ಗುಪ್ತವಾರ್ತೆಗೆ, ಸ್ಥಳ ನಿರೀಕ್ಷಣೆಯಲ್ಲಿದ್ದ ಎಸ್.ಮಹೇಶ್ ಕುಮಾರ್ ಅವರನ್ನು ಕೊಡಗು ಜಿಲ್ಲೆಯ ವಿರಾಜಪೇಟೆ ಉಪವಿಭಾಗಕ್ಕೆ, ಸಿಐಡಿಯಲ್ಲಿದ್ದ ಕುಮಾರಸ್ವಾಮಿ ಅವರನ್ನು ಚನ್ನರಾಯಪಟ್ಟಣ ಉಪವಿಭಾಗಕ್ಕೆ ವರ್ಗಾವಣೆ ಮಾಡಲಾಗಿದೆ.

45 ಮಂದಿ ಪಿಐಗಳ ವರ್ಗಾವಣೆ: ರಾಜ್ಯದ ವಿವಿಧ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ 45 ಮಂದಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆಗೊಳಿಸಿದೆ. ಇದರಲ್ಲಿ ಬೆಂಗಳೂರು ಸಿಸಿಬಿಯಲ್ಲಿದ್ದ ಎಸ್.ಮಹದೇವಸ್ವಾಮಿ ಅವರನ್ನು ಮೈಸೂರಿನ ಕೆ.ಆರ್.ಸಂಚಾರ ಠಾಣೆಗೆ, ಲೋಕಸಭಾ ಚುನಾವಣೆ ಸಂಬಂಧ ಮೈಸೂರಿನ ಕೆ.ಆರ್.ಸಂಚಾರ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕೆ.ಆರ್.ರಘು ಅವರನ್ನು ದೇವರಾಜ ಠಾಣೆಗೆ, ಕೊಣಾಜೆ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಸಿ.ಎಂ.ರವೀಂದ್ರ ಅವರನ್ನು ನಂಜನಗೂಡು ಟೌನ್ ಠಾಣೆಗೆ, ಮೈಸೂರು ನಗರ ಸೆನ್ ಠಾಣೆಯಲ್ಲಿದ್ದ ಪ್ರಸನ್ನಕುಮಾರ್ ಅವರನ್ನು ಸರಗೂರು ಠಾಣೆಗೆ, ಮಂಡ್ಯ ಮಹಿಳಾ ಠಾಣೆಯಲ್ಲಿದ್ದ ಕೆ.ಎಚ್.ಆನಂದ್ ಕುಮಾರ್ ಅವರನ್ನು ಶ್ರೀರಂಗಪಟ್ಟಣ ಗ್ರಾಮಾಂತರ ಠಾಣೆಗೆ, ಕರ್ನಾಟಕ ಲೋಕಾಯುಕ್ತ(ಎಸ್‌ಐಟಿ)ದಲ್ಲಿದ್ದ ವಿ.ವಿ.ದಯಾನಂದ ಸೇರಿದಂತೆ ವಿವಿಧ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿಐಗಳನ್ನು ವರ್ಗಾವಣೆಗೊಳಿಸಿ ಸರ್ಕಾರ ಆದೇಶಿಸಿದೆ.

ಮೂರನೇ ಪುಟದಿಂದ

ಆರೋಗ್ಯಾಧಿಕಾರಿಯೇ ಪಶುವೈದ್ಯ!

ಶಸ್ತ್ರಚಿಕಿತ್ಸೆ ಸೇರಿದಂತೆ ಸಾಕು ಹಾಗೂ ಬಿಡಾಡಿ ಪ್ರಾಣಿಗಳ ಲಸಿಕಾ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುವಲ್ಲಿ ಪಶುವೈದ್ಯರ ಪಾತ್ರ ಪ್ರಾಮುಖ್ಯತೆ ಹೊಂದಿದೆ. ಶೈಕ್ಷಣಿಕ ಹಿನ್ನೆಲೆಯೊಂದಿಗೆ ವೃತ್ತಿಪರತೆಯಿಂದ ಸಾಕಷ್ಟು ಅನುಭವ ಇರುವ ಹಿನ್ನೆಲೆಯಲ್ಲಿ ಪಶುವೈದ್ಯರು ಹಾಗೂ ಪಶು ವೈದ್ಯಕೀಯ ನಿರೀಕ್ಷಕರು ವೈಜ್ಞಾನಿಕ ವಿಧಾನದಲ್ಲಿ ಕಾರ್ಯ ನಿರ್ವಹಿಸುತ್ತಾರೆ. ಆದರೆ ಆ ಹೊಣೆಯನ್ನು ಜನರ ಆರೋಗ್ಯದ ಮೇಲ್ವಿಚಾರಣೆ ಹೊತ್ತಿರುವ ವೈದ್ಯರಿಗೆ ನೀಡಿದರೆ ಅವರು ಪ್ರಾವಿಣ್ಯವಿಲ್ಲದೆ, ತಮ್ಮದಲ್ಲದ ಕಾರ್ಯಕ್ಕೆ ನ್ಯಾಯ ಸಲ್ಲಿಸಲು ಸಾಧ್ಯವೇ? ಎಂಬ ಪ್ರಶ್ನೆ ನಾಗರಿಕ ವಲಯದಲ್ಲಿ ಉದ್ಭವಿಸಿದೆ.

ಮೈಸೂರು ನಗರದ ಕುರಿಮಂಡಿಯಲ್ಲಿ ಕಸಾಯಿಖಾನೆ ಇದ್ದು, ಇಲ್ಲಿ ನಿತ್ಯ ಸಾವಿರಾರು ಕುರಿ–ಮೇಕೆಗಳನ್ನು ವಧೆ ಮಾಡಿ ಮಾಂಸ ಪೂರೈಸಲಾಗುತ್ತದೆ. ಜನ ಸಮುದಾಯಕ್ಕೆ ಪೂರೈಕೆಯಾಗುವ ಈ ಮಾಂಸದ ಗುಣಮಟ್ಟ ಕಾಯ್ದುಕೊಳ್ಳುವುದು ಹಾಗೂ ಜನರ ಆರೋಗ್ಯಕ್ಕೆ ಅಪಾಯಕಾರಿ ಅಂಶಗಳನ್ನು ತಡೆಗಟ್ಟಲು ಪಶುವೈದ್ಯರು ಹಾಗೂ ಪಶು ವೈದ್ಯಕೀಯ ನಿರೀಕ್ಷಕರು ಪ್ರತಿದಿನ ಬೆಳಗ್ಗೆ ಕಸಾಯಿಖಾನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಮಾಂಸದ ಪರಿಶುದ್ಧತೆ ಮತ್ತು ತಾಜಾತನದ ಬಗ್ಗೆ ನಿಗಾ ವಹಿಸುವ ವ್ಯವಸ್ಥೆ ಈ ಹಿಂದೆ ಇತ್ತು. ಆದರೆ ಕೆಲ ವರ್ಷಗಳಿಂದ ಈ ಜವಾಬ್ದಾರಿ ಜನ ಸಮುದಾಯದ ಆರೋಗ್ಯ ರಕ್ಷಣೆ ಮಾಡಬೇಕಾದ ವೈದ್ಯರ ಹೆಗಲಿಗೆ ಹೆಚ್ಚುವರಿಯಾಗಿ ಬಿದ್ದಿದೆ. ವಧಾಗಾರದಲ್ಲಿ ವಧೆಯಾಗುವ ಪ್ರಾಣಿಗಳ ಸುಸ್ಥಿತಿ ಖಾತರಿ ಹಾಗೂ ವಧೆಯ ನಂತರದಲ್ಲಿ ಗುಣಮಟ್ಟದ ಪರಿಶೀಲನೆಯನ್ನು ಜನಸಮುದಾಯದ ವೈದ್ಯರು ಮಾಡುತ್ತಿರುವುದು ವೈಜ್ಞಾನಿಕವೇ? ಎಂಬ ಪ್ರಶ್ನೆ ಪ್ರಜ್ಞಾವಂತರಿಂದ ವ್ಯಕ್ತವಾಗಿದೆ.

ನಗರದಲ್ಲಿ ಕುರಿ, ಮೇಕೆ, ಕೋಳಿ ಮಾಂಸದಂಗಡಿಗಳಿಗೂ ಆಗಾಗ್ಗೆ ಭೇಟಿ ನೀಡಿ ಗುಣಮಟ್ಟ ಪರಿಶೀಲಿಸುವ ಹೊಣೆಗಾರಿಕೆಯನ್ನು ಪಶುವೈದ್ಯರು ಹಾಗೂ ಅವರ ಅಧೀನದ ಸಿಬ್ಬಂದಿ ನಿಭಾಯಿಸುವ ವ್ಯವಸ್ಥೆ ಇದ್ದಿತು. ಆದರೆ ಈಗ ಬಹುಶಃ ಆ ಬಗ್ಗೆ ಯಾರು ತಲೆಕೆಡಿಸಿಕೊಂಡಂತೆ ಕಾಣಿತ್ತಿಲ್ಲ. ಮಾಂಸದಂಗಡಿಗಳಲ್ಲಿನ ಸ್ವಚ್ಛತೆ ಬಗ್ಗೆ ಪರಿಶೀಲಿಸುವುದೂ ಕಂಡು ಬರುತ್ತಿಲ್ಲ. ಬೀಡಾಡಿ ದನಗಳು ಮತ್ತು ಹಂದಿಗಳ ವಿರುದ್ಧ ಕಾರ್ಯಾಚರಣೆ, ಖಾಸಗಿ ಪಶುಚಿಕಿತ್ಸಾಲಯಗಳಿಗೆ ಪರವಾನಗಿ ವಿತರಣೆ ಜವಾಬ್ದಾರಿ ನಿರ್ವಹಣೆಯನ್ನು ಜನರ ಆರೋಗ್ಯ ಹೊಣೆ ಹೊತ್ತ ವೈದ್ಯರಿಂದ ಮಾಡಿಸುವುದು ಎಷ್ಟು ಸರಿ ಎಂಬ ಪ್ರಶ್ನೆ ಕಾಡತೊಡಗಿದೆ.

ಪರ್ಯಾಯ ವ್ಯವಸ್ಥೆಗೂ ಮುಂದಾಗಲಿಲ್ಲ: ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಅನೇಕ ಪಶು ವೈದ್ಯಕೀಯ ಆಸ್ಪತ್ರೆಗಳಲ್ಲಿ ಸಾಕಷ್ಟು ಪಶು ವೈದ್ಯರು ಇದ್ದು, ಅವರನ್ನಾದರೂ ಬಳಸಿಕೊಂಡು ನಗರದ ಕಸಾಯಿಖಾನೆಯಲ್ಲಿ ವೈಜ್ಞಾನಿಕ ವಿಧಾನದಲ್ಲಿ ಕುರಿ–ಮೇಕೆಗಳ ವಧೆ ನಡೆಯುವ ಬಗ್ಗೆ ನಿಗಾ ವಹಿಸುವ ಜವಾಬ್ದಾರಿ ನೀಡಬಹುದು. ಆದರೆ ಇಂತಹ ಪರ್ಯಾಯ ವ್ಯವಸ್ಥೆ ಬಗ್ಗೆಯೂ ಪಾಲಿಕೆ ತಲೆಕೆಡಿಸಿಕೊಂಡಂತೆ ಕಾಣುತ್ತಿಲ್ಲ. ಮೈಸೂರು ಸೇರಿದಂತೆ ಎಲ್ಲಾ ಪಾಲಿಕೆಗಳಿಗೆ ಪಶು ವೈದ್ಯರು ಮತ್ತು ಪಶು ನಿರೀಕ್ಷಕರ ಹುದ್ದೆಗಳ ಮರು ನಿಯೋಜನೆ ಮಾಡಬೇಕೆಂದು ಸರ್ಕಾರದ ಮೇಲೆ ಒತ್ತಡವಿರಲೀ, ಮನವಿ ಸಲ್ಲಿಸಿದಂತೆಯೂ ಕಾಣುತ್ತಿಲ್ಲ.

ಹೆಚ್ಚುತ್ತಿವೆ ಬೀದಿ ನಾಯಿಗಳು: ಮೈಸೂರು ನಗರದಲ್ಲಿ ಬೀದಿ ನಾಯಿಗಳ ಸಂಖ್ಯೆ ದಿನೇ ದಿನೆ ಹೆಚ್ಚಾಗುತ್ತಿವೆ. ಕೆಲ ಮಕ್ಕಳ ಮೇಲೆ ಇತ್ತೀಚೆಗಷ್ಟೇ ಬೀದಿ ನಾಯಿಗಳು ದಾಳಿ ನಡೆಸಿ ಕಚ್ಚಿ, ಗಾಯಗೊಳಿಸಿವೆ. ದಿನೇ ದಿನೆ ಬೀದಿನಾಯಿಗಳ ಸಂಖ್ಯೆ ಹೆಚ್ಚುತ್ತಿರುವುದನ್ನು ನೋಡಿದರೆ ಇವುಗಳ ಸಂತಾನಹರಣ ಶಸ್ತ್ರಚಿಕಿತ್ಸೆಯೂ ಸಮರ್ಪಕವಾಗಿ ಆದಂತೆ ಕಾಣುತ್ತಿಲ್ಲ ಎಂದು ದೂರಿರುವ ನಾಗರಿಕರೊಬ್ಬರು, ಪಾಲಿಕೆಯಲ್ಲಿ ಪಶುವೈದ್ಯರು ಇಲ್ಲದೇ ಇರುವುದೇ ಇದಕ್ಕೆ ಕಾರಣ ಇರಬಹುದು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

> “ **ಸಾವು–ನೋವಿಗೆ ಕಾರಣವಾದ ಕೋವಿಡ್ ವೈರಸ್‌ಗೂ ಬಾವಲಿ ಮೂಲವೆಂದು ಬಲವಾದ ಶಂಕೆ ಇದೆ. ನಮ್ಮ ಸುತ್ತ ಮುತ್ತಲ ಪ್ರಾಣಿಗಳು ಹಾಗೂ ಸಾಕು ಪ್ರಾಣಿಗಳು ಆರೋಗ್ಯದಿಂದ ಇದ್ದರೆ ಮಾನವ ಸಮುದಾಯವೂ ಕ್ಷೇಮದಿಂದ ಇರಲು ಸಾಧ್ಯ. ಇಲ್ಲವಾದರೆ ಪ್ರಾಣಿಜನ್ಯ ಕಾಯಿಲೆಗಳು ಮನುಕುಲವನ್ನು ಕಾಡಲಾರಂಭಿಸುತ್ತವೆ. ಹಾಗಾಗಿ ಪಶುವೈದ್ಯರನ್ನು ಅಗತ್ಯವಿರುವೆಡೆ ಸೂಕ್ತ ರೀತಿಯಲ್ಲಿ ಬಳಸಿಕೊಳ್ಳುವುದು ಅಗತ್ಯ. ಆದರೆ ಪಾಲಿಕೆಗಳಲ್ಲಿರುವ ಪಶುವೈದ್ಯರು ಮತ್ತು ಪಶು ವೈದ್ಯಕೀಯ ನಿರೀಕ್ಷಕರ ಹುದ್ದೆಗಳನ್ನೇ ರದ್ದು ಮಾಡಿರುವುದು ನಿಜಕ್ಕೂ ದುರಂತ. ಇಂತಹ ಅವೈಜ್ಞಾನಿಕ ನಿರ್ಧಾರಗಳನ್ನು ಸರ್ಕಾರಗಳು ಕೈಗೊಳ್ಳುವುದು ವಿಪರ್ಯಾಸ. ಇಂತಹ ಕ್ರಮಗಳಿಗೆ ಯಾವ ತಜ್ಞರ ಸಲಹೆ ಕಾರಣವೋ ಗೊತ್ತಿಲ್ಲ ಎಂದು ಪಶುವೈದ್ಯರೊಬ್ಬರು ಬೇಸರ ವ್ಯಕ್ತಪಡಿಸಿದರು. ಬೆಂಗಳೂರು ಬಿಬಿಎಂಪಿಯಲ್ಲಿ 15ಕ್ಕೂ ಹೆಚ್ಚು ಪಶುವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. ಮೈಸೂರು ನಗರದ ಜನಸಂಖ್ಯೆಗೆ ಅನುಗುಣವಾಗಿ ಕನಿಷ್ಠ ಐದಾರು ಮಂದಿ ಪಶುವೈದ್ಯರು ಬೇಕಾಗಬಹುದು. ನನಗೆ ಲಭಿಸಿದ ಮಾಹಿತಿಯಂತೆ ಬಿಬಿಎಂಪಿ ಹೊರತುಪಡಿಸಿ ರಾಜ್ಯದ ನಾನಾ ಪಾಲಿಕೆಗಳಲ್ಲಿ ಅಗತ್ಯವಿಲ್ಲವೆಂದು ವಿವಿಧ ರೀತಿಯ ಒಟ್ಟು 140ಕ್ಕೂ ಹೆಚ್ಚು ಹುದ್ದೆಗಳನ್ನು ರದ್ದು ಮಾಡಲಾಗಿದೆ. ಈ ಪೈಕಿ ಪಶುವೈದ್ಯರ ಹುದ್ದೆಗಳು ಸೇರಿವೆ. ಆದರೆ ಪಾಲಿಕೆಯಲ್ಲಿ ಪಶುವೈದ್ಯರ ಹುದ್ದೆಗಳನ್ನು ಅನಗತ್ಯವೆಂದು ಕೈಬಿಡುವುದು ಅವೈಜ್ಞಾನಿಕ ಎಂದು ಅವರು ತಿಳಿಸಿದರು.**

ಹವಾಲಾ ಹಣ ವರ್ಗಾವಣೆ ಶಂಕೆ

ಕೇರಳ, ತಮಿಳುನಾಡು ರಾಜ್ಯಗಳಿಗೆ ಹವಾಲಾ ಹಣ ಸಾಗಣೆಯಲ್ಲಿ ಮೈಸೂರು ನಗರ ಸಂಪರ್ಕ ಸೇತುವೆಯಾಗುವುದರಿಂದ ಸ್ಥಳೀಯ ಪೊಲೀಸರು ಎಚ್ಚರ ವಹಿಸಿ, ಅನುಮಾನ ಬಂದಲ್ಲಿ ಅಂತಹ ವಾಹನಗಳನ್ನು ಎಲ್ಲೆಡೆ ಎಚ್ಚರ ವಹಿಸಿ ಪರಿಶೀಲಿಸಬೇಕೆಂದು ಸೀಮಾ ಲಾಟ್ಕರ್ ತಾಕೀತು ಮಾಡಿದ್ದಾರೆ. ಮೈಸೂರು ನಗರದಾದ್ಯಂತ ರಾತ್ರಿ–ಹಗಲು ಗಸ್ತು ಕಾರ್ಯಾಚರಣೆ ತೀವ್ರ ಗೊಳಿಸಿ ವಾಹನಗಳ ತಪಾಸಣೆ ಮಾಡಿ ಸಕಾರಣವಿಲ್ಲದೇ ಹೆಚ್ಚಿನ ಪ್ರಮಾಣದ ಹಣ ಸಾಗಣೆ ಕಂಡು ಬಂದಲ್ಲಿ ತೀವ್ರ ವಿಚಾರಣೆ ನಡೆಸಿ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆಯೂ ಅವರು ಇದೇ ವೇಳೆ ಸೂಚನೆ ನೀಡಿದ್ದಾರೆ.

ಬ್ಯಾಂಕ್, ಎಟಿಎಂ, ಖಾಸಗಿ ಹಣ ಕಾಸು ಸಂಸ್ಥೆಗಳು, ಸಾರ್ವಜನಿಕ ಸ್ಥಳ, ಪ್ರಮುಖ ವಾಣಿಜ್ಯ ರಸ್ತೆ, ಜಂಕ್ಷನ್ ಗಳಲ್ಲಿ ಖುದ್ದು ಹಾಜರಿದ್ದು ಚಲನ–ವಲನ, ಹಣಕಾಸು ವಹಿವಾಟುಗಳ ಮೇಲೆ ನಿಗಾ ಇರಿಸುವ ಜೊತೆಗೆ ಸಿಸಿ ಕ್ಯಾಮರಾಗಳ ಫುಟೇಜ್‌ಗಳನ್ನು ಆಗಾಗ ವೀಕ್ಷಿಸಿ ಯಾವುದೇ ಅಕ್ರಮ, ಅಪರಾಧಗಳು ನಡೆಯದಂತೆ ಎಚ್ಚರ ವಹಿಸಿ ಎಂದು ಸೀಮಾ ಲಾಟ್ಕರ್ ತಮ್ಮ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಿಂಗ್ ರಸ್ತೆಯ ಮಣಿ ಪಾಲ್ ಆಸ್ಪತ್ರೆ ಜಂಕ್ಷನ್, ರಾಯಲ್ ಇನ್, ಹಿನಕಲ್, ಬೋಗಾದಿ, ಶ್ರೀರಾಂಪುರ, ನಂಜನಗೂಡು ರಸ್ತೆ ಜಂಕ್ಷನ್, ದೇವೇಗೌಡ ಸರ್ಕಲ್, ಸಾತಗಳ್ಳಿ ಬಸ್ ನಿಲ್ದಾಣ, ಹೊರ ವಲಯದ ನಿರ್ಜನ ಪ್ರದೇಶಗಳಲ್ಲೂ ಗಸ್ತು ಕಾರ್ಯಾಚರಣೆ ಮಾಡಿ ಜನರಿಗೆ ಪೊಲೀಸರ ಹಾಜರಿಯನ್ನು ಖಾತರಿಪಡಿಸಿದಲ್ಲಿ ಅಪರಾಧಗಳನ್ನು ತಡೆಯಬಹುದು ಎಂದು ಅವರು ತಿಳಿಸಿದ್ದಾರೆ. ಬೀಟ್ ಪೊಲೀಸರನ್ನು ಗಸ್ತಿಗೆ ನಿಯೋಜಿಸಿದಾಗ ಅವರ ಕಾರ್ಯ ವೈಖರಿ, ಗಂಭೀರತೆ, ಪರಿ ಣಾಮಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆಯೇ ಎಂಬುದನ್ನು ಆಯಾ ಠಾಣೆ ಇನ್ಸ್‌ಪೆಕ್ಟರ್‌ಗಳು ಮೇಲ್ವಿಚಾರಣೆ ನಡೆಸುವಂತೆಯೂ ಪೊಲೀಸ್ ಆಯುಕ್ತರು ತಾಕೀತು ಮಾಡಿದ್ದಾರೆ. ಡಿಸಿಪಿಗಳಾದ ಎನ್.ಮುತ್ತುರಾಜ್, ಎಸ್.ಜಾಹ್ನವಿ, ಎ.ಮಾರುತಿ, ಎಸಿಪಿಗಳಾದ ಶಾಂತಮಲ್ಲಪ್ಪ, ಅಶ್ವತ್ಥನಾರಾಯಣ, ಗಜೇಂದ್ರ ಪ್ರಸಾದ್, ರವೀಶ್, ಸಂದೇಶ್ ಕುಮಾರ್, ಪರಶುರಾಮಪ್ಪ, ಎಲ್ಲಾ ಠಾಣೆಗಳ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್‌ಗಳು ಸಭೆಯಲ್ಲಿ ಹಾಜರಿದ್ದರು.

ಏಕಕಾಲಕ್ಕೆ ಚುನಾವಣೆ ಸಂಬಂಧದ ಜೆಪಿಸಿ ಎರಡನೇ ಸಭೆ ಜ.31ಕ್ಕೆ

ನವದೆಹಲಿ: ಏಕಕಾಲಕ್ಕೆ ಚುನಾವಣೆಗಳನ್ನು ನಡೆಸುವುದಕ್ಕೆ ಸಂಬಂಧಿಸಿದ ಎರಡು ಮಸೂದೆಗಳ ಪರಾಮರ್ಶೆ ನಡೆಸುವುದಕ್ಕಾಗಿ ಜಂಟಿ ಸಂಸದೀಯ ಸಮಿತಿ(ಜೆಪಿಸಿ)ಯ ಎರಡನೇ ಸಭೆ ಜನವರಿ 31ರಂದು ನಡೆಯಲಿದೆ.

ಈ ಬಗ್ಗೆ ಲೋಕಸಭೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ತಿದ್ದುಪಡಿ ಮಸೂದೆಗಳ ಪರಾಮರ್ಶೆಗೆ ಸಂಬಂಧಿಸಿದ ಪ್ರಕ್ರಿಯೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗುತ್ತದೆ ಎಂದು ತಿಳಿಸಲಾಗಿದೆ.

ಸಂವಿಧಾನ(129ನೇ ತಿದ್ದುಪಡಿ) ಮಸೂದೆ ಹಾಗೂ ಕೇಂದ್ರಾಡಳಿತ ಪ್ರದೇಶಗಳ ಕಾಯ್ದೆಗಳು(ತಿದ್ದುಪಡಿ) ಮಸೂದೆಗಳನ್ನು ಸಂಸತ್ ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲಾಗಿತ್ತು. ನಂತರ ಅವುಗಳನ್ನು ಜಂಟಿ ಸಂಸದೀಯ ಸಮಿತಿಗೆ ಒಪ್ಪಿಸಲಾಗಿತ್ತು.

ಜ.8ರಂದು ನಡೆದಿದ್ದ ಸಮಿತಿಯ ಮೊದಲ ಸಭೆಯಲ್ಲಿ, ಕಾನೂನು ಮತ್ತು ನ್ಯಾಯ ಸಚಿವಾಲಯದ ಪ್ರತಿನಿಧಿಗಳು ಹಾಜರಾಗಿ, ಸಮಿತಿ ಸದಸ್ಯರಿಗೆ ವಿವರಣೆ ನೀಡಿದ್ದರು. ಕೆಲ ವಿವಾದಾತ್ಮಕ ಅಂಶಗಳ ಕುರಿತು ಈ ಮೊದಲ ಸಭೆಯಲ್ಲಿ ಕಾವೇರಿದ ಚರ್ಚೆ ನಡೆದಿತ್ತು. ಅದರಲ್ಲೂ ಏಕಕಾಲಕ್ಕೆ ಚುನಾವಣೆಗಳನ್ನು ನಡೆಸಬೇಕು ಎಂಬ ಪರಿಕಲ್ಪನೆಯು ಸಂವಿಧಾನದ ಮೂಲ ಸ್ವರೂಪ ಹಾಗೂ ಒಕ್ಕೂಟ ವ್ಯವಸ್ಥೆ ಮೇಲಿನ ದಾಳಿ ಎಂಬುದಾಗಿ ಸಮಿತಿಯಲ್ಲಿರುವ ವಿಪಕ್ಷಗಳ ಸದಸ್ಯರು ಟೀಕಿಸಿದ್ದರು.


ಬಿಜೆಪಿ ಸಂಸದ ಪಿ.ಪಿ.ಚೌಧರಿ ನೇತೃತ್ವದ ಜಂಟಿ ಸದನ ಸಮಿತಿಯಲ್ಲಿ 27 ಲೋಕಸಭೆ ಸದಸ್ಯರು ಹಾಗೂ 12 ರಾಜ್ಯಸಭೆ ಸದಸ್ಯರು ಸೇರಿ 39 ಸದಸ್ಯರು ಇದ್ದಾರೆ.

ತಿ.ನರಸೀಪುರ ಬಳಿ ಖೋಟಾ ನೋಟು ಪ್ರಿಂಟ್: ಇಬ್ಬರ ಸೆರೆ

ತಿ.ನರಸೀಪುರ, ಜ.21– ಖೋಟಾ ನೋಟು ಪ್ರಿಂಟ್ ಮಾಡುತ್ತಿದ್ದ ಇಬ್ಬರು ಖತರ್ನಾಕ್ ಆಸಾಮಿಗಳನ್ನು ಪಟ್ಟಣ ಪೊಲೀಸರು ತಾಲೂಕಿನ ಮಾದಾಪುರ ಗ್ರಾಮದ ಬಳಿ ವಶಕ್ಕೆ ಪಡೆದಿದ್ದಾರೆ. ತಾಲೂಕಿನ ಹಿರಿಯೂರು ಗ್ರಾಮದ ನಾಗೇಶ್(25) ಹಾಗೂ ಶಿವಪ್ರಸಾದ್ (48) ಬಂಧಿತ ಆರೋಪಿಗಳು. ಮಾದಾಪುರ ಬಳಿ ದನಕಟ್ಟುವ ಶೆಡ್‌ನಲ್ಲಿ ಖೋಟಾ ನೋಟು ಪ್ರಿಂಟ್ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಮೇಲಾಧಿಕಾರಿಗಳ ಮಾರ್ಗದರ್ಶನದಲ್ಲಿ ತಿ.ನರಸೀಪುರ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್‌ಪೆಕ್ಟರ್ ಧನಂಜಯ್, ಎಸ್‌ಐ ಜಗದೀಶ್ ಧೂಳ್‌ಶೆಟ್ಟಿ, ಎಎಸ್‌ಐ ಚೆಲುವರಾಜು ಹಾಗೂ ಸಿಬ್ಬಂದಿ, ಪುರಸಭೆ ಕಚೇರಿ ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಧು, ಮೇಸ್ತ್ರಿ ಸೋಮ ಸಹಾಯದೊಂದಿಗೆ ದಾಳಿ ನಡೆಸಿ ಪರಿಶೀಲಿಸಿದಾಗ ಆರೋಪಿಗಳು ತಾವು ಮಲಗಲು ಹಾಸಿಕೊಂಡಿದ್ದ ಹಾಸಿಗೆ ಪಕ್ಕದ ರಟ್ಟಿನ ಬಾಕ್ಸ್‌ನಲ್ಲಿ ಖೋಟಾ ನೋಟು ಪ್ರಿಂಟ್ ಮಾಡಲು ಬಳಸುತ್ತಿದ್ದ ಒಂದು ಕಪ್ಪು ಬಣ್ಣದ ಎಪ್ಸನ್ ಕಲರ್ ಪ್ರಿಂಟರ್, ಕಪ್ಪು ಬಣ್ಣದ ಪೇಪರ್ ಮೆಜರ್‌ಮೆಂಟ್ ಕಟಿಂಗ್ ಸ್ಕೇಲ್, ಒಂದು ಎ4 ಅಳತೆಯ ಗಾಂಧೀಜಿ ಭಾವಚಿತ್ರದ ವಾಟರ್ ಮಾರ್ಕ್ ಮತ್ತು ನೋಟಿನ ಗೆರೆಯುಳ್ಳ ಬಿಳಿ ಬಣ್ಣದ ಹಾಳೆ, ಒಂದು 500 ರೂ. ಮುಖಬೆಲೆಯ ಒಂದು ಕಡೆ ಪ್ರಿಂಟ್ ಮಾಡಿರುವ ಮತ್ತೊಂದು ಕಡೆ ಖಾಲಿ ಇರುವ ಅರೆಬರೆ ನಕಲಿ ನೋಟು, 4 ಕಲರ್ ಇಂಕ್ ಬಾಟಲ್‌ಗಳು, ಎ4 ಸೈಜ್ ಅಳತೆಯ 19 ಸಂಖ್ಯೆಯ ಬಿಳಿ ಹಾಳೆಗಳು, ಅಸಲಿ ನೋಟುಗಳಂತೆ ಕಾಣುವ 25,500 ರೂ. ಮೌಲ್ಯದ 51 ಖೋಟಾ ನೋಟುಗಳು, ಕೃತ್ಯಕ್ಕೆ ಬಳಸುತ್ತಿದ್ದ 2 ಮೊಬೈಲ್, ಮೊಬೈಲ್ ಅಡಾಪ್ಟರ್, ಕಪ್ಪು ಬಣ್ಣದ 16 ಜಿಬಿಯ ಹೆಚ್‌ಪಿ ಕಂಪನಿಯ ಪೆನ್‌ಡ್ರೈವ್, ಕೆನರಾ ಬ್ಯಾಂಕ್ ಎಟಿಎಂ ಕಾರ್ಡ್ ಸೇರಿದಂತೆ ಇನ್ನಿತರೆ ವಸ್ತುಗಳನ್ನು ವಶಪಡಿಸಿ ಕೊಂಡು ಆರೋಪಿಗಳಾದ ನಾಗೇಶ್, ಶಿವಪ್ರಸಾದ್ ಅವರನ್ನು ಬಂಧಿಸಿ ಮುಂದಿನ ಕ್ರಮ ಜರುಗಿಸಿದ್ದಾರೆ. ಈ ಸಂಬಂಧ ತಿ.ನರಸೀಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ನಾಗೇಶ್



ಶಿವಪ್ರಸಾದ್

ಮೂರನೇ ಪುಟದಿಂದ

ಪ್ರಿಯಾಂಕಾ ಗಾಂಧಿ ಕಿತ್ತೂರು ಚನ್ನಮ್ಮನಂತೆ!

ಮೋದಿ ಅವರು ಎಂದೂ ಗಮನ ಕೊಟ್ಟಿಲ್ಲ. ಆದರೆ, ದಲಿತರ ಪರ ಎಂದು ಪ್ರಚಾರ ಮಾತ್ರ ತೆಗೆದುಕೊಳ್ಳುತ್ತಾರೆ. ಡಿ.26ರಂದು ನಾವು ಹೊಸ ಸಂಕಲ್ಪ ಮಾಡಿದ್ದೇವೆ. ನವಸತ್ಯಾಗ್ರಹ ಸಭೆ ಮಾಡಿದ್ದೇವೆ. ಕರ್ನಾಟಕದ ಕಾಂಗ್ರೆಸ್ ಬಲಶಾಲಿ ಎಂದು ನೀವು ತೋರಿಸಿದ್ದೀರಿ. ಇಷ್ಟು ಅಚ್ಚುಕಟ್ಟಾದ ಕಾರ್ಯಕ್ರಮ ನಾನು ಬೇರೆಲ್ಲೂ ನೋಡಿಲ್ಲ. ಕೆಪಿಸಿಸಿ ಹಾಗೂ ಸಿದ್ದರಾಮಯ್ಯ ಸರ್ಕಾರ ಹಾಗೂ ನಾಯಕರಿಗೆ ಧನ್ಯವಾದ ಸಲ್ಲಿಸುತ್ತೇನೆ. ಇದು ಕಿತ್ತೂರು ರಾಣಿ ಚನ್ನಮ್ಮನ ಜನ್ಮಭೂಮಿ. ಈ ನಾಡಿನಲ್ಲಿ ಹುಟ್ಟಿ ದೇಶದ ಸ್ವಾತಂತ್ರ್ಯದ ರಕ್ಷಣೆಗೆ ಚನ್ನಮ್ಮ ಹೋರಾಡಿದರು ಎಂದು ಖರ್ಗೆ ಸ್ಮರಿಸಿದರು.

ಭಾರತಕ್ಕಾಗಿ ಸಾಯಲು ಬಯಸುತ್ತೇನೆ: ನಾನು ಬದುಕಿರಲು ಬಯಸುತ್ತೇನೆ, ಕೇವಲ ಭಾರತಕ್ಕಾಗಿ ಸಾಯಲು ಬಯಸುತ್ತೇನೆ. ಬದುಕಿದರೂ ದೇಶಕ್ಕಾಗಿ, ಸತ್ತರೂ ದೇಶಕ್ಕಾಗಿ ಎಂಬ ಸಂದೇಶವನ್ನು ಗಾಂಧಿ ಇದೇ ನೆಲದಿಂದ ಕರೆ ಕೊಟ್ಟರು. ಅಂಥವರ ಬಗ್ಗೆಯೂ ಬಿಜೆಪಿಯವರು ಇಂದು ಟೀಕೆ ಮಾಡುತ್ತಾರೆ. ಅವರನ್ನು ಗುಂಡು ಹಾಕಿ ಕೊಂದವರು ಯಾರು, ಗೋಡ್ಸೆ ಯಾರ ಶಿಷ್ಯ, ಸಾವರ್ಕರ್ ಶಿಷ್ಯ. ಇವರೆಲ್ಲರನ್ನೂ ಮೋದಿ, ಶಾ ಅವರು ಹೊತ್ತು ಮೆರೆಯುತ್ತಿದ್ದಾರೆ ಎಂದು ವಾಗ್ದಾಳಿ ಮಾಡಿದರು. ಗಾಂಧಿ–ನೆಹರು ಮಧ್ಯೆ, ಪಟೇಲ್–ಗಾಂಧಿ, ಅಂಬೇಡ್ಕರ್–ಗಾಂಧಿ ಮಧ್ಯೆ ವ್ಯತ್ಯಾಸ ಮತ್ತು ಜಗಳ ಇತ್ತು ಎಂದು ಪ್ರಚಾರ ಮಾಡುತ್ತಾರೆ. ಈಗಿನ ಕಾಂಗ್ರೆಸ್‌ನಲ್ಲಿಯೂ ವ್ಯತ್ಯಾಸ ತೋರಿಸಿ ಒಡೆದಾಳುತ್ತಿದ್ದಾರೆ. ನಮಗಾಗಿ ಹೋರಾಡಿದ ಮಹಾತ್ಮರಲ್ಲೇ ಬಿಜೆಪಿಯವರು ಒಡೆದಾಳುವ ನೀತಿ ಅನುಸರಿಸುತ್ತಿದ್ದಾರೆ. ಅಹಮದಾಬಾದ್‌ನ ಗುಜರಾತಿನ ಗಾಂಧಿ ಅವರ ಬಗ್ಗೆಯೇ ಮೋದಿಗೆ ಕಳಕಳಿ ಇಲ್ಲ. ಎಂದೂ ಕೂಡ ಒಳ್ಳೆಯ ಮಾತನಾಡಿಲ್ಲ. ಜಯಂತಿಗೆ ಬಂದು ನಮಸ್ಕಾರ ಮಾಡಿ ಹೋಗುತ್ತಾರೆ. ಅವರು ಪೂಜೆ ಮಾಡುವುದು ಗಾಂಧೀಜಿ ಅವರಿಗೆ ಗುಂಡು ಹಾಕಿದ ಗೋಡ್ಸೆಗೆ. ಸಾವರ್ಕರ್ ಅವರೇ ಲೀಡರ್, ಗಾಂಧೀ ಅಲ್ಲ ಎಂದು ಅವರು ಬಿಂಬಿಸಲು ಹೊರಟಿದ್ದಾರೆ ಎಂದು ಮಲ್ಲಿಕಾರ್ಜುನ ಖರ್ಗೆ ಹರಿಹಾಯ್ದರು.

ಗಾಂಧಿ ಕಾಂಗ್ರೆಸ್ ಅಧ್ಯಕ್ಷತೆಯ ಶತಮಾನೋತ್ಸವ: 1924ರಲ್ಲಿ ಅಂಬೇಡ್ಕರ್ ಕೂಡ 'ಬಹಿಷ್ಕೃತ ಹಿತಕರ್ಣಿ ಸಭಾ' ಮಾಡಿದರು. ಅದಕ್ಕೂ ಈಗ ನೂರು ವರ್ಷ ಆಗಿದೆ. ಕಾಂಗ್ರೆಸ್ ಅಂಬೇಡ್ಕರ್‌ಗೆ ಬೆಲೆ ಕೊಡಲಿಲ್ಲ, ಹಿಂಸೆ ಮಾಡಿದರು ಎಂದೆಲ್ಲ ಅಪಪ್ರಚಾರ ಮಾಡುತ್ತಾರೆ. ಇದು ಸಾಧ್ಯವಿಲ್ಲ. ಅಂಬೇಡ್ಕರ್ ಪ್ರತಿಮೆ ಮೊದಲು ನಿರ್ಮಾಣ ಮಾಡಿದ್ದು ಇಂದಿರಾ ಗಾಂಧಿ ಅವರು. ಆದರೆ, ಈ ಮೋದಿ ಅಂಬೇಡ್ಕರ್ ಮೂರ್ತಿ ಮೂಲೆಗೆ ಹಾಕಿದ್ದಾನೆ. ಯಾರು ಬಂದರೂ ಅಂಬೇಡ್ಕರ್ ಕಾಣಿಸುವುದಿಲ್ಲ. ಸಂವಿಧಾನ, ಅಂಬೇಡ್ಕರ್, ನೆಹರೂ ಮೂರ್ತಿ ಸುಟ್ಟವರು ಬಿಜೆಪಿ–ಆರ್‌ಎಸ್‌ಎಸ್, ಹಿಂದೂ ಮಹಾಸಭಾದವರು. ಇದೆಲ್ಲ ಇತಿಹಾಸದಲ್ಲಿದೆ. ನಾನು ಚಾಲೇಂಜ್ ಮಾಡುತ್ತೇನೆ. ಎರಡು ಸಾರಿ ಬಾಬಾಸಾಹೇಬ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದು ಕಾಂಗ್ರೆಸ್ಸಿಗರು. ಅಂಬೇಡ್ಕರ್ ಅವರನ್ನು ಸೋಲಿಸಿದರು ಎಂದು ಹೇಳುತ್ತೀರಿ ಎಂದು ಪ್ರಶ್ನಿಸಿದರು.

ರಾಹುಲ್ ಸಂವಿಧಾನ ಅಭಿಯಾನದ ಬಳಿಕ ಮೋದಿ ಎಚ್ಚೆತ್ತುಕೊಂಡಿದ್ದಾರೆ: ಜವಾಹರಲಾಲ್ ನೆಹರು ಅವರು ಎಂ.ಆರ್.ಜಯಕರ್ ಅವರ ರಾಜೀನಾಮೆ ಕೊಡಿಸಿ ಅಂಬೇಡ್ಕರ್ ಅವರನ್ನು ಆ ಸ್ಥಾನದಲ್ಲಿ ಕೂಡ್ರಿಸಿದರು. ರಾಮಲೀಲಾ ಮೈದಾನದಲ್ಲಿ ನೆಹರು, ಅಂಬೇಡ್ಕರ್ ಫೋಟೋ ಸುಟ್ಟರು. ನಮ್ಮನ್ನು ಕೆಣಕಬೇಡಿ. ಕೆಣಕಿದರೆ ಸುಟ್ಟು ಹೋಗುತ್ತೀರಿ. ನೀವು ಉಳಿಯಂಗಿಲ್ಲ. ನನ್ನ ಸೋಲಿಗೆ ಸಾವರ್ಕರ್ ಮತ್ತು ಎಸ್.ಎ.ಡಾಂಗೆ ಎಂಬುವರು ಸೇರಿ ಸೋಲಿಸಿದ್ದಾರೆ ಎಂದು ಅಂಬೇಡ್ಕರ್ ಅವರು ತಮ್ಮ ಸ್ನೇಹಿತ ಕಮಲಾಕಾಂತ್ ಅವರಿಗೆ ಪತ್ರ ಬರೆದಿದ್ದಾರೆ. ನೀವು ಇಂಥ ಇತಿಹಾಸದ ದಾಖಲೆ ತಿಳಿದುಕೊಳ್ಳಬೇಕು. ಆದರೆ, ಅಂಬೇಡ್ಕರ್ ಅವರಿಗೆ ಕಾಂಗ್ರೆಸ್ ದೊಡ್ಡ ಗೌರವ, ಅಧಿಕಾರ ಸ್ಥಾನ ನೀಡಿತು. ಅಂಬೇಡ್ಕರ್ ಸಂವಿಧಾನ, ಮನುಸ್ಮೃತಿ ಯಂತೆ ಇಲ್ಲ, ಅದನ್ನು ಒಪ್ಪುವುದಿಲ್ಲ, ಅಶೋಕ ಚಕ್ರ, ತಿರಂಗಾ ಝಂಡಾ ಒಪ್ಪಲಿಲ್ಲ ನೀವು. 50 ವರ್ಷ ತಿರಂಗ ಧ್ವಜವನ್ನು ಅವರು ಕಚೇರಿಯಲ್ಲಿ ಹಾರಿಸಲಿಲ್ಲ. ರಾಹುಲ್ ಗಾಂಧಿ ಅವರು ಸಂವಿಧಾನ ರಕ್ಷಣೆ ಆಂದೋಲನ ಶುರು ಮಾಡಿದ ಮೇಲೆ ಎಚ್ಚೆತ್ತುಕೊಂಡ ಮೋದಿ, ಈಗ ಸಂವಿಧಾನ ಕಾಪಾಡುವ ಮಾತನಾಡುತ್ತಿದ್ದಾರೆ ಎಂದು ಮಲ್ಲಿಕಾರ್ಜುನ ಖರ್ಗೆ ಕಿಡಿಕಾರಿದರು.

ದೇವರ ಹೆಸರು ಹೇಳಿದ್ದರೆ ಏಳು ಜನ್ಮಕ್ಕೂ ಸ್ವರ್ಗ ಸಿಗುತ್ತಿತ್ತು. ಅಂಬೇಡ್ಕರ್ ಹೆಸರು ಹೇಳಿ ಏನು ಬರುತ್ತದೆ ಎಂದು ಶಾ ಹೇಳಿದ್ದಾರೆ. ಇದಕ್ಕೆ ನಾವು ಉತ್ತರ ಕೊಡಬೇಕಿದೆ. ನಮ್ಮ ಸಂಸದರು ಧರಣಿ ಮಾಡಿದರು. ಇದಕ್ಕೆ ದೇಶದ ಜನರ ಅಗತ್ಯವಿದೆ. ನೀವು ನಿಮ್ಮೊಂದಿಗೆ ಹೋರಾಡುವ ಜನರ ಜತೆಗೆ ಇರುತ್ತೀರೋ ಅಥವಾ ಅಂಬೇಡ್ಕರ್‌ಗೆ ಅವಮಾನ ಮಾಡಿದವರ ಜತೆಗೆ ಹೋಗುತ್ತೀರೋ ಯೋಚನೆ ಮಾಡಿ. ಗೃಹ ಸಚಿವ ಅಮಿತ್ ಶಾ ಅವರು ದೇಶದ ಕ್ಷಮೆ ಕೇಳಲೇಬೇಕು ಎಂದು ಖರ್ಗೆ ಆಗ್ರಹಿಸಿದರು.

ರಕ್ಷಣೆಗೆ ಬದ್ಧ

ಸ್ಥಾಪಿಸಲು ವರ್ಷವಿಡೀ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಅಭಿಯಾನ ಆಚರಿಸಲಾಗುವುದು, ಗಾಂಧಿ ಹಾಗೂ ಅವರ ವಿಚಾರಧಾರೆಗಳು ಇಡೀ ವಿಶ್ವಕ್ಕೆ ಇಂದಿಗೂ ಪ್ರಸ್ತುತವಾಗಿವೆ. ಮಹಾತ್ಮ ಗಾಂಧಿ, ಡಾ.ಅಂಬೇಡ್ಕರ್ ಮತ್ತು ಸಂವಿಧಾನ ವಿರೋಧಿಸುವ ಅನಾಹುತಕಾರಿ ರಾಜಕಾರಣ ದೇಶದಲ್ಲಿ ನಡೆಯುತ್ತಿದೆ. ಇವುಗಳ ರಕ್ಷಣೆ ಕಾಂಗ್ರೆಸ್ ಜವಾಬ್ದಾರಿಯಾಗಿದೆ. ಪಕ್ಷ ಸಂವಿಧಾನ ಪರವಾಗಿದೆ. ವಿರೋಧಿಗಳು ಮನುವಾದದ ಪರವಾಗಿದ್ದಾರೆ ಎಂದು ಟೀಕಿಸಿದರು.

ನಂತರ ಗಾಂಧಿ ಪ್ರತಿಮೆ ಅನಾವರಣಗೊಳಿಸಿ ಮಾತನಾಡಿದ ಅವರು, ಮಹಾತ್ಮ ಗಾಂಧಿ ರಾಮಭಕ್ತ ಹಾಗೂ ಅತ್ಯುತ್ತಮ ಹಿಂದೂ ಆಗಿದ್ದರು, ಅವರನ್ನು ಬಿಜೆಪಿ ಪರಿವಾರದ ಗೋಡ್ಸೆ ಹತ್ಯೆ ಮಾಡಿದ, ನಾವು ಮಹಾತ್ಮಗಾಂಧಿಯ ಹಿಂದೂತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ. ಬಿಜೆಪಿ ಪರಿವಾರ ಕೊಲೆಗಡುಕ ಗೋಡ್ಸೆ ಸಿದ್ಧಾಂತವನ್ನು ಪಾಲಿಸುತ್ತಿದೆ ಎಂದರು ಆರೋಪಿಸಿದರು.

ಗಾಂಧಿ ಹಿಂದೂತ್ವ ಹಾಗೂ ಗಾಂಧಿ ತತ್ವದ ವಿರೋಧಿಯಾಗಿರುವ ಬಿಜೆಪಿ ಪರಿವಾರ ಸಂವಿಧಾನ ವಿರೋಧಿ, ಅಂಬೇಡ್ಕರ್ ದ್ವೇಷಿಯೂ ಆಗಿದೆ. ಮಹಾತ್ಮಗಾಂಧಿ ವಿಚಾರಗಳನ್ನು ಮುಂದಿನ ಪೀಳಿಗೆಗೆ ಇನ್ನಷ್ಟು ಅರ್ಥಪೂರ್ಣವಾಗಿ ತಲುಪಿಸುವ, ಗಾಂಧಿ ಗ್ರಾಮ ಸ್ವರಾಜ್ಯ ಕನಸು ನನಸು ಮಾಡುವ ಗುರಿಯೊಂದಿಗೆ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಅಭಿಯಾನ' ಮುನ್ನಡೆಸುತ್ತೇವೆ. ನೂರು ವರ್ಷಗಳ ಹಿಂದೆ ಕರ್ನಾಟಕದಲ್ಲಿ ನಡೆದ ಎಐಸಿಸಿ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದ ಮಹಾತ್ಮಗಾಂಧಿ, ಆ ದಿನ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಈ ನೆಲದಲ್ಲಿ ಅವರು ಹಚ್ಚಿಸಿದರು ಎಂದರು.

ಆರ್‌ಎಸ್‌ಎಸ್ ಸಿದ್ಧಾಂತದ ವಿರುದ್ಧ ಸಿಎಂ ವಾಗ್ದಾಳಿ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಂವಿಧಾನ ದ್ವೇಷಿಯಾಗಿರುವ ಆರ್.ಎಸ್.ಎಸ್. ಸಿದ್ಧಾಂತವನ್ನು ಬಿಜೆಪಿ ಭಾರತೀಯರ ಮೇಲೆ ಹೇರುತ್ತಿದೆ. ಇದನ್ನು ಹಿಮ್ಮೆಟ್ಟಿಸೋಣ ಎಂದು ಕರೆ ನೀಡಿದರು. ಅವರು, ಬಿಜೆಪಿ ಪರಿವಾರ ಭಾರತದಲ್ಲಿ ಬಹಳ ವ್ಯವಸ್ಥಿತವಾಗಿ ಒಡಕು ಉಂಟು ಮಾಡುತ್ತಿದೆ. ಭಾರತೀಯರ ನಡುವೆ ಬಿರುಕು ಮೂಡಿಸುತ್ತಾ ಭಾರತವನ್ನು ದುರ್ಬಲಗೊಳಿಸುತ್ತಿದೆ. ಬಿಜೆಪಿಯ ಈ ಯತ್ನವನ್ನು ನಾವು ಸೋಲಿಸಬೇಕು. ಇದಕ್ಕೆ ಗಾಂಧಿ – ಅಂಬೇಡ್ಕರ್ ಅವರೇ ನಮಗೆ ಮಾರ್ಗದರ್ಶಕರು ಎಂದರು. ಸಂವಿಧಾನ ಜಾರಿಯಾದಾಗ ಬಿಜೆಪಿ ಪರಿವಾರ ಅಂಬೇಡ್ಕರ್ ಭಾವಚಿತ್ರವನ್ನು, ಸಂವಿಧಾನವನ್ನು ಸುಟ್ಟಿತ್ತು. ಇದನ್ನು ಈ ದೇಶ, ಈ ದೇಶದ ಜನ ಸಮುದಾಯ ಯಾವತ್ತೂ ಕ್ಷಮಿಸುವುದಿಲ್ಲ, ಮರೆಯುವುದಿಲ್ಲ ಎಂದು ಸಿದ್ದರಾಮಯ್ಯ ಗುಡುಗಿದರು.

ಹಲವು ಭಾಷೆ, ಹಲವು ಜಾತಿ, ಹಲವು ಧರ್ಮ ಭಾರತದ ಶಕ್ತಿ. ಬಿಜೆಪಿ ಪರಿವಾರ ಗಾಂಧಿ, ಅಂಬೇಡ್ಕರ್ ಅವರನ್ನು ದ್ವೇಷಿಸುತ್ತದೆ. ನಾವು ಇಬ್ಬರ ಆಶಯಗಳನ್ನೂ ಪೀಳಿಗೆಯಿಂದ ಪೀಳಿಗೆಗೆ ದಾಟಿಸುತ್ತೇವೆ, ವಿಸ್ತರಿಸುತ್ತೇವೆ. ನಾವು ಸಂವಿಧಾನ ರಕ್ಷಿಸಿದರೆ, ಅದೇ ಸಂವಿಧಾನ ನಮ್ಮೆಲ್ಲರನ್ನೂ ರಕ್ಷಿಸುತ್ತದೆ. ನಮಗೆ ಚುನಾವಣೆ ಗೆಲ್ಲುವುದಕ್ಕಿಂತ ನಮ್ಮ ಸಿದ್ಧಾಂತ ಗೆಲ್ಲಬೇಕು. ಅದು ಮಾತ್ರ ನಮ್ಮ ನಿಜವಾದ ಗೆಲುವು ಎಂದು ಸಿದ್ದರಾಮಯ್ಯ ಹೇಳಿದರು.

ಗಾಂಧಿ, ಅಂಬೇಡ್ಕರ್ ಅವರ ಆಶಯಗಳು, ಮೌಲ್ಯಗಳ ಈಡೇರಿಕೆಗೆ ನಾವು ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇವೆ. ಇದಕ್ಕಾಗಿ ಬಜೆಟ್‌ನಲ್ಲಿ 52 ಸಾವಿರ ಕೋಟಿಗೂ ಅಧಿಕ ಮೊತ್ತದ ಹಣವನ್ನು ನೇರವಾಗಿ ಜನರ ಖಾತೆಗೆ ಹಾಕಿ ರಾಜ್ಯದ ಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸಿದ್ದೇವೆ ಎಂದು ಗ್ಯಾರಂಟಿ ಯೋಜನೆಗಳನ್ನು ಸಿದ್ದರಾಮಯ್ಯ ಸಮರ್ಥಿಸಿಕೊಂಡರು.

ಪಟ್ಟಿ ಸಲ್ಲಿಕೆಗೆ ಸರ್ಕಾರ ಸೂಚನೆ

ಮಾತ್ಯ ಇಲಾಖೆಯ ವಿವರ ಇತ್ಯಾದಿ ಅಂಶಗಳೊಂದಿಗೆ ಅವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ತಯಾರಿಸಿ ಮೂಲ ಅಥವಾ ದೃಢೀಕೃತ ಪ್ರತಿಗಳ ದಾಖಲೆಗಳನ್ನು 3 ದಿನದೊಳಗಾಗಿ ಸಲ್ಲಿಸುವಂತೆ ನಿರ್ದೇಶಿಸಿದ್ದಾರೆ. ಈ ಹಿಂದೆ 2023ರ ಮಾ.18ರಂದು ಮುಡಾ ಆಯುಕ್ತರಾಗಿದ್ದ ಜಿ.ಟಿ.ದಿನೇಶ್ ಕುಮಾರ್ ಹೊರಡಿಸಿದ್ದ 2 ಅಧಿಕೃತ ಜ್ಞಾಪನಾಗಳಲ್ಲಿ ಮೈಸೂರು ತಾಲೂಕು, ಕಸಬಾ ಹೋಬಳಿ ದೇವನೂರು ಗ್ರಾಮದ ಸರ್ವೆ ನಂ.180ರಲ್ಲಿ 5.02 ಎಕರೆ ಹಾಗೂ ಸರ್ವೆ ನಂ.182ರಲ್ಲಿ 2.09 ಎಕರೆ ಪ್ರದೇಶದ ಜಮೀನನ್ನು ಪ್ರಾಧಿಕಾರವು ಪರಿಹಾರ ನೀಡದೆ ವಸತಿ ಬಡಾವಣೆ, ಉದ್ಯಾನವನ ಹಾಗೂ ಹೊರ ವರ್ತುಲ ರಸ್ತೆಗೆ ಬಳಸಿಕೊಂಡಿರುವುದರಿಂದ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಯವರಿಗೆ ಪರಿಹಾರಗಳ ಬದಲಾಗಿ ನಗರಾಭಿವೃದ್ಧಿ ಪ್ರಾಧಿಕಾರಗಳ ನಿಯಮಗಳು–2009, ನಿಯಮ–2(ಡಿ) ಹಾಗೂ ನಿಯಮ 3ರನ್ವಯ ಮತ್ತು ಪ್ರಾಧಿಕಾರದ ಸಭಾ ನಿರ್ಣಯದಂತೆ ಅಭಿವೃದ್ಧಿಪಡಿಸಿದ ಪ್ರತಿಷ್ಠಿತ ಬಡಾವಣೆಗಳಲ್ಲಿ ಒಟ್ಟು 75,224 ಚದರ ಅಡಿ ವಿಸ್ತೀರ್ಣದ ನಿವೇಶನಗಳನ್ನು ಮಂಜೂರು ಮಾಡಿ ಆದೇಶಿಸಿದ್ದರು ಎಂದು ಲತಾ ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

ನಿಯಮ ಉಲ್ಲಂಘನೆ: ಸರ್ಕಾರದ ಆದೇಶಗಳನ್ನು ಲೆಕ್ಕಿಸದೇ, ಪ್ರಾಧಿಕಾರದ ಹಿತಾಸಕ್ತಿಯನ್ನು ಬದಿಗೊತ್ತಿ ಸರ್ಕಾರದ ಪೂರ್ವಾನುಮೋದನೆ ಪಡೆಯದೇ ಕಾನೂನು ಬಾಹಿರವಾಗಿ ಪ್ರಾಧಿಕಾರದ ಹಂತದಲ್ಲಿಯೇ ಇಷ್ಟು ದೊಡ್ಡ ಮೊತ್ತದ ನಿವೇಶನಗಳನ್ನು ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಗೆ ಮಂಜೂರು ಮಾಡಲು ನಿರ್ಣಯ ಕೈಗೊಂಡು ಸೊಸೈಟಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಆಯುಕ್ತರು ನಿಯಮಕ್ಕೆ ವ್ಯತಿರಿಕ್ತವಾಗಿ ಆದೇಶ ಹೊರಡಿಸಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದಿರುವ ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಯವರ ಕೋರಿಕೆಯನ್ನು ಪರಿಗಣಿಸಲು ಸಾಧ್ಯವಿಲ್ಲವೆಂದು ಸರ್ಕಾರ ನೀಡಿದ್ದ ನಿರ್ದೇಶನವನ್ನು ಗಂಭೀರವಾಗಿ ಪರಿಗಣಿಸದೇ ಉದ್ದೇಶಪೂರ್ವಕವಾಗಿ ಬೇಜವಾಬ್ದಾರಿ ತೋರಿರುವುದು ಕಂಡು ಬಂದಿದೆ ಎಂದು ಆದೇಶದಲ್ಲಿ ತಿಳಿಸಿದ್ದಾರೆ. ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ–1987 ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳು (ನಿವೇಶನ ಹಂಚಿಕೆ) ನಿಯಮಗಳು 1991ರಡಿ ಅವಕಾಶವಿಲ್ಲವಾದ್ದರಿಂದ ಕಾನೂನು ಸಮ್ಮತವಲ್ಲದ ಪ್ರಾಧಿಕಾರದ ಪ್ರಸ್ತಾವನೆಯನ್ನು ತಿರಸ್ಕರಿಸಿದ ಆದೇಶವನ್ನು ಮರೆಮಾಚಿ ಪ್ರಕರಣದಲ್ಲಿ ಸರ್ಕಾರದ ನಿಲುವನ್ನು ಬದಿಗೊತ್ತಿ, ಮುಡಾ ಹಿತಾಸಕ್ತಿಗೆ ವಿರುದ್ಧವಾಗಿ ಖಾಸಗಿ ಸಂಸ್ಥೆಗೆ ನಿವೇಶನ ಮಂಜೂರು ಮಾಡಲಾಗಿದೆ. ವಾಸ್ತವವಾಗಿ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಯವರು ರಾಜ್ಯ ಸಲ್ಲಿಸಿದ್ದ ರಿಟ್ ಅರ್ಜಿ ಸಂಬಂಧ ನಿಯಮಾನುಸಾರ ಅರ್ಜಿದಾರರ ಮನವಿಯನ್ನು ಪರಿಗಣಿಸಿ ಎಂದಷ್ಟೇ ನ್ಯಾಯಾಲಯವು ಆದೇಶಿಸಿತ್ತು. ಅದನ್ನೇ ಬಳಸಿಕೊಂಡ ಮುಡಾ ಆಯುಕ್ತರು ಸೊಸೈಟಿ ಪರವಾಗಿ ನಿರ್ಣಯವನ್ನು ಕೈಗೊಂಡಿರುವುದು ನಿಯಮ ಬಾಹಿರವಾಗಿದೆ ಎಂದು ಲತಾ ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ದೋಷಾರೋಪಣಾ ಪಟ್ಟಿ ಸಲ್ಲಿಸಿ: ಅರ್ಜಿದಾರರಾದ ಕ್ಯಾಥೆಡ್ರಲ್ ಪ್ಯಾರಿಸ್ ಸೊಸೈಟಿಯವರು ನ್ಯಾಯಾಂಗ ನಿಂದನೆ ಅರ್ಜಿ ದಾಖಲಿಸುವ ಮುನ್ನವೇ ಸರ್ಕಾರ ಅಥವಾ ಪ್ರಾಧಿಕಾರದ ಹಿತಾಸಕ್ತಿಗೆ ವಿರುದ್ಧವಾಗಿ ಅರ್ಜಿದಾರರ ಪರ ನಿರ್ಣಯ ಕೈಗೊಂಡು ಪ್ರಾಧಿಕಾರದ ಜವಾಬ್ದಾರಿಯುತ ಸ್ಥಾನದಲ್ಲಿದ್ದ ಅಯುಕ್ತರು ನಿಯಮಗಳನ್ನು ಪಾಲಿಸದೇ ಗಂಭೀರವಾದ ಕರ್ತವ್ಯ ಲೋಪ ಎಸಗಿರುವುದು ಕಂಡು ಬಂದಿದೆ. ಸರ್ಕಾರದ ನಿಲುವಿಗೆ ವಿರುದ್ಧವಾಗಿ, ಪ್ರಾಧಿಕಾರ ಮತ್ತು ಸರ್ಕಾರದ ಹಿತಾಸಕ್ತಿಗೆ ವ್ಯತಿರಿಕ್ತವಾಗಿ ಕಾರ್ಯ ನಿರ್ವಹಿಸಿ ಜವಾಬ್ದಾರಿಯುತ ಸರ್ಕಾರಿ ನೌಕರರಿಗೆ ತರವಲ್ಲದಂತೆ ವರ್ತಿಸಿದ್ದಾರೆ. ಜೊತೆಗೆ ನಿಯಮ ಬಾಹಿರ ಕ್ರಮಗಳನ್ನು ಕೈಗೊಳ್ಳಲು ಕಾರಣಕರ್ತರಾಗಿ ಸಾವಿರಾರು ಕೋಟಿ ರೂ. ನಷ್ಟ ಉಂಟು ಮಾಡಿರುವ ಹಿಂದಿನ ಮುಡಾ ಆಯುಕ್ತರು, ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಗಳು–1957ರನ್ವಯ ಶಿಸ್ತು ಕ್ರಮ ಜರುಗಿಸಲು ಅನುವಾಗುವಂತೆ ಪ್ರಕರಣದಲ್ಲಿ ಭಾಗಿಯಾಗಿದ್ದವರ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಿದ್ಧಪಡಿಸಿ ಮೂಲ ಅಥವಾ ದೃಢೀಕೃತ ಪ್ರತಿಗಳ ದಾಖಲೆಗಳೊಂದಿಗೆ ಸರ್ಕಾರಕ್ಕೆ ಸಲ್ಲಿಸುವಂತೆ ಲತಾ ತಮ್ಮ ಆದೇಶದಲ್ಲಿ ನಿರ್ದೇಶಿಸಿದ್ದಾರೆ.

ವಿವಿಧೆಡೆ ತ್ರಿವಿಧ ದಾಸೋಹಿ, ನಡೆದಾಡುವ ದೇವರು ಡಾ.ಶಿವಕುಮಾರಸ್ವಾಮೀಜಿ ಪುಣ್ಯಸ್ಮರಣೆ

ಮಾನವ ಕಲ್ಯಾಣಕ್ಕಾಗಿ ಕಾಯಕ ಮಾಡಿದ ಶಿವಕುಮಾರ ಶ್ರೀಗಳು

ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀಸಿದ್ಧಲಿಂಗಶಿವಾಚಾರ್ಯ ಸ್ವಾಮೀಜಿ



ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಡಾ.ಶಿವಕುಮಾರಸ್ವಾಮೀಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.

ತಿ.ನರಸೀಪುರ, ಜ.21– ತುಮಕೂರಿನ ಸಿದ್ಧಗಂಗಾ ಮಠದ ಡಾ.ಶಿವಕುಮಾರ ಸ್ವಾಮೀಜಿ ಅವರು ತಮ್ಮ ಜೀವಿತಾವಧಿಯಲ್ಲಿ ಮಾನವ ಕಲ್ಯಾಣಕ್ಕಾಗಿ ಕಾಯಕ ಮಾಡಿದರು ಎಂದು ವಾಟಾಳು ಸೂರ್ಯ ಸಿಂಹಾಸನ ಮಠದ ಶ್ರೀಸಿದ್ಧಲಿಂಗಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ತ್ರಿವಿಧ ದಾಸೋಹಿ ಡಾ.ಶಿವಕುಮಾರ ಸ್ವಾಮಿ ಅವರ 6ನೇ ವರ್ಷದ ಪುಣ್ಯಸ್ಮರಣೆ ಹಿನ್ನೆಲೆಯಲ್ಲಿ ಪಟ್ಟಣದ ಡಾ.ಶಿವಕುಮಾರ ಸ್ವಾಮಿ ಸೇವಾ ಟ್ರಸ್ಟ್ ವತಿಯಿಂದ ವಿದ್ಯೋದಯ ಕಾಲೇಜು ವೃತ್ತದಲ್ಲಿ ಹಮ್ಮಿಕೊಳ್ಳಲಾಗಿದ್ದ ದಾಸೋಹ ದಿನದ ಕಾರ್ಯಕ್ರಮದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಡಾ.ಶಿವಕುಮಾರಸ್ವಾಮೀಜಿ ಅವರು 12ನೇ ಶತಮಾನದ ಬಸವಾದಿ ಶರಣರ ಕಾಯಕ ನಿಷ್ಠೆ, ತತ್ವದಾರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರಂತೆ ನಡೆದು ಕಾಯಕ ಯೋಗಿಯಾದರು. ಆದ್ದರಿಂದಲೇ ಈ ದಿನವನ್ನು ದಾಸೋಹ ದಿನವನ್ನಾಗಿ ಆಚರಿಸಲಾಗುತ್ತಿದೆ. ಯಾವುದೇ ಜಾತಿ ಬೇಧ, ಧರ್ಮವಿಲ್ಲದೆ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಶಿಕ್ಷಣ, ಅನ್ನ ದಾಸೋಹ, ಜ್ಞಾನ ದಾಸೋಹ ನೀಡಿ ಸಾವಿರಾರು ಬಡ ಕುಟುಂಬಗಳಿಗೆ ಬೆಳಕಾದರು ಎಂದರು.

ನಡೆದಾಡುವ ದೇವರು, ತ್ರಿವಿಧ ದಾಸೋಹಿ ಎಂದೇ ಭಕ್ತರ ಮನ, ಮನೆಯಲ್ಲಿ ನೆಲೆಗೊಂಡವರು ಡಾ.ಶಿವಕುಮಾರ ಸ್ವಾಮೀಜಿ. ಸಾಮಾನ್ಯ ಬಡ ಕುಟುಂಬವೊಂದರಿಂದ ಬಂದ ಶ್ರೀಗಳು ಅಸಾಮಾನ್ಯರಾಗಿ ಜಗತ್ತಿಗೆ ಬೆಳಕಾಗಿದ್ದು ಈ ಶತಮಾನದ ಭಾಗ್ಯ. ಶಿಕ್ಷಣ, ಆರೋಗ್ಯ, ಧರ್ಮದ ಏಳಿಗೆಗೆ ಶ್ರೀಗಳು ತಮ್ಮ ಇಡೀ ಜೀವನ ಮುಡಿಪಾಗಿಟ್ಟರು. ತಮ್ಮ ಮಠದಲ್ಲಿ ಸರ್ವ ಧರ್ಮಿಯರಿಗೂ ಆಶ್ರಯ ನೀಡಿ ಸಿದ್ಧಗಂಗಾ ಮಠದ ಕೀರ್ತಿ ಪತಾಕೆ ಡಾ.ಶಿವಕುಮಾರಸ್ವಾಮಿಗಳ ಕಾರಣದಿಂದಲೇ ಇಂದು ವಿಶ್ವಮಟ್ಟದಲ್ಲಿ ರಾರಾಜಿಸುತ್ತಿದೆ ಎಂದರು.

ಶ್ರೀಗಳ ದಾಸೋಹ ದಿನದ 6ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ನಡೆದ ಅನ್ನ ಸಂತರ್ಪಣೆಗೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ಚಾಲನೆ ನೀಡಿದರು. ನೂರಾರು ಸಾರ್ವಜನಿಕರು ಹಾಗೂ ಕಾಲೇಜು ವಿದ್ಯಾರ್ಥಿ–ವಿದ್ಯಾರ್ಥಿನಿಯರು ಪ್ರಸಾದ ಸ್ವೀಕರಿಸಿದರು.

ಈ ವೇಳೆ ಡಾ.ಶಿವಕುಮಾರಸ್ವಾಮಿ ಸೇವಾ ಟ್ರಸ್ಟ್ ಅಧ್ಯಕ್ಷ ಬಜ್ಜಿ ನಿಂಗಪ್ಪ, ಕಾರ್ಯದರ್ಶಿ ತುರುಗನೂರು ಮಲ್ಲೇಶ್, ಉಪಾಧ್ಯಕ್ಷ ಮಾವಿನಹಳ್ಳಿ ಸೋಮಣ್ಣ, ಖಜಾಂಚಿ ಕೆಬ್ಬೆಹುಂಡಿ ಮಾಯಪ್ಪ, ಸಹ ಕಾರ್ಯದರ್ಶಿ ವಾಟಾಳು ಗುರುಪಾದ ಸ್ವಾಮಿ, ಸಂಚಾಲಕರಾದ ಅದೃಷ್ಟ ಮಾದಪ್ಪ ಕಾರ್ ಮಲ್ಲಪ್ಪ, ಹೆಳವರಹುಂಡಿ ಬಸಪ್ಪ, ಬಸವ ಬಳಗದ ಅಧ್ಯಕ್ಷ ಪರಮೇಶ್ ಪಟೇಲ್, ನಾಗಭೂಷಣ್, ಎಸ್‌ಎಂಆರ್ ಪ್ರಕಾಶ್, ದೊಡ್ಡನಹುಂಡಿ ನಂಜುಂಡಸ್ವಾಮಿ, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸೋಮಶೇಖರ್, ಮೂಗೂರು ಕುಮಾರಸ್ವಾಮಿ, ಪುಟ್ಟಬುದ್ಧಿ, ಮಾಯಪ್ಪ ಮೂರ್ತಿ, ವಿಚಾರವಾದಿ ಕೆ.ಎನ್.ಪ್ರಭು ಸ್ವಾಮಿ, ಕೆಇಬಿ ನಿವೃತ್ತ ನೌಕರ ಸಿದ್ದಲಿಂಗಸ್ವಾಮಿ, ಪೂಜಿತ್ ಮೆಡಿಕಲ್ ಕುಮಾರ್, ಪುರಸಭೆ ಮಾಜಿ ಸದಸ್ಯ ಜೆರಾಕ್ಸ್ ಲೋಕೇಶ್ ಮತ್ತಿತರಿದ್ದರು.

ಲಿಂಕ್ ರಸ್ತೆಯಲ್ಲೂ ಅನ್ನಸಂತರ್ಪಣೆ

ಡಾ.ಶಿವಕುಮಾರ ಸ್ವಾಮೀಜಿ ಅವರ 6ನೇ ಪುಣ್ಯಸ್ಮರಣೆ ಅಂಗವಾಗಿ ಪಟ್ಟಣದ ಲಿಂಕ್ ರಸ್ತೆಯಲ್ಲಿರುವ ಶೇಖರ್ ಅಂಗಡಿ ಮುಂಭಾಗ ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನಸಂತರ್ಪಣೆಗೆ ಚಾಲನೆ ನೀಡಲಾಯಿತು. ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಮಹಾಸಭಾಧ್ಯಕ್ಷ ಶಾಂತರಾಜು, ಪುರಸಭಾ ಸದಸ್ಯ ಎಸ್.ಕೆ.ಕಿರಣ್, ಪಿಎಸಿಎಸ್ ನಿರ್ದೇಶಕ ಅಂಗಡಿ ಶೇಖರ್, ಫ್ಯಾನ್ಸಿ ಮೋಹನ್, ಬಿಜೆಪಿ ಕ್ಷೇತ್ರಾಧ್ಯಕ್ಷ ಶಿವಕುಮಾರ್, ಪಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ನಾಗರಾಜು, ಸದಸ್ಯ ಮಹದೇವಸ್ವಾಮಿ, ಶ್ರೀಕಂಠ ಮತ್ತಿತರಿದ್ದರು.



ಲಿಂಕ್ ರಸ್ತೆಯಲ್ಲಿ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು.

ಅಜ್ಞಾನದ ಜಗವನ್ನು ಸುಜ್ಞಾನದತ್ತ ಕೊಂಡೊಯ್ದ ಸಿದ್ಧಗಂಗಾಶ್ರೀಗಳು

ಪಡುವಲು ವಿರಕ್ತ ಮಠದ ಮಹದೇವಸ್ವಾಮೀಜಿ ಬಣ್ಣನೆ



ಪುಣ್ಯಸ್ಮರಣೆ ಕಾರ್ಯಕ್ರಮವನ್ನು ವಿವಿಧ ಮಠಾಧೀಶರು ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಜ.21– ಇಳಿ ವಯಸ್ಸಿನಲ್ಲೂ ಯುವಕರು ನಾಚುವಂತಹ ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸುತ್ತಾ, ಅಜ್ಞಾನದ ಜಗವನ್ನು ಸುಜ್ಞಾನದತ್ತ ಕೊಂಡೊಯ್ಯಲು ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮೀಜಿ ಶ್ರಮಿಸಿದರು ಎಂದು ಪಡುವಲು ವಿರಕ್ತ ಮಠದ ಮಹದೇವ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಹಳೇ ಆಸ್ಪತ್ರೆ ಆವರಣದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಯುವ ಘಟಕದಿಂದ ಮಂಗಳವಾರ ಆಯೋಜಿಸಿದ್ದ ಸಿದ್ಧಗಂಗಾ ಶಿವಕುಮಾರ ಸ್ವಾಮೀಜಿ, ರಾಜೇಂದ್ರ ಸ್ವಾಮೀಜಿ ಮತ್ತು ಸಿದ್ದೇಶ್ವರ ಸ್ವಾಮೀಜಿಗಳ ಪುಣ್ಯಸ್ಮರಣೆ ಅಂಗವಾಗಿ ಆಯೋಜಿಸಿದ್ದ ದಾಸೋಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶ್ರೀಗಳ ಪರಿಶ್ರಮದಿಂದಾಗಿ ಇಂದು ಅದೆಷ್ಟೋ ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ಸ್ಥಾನ ಅಲಂಕರಿಸಿದ್ದಾರೆ. ಯಾವುದೇ ತಾರತಮ್ಯ ಮಾಡದೇ ಅವರು ನೀಡಿದ ದಾಸೋಹ ಮತ್ತು ಶಿಕ್ಷಣವನ್ನು ಯಾರು ಮರೆಯಬಾರದು. ಅವರ ಆಶಯದಂತೆ ಮಠ ಸಾಗುತ್ತಿದೆ. ಅದೇ ರೀತಿ ಸಿದ್ದೇಶ್ವರ ಸ್ವಾಮೀಜಿಗಳು ಸಹ ತಮ್ಮ ವಿಚಾರ ಧಾರೆಗಳಿಂದ ಅಗಣ್ಯ ಭಕ್ತವೃಂದ ಹೊಂದಿದ್ದರು. ಅವರ ಸರಳತೆಯೇ ಇತರರಿಗೆ ಪಾಠವಾಗಿದೆ. ಅವರ ಜೀವನವು ಒಂದು ವಿಶ್ವವಿದ್ಯಾಲಯಕ್ಕೆ ಸಮ ಎಂದರು. ಕಾರ್ಯಕ್ರಮದಲ್ಲಿ ಹಂಚೀಪುರ ಸಿದ್ಧಮಲ್ಲೇಶ್ವರ ದಾಸೋಹ ಮಠದ ತೋಂಟದಾರ್ಯ ಸ್ವಾಮೀಜಿ, ಜಕ್ಕಹಳ್ಳಿ ಮಠದ ಶಿವ ಕುಮಾರ ಸ್ವಾಮೀಜಿ, ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ರುದ್ರಪ್ಪ, ಜಿಲ್ಲಾಧ್ಯಕ್ಷ ಬಸವರಾಜು, ರಾಜ್ಯ ಸಮಿತಿ ಸದಸ್ಯ ಬಸವ ರಾಜಪ್ಪ, ಯುವ ಘಟಕದ ತಾಲೂಕು ಅಧ್ಯಕ್ಷ ಸತೀಶ್ ಬಹದ್ದೂರ್, ಜಿಲ್ಲಾ ಉಪಾಧ್ಯಕ್ಷ ಬಿ.ವಿ.ಬಸವರಾಜು, ಮುಖಂಡರಾದ ಕೆ.ಎಂ.ಕೃಷ್ಣನಾಯಕ, ವೆಂಕಟಸ್ವಾಮಿ, ಶಂಭೇಗೌಡ, ಹೆಚ್.ಸಿ. ನರಸಿಂಹಮೂರ್ತಿ, ಮಿಲ್ ನಾಗರಾಜು, ನಂದೀಶ್, ಗಿರಿಕುಮಾರ್, ಜೆ.ಪಿ.ಚಂದ್ರಶೇಖರ್, ಅರ್ಜುನ್ ಪಾರ್ಥ, ಶಿವಸ್ವಾಮಿ, ಕೆಂಡಗಣ್ಣಸ್ವಾಮಿ, ಲೋಕೇಶ್, ನಾಗಣ್ಣ, ದೇವಮ್ಮಣಿ, ಜಗದೀಶ್, ಚಂದ್ರಮೌಳೇಶ್ವರ, ಕಾಶಿಪತಿ, ಡೈರಿ ಶ್ರೀಕಾಂತ್, ವಿನಯ್ ಭಜರಂಗಿ, ಕನ್ನಡ ಪ್ರಮೋದ್, ರವೀಶ್, ಜೆ.ಪಿ.ಶಿವರಾಜು, ಗುರುಸ್ವಾಮಿ, ನೀಲಪ್ಪ, ಕೂಸಮ್ಮ, ಮಹದೇವಪ್ಪ, ರಾಜಣ್ಣ, ಸತೀಶ್, ಸುಮಾ, ಮಲ್ಲೇಶ್, ವೃಷಭೇಂದ್ರ, ಪೃಥ್ವಿ ಕುಮಾರ್, ಗಿರೀಶ್, ಮನು, ನಂಜುಂಡ, ಗುರು, ಶಿವ ಕುಮಾರ್, ಮಹದೇವಸ್ವಾಮಿ, ನವೀನ್, ಅಭಿ, ಯೋಗೇಶ್, ಮನು, ಕುಮಾರ್, ವೈ.ಟಿ. ಮಹೇಶ್, ಹೆಚ್.ಸಿ. ಶಿವಣ್ಣ ರಮೇಶ್, ಚನ್ನಪ್ಪ ಮಾದರಾಜು, ಶಿವಯ್ಯ, ಮಹದೇವಪ್ಪ, ವಿವೇಕ್, ಮಲಾರ ಪುಟ್ಟಯ್ಯ, ಗುರುಸ್ವಾಮಿ, ದಾಸನಾಯಕ, ನಾಗರಾಜಪ್ಪ, ಚಂದ್ರು, ಶಿವರುದ್ರ, ಮಂಜು ಇತರರಿದ್ದರು.

> ವೀರಶೈವ ಧರ್ಮದ ಶಕ್ತಿಯಾಗಿ ಸುತ್ತೂರು ಶ್ರೀಗಳು, ಸಿದ್ದಗಂಗಾ ಮಠದ ಶ್ರೀಗಳು ಹಾಗೂ ಸಿದ್ದೇಶ್ವರ ಶ್ರೀಗಳು ನಿಲ್ಲುತ್ತಾರೆ. ಜಾತಿ ಭೇದ ಮರೆತು ಎಲ್ಲಾ ಧರ್ಮಿಯರಿಗೆ ದಾಸೋಹದ ಜೊತೆ ಜೊತೆಗೆ ಶಿಕ್ಷಣ ಮತ್ತು ಸಮಾಜ ಸುಧಾರಣೆಗೆ ಹೆಚ್ಚು ಒತ್ತು ನೀಡಿದ್ದರು. ಜೊತೆಗೆ ಸಮಾಜದಲ್ಲಿ ನಕರಾತ್ಮಕ ಶಕ್ತಿ ತೊಲಗಿಸಿ, ಸಕಾರಾತ್ಮಕ ಶಕ್ತಿ ಬಿತ್ತುವಲ್ಲಿ ಶ್ರಮಿಸಿದ್ದಾರೆ.
>
> – ಷಡಕ್ಷರಿ ಸ್ವಾಮೀಜಿ, ದಡದಹಳ್ಳಿ ದಾಸೋಹ ಮಠ.

ದೇವರಸನಹಳ್ಳಿ ಗ್ರಾಪಂಗೆ ನಂಜಪ್ಪ ಉಪಾಧ್ಯಕ್ಷ



ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷರಾಗಿ ಜೆ.ಸಿ.ನಂಜಪ್ಪ ಆಯ್ಕೆಯಾದರು.

ನಂಜನಗೂಡು, ಜ.21– ತಾಲೂಕಿನ ದೇವರಸನಹಳ್ಳಿ ಗ್ರಾಪಂ ನೂತನ ಉಪಾಧ್ಯಕ್ಷರಾಗಿ ಜೆ.ಸಿ. ನಂಜಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

23 ಸದಸ್ಯ ಬಲದ ಗ್ರಾಪಂನಲ್ಲಿ ಅವಿಶ್ವಾಸ ನಿರ್ಣಯದ ಮೂಲಕ ಈ ಹಿಂದಿನ ಉಪಾಧ್ಯಕ್ಷ ವೆಂಕಟೇಶ್ ಅವರನ್ನು ಅಧಿಕಾರದಿಂದ ಕೆಳಗಿಳಿಸಲಾಗಿತ್ತು. ಅವರಿಂದ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಮಂಗಳವಾರ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಜೆ.ಸಿ.ನಂಜಪ್ಪ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ, ಮೀನುಗಾರಿಕೆ ಇಲಾಖೆ ಸಹಾಯಕ ನಿರ್ದೇಶಕಿ ಶಿಲ್ಪ ಅವಿರೋಧ ಆಯ್ಕೆ ಘೋಷಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ 19 ಸದಸ್ಯರು ಭಾಗಿಯಾಗಿದ್ದರು. ನಾಲ್ವರು ಗೈರಾಗಿದ್ದರು.

ನೂತನ ಉಪಾಧ್ಯಕ್ಷ ಜೆ.ಸಿ.ನಂಜಪ್ಪ ಮಾತನಾಡಿ, ಕಳೆದ ಒಂದು ತಿಂಗಳ ಹಿಂದೆ ಸೌಭಾಗ್ಯ ಅವರನ್ನು ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿತ್ತು ಇದೀಗ ಎಲ್ಲಾ ಸದಸ್ಯರ ಸಹಕಾರದೊಂದಿಗೆ ನಾನು ಕೂಡ ಉಪಾಧ್ಯಕ್ಷನಾಗಿ ಅವಿರೋಧವಾಗಿ ಆಯ್ಕೆಯಾಗಿದ್ದೇನೆ. ನನ್ನ ಆಯ್ಕೆಗೆ ಸಹಕಾರ ನೀಡಿದ ಶಾಸಕ ದರ್ಶನ್ ಮತ್ತು ಸದಸ್ಯರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಅಲ್ಲದೇ ಗ್ರಾಪಂ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೂ ಮೂಲ ಸೌಕರ್ಯ ಒದಗಿಸಲು ಅಧ್ಯಕ್ಷರ ಜೊತೆಯಾಗಿ ಶ್ರಮಿಸುತ್ತೇನೆ ಎಂದರು. ಈ ವೇಳೆ ಗ್ರಾಪಂ ಅಧ್ಯಕ್ಷೆ ಸೌಭಾಗ್ಯ, ಸದಸ್ಯರಾದ ಮುದ್ದುಮಾದಶೆಟ್ಟಿ, ನಾರಾಯಣ, ರಘು, ಶಿವಲಿಂಗೇಗೌಡ, ಜಯಮ್ಮ, ವಿಮಲ, ಮಣಿಯಮ್ಮ, ಸುಮತಿ, ಗೀತಾ, ಮಂಗಳಮ್ಮ, ಕಾಂಗ್ರೆಸ್ ಪಕ್ಷದ ಎಸ್ಸಿ ಬ್ಲಾಕ್ ಅಧ್ಯಕ್ಷ ಶಿವಣ್ಣ, ಮುಖಂಡರಾದ ರಾಜೇಶ, ಸುರೇಶ, ಕೃಷ್ಣ ಸೇರಿದಂತೆ ಇತರರಿದ್ದರು.

ವಿವಿಧೆಡೆ ಶ್ರೀಶಿವಕುಮಾರಸ್ವಾಮೀಜಿ ಪುಣ್ಯಸ್ಮರಣೆ



ಬೆಟ್ಟದಪುರದಲ್ಲಿ ಶಿವಕುಮಾರಶ್ರೀ ಪುಣ್ಯಸ್ಮರಣೆ ನಡೆಯಿತು.

ಪಿರಿಯಾಪಟ್ಟಣ, ಜ.21– ತಾಲೂಕಿನ ಬೆಟ್ಟದಪುರ, ಕೂಣಸೂರು, ಗೊರಹಳ್ಳಿ, ಹರದೂರು, ಅತ್ತಿಗೋಡು, ಆವರ್ತಿ, ಕೊಪ್ಪ, ಮರೂರು, ಮುತ್ತಿನ ಮುಳಸೋಗೆ, ಆಯಿತನಹಳ್ಳಿ, ಬಿಲ್ಲಹಳ್ಳಿ, ಹಿಟ್ನಳ್ಳಿ, ಸುಬ್ಬಯ್ಯನಕೊಪ್ಪಲು, ಕೂರಗಲ್ಲು, ಸೂಳೆಕೋಟೆ ಸೇರಿದಂತೆ ವಿವಿಧೆಡೆ ತ್ರಿವಿಧ ದಾಸೋಹಿ ಶ್ರೀಶಿವಕುಮಾರಸ್ವಾಮೀಜಿ ಪುಣ್ಯಸ್ಮರಣೆ ಮಾಡಲಾಯಿತು.

ಬೆಟ್ಟದಪುರದ ವಿರಶೈವ ಲಿಂಗಾಯತ ಸಮಾಜದಿಂದ ಇಲ್ಲಿನ ಮಾರ್ಕೆಟ್ ರೋಡ್ ಕಾಂಪ್ಲೆಕ್ಸ್ ಆವರಣದಲ್ಲಿ ಸಿದ್ದಗಂಗಾಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನದಾನ ಹಮ್ಮಿಕೊಳ್ಳಲಾಗಿತ್ತು. ತಾಲೂಕು ವೀರಶೈವ ಮಹಾಸಭಾ ಅಧ್ಯಕ್ಷ ಪರಮೇಶ್ ಮಾತನಾಡಿ, ಶಿವಕುಮಾರಸ್ವಾಮೀಜಿ ಅವರ ತತ್ವಾದರ್ಶವನ್ನು ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದರು. ಕೊಪ್ಪ ಪಂಚಾಯಿತಿ ವ್ಯಾಪ್ತಿಯ ಭಾರತ ಮಾತಾ ಸರ್ಕಲ್‌ನಲ್ಲಿ ಶಿವಕುಮಾರ ಸ್ವಾಮಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನ್ನದಾನ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ತಾಪಂ ಮಾಜಿ ಸದಸ್ಯೆ ಅನಿತಾ, ಅರ್ಚಕ ಸಿದ್ದಣ್ಣ, ರಾಜೇಂದ್ರ, ಭರತ್, ಶಿವು, ಸಂಜಯ್, ಮಂಜು, ಮಲ್ಲೇಶ್, ರಾಜುಮುಡಿ, ದಿಲೀಪ್ ಇದ್ದರು. ಕೊಪ್ಪ ಸರ್ಕಲ್‌ನಲ್ಲಿ ರಾಜು, ಮಾ.ಮಹಾಲಿಂಗಸ್ವಾಮಿ, ಶಿವಣ್ಣ, ಜಗದೀಶ್, ಮಹದೇವ್, ಮುಬಾರಕ್ ಪಾಷಾ, ಸಂತೋಷ, ರುದ್ರೇಶ್ ಇತರರಿದ್ದರು.

ಮಹಿಳೆಯರಿಗೆ ಕಾನೂನು ಅರಿವು ಅಗತ್ಯ



ಹೆಡಿಯಾಲದಲ್ಲಿ ಕಾನೂನು ಅರಿವು–ನೆರವು ಕಾರ್ಯಕ್ರಮ ನಡೆಯಿತು.

ಮಲ್ಕುಂಡಿ, ಜ.21– ಮಹಿಳೆಯರಿಗೆ ಕಾನೂನು ಅರಿವು ಅಗತ್ಯ ಎಂದು ವಕೀಲ ಎಂ.ಸಿ.ಶ್ರೀನಿವಾಸ್ ತಿಳಿಸಿದರು. ಸಮೀಪದ ಹೆಡಿಯಾಲದಲ್ಲಿ ಆಯೋಜಿಸಿದ್ದ ಕಾನೂನು ಅರಿವು–ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಹಾಗೂ ದಲಿತರ ಮೇಲೆ ಹೆಚ್ಚಿನ ದೌರ್ಜನ್ಯ ನಡೆಯುತ್ತಿದೆ. ಅವುಗಳನ್ನು ತಡೆಗಟ್ಟಲು ಎಲ್ಲರ ಸಹಕಾರ ಅಗತ್ಯ. ಮಹಿಳೆಯರು ಹಾಗೂ ದಲಿತರ ಮೇಲೆ ದೌರ್ಜನ್ಯ ನಡೆದರೆ ತಕ್ಷಣ ಪ್ರಕರಣ ದಾಖಲಿಸಲಾಗುವುದು. ಬಡಕುಟುಂಬಗಳ ಸಹಾಯಕ್ಕಾಗಿ ಕಾನೂನು ಕೇಂದ್ರ ಸ್ಥಾಪನೆಯಾಗಿದ್ದು, ಪ್ರತಿಯೊಬ್ಬರೂ ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಗ್ರಾಪಂ ಉಪಾಧ್ಯಕ್ಷ ದಿನೇಶ್, ವಕೀಲ ಕೆಂಪರಾಜು, ಗ್ರಾಪಂ ಸದಸ್ಯ ಗೋವಿಂದರಾಜು, ರೆಹಮತ್ ಉಲ್ಲಾಖಾನ್, ಮಲ್ಲಪ್ಪ, ಕೃಷ್ಣ, ಮಹೇಂದ್ರ, ಗುರುಮಲ್ಲಪ್ಪ, ಮರಿಯಂ ಬೇಗಂ, ಪಿಡಿಓ ಕರಿಯಪ್ಪ ಸೇರಿದಂತೆ ಇತರರಿದ್ದರು.

ದೇವಸ್ಥಾನ ನಿರ್ಮಾಣಕ್ಕೆ ಅನುದಾನ ವಿತರಣೆ



ದೇವಾಲಯ ನಿರ್ಮಾಣಕ್ಕೆ ಅನುದಾನ ವಿತರಿಸಲಾಯಿತು.

ಹುಣಸೂರು, ಜ.21– ತಾಲೂಕಿನ ಉಯಿಗೊಂಡನಹಳ್ಳಿ ಗ್ರಾಮದ ಶ್ರೀಡಿಂಕದವ್ವ ದೇವಸ್ಥಾನ ನಿರ್ಮಾಣಕ್ಕೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನೀಡಲಾದ 1 ಲಕ್ಷ ರೂ.ಗಳ ಅನುದಾನವನ್ನು ಕ್ಷೇಮವನ ಪ್ರಕೃತಿ ಚಿಕಿತ್ಸಾ ಕೇಂದ್ರ ಬೆಂಗಳೂರು ಇದರ ಇಓ ಶ್ರದ್ಧಾ ಅವರು ದೇವಸ್ಥಾನ ಸಮಿತಿ ಪದಾಧಿಕಾರಿಗಳಿಗೆ ವಿತರಿಸಿದರು.

ನಂತರ ಮಾತನಾಡಿದ ಅವರು, ದೇವಾಲಯಗಳು ಊರಿನ ಪ್ರತೀಕ. ದೇವಸ್ಥಾನ ನಿರ್ಮಾಣದಿಂದ ಊರಿನಲ್ಲಿ ಶಾಂತಿ, ನೆಮ್ಮದಿ, ಉತ್ತಮ ಬಾಂಧವ್ಯ ನೆಲೆಸಲು ಸಾಧ್ಯ ಎಂದರು. ಈ ವೇಳೆ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೈಸೂರು ವಿಭಾಗದ ಪ್ರಾದೇಶಿಕ ನಿರ್ದೇಶಕ ಬಿ.ಜಯರಾಂ ನೆಲ್ಲಿತಾಯ, ಜಿಲ್ಲಾ ನಿರ್ದೇಶಕ ಹೆಚ್.ಎಲ್. ಮುರುಳೀಧರ್, ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಸೋಮಶೇಖರ್, ಯೋಜನಾಧಿಕಾರಿ ಧನಂಜಯ, ದೇವಸ್ಥಾನ ಸಮಿತಿ ಅಧ್ಯಕ್ಷ ರಮೇಶ್, ಪ್ರವೀಣ್, ರೇವಣ್ಣ, ಗ್ರಾಪಂ ಅಧ್ಯಕ್ಷರಾದ ರತ್ನಮ್ಮ, ನಿಂಗಯ್ಯ, ಗ್ರಾಪಂ ಸದಸ್ಯರಾದ ರಾಮೇಗೌಡ, ಬಲರಾಮೇಗೌಡ, ಡೈರಿ ನಿರ್ದೇಶಕರಾದ ಸಣ್ಣಸ್ವಾಮಿಗೌಡ ರಮೇಶ್, ಡೈರಿ ಅಧ್ಯಕ್ಷೆ ಭಾಗ್ಯಮ್ಮ, ವಲಯದ ಮೇಲ್ವಿಚಾರಕರು ಸಂತೋಷ್, ಸೇವಾ ಪ್ರತಿನಿಧಿ ಪೂರ್ಣಿಮಾ ಉಪಸ್ಥಿತರಿದ್ದರು.

ಕರವೇ ಪದಾಧಿಕಾರಿಗಳ ಆಯ್ಕೆ



ಹೆಚ್.ಡಿ.ಕೋಟೆ, ಜ.21– ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣದ ತಾಲೂಕು ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಕಾರ್ಮಿಕ ಘಟಕದ ಅಧ್ಯಕ್ಷ ಸ್ವಾಮಿ ಕುಮಾರ್, ಉಪಾಧ್ಯಕ್ಷ ಗೋಪಾಲ ಶೆಟ್ಟಿ, ಅಂತರಸಂತೆ ಹೋಬಳಿ ಘಟಕದ ಅಧ್ಯಕ್ಷ ನೂರಲಕುಪ್ಪೆ ಚೆಲುವರಾಜು, ಹ್ಯಾಂಡ್ ಪೋಸ್ಟ್ ಘಟಕದ ಅಧ್ಯಕ್ಷ ಹೆಚ್.ಪ್ರಸನ್ನ, ಟೌನ್ ಸಂಚಾಲಕ ಎಂ. ಪ್ರಜ್ವಲ್, ಟೌನ್ ಉಪಾಧ್ಯಕ್ಷ ಉಮೇಶ್, ತಾಲೂಕು ಸಂಚಾಲಕ ಕಾರ್ತಿಕ್, ಕಾರ್ಮಿಕ ಘಟಕದ ಸಂಘಟನಾ ಸಂಚಾಲಕರಾಗಿ ಟೈಲರ್ ನಾಗರಾಜು, ಗೌರವ ಸಲಹೆಗಾರ ಮಾದೇವಯ್ಯ, ಹಿರಿಯ ಹೋರಾಟಗಾರ ನಟೇಶ್ ಕುಮಾರ್ ಆಯ್ಕೆಯಾಗಿದ್ದಾರೆ. ತಾಲೂಕು ಅಧ್ಯಕ್ಷ ಕ್ರಾಂತಿ ಕುಮಾರ್ ಇದ್ದರು.

ನಂಜನಗೂಡಲ್ಲಿ ನಗರಸಭೆ ಆಯವ್ಯಯ ಪೂರ್ವಭಾವಿ ಸಭೆ

ರಸ್ತೆ, ಉದ್ಯಾನವನ, ಸ್ಮಶಾನ ಅಭಿವೃದ್ಧಿಗೆ ಮನವಿ



ನಗರಸಭೆ ಆಯವ್ಯಯ ಮಂಡನೆ ಪೂರ್ವಭಾವಿ ಸಭೆ ನಡೆಯಿತು.

ನಂಜನಗೂಡು, ಜ.21– ನಗರದ ಅಂಬೇಡ್ಕರ್ ಭವನದಲ್ಲಿ ಮಂಗಳವಾರ ನಗರಸಭಾಧ್ಯಕ್ಷ ಶ್ರೀಕಂಠಸ್ವಾಮಿ ಅಧ್ಯಕ್ಷತೆಯಲ್ಲಿ ನಗರಸಭೆಯ 2025–26ನೇ ಸಾಲಿನ ಆಯವ್ಯಯ ಮಂಡನೆ ಪೂರ್ವಭಾವಿ ಸಭೆ ನಡೆಯಿತು.

ನಗರದ ಚಾಮುಂಡೇಶ್ವರಿ ಬಡಾವಣೆ ನಿವಾಸಿ ತಿಪ್ಪಯ್ಯ ಮಾತನಾಡಿ, ಚಾಮುಂಡೇಶ್ವರಿ ಬಡಾವಣೆಯಲ್ಲಿ ಹಲವರು ಸಾರ್ವಜನಿಕ ರಸ್ತೆ ಒತ್ತುವರಿ ಮಾಡಿಕೊಂಡು ಮನೆ ನಿರ್ಮಿಸಿದ್ದು, ವಾಹನ ಸಂಚಾರಕ್ಕೆ ತೊಂದರೆಯಾಗಿದೆ. ಈ ಬಗ್ಗೆ ಹಲವು ಬಾರಿ ನಗರಸಭೆಗೆ ಮನವಿ ಸಲ್ಲಿಸಿದ್ದರೂ ಕ್ರಮ ವಹಿಸಿಲ್ಲ. ಕಳೆದ ಬಜೆಟ್‌ನಲ್ಲಿ ನಮ್ಮ ಬಡಾವಣೆ ರಸ್ತೆ ಅಭಿವೃದ್ಧಿಗಾಗಿ 50 ಲಕ್ಷ ಮೀಸಲೀರಿಸಿ, ಭೂಮಿ ಪೂಜೆ ನಡೆಸಲಾಗಿತ್ತು. ಆದರೆ ಕಾಮಗಾರಿ ಕೈಗೊಳ್ಳಲಿಲ್ಲ ಎಂದು ಆರೋಪಿಸಿದರು.

ನಗರಸಭೆ ಆಯುಕ್ತ ವಿಜಯ್ ಮಾತನಾಡಿ, ಈ ಬಾರಿ ಬಜೆಟ್‌ನಲ್ಲಿ ಚಾಮುಂಡೇಶ್ವರಿ ಬಡಾವಣೆ ರಸ್ತೆ ನಿರ್ಮಾಣಕ್ಕಾಗಿ ಅನುದಾನ ನೀಡಲಾಗುವುದು. ಬಡಾವಣೆಯಲ್ಲಿ ಸರ್ವೇ ನಡೆಸಿ, ಒತ್ತುವರಿ ತೆರವುಗೊಳಿಸಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಅಶೋಕಪುರಂ ನಿವಾಸಿ ಪ್ರಕಾಶ್ ಮಾತನಾಡಿ, ಶವ ಸಂಸ್ಕಾರಕ್ಕೆ ನಗರಸಭೆಯಿಂದ ಸಹಾಯಧನ ನೀಡಲಾಗುತ್ತಿತ್ತು. ಈ ಬಾರಿಯ ಬಜೆಟ್‌ನಲ್ಲಿ ಶವಸಂಸ್ಕಾರಕ್ಕೆ ಸಹಾಯಧನ ಮೀಸಲಿರಿಸಬೇಕು ಎಂದರು. ಥಾಮಸ್ ಬಡಾವಣೆಯ ಗೋಪಾಲ್ ಮಾತನಾಡಿ, ಬಡಾವಣೆಯ ವಿಶ್ವ ಗುರು ಬಸವೇಶ್ವರ ಉದ್ಯಾನದಲ್ಲಿ ದೀಪದ ವ್ಯವಸ್ಥೆ ಇಲ್ಲ. ಇದರಿಂದ ಮುಂಜಾನೆ ಹಾಗೂ ಸಂಜೆ ವಾಯುವಿಹಾರ ನಡೆಸುವ ಇಲ್ಲಿನ ನಿವಾಸಿಗಳಿಗೆ ತೊಂದರೆಯಾಗಿದೆ. ಹೀಗಾಗಿ ವಿದ್ಯುತ್ ದೀಪ ಅಳವಡಿಸಿ ಎಂದು ಮನವಿ ಮಾಡಿದರು.

ತಾಲೂಕು ವರ್ತಕರ ಸಂಘದ ಅಧ್ಯಕ್ಷ ಗೋವಿಂದರಾಜ್ ಮಾತನಾಡಿ, ಹಳೇ ಸುಭಾಷ್ ಪಾರ್ಕ್‌ನ ರಸ್ತೆಯಲ್ಲಿ 2 ಕಡೆ ಗಿಡಗಳನ್ನು ನೆಟ್ಟು ಪರಿಸರ ಸ್ವಚ್ಛಗೊಳಿಸಬೇಕು ಎಂದರು.

ಅಶೋಕಪುರಂ ನಿವಾಸಿ ದೇವರಾಜ್ ಮಾತನಾಡಿ, ಕೊಳಗೇರಿ ನಿವಾಸಿಗಳಿಗೆ ಮಂಡಳಿ ಮನೆ ಮಂಜೂರು ಮಾಡಲು ನಿವಾಸಿಗಳು 1 ಲಕ್ಷ ಪ್ರಥಮ ಕಂತು ಕಟ್ಟಬೇಕಾಗಿದೆ. ಬಡಾವಣೆಯಲ್ಲಿ ಹೆಚ್ಚಾಗಿ ಬಡವರೇ ವಾಸಿಸುವುದರಿಂದ ನಗರಸಭೆ ವತಿಯಿಂದ ಕೊಳಚೆ ನಿರ್ಮೂಲನಾ ಮಂಡಳಿಯ 1 ಲಕ್ಷ ಕಂತನ್ನು ಭರಿಸಿ ಮನೆ ನಿರ್ಮಿಸಿಕೊಳ್ಳಲು ಅನುಕೂಲ ಮಾಡಿಕೊಡಬೇಕು ಎಂದರು.

ಆನಂದಪುರ ಬಡಾವಣೆ ನಿವಾಸಿ ರಘುಪತಿ ಮಾತನಾಡಿ, ಆನಂದಪುರ ಬಡಾವಣೆ ಉದ್ಯಾನವನ ಅಭಿವೃದ್ಧಿ ಕಾಣದೆ ಹಾಳಾಗಿದೆ. ಉದ್ಯಾನದ ಅಭಿವೃದ್ಧಿಗೆ ಅನುದಾನ ಮೀಸಲಿರಿಸಬೇಕು. ಬಡಾವಣೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಬೇಕು ಎಂದರು. ಪುರಸಭೆ ಮಾಜಿ ಅಧ್ಯಕ್ಷ ಪಿ.ಶ್ರೀನಿವಾಸ್ ಮಾತನಾಡಿ, 8ನೇ ವಾರ್ಡ್‌ನ ಗಂಗಾಮತಸ್ಥರ ಸ್ಮಶಾನಕ್ಕೆ ವಿದ್ಯುತ್ ದೀಪ ಅಳವಡಿಸಿ, ನೀರಿನ ವ್ಯವಸ್ಥೆ ಮಾಡಲು ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ನಗರಸಭೆ ಆಯುಕ್ತ ವಿಜಯ್ ಮಾತನಾಡಿ, ನಗರದ ಉದ್ಯಾನವನ, ಸ್ಮಶಾನ ಅಭಿವೃದ್ಧಿಗೆ ಅನುದಾನ ಮೀಸಲಿರಿಸಲಾಗುವುದು. ಅಗತ್ಯವಿರುವ ಕಡೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಲು ಕ್ರಮವಹಿಸಲಾಗುವುದು ಎಂದರು. ಸಭೆಯಲ್ಲಿ ನಗರಸಭೆ ಉಪಾಧ್ಯಕ್ಷೆ ರೆಹಾನಾ ಬಾನು, ಸದಸ್ಯರಾದ ಗಾಯಿತ್ರಿ ಯೋಗೇಶ್, ಮಹದೇವಪ್ರಸಾದ್, ಮಹೇಶ್ ಅತ್ತಿಕಾನೆ, ಬಾಬು ಉಪಸ್ಥಿತರಿದ್ದರು.

> ನಗರದ ಸಮಗ್ರ ಅಭಿವೃದ್ಧಿ ಉದ್ದೇಶದಿಂದ ನಗರದ ನಾಗರಿಕರ ಸಲಹೆ ಪಡೆದು, ನಗರೋತ್ಥಾನ ಯೋಜನೆ ಅನುದಾನ ಬಳಸಿಕೊಂಡು ಮೂಲ ಸೌಲಭ್ಯಗಳ ಕೊರತೆ ನೀಗಿಸಲಾಗುವುದು.
>
> –ಶ್ರೀಕಂಠಸ್ವಾಮಿ, ನಗರಸಭೆ ಅಧ್ಯಕ್ಷ.

ಬ್ಯಾಂಕ್ ಮ್ಯಾನೇಜರ್, ಮೈಕ್ರೋ ಫೈನಾನ್ಸ್ ವ್ಯವಸ್ಥಾಪಕರ ಸಭೆ



ಬ್ಯಾಂಕ್ ಮ್ಯಾನೇಜರ್, ಮೈಕ್ರೋ ಫೈನಾನ್ಸ್ ವ್ಯವಸ್ಥಾಪಕರ ಸಭೆ ನಡೆಯಿತು.

ಸರಗೂರು, ಜ.21– ಬ್ಯಾಂಕುಗಳ ಲಾಕರ್‌ಗಳಿಗೆ ಇರುವ ಭದ್ರತೆ, ಸಿಸಿಟಿವಿ ನಿರ್ವಹಣೆ, ಎಟಿಎಂಗಳ ಸುರಕ್ಷತೆ ಸೇರಿದಂತೆ ಇನ್ನಿತರ ಸುರಕ್ಷತಾ ಕ್ರಮಗಳನ್ನು ಆಯಾ ಬ್ಯಾಂಕ್‌ಗಳು ಪರಿಶೀಲಿಸಬೇಕು ಎಂದು ಎಸ್‌ಐ ನಂದೀಶ್ ಕುಮಾರ್ ಸೂಚಿಸಿದರು.

ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ವಿವಿಧ ಬ್ಯಾಂಕ್ ಮ್ಯಾನೇಜರ್, ಮೈಕ್ರೋ ಫೈನಾನ್ಸ್ ವ್ಯವಸ್ಥಾಪಕರ ಸಭೆ ನಡೆಸಿ ಮಾತನಾಡಿದ ಅವರು, ಎಲ್ಲಾ ಬ್ಯಾಂಕ್‌ಗಳಲ್ಲಿ ಭದ್ರತೆಗಾಗಿ ಸಿಸಿಟಿವಿ, ಅಲಾರಾಂ ಅನ್ನು ಕಡ್ಡಾಯವಾಗಿ ಅಳವಡಿಸಬೇಕು. ಇತ್ತೀಚೆಗೆ ದರೋಡೆ ಪ್ರಕರಣಗಳು ಹೆಚ್ಚಾಗಿರುವುದರಿಂದ ಭದ್ರತಾ ಸಿಬ್ಬಂದಿ ನೇಮಿಸಿಕೊಳ್ಳಬೇಕು. ಅನುಮಾನಾಸ್ಪದವಾಗಿ ಬ್ಯಾಂಕ್‌ಗಳಿಗೆ ಬರುವವರ ಬಗ್ಗೆ ಸಿಬ್ಬಂದಿ ಗಮನ ಹರಿಸಿ ಯಾವುದೇ ದುರ್ಘಟನೆ ನಡೆಯದಂತೆ ಎಚ್ಚರ ವಹಿಸಬೇಕು ಎಂದ ಅವರು, ಪಟ್ಟಣದಲ್ಲಿ ಐದು ಎಟಿಎಂಗಳಿದ್ದು, ಭದ್ರತಾ ಸಿಬ್ಬಂದಿ ನಿಯೋಜಿಸಿಲ್ಲ. ಹೀಗಾಗಿ ನಿಮ್ಮ ಮೇಲಿನ ಅಧಿಕಾರಿಗಳ ಗಮನಕ್ಕೆ ತಂದು ಭದ್ರತಾ ಸಿಬ್ಬಂದಿ ನೇಮಕ ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಮುತ್ತೂಟ್ ಫೈನಾನ್ಸ್‌ಗಳಲ್ಲಿ ಸಾರ್ವಜನಿಕರು ಹೆಚ್ಚಿನ ಚಿನ್ನ ಅಡವಿಡುತ್ತಾರೆ. ನೀವು ಸಹ ಸೂಕ್ತ ಭದ್ರತೆ ಕೈಗೊಳ್ಳಬೇಕು. ಮೈಕ್ರೋ ಫೈನಾನ್ಸ್ ಸಿಬ್ಬಂದಿ ಗ್ರಾಮೀಣ ಮಹಿಳೆಯರಿಗೆ ತೊಂದರೆ ನೀಡುತ್ತಿರುವ ಬಗ್ಗೆ ಹೆಚ್ಚಿನ ದೂರು ಕೇಳಿ ಬರುತ್ತಿವೆ. ಸಾರ್ವಜನಿಕರಿಂದ ದೂರು ಬಂದರೆ ನಿಮ್ಮ ವಿರುದ್ಧ ದೂರು ದಾಖಲಿಸಲಾಗುವುದು. ಹೀಗಾಗಿ ನೀವು ಕ್ರಮ ಬದ್ಧವಾಗಿ ಹಣ ವಸೂಲಿ ಮಾಡಬೇಕು. ಒಂದು ವೇಳೆ ನೋಟಿಸ್ ನೀಡಿ ಮನೆ ಜಪ್ತಿ ಅಥವಾ ಅವರಿಗೆ ತೊಂದರೆ ನೀಡುವುದಾಗಿ ಮಾಡಿದರೇ ಕಾನೂನು ಕ್ರಮ ಜರುಗಿಸಲಾಗುವುದು ಎಂದರು.

ಈ ವೇಳೆ ಕ್ರೈಂ ಬ್ರಾಂಚ್ ಎಸ್‌ಐ ಗೋಪಾಲ್, ಕಸಾಪ ತಾಲೂಕು ಅಧ್ಯಕ್ಷ ಕೆಂಡಗಣ್ಣಸ್ವಾಮಿ, ಪಿಎಸಿಎಸ್ ಉಪಾಧ್ಯಕ್ಷ ನಾಗರಾಜು, ಎಎಸ್‌ಐ ನಾರಾಯಣ್, ಸಿಬ್ಬಂದಿಗಳಾದ ಇಮ್ರಾನ್, ಚಂದ್ರು, ಆನಂದ್, ದೇವರಾಜು, ಶಿವರಾಜು, ಉಷಾ ಇತರರಿದ್ದರು.

ಚಿರತೆ ದಾಳಿಗೆ ಕುರಿ ಬಲಿ

ಮಲ್ಕುಂಡಿ, ಜ.21– ಚಿರತೆ ದಾಳಿಗೆ ಕುರಿ ಬಲಿಯಾಗಿರುವ ಘಟನೆ ಸಮೀಪದ ಜಾಲಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರೈತ ಶಿವಣ್ಣ ಅವರಿಗೆ ಸೇರಿದ ಕುರಿ ಬಲಿಯಾಗಿರುವುದು. ಶಿವಣ್ಣ ಅವರು ತಮ್ಮ ಜಮೀನಿನಲ್ಲಿ ಕುರಿ ಹಾಗೂ ಜಾನುವಾರುಗಳನ್ನು ಮೇಯಿಸುತ್ತಿದ್ದ ವೇಳೆ ಚಿರತೆ ಏಕಾಏಕಿ ಕುರಿ ಮೇಲೆ ದಾಳಿ ನಡೆಸಿದೆ. ಈ ವೇಳೆ ಅಕ್ಕಪಕ್ಕದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತರು ಕೂಗಿಕೊಂಡಿದ್ದರಿಂದ ಗಾಬರಿಗೊಂಡ ಚಿರತೆ ಸ್ಥಳದಿಂದ ಪರಾರಿಯಾಗಿದೆ. ಘಟನೆಯಿಂದ ಸ್ಥಳೀಯರು ಭಯಗೊಂಡಿದ್ದು, ಚಿರತೆ ಸೆರೆ ಹಿಡಿಯುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹುಣಸೂರಲ್ಲಿ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ



ಹುಣಸೂರಲ್ಲಿ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ ನಡೆಯಿತು.

ಹುಣಸೂರು, ಜ.21– ನಗರದ ಡೀಡ್ ಸಂಸ್ಥೆ ಆವರಣದಲ್ಲಿ ಶಂಕರ ಕಣ್ಣಿನ ಆಸ್ಪತ್ರೆ ಬೆಂಗಳೂರು ಹಾಗೂ ಸದೃಢ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ 60ನೇ ಕಣ್ಣಿನ ಶಸ್ತ್ರ ಚಿಕಿತ್ಸಾ ಶಿಬಿರ ಆಯೋಜಿಸಲಾಗಿತ್ತು.

ಶಿಬಿರದಲ್ಲಿ ಸುಮಾರು 124 ಮಂದಿ ಕಣ್ಣಿನ ತಪಾಸಣೆಗೆ ಒಳಪಟ್ಟರು. ಈ ಪೈಕಿ 64 ಮಂದಿಯನ್ನು ಬೆಂಗಳೂರಿನ ಶಂಕರ ಕಣ್ಣಿನ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಡಾ.ಅಪೇಕ್ಷಾ, ಡಾ.ಸೌಜನ್ಯ ಶಿಬಿರದಲ್ಲಿ ಭಾಗವಹಿಸಿದ್ದರು. ಇದೇ ವೇಳೆ ಬಿಪಿ, ಶುಗರ್ ಪರಿಶೀಲಿಸಲಾಯಿತು. ಕಳೆದ ತಿಂಗಳು ಕಣ್ಣು ಆಪರೇಷನ್ ಮಾಡಿಸಿಕೊಂಡ 60 ಮಂದಿಗೆ ಉಚಿತವಾಗಿ ಕನ್ನಡಕ ವಿತರಿಸಲಾಯಿತು. ಶಂಕರ ಆಸ್ಪತ್ರೆಯ ಶಿಬಿರದ ಸಂಯೋಜಕ ಶ್ರೀಕಂಠಮೂರ್ತಿ, ಮಂಜುನಾಥ, ಉಷಾ, ಡೀಡ್ ಶ್ರೀಕಾಂತ್ ಇತರರಿದ್ದರು.

ಅಮಿತ್ ಶಾ ಸ್ವಾತಂತ್ರ್ಯ ಹೋರಾಟಗಾರರನ್ನು ಅಪಮಾನಿಸಿದ್ದಾರೆ

ಪ್ರಿಯಾಂಕಾ ಗಾಂಧಿ ವಾಗ್ದಾಳಿ



ಬೆಳಗಾವಿ, ಜ.21– ಸಂಸತ್‌ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಕೇವಲ ಡಾ. ಬಿ.ಆರ್.ಅಂಬೇಡ್ಕರ್‌ರನ್ನು ಅಪಮಾನಿಸಿಲ್ಲ ಎಲ್ಲಾ ಸ್ವಾತಂತ್ರ್ಯ ಹೋರಾಟಗಾರರನ್ನು ಅಪಮಾನಿಸಿದ್ದಾರೆ ಎಂದು ಸಂಸದೆ ಪ್ರಿಯಾಂಕಾ ಗಾಂಧಿ ವಾಗ್ದಾಳಿ ಮಾಡಿದ್ದಾರೆ.

ನಗರದ ಸಿಪಿಎಡ್ ಮೈದಾನದಲ್ಲಿ ನಡೆದ ಗಾಂಧಿ ಭಾರತ ಸಮಾವೇಶದಲ್ಲಿ ಭಾಷಣ ಮಾಡಿದ ಪ್ರಿಯಾಂಕಾ ಗಾಂಧಿ, ಸ್ವಾತಂತ್ರ್ಯ ಸಿಕ್ಕ ಬಳಿಕ ಹಲವು ಸರ್ಕಾರಗಳು ಅಧಿಕಾರಕ್ಕೆ ಬಂದಿವೆ. ಆದರೆ ಸಂಸತ್‌ನಲ್ಲಿ ಡಾ.ಬಿ.ಆರ್.ಅಂಬೇಡ್ಕರ್‌ರನ್ನು ಟೀಕಿಸಿರಲಿಲ್ಲ. ದೇಶದ ಸ್ವಾತಂತ್ರ್ಯ ಹೋರಾಟದ ವೇಳೆಯೂ ಇದೇ ಮನಸ್ಥಿತಿ ಹೊಂದಿದ್ದರು ಎಂದು ಕಿಡಿಕಾರಿದ್ದಾರೆ.

ಮೋದಿ, ಅಮಿತ್ ಶಾ ಸಂವಿಧಾನದ ವಿರೋಧಿಗಳು: 2024ರ ಲೋಕಸಭಾ ಚುನಾವಣಾ ಪ್ರಚಾರದ ವೇಳೆಯೂ ಸಂವಿಧಾನ ಬದಲಿಸುವುದಾಗಿ ಬಿಜೆಪಿ ನಾಯಕರು ಹೇಳಿದ್ದರು. ಹೀಗೆ ಹೇಳಿದ್ದಕ್ಕೆ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿದ್ದಾರೆ. ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಶಾ ಸಂವಿಧಾನದ ವಿರೋಧಿಗಳು. ಮೋದಿ ಸರ್ಕಾರದಲ್ಲಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ದಾಳಿ ನಡೆದಿದೆ. ಅಧಿಕಾರಕ್ಕೆ ಬಂದ ಕೂಡಲೇ ಸಂವಿಧಾನ ವಿಮರ್ಶಾ ಸಮಿತಿ ರಚಿಸಿದ್ದರು ಎಂದಿದ್ದಾರೆ.

ಭಾರತದ ಹೆಮ್ಮೆಯ ಭೂಮಿ ಬೆಳಗಾವಿ, ಪುಣ್ಯಭೂಮಿ ಬೆಳಗಾವಿ. ತಿಲಕ್ ಅವರು ತಮ್ಮ ಚಳವಳಿಯನ್ನು ಬೆಳಗಾವಿಯಿಂದ ಆರಂಭಿಸಿದ್ದರು. ಗಾಂಧೀಜಿ ಅವರು ಬೆಳಗಾವಿ ಕಾಂಗ್ರೆಸ್ ಸಮಾವೇಶದ ಅಧ್ಯಕ್ಷರಾಗಿದ್ದರು. ಸಂವಿಧಾನ ನಮ್ಮೆಲ್ಲರನ್ನೂ ರಕ್ಷಿಸುವ ಕವಚವಾಗಿದೆ. ಮತದಾನದ ಮೂಲಕ ನಿಮ್ಮ ಸರ್ಕಾರವನ್ನು ಆಯ್ಕೆ ಮಾಡುವ ಅಧಿಕಾರ, ನಮ್ಮ ಸಂವಿಧಾನ ಪ್ರಶ್ನಿಸುವ ಅಧಿಕಾರ, ಸಮಾನತೆಯ ಅವಕಾಶ ನೀಡಿದೆ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರ ಆರ್‌ಟಿಐ ಕಾನೂನು ತೆಗೆಯಲು ಪ್ರಯತ್ನಿಸುತ್ತಿದೆ. ಲೋಕಪಾಲ್, ಚುನಾವಣಾ ಆಯೋಗದ ಶಕ್ತಿ ಕುಗ್ಗಿಸಿದ್ದಾರೆ. ಮಹಿಳೆಯರ ಮೇಲೆ ಹಲ್ಲೆ ಮಾಡುವವರಿಗೆ ರಕ್ಷಣೆ ನೀಡುತ್ತಿದ್ದಾರೆ. ಪ್ರಧಾನಿ ಮೋದಿ ಸರ್ಕಾರದಲ್ಲಿ ಕಾರ್ಮಿಕರ ರಕ್ಷಣೆಗೆ ಧಕ್ಕೆ ಆಗಿದೆ. ಕರ್ನಾಟಕ ಸರ್ಕಾರ 200 ಯುನಿಟ್‌ವರೆಗೂ ಉಚಿತ ವಿದ್ಯುತ್ ನೀಡುತ್ತಿದೆ. ಉತ್ತರ ಪ್ರದೇಶ ಸರ್ಕಾರ ರೈತರಿಗೆ ಉಚಿತ ವಿದ್ಯುತ್ ನೀಡುತ್ತಿಲ್ಲ. ಸಿಎಂ ಯೋಗಿ ಸರ್ಕಾರ ವಿದ್ಯುತ್ ಬಿಲ್ ಹೆಸರಿನಲ್ಲಿ ಸಾವಿರಾರು ರೂ. ವಸೂಲಿ ಮಾಡಿದೆ ಎಂದರು.

ಕೇಂದ್ರ ಸರ್ಕಾರ ಉದ್ಯಮಿ ಅದಾನಿಗೆ ದೇಶದ ಇಡೀ ಸಂಪತ್ತನ್ನು ನೀಡಿದೆ. ಸಾಲಕ್ಕೆ ಹೆದರಿ ಅನ್ನದಾತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಆದರೂ ಕೇಂದ್ರ ಸರ್ಕಾರ ರೈತರ ಸಹಾಯಕ್ಕೆ ಬಂದಿಲ್ಲ. ರೈತರ ಬೆಳೆಗೂ ಕೇಂದ್ರ ಜಿಎಸ್‌ಟಿ ಹಾಕುತ್ತಿದೆ, ಇದು ಸಂವಿಧಾನ ವಿರೋಧಿ. ಕಾಫಿ, ಟೀ, ಟೂತ್‌ಪೇಸ್ಟ್, ಮಕ್ಕಳ ಪುಸ್ತಕದ ಮೇಲೆಯೂ GST ಹಾಕುತ್ತಿದ್ದಾರೆ. ದಿನೇದಿನೆ ಸಾಮಾನ್ಯ ಜನರ ಮೇಲೆ ಜಿಎಸ್‌ಟಿ ಹೆಚ್ಚಿಸಲಾಗುತ್ತಿದೆ. ಆದರೆ ಅಂಬಾನಿ, ಅದಾನಿಯವರ ತೆರಿಗೆ ಮಾತ್ರ ಹೆಚ್ಚಿಸುತ್ತಿಲ್ಲ. ಇದರಿಂದ ಬಂಡವಾಳಶಾಹಿಗಳಿಗೆ ಸಾವಿರಾರು ಕೋಟಿ ಲಾಭವಾಗುತ್ತಿದೆ ಎಂದು ಪ್ರಧಾನಿ ಮೋದಿ, ಕೇಂದ್ರ ಸರ್ಕಾರದ ವಿರುದ್ಧ ಪ್ರಿಯಾಂಕಾ ವಾಗ್ದಾಳಿ ಮಾಡಿದ್ದಾರೆ.

ರಾಜ್ಯಾದ್ಯಂತ ಮೈಕ್ರೋ ಫೈನಾನ್ಸ್‌ಗಳಿಂದ ಭಾರೀ ಕಿರುಕುಳ

ಹಾವಳಿ ತಡೆಗೆ ಕಡಿವಾಣ ಹಾಕದಿದ್ದರೆ ರೈತರಿಂದ ಹೋರಾಟ

ಮೈಸೂರು, ಜ.21(ಜಿಎ)– ರಾಜ್ಯಾದ್ಯಂತ ಮೈಕ್ರೋ ಫೈನಾನ್ಸ್‌ಗಳ ಹಾವಳಿ, ಕಿರುಕುಳ ಹೆಚ್ಚಾಗಿದ್ದು, ಸರ್ಕಾರ ಇವುಗಳ ಮೇಲೆ ಕಡಿವಾಣ ಹಾಕದಿದ್ದರೆ ಕರ್ನಾಟಕ ರಾಜ್ಯ ರೈತಸಂಘ ರೈತ ಪರ್ವದ ವತಿಯಿಂದ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ರಾಜ್ಯಾಧ್ಯಕ್ಷ ಟಿವಿ. ಅರುಣ್‌ಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಸಾಲ ಸಿಗುವುದು ಕಷ್ಟವಾಗಿತ್ತು. ಆ ವೇಳೆ ಮೈಕ್ರೋ ಫೈನಾನ್ಸ್‌ಗಳು ವರದಾನವಾಗಿ ಬಂದವು. ಆದರೆ ಬಳಿಕ ಸಾಲ ಪಡೆಯುವವರಿಗೆ ನಿಜಕ್ಕೂ ಸಾಲ ತೀರಿಸುವ ಶಕ್ತಿ ಇದೆಯೇ, ಇಲ್ಲವೇ ಎಂಬುದನ್ನೂ ಯೋಚಿಸದೇ ಸುಲಭವಾಗಿ ದೊಡ್ಡ ಪ್ರಮಾಣದ ಸಾಲ ನೀಡಲಾರಂಭಿಸಿದ ಮೇಲೆ ಸಮಸ್ಯೆ ಉದ್ಭವವಾಗಿದೆ ಎಂದರು.

ಇವುಗಳು ಅಧಿಕ ಬಡ್ಡಿ ದರ ವಿಧಿಸುವುದಲ್ಲದೇ ಕಂತು ಪಾವತಿಸಲು ವಿಳಂಬ ಮಾಡಿದಲ್ಲಿ ಕಿರುಕುಳ ನೀಡುವುದು ಮುಂದುವರಿದಿದೆ. ಇದೇ ಕಾರಣ ದಿಂದಾಗಿ ಹುಲ್ಲಹಳ್ಳಿ, ರಾಂಪುರ, ಮುದ್ದಳ್ಳಿ, ಚಾಮರಾಜನಗರದ ವಿವಿಧೆಡೆ, ಬೆಂಗಳೂರು ಗ್ರಾಮಾಂತರ, ದೂರದ ರಾಣೆಬೆನ್ನೂರಿನ ಗುಡ್ಡದಬಾವಿಹಳ್ಳಿ, ಬೆಳಗಾವಿ ಮೊದಲಾದ ಕಡೆಗಳಲ್ಲಿ ಮಹಿಳೆಯರು ಕುಟುಂಬವನ್ನೇ ತ್ಯಜಿಸಿ ತಲೆ ತಪ್ಪಿಸಿಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ. ಮೈಕ್ರೋ ಫೈನಾನ್ಸ್‌ಗಳು ಆರ್‌ಬಿಐ ನೀತಿ ನಿಯಮ ಮೀರಿ ಬಡ್ಡಿ ನಿಗದಿ, ವಸೂಲಾತಿಗೆ ಕಿರುಕುಳ ನಿಡುವುದನ್ನು ಮುಂದುವರಿಸಿವೆ. ಹೀಗಾಗಿ ಸರ್ಕಾರ ಕೂಡಲೇ ಮಧ್ಯ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಬೇಕು. ಸಂತ್ರಸ್ತರ ರಕ್ಷಣೆಗೆ ನಿಲ್ಲಬೇಕೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಡಾ.ಉಮಾಪತಿ, ಚಾಮರಾಜು ಮಂಡಕಳ್ಳಿ, ತಾರಾ ಕುಮಾರ್, ಬಿ.ಬಿ.ಚಾಂದಿನಿ ಉಪಸ್ಥಿತರಿದ್ದರು.

ವೈದ್ಯರಾದವರು ರೋಗಿಗಳಿಗೆ ಆತ್ಮಸ್ಥೈರ್ಯ ತುಂಬಬೇಕು

ರಾಷ್ಟ್ರೀಯ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕ ಡಾ. ಸುಮನ್ ಕುಮಾರ್ ಸಲಹೆ



ಮೈಸೂರು, ಜ.21(ಆರ್‌ಕೆ)–ಎಂಬಿಬಿಎಸ್ ಪದವಿ ಮುಗಿಸಿ ವೈದ್ಯರಾದವರು ವೃತ್ತಿ ನಿಷ್ಠೆ ಮೆರೆದು ರೋಗಿಗಳಿಗೆ ಆತ್ಮಸ್ಥೈರ್ಯ ತುಂಬಬೇಕು ಎಂದು ಮುಂಬೈನ ಅಲಿಯಾಟರ್ ಜಂಗ್ ರಾಷ್ಟ್ರೀಯ ವಾಕ್ ಮತ್ತು ಶ್ರವಣ ಸಂಸ್ಥೆ ನಿರ್ದೇಶಕ ಡಾ. ಸುಮನ್ ಕುಮಾರ್ ಇಂದಿಲ್ಲಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದಾರೆ.

ಜೆಎಸ್‌ಎಸ್ ವಾಕ್ ಮತ್ತು ಶ್ರವಣ ಸಂಸ್ಥೆ ವತಿಯಿಂದ ಅಗ್ರಹಾರದಲ್ಲಿರುವ ಜೆಎಸ್‌ಎಸ್ ಆಸ್ಪತ್ರೆಯ ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ 39 ಪದವೀಧರ, 33 ಸ್ನಾತಕೋತ್ತರ ಪದವಿ ಪಡೆದ ಒಟ್ಟು 72 ವಿದ್ಯಾರ್ಥಿಗಳಿಗೆ ಪದವಿ ಪತ್ರ ವಿತರಿಸಿ ಅವರು ಮಾತನಾಡಿದರು.

ವೈದ್ಯ ವೃತ್ತಿಗೆ ಬಂದ ಮೇಲೆ ಸಮಾಜವನ್ನು ಆರೋಗ್ಯವಾರಿಸಿ, ರೋಗಿಗಳ ಮುಖದಲ್ಲಿ ಆತ್ಮವಿಶ್ವಾಸ ಮೂಡಿಸಬೇಕು. ಹೆಚ್ಚು ಸಂಶೋಧನೆ ಮಾಡಿ ಸಮಾಜಕ್ಕೆ ವೈದ್ಯಕೀಯ ಬಲ ನೀಡಬೇಕು ಎಂದ ಅವರು, ಸಾಮಾಜಿಕ ಜಾಲ ತಾಣಗಳಲ್ಲಿ ಆಸಕ್ತಿ ವಹಿಸುವ ಬದಲು, ಪುಸ್ತಕಗಳನ್ನು ಓದಿ ಆಳವಾದ ಅಧ್ಯಯನ ಮಾಡುವುದು ನಿಮ್ಮ ಭವಿಷ್ಯದ ದೃಷ್ಟಿಯಿಂದ ಒಳಿತು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಓದುವ ವಯಸ್ಸಿನಲ್ಲಿ ಚೆನ್ನಾಗಿ ಓದಿ ಜ್ಞಾನ ಹೆಚ್ಚಿಸಿಕೊಂಡು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗುರಿ ಸಾಧಿಸಬೇಕು. ಪದವಿಗಳನ್ನು ಗಳಿಸಿದರಷ್ಟೇ ಸಾಲದು. ತಾಂತ್ರಿಕ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಇದೇ ಸಂದರ್ಭ ಪದವಿ ಪರೀಕ್ಷೆಗಳಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸ ಲಾಯಿತು. ಜೆಎಸ್‌ಎಸ್ ಮಹಾವಿದ್ಯಾ ಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ಕಾರ್ಯ ನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ್ ಮಠ್, ಮೋನಿಕಾ ರತ್ನ, ಮಾಲಾ ಹಾಗೂ ಇತರರು ಭಾಗವಹಿಸಿದ್ದರು.

ಅಲ್ಪಸಂಖ್ಯಾತರ ವಿವಿಧ ಬೇಡಿಕೆ ಸಂಬಂಧ ಬಜೆಟ್ ಪ್ರಸ್ತಾವನೆಗಾಗಿ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಸಭೆ

ಸಮುದಾಯದ ಮುಖಂಡರಿಂದ ಮಾಹಿತಿ ಸಂಗ್ರಹ



ಮೈಸೂರು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಮಂಗಳವಾರ ಸಭೆ ನಡೆಸಿದರು.

ಮೈಸೂರು, ಜ.21(ಪಿಎಂ)– ಅಲ್ಪಸಂಖ್ಯಾತರ ಶ್ರೇಯೋಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಬೇಡಿಕೆಗಳನ್ನು ರಾಜ್ಯ ಸರ್ಕಾರದ ಬಜೆಟ್‌ನ ಪ್ರಸ್ತಾವನೆಗೆ ಶಿಫಾರಸ್ಸು ಮಾಡುವ ಸಲುವಾಗಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು.ನಿಸಾರ್ ಅಹಮದ್ ಮಂಗಳವಾರ ಜಿಲ್ಲೆಯ ವಿವಿಧ ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರಿಂದ ಅಹವಾಲು ಆಲಿಸಿದರು.

ಮೈಸೂರು ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸಭೆ ನಡೆಸಿದ ಅವರು, ಮೈಸೂರು ಜಿಲ್ಲೆಯ ಮುಸ್ಲಿಂ, ಜೈನ, ಕ್ರೈಸ್ತ, ಸಿಖ್ ಮತ್ತು ಬೌದ್ಧ ಸಮುದಾಯದ ಮುಖಂಡರಿಂದ ಅಹವಾಲು ಆಲಿಸಿದರು. ಸಭೆಯಲ್ಲಿ ಸ್ವೀಕಾರವಾದ ಮನವಿಗಳನ್ನು ಬಜೆಟ್‌ಗೆ ಶಿಫಾರಸ್ಸು ಮಾಡಲಾಗುವುದು ಎಂದು ಯು.ನಿಸಾರ್ ಅಹಮದ್ ತಿಳಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಜೈನ ಸಮುದಾಯದ ಮುಖಂಡ ಸುರೇಶ್ ಕುಮಾರ್ ಜೈನ್, ರಾಜ್ಯದ ಎಲ್ಲಾ ಜೈನ ಬಸದಿ, ದೇವಸ್ಥಾನಗಳ ಗಡಿ ಗುರುತಿಸಿ ಒತ್ತುವರಿ ಇದ್ದಲ್ಲಿ ತೆರವುಗೊಳಿಸಿ, ದಾಖಲೆ ತಿದ್ದುಪಡಿ ಮಾಡಬೇಕು. ಕಾಂಪೌಂಡ್ ನಿರ್ಮಾಣ ಮತ್ತು ಬಸದಿ ಜೀರ್ಣೋದ್ಧಾರ ಮಾಡಲು ಅಗತ್ಯ ಅನುದಾನವನ್ನು ಬಜೆಟ್‌ನಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗೆ ಒದಗಿಸಬೇಕು ಎಂದು ಕೋರಿದರು.

ಬೌದ್ಧ ಧರ್ಮದ ಮುಖಂಡ ಕಾಳಸ್ವಾಮಿ ಮಾತನಾಡಿ, ಬೌದ್ಧ ಅಭಿವೃದ್ಧಿ ಪ್ರಾಧಿಕಾರ ರಚಿಸಿ ಸಾವಿರ ಕೋಟಿ ಮೀಸಲಿಡಬೇಕು. ಬೌದ್ಧ ವಿಹಾರಗಳನ್ನು ನಿರ್ಮಿಸಬೇಕು. ಅಶೋಕನ ಕಾಲದ ಶಾಸನಗಳು ಸಿಕ್ಕಿರುವ ಕರ್ನಾಟಕದ 9 ಸ್ಥಳಗಳನ್ನು ಬೌದ್ಧ ಪ್ರವಾಸಿ ತಾಣಗಳಾಗಿ ಅಭಿವೃದ್ಧಿಪಡಿಸಬೇಕು. ಜೊತೆಗೆ ರಾಜ್ಯದಲ್ಲಿ ಬೌದ್ಧ ವಿಶ್ವವಿದ್ಯಾನಿಲಯ ಸ್ಥಾಪಿಸಬೇಕೆಂಬುದೂ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ರೂಪಿಸಬೇಕೆಂದು ಕೋರಿದರು. ಮುಸ್ಲಿಂ ಮುಖಂಡ ಮೊಹಮ್ಮದ್ ಮನ್ಸೂರ್ ಅಲಿ ಮಾತನಾಡಿ, ಮುಸ್ಲಿಂ ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಉತ್ತೇಜನ ನೀಡಲು ಬಜೆಟ್‌ನಲ್ಲಿ ಪ್ರೋತ್ಸಾಹ ಧನ ಘೋಷಣೆ ಮಾಡಬೇಕು. ಮುಸ್ಲಿಂ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಡ್ರೈವಿಂಗ್ ಉದ್ಯೋಗದಲ್ಲಿದ್ದು, ಅವರಿಗೆ ಉಚಿತವಾಗಿ ಚಾಲನಾ ಪರವಾನಗಿ ಮಾಡಿಸಿಕೊಡಬೇಕು ಎಂದು ಒತ್ತಾಯಿಸಿದರು.

ರಾಜೀವನಗರದ ಮುಸ್ಲಿಂ ಮುಖಂಡ ಮಹಮ್ಮದ್ ರಫಿ ಮಾತನಾಡಿ, ಶಾಲೆ ಪ್ರವೇಶಾತಿ ಸಂದರ್ಭದಲ್ಲಿ ತ್ವರಿತಗತಿಯಲ್ಲಿ ಸಮುದಾಯದ ವಿದ್ಯಾರ್ಥಿಗಳಿಗೆ ಜಾತಿ ಪ್ರಮಾಣ ಪತ್ರ ಒದಗಿಸಲು ಕ್ರಮ ವಹಿಸಬೇಕು. ಆರೋಗ್ಯಕ್ಕೆ ಸಂಬಂಧಿಸಿದಂತೆ ವಿಶೇಷ ಯೋಜನೆ ರೂಪಿಸಬೇಕು. ಗಂಗಾ ಕಲ್ಯಾಣ ಯೋಜನೆಯಡಿ ತಾಲೂಕಿಗೆ ಅಲ್ಪಸಂಖ್ಯಾತರ ಎಲ್ಲಾ ಸಮುದಾಯಗಳಿಂದ ಕೇವಲ ಒಬ್ಬ ಫಲಾನುವಿ ಮಾತ್ರವೇ ಆಯ್ಕೆ ಮಾಡುತ್ತಿದ್ದು, ವಿಧಾನಸಭಾ ಕ್ಷೇತ್ರಗಳಿಗೆ ಕನಿಷ್ಠ ಐದು ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಅಲ್ಪಸಂಖ್ಯಾತರ ಬಡಾವಣೆಗಳಲ್ಲಿ ಮೌಲಸೌಲಭ್ಯ ಕಲ್ಪಿಸಲು ಸೂಕ್ತ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಬಿಜೆಪಿ ಹಾಗೂ ಕ್ರೈಸ್ತ ಸಮುದಾಯದ ಮುಖಂಡ ಅನಿಲ್ ಥಾಮಸ್ ಮಾತನಾಡಿ, ಅಲ್ಪಸಂಖ್ಯಾತರ ಆಯೋಗದ ಹುದ್ದೆಗಳಲ್ಲಿ ಕ್ರೈಸ್ತರು ಸೇರಿದಂತೆ ಇನ್ನಿತರ ಅಲ್ಪಸಂಖ್ಯಾತರಿಗೂ ಆದ್ಯತೆ ನೀಡಬೇಕು. ಆದರೆ ಪ್ರಸ್ತುತ ಕೇವಲ ಅಲ್ಪಸಂಖ್ಯಾತರ ಒಂದು ಸಮುದಾಯಕ್ಕೆ ಮಾತ್ರವೇ ಹೆಚ್ಚಿನ ಆದ್ಯತೆ ದೊರೆಯುತ್ತಿದೆ. ಕ್ರೈಸ್ತ ಸಮುದಾಯದಲ್ಲಿ ಹಿಂದುಳಿದಿರುವ ಕುಟುಂಬಗಳ ಗುರುತಿಸಲು ಅಧ್ಯಯನ ನಡೆಸಬೇಕು. ಆ ಮೂಲಕ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕುಟುಂಬಗಳ ಶ್ರೇಯೋಭಿವೃದ್ಧಿಗೆ ಸರ್ಕಾರ ಯೋಜನೆ ರೂಪಿಸಬೇಕು ಎಂದು ಕೋರಿದರು.

ಇರಿತಕ್ಕೊಳಗಾಗಿದ್ದ ನಟ ಸೈಫ್ ಅಲಿ ಖಾನ್ ಆಸ್ಪತ್ರೆಯಿಂದ ಡಿಸ್ಚಾರ್ಜ್



ಮುಂಬೈ: ಬಾಂದ್ರಾದಲ್ಲಿರುವ ತಮ್ಮ ಮನೆಯಲ್ಲಿ ದರೋಡೆಕೋರನಿಂದ ಚಾಕು ದಾಳಿಗೆ ಒಳಗಾಗಿದ್ದ ನಟ ಸೈಫ್ ಅಲಿ ಖಾನ್ ಲೀಲಾವತಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಜ.16ರಂದು ಕಳ್ಳತನ ಮಾಡುವ ಉದ್ದೇಶದಿಂದ ನಟ ಸೈಫ್ ಅಲಿ ಖಾನ್ ನಿವಾಸಕ್ಕೆ ನುಗ್ಗಿದ್ದ ದುಷ್ಕರ್ಮಿ, ಚಾಕುವಿನಿಂದ 6 ಬಾರಿ ಇರಿದಿದ್ದನು. ಗಂಭೀರವಾಗಿ ಗಾಯಗೊಂಡಿದ್ದ ಸೈಫ್ ಅಲಿ ಖಾನ್ ಅವರನ್ನು ಲೀಲಾವತಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಖಾನ್ ಅವರ ಕೈ, ಕುತ್ತಿಗೆ ಮತ್ತು ಬೆನ್ನಿಗೆ ಗಂಭೀರ ಗಾಯಗಳಾಗಿದ್ದವು. ವೈದ್ಯರು ಬೆನ್ನುಮೂಳೆಯಲ್ಲಿ ಸಿಲುಕಿದ್ದ ಚೂಪಾದ ಚಾಕುವನ್ನು ಹೊರ ತೆಗೆದಿದ್ದು, ಜ.17ರಂದು ತೀವ್ರ ನಿಗಾ ಘಟಕದಿಂದ ವಿಶೇಷ ಕೋಣೆಗೆ ಸ್ಥಳಾಂತರಿಸಲಾಗಿತ್ತು. 5 ದಿನಗಳ ನಂತರ ಸೈಫ್ ಅಲಿ ಖಾನ್ ಇಂದು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಇರಿತಕ್ಕೆ ಸಂಬಂಧಿಸಿದಂತೆ ನೆರೆಯ ಥಾಣೆ ನಗರದ ಬಾಂಗ್ಲಾದೇಶಿ ಪ್ರಜೆ ಶರೀಫುಲ್ ಇಸ್ಲಾಂ ಶೆಹಜಾದ್ ಮೊಹಮ್ಮದ್ ರೋಹಿಲ್ಲಾ ಅಮೀನ್ ಫಕೀರ್ (30) ಎಂಬ ಆರೋಪಿಯನ್ನು ಭಾನುವಾರ ಪೊಲೀಸರು ಬಂಧಿಸಿದ್ದಾರೆ.

ಗರ್ಭಿಣಿ ಹಸು ಕೊಂದು ಮಾಂಸ ಕದ್ದೊಯ್ದಿದ್ದ ಐವರು ಆರೋಪಿಗಳ ಬಂಧನ

ಕಾರವಾರ: ಗರ್ಭಿಣಿ ಹಸುವಿನ ತಲೆ ಕಡಿದು ಮಾಂಸ ಕದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರು ಆರೋಪಿಗಳನ್ನು ಹೊನ್ನಾವರ ಪೊಲೀಸರು ಬಂಧಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಸಾಲ್ಕೋಡ ಗ್ರಾಮದಲ್ಲಿ ಘಟನೆ ನಡೆದಿದ್ದು ಮೂರು ದಿನಗಳ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ರಾಜ್ಯದಲ್ಲಿ ನಡೆಯುತ್ತಿರುವ ಗೋಹಿಂಸೆ ಮತ್ತು ಗೋಹತ್ಯೆಯನ್ನು ಸರ್ಕಾರ ಯಾವುದೇ ಕಾರಣಕ್ಕೂ ಬೆಂಬಲಿಸಲ್ಲ. ಗೋ ಹಂತಕರು ಯಾರೇ ಆಗಿದ್ದರೂ ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆ. ಗೋ ಮಾಂಸ ಸಾಗಾಟದ ಜಾಲ ಇದ್ದರೆ ಸಂಪೂರ್ಣ ಮಾಹಿತಿ ಕಲೆ ಹಾಕುವಂತೆ ಗೃಹ ಸಚಿವ ಪರಮೇಶ್ವರ್ ಸಭೆಯಲ್ಲಿ ಸೂಚನೆ ನೀಡಿದ್ದರು. ಇನ್ನು ಕಾರವಾರ ಘಟನೆ ನಂತರ ತನಿಖೆ ಕೈಗೊಂಡಿದ್ದ ಎಸ್‌ಪಿ ಎಂ.ನಾರಾಯಣ ನೇತೃತ್ವದ ತಂಡ ಇದುವರೆಗೆ ಐವರು ಗೋ ಹಂತಕರನ್ನು ಬಂಧಿಸಿದ್ದಾರೆ.

ಮೈಸೂರಲ್ಲಿ ಸಿದ್ಧಗಂಗಾ ಮಠದ ಡಾ.ಶಿವಕುಮಾರ ಸ್ವಾಮಿಗಳ ಪುಣ್ಯಸ್ಮರಣೆ

ಸಾವಿರಾರು ಭಕ್ತಾಧಿಗಳಿಗೆ ಪ್ರಸಾದ ವಿತರಣೆ, ವೈಭವದ ಮೆರವಣಿಗೆ



ಡಾ. ಶಿವಕುಮಾರ ಸ್ವಾಮೀಜಿಯವರ ಆರನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಡಾ. ಶಿವಕುಮಾರಸ್ವಾಮೀಜಿ ಭಕ್ತ ಮಂಡಳಿಯಿಂದ ಮೈಸೂರಲ್ಲಿ ಅದ್ದೂರಿಯಾಗಿ ದಾಸೋಹ ದಿನ ಆಚರಿಸಲಾಯಿತು.

ಮೈಸೂರು, ಜ.21(ಜಿಎ)–ಡಾ. ಶಿವಕುಮಾರ ಸ್ವಾಮೀಜಿಯವರ ಆರನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಡಾ. ಶಿವಕುಮಾರಸ್ವಾಮೀಜಿ ಭಕ್ತ ಮಂಡಳಿ ಯಿಂದ ಮೈಸೂರಲ್ಲಿ ಅದ್ದೂರಿಯಾಗಿ ದಾಸೋಹ ದಿನ ಆಚರಿಸಲಾಯಿತು.

ಮೈಸೂರಿನ ಅಗ್ರಹಾರದ 101 ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಕುದೇರು ಮಠದ ಗುರುಶಾಂತ ಸ್ವಾಮೀಜಿ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ಶಿವಕುಮಾರ ಸ್ವಾಮೀಜಿ ಮೊದಲಾದವರ ಭಾವಚಿತ್ರದ ಜೊತೆಗೆ ನಂದಿಕಂಬ, ವೀರಗಾಸೆ, ಪೂಜಾಕುಣಿತ, ಡೊಳ್ಳು ಕುಣಿತ, ಪಟದ ಕುಣಿತ ಮೊದಲಾದ ಜಾನಪದ ತಂಡಗಳು ಪಾಲ್ಗೊಂಡು ತ್ಯಾಗರಾಜ ರಸ್ತೆ, ಚಾಮರಾಜ ಜೋಡಿ ರಸ್ತೆ, ಜೆಎಸ್‌ಎಸ್ ವಿದ್ಯಾಪೀಠದ ಬಳಿಯ ಬಸವ ಪುತ್ಥಳಿ ಮೂಲಕ ಕುದೇರು ಮಠದ ಮಾರ್ಗವಾಗಿ ಸಾಗಿ ಆರಂಭದ ಸ್ಥಳಕ್ಕೆ ಬಂದು ತಲುಪಿತು. ನಂತರ ಕುದೇರು ಮಠದ ಬಳಿ ಎರಡು ಸಾವಿರಕ್ಕೂ ಹೆಚ್ಚು ಭಕ್ತಾಧಿಗಳಿಗೆ ಪ್ರಸಾದ ವಿತರಿಸಲಾಯಿತು.

ಈ ವೇಳೆ ಕುದೇರು ಮಠದ ಗುರುಶಾಂತ ಸ್ವಾಮೀಜಿ ಮಾತನಾಡಿ, ಶಿವಕುಮಾರಸ್ವಾಮಿ, ಅವರು ಬಸವಾದಿ ಶರಣರಾಗಿದ್ದು, ಬಸವಣ್ಣ ಅವರ ತತ್ವ ಆದರ್ಶವನ್ನು ಜೀವನದಲ್ಲಿ ರೂಢಿಸಿಕೊಂಡು ಸಾಮಾಜಿಕ ಸೇವೆ ಮಾಡಿದ್ದಾರೆ. ನಾವು ಅವರಂತೆ ಅವರನ್ನು ಆದರ್ಶವಾಗಿ ಸ್ವೀಕರಿಸಿ ಜೀವನ ನಡೆಸಬೇಕು ಎಂದರು.

ಅಖಿಲ ಭಾರತ ವೀರಶೈವ ಮಹಾಸಭಾ ನಿಕಟಪೂರ್ವ ಕೋಶಾಧ್ಯಕ್ಷ ಮಣ ಮಹೇಶ್ ಮಾತನಾಡಿ, ನಡೆದಾಡುವ ದೇವರು ಶಿವಕುಮಾರಸ್ವಾಮೀಜಿ ಅವರು ಎಲ್ಲರ ಮನದಲ್ಲಿ ಇದ್ದು, ದೇಶದಾದ್ಯಂತ ಈ ದಿನವನ್ನು ಮರೆಯಲು ಸಾಧ್ಯವಿಲ್ಲ. ತ್ರಿವಿಧ ದಾಸೋಹಿಗಳಾಗಿ ಮಹಾಶಕ್ತಿಯಾಗಿ ಸಮಾಜಕ್ಕೆ ಕೊಡುಗೆ ನೀಡಿದ್ದಾರೆ. ಅವರ ಪ್ರೇರಣೆಯಿಂದಲೇ ಇಂದು ನೂರಾರು ಮಂದಿ ಇಂದಿನ ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದ್ದಾರೆ. ಅವರು ಹಾಕಿಕೊಟ್ಟಿರುವ ದಾರಿಯಲ್ಲಿ ನಾವು ಸಾಗಿ ಅವರಂತೆ ಜೀವನವನ್ನು ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಾಲಪುರದ ಮಠದ ಸ್ವಾಮೀಜಿ, ಕುದೇರು ಮಠದ ಕಿರಿಯ ಸ್ವಾಮೀಜಿ, ಭಕ್ತ ಮಂಡಳಿ ಅಧ್ಯಕ್ಷ ಎಸ್.ಚಿಕ್ಕಹಳ್ಳಿ ಸ್ವಾಮಿ, ಗಿರೀಶ್ ಶಿವಾರ್ಚಕ, ಲೋಕೇಶ್, ಶಾಂತಮ್ಮ, ಜ್ಯೋತಿ ರೇಚಣ್ಣ, ಎಂ.ಎಸ್. ಹಳ್ಳಿ ಮಹದೇವ್, ಪ್ರಭುಸ್ವಾಮಿ, ನಗರಪಾಲಿಕೆ ಮಾಜಿ ಸದಸ್ಯೆ ಸೌಮ್ಯ ಉಮೇಶ್, ಉಮೇಶ್, ಹೈಲೈಫ್ ಅಧ್ಯಕ್ಷ ಮಹದೇವ್, ವಸಂತ ಕುಮಾರ್, ಲೋಹಿತ್, ಗೊರೂರು ಮಲ್ಲೇಶ್, ಪ್ರದೀಪ್, ಹೂಟ್ಟಗಳಿ ನಾಗರಾಜ್, ಅಂಬಳೆ ಶಿಬಣ್ಣ, ಪ್ರಭು, ಕುಮಾರಸ್ವಾಮಿ, ಬಸವರಾಜು, ಪ್ರಸಾದ್, ಯಡ್ಡಹಳ್ಳಿ ಶಿವಪಾಲ್, ಅಶೋಕ್, ಬಿ.ಪಿ.ಸುರೇಶ್, ಮೂರ್ತಿ, ಬಿರಿಹುಂಡಿ ಮಲ್ಲೇಶ್, ಅನುಗನಹಳ್ಳಿ ಮಂಜು, ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಚಳಿಗಾಲದ ರೇಸ್

11ನೇ ದಿನ, ಬುಧವಾರ, 22–01–2025

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ಕೊಡಚಾದ್ರಿ ಪ್ಲೇಟ್–1400 ಮೀ. 3 ವರ್ಷ (ಟರ್ಮ್ಸ್). **ಮ.2.00ಕ್ಕೆ**
1. ಪ್ರೆಟಿ ಮೂವ್ 2. ಅಮೇಜಿಂಗ್ ಇಮ್ರಾ ರಿಫಾ 3. ಮೈಂಡ್ ಗೇಮ್ಸ್

II. ಉಜಿರೆ ಪ್ಲೇಟ್ ಡಿII–1100 ಮೀ. ರೇಟೆಡ್ 00 ರಿಂದ 25. **ಮ.2.30ಕ್ಕೆ**
1. ಅರಿಗಟೊ 2. ದುರಂಧರ 3. ಕ್ಲೈಡ್ ಸ್ಟಾರ್

III ಸೂಪರ್ ಸ್ಪೀಡ್ ಪ್ಲೇಟ್–1600 ಮೀ. ರೇಟೆಡ್ 20 ರಿಂದ 45. **ಮ.3.00ಕ್ಕೆ**
1. ವಾಟ್ ಈಸ್ ದಿಸ್ 2. ಎಕೋ ಸಿಸ್ಟಮ್ 3. ನ್ಯಾಚುರಲ್ ವಾರಿಯರ್

IV. ಉಜಿರೆ ಪ್ಲೇಟ್ ಡಿI–1100 ಮೀ. ರೇಟೆಡ್ 00 ರಿಂದ 25. **ಮ.3.30ಕ್ಕೆ**
1. ಪೋಲಾರ್ ಕ್ವೀನ್ 2. ಕಂಟ್ರೀಸ್ ವರ್ಸ್ 3. ಕೂಲ್ ವಿಂಟರ್

V. ಈ ಕ್ವೀನಿ ವೆಟಿನೆರೆಯನ್ಸ್ ಟ್ರೋಫಿ– 1200 ಮೀ. ರೇಟೆಡ್ 40 ರಿಂದ 65. **ಸಂ.4.00ಕ್ಕೆ**
1. ವರ್‌ದಾನ್ 2. ಪಸ್ಟ್ ಇಂಪ್ರೆಷನ್ 3. ಗ್ರೇಸ್

VI. ಅಜಂತ ಪ್ಲೇಟ್–1600 ಮೀ. ರೇಟೆಡ್ 60 ಮತ್ತು ಮೇಲ್ವರ್ಗ. **ಸಂ.4.30ಕ್ಕೆ**
1. ಆಭೂಷನ್ 2. ಫೆರ್ರಿ ರಿಟ್ಟಿ 3. ಕಾನ್‌ಫಿಡೆಂಟ್ ಗೇಮ್

VII. ಆಲೀಸ್ ಸೆರೆನಾಡೆ ಪ್ಲೇಟ್–1100 ಮೀ. ರೇಟೆಡ್ 20 ರಿಂದ 40. **ಸಂ.5.00ಕ್ಕೆ**
1. ಸ್ಟ್ರೀಟ್ ಸೆನ್ಸ್ 2. ಮಾರ್ಕ್ ಒನ್ 3. ಫೈರ್ ಬೋಲ್ಟ್

ದಿನದ ಅತ್ಯುತ್ತಮ	ವರ್‌ದಾನ್
ಡಬ್ಬಲ್	ಆಭೂಷನ್, ಸ್ಟ್ರೀಟ್ ಸೆನ್ಸ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಮೀಟರ್ ಬಡ್ಡಿ, ದಂಧೆ ತಡೆಗೆ ನೂತನ ಕಾಯ್ದೆ

ಬೆಂಗಳೂರು: ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಂಧೆ ಹಾಗೂ ಮೀಟರ್ ಬಡ್ಡಿ ಮಾಫಿಯಾಕ್ಕೆ ಕಡಿವಾಣ ಹಾಕಲು ನೂತನ ಕಾಯ್ದೆ ಜಾರಿಗೆ ತರಲು ನಿರ್ಧರಿಸಲಾಗಿದೆ ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಮುಂದಿನ ಅಧಿವೇಶನದಲ್ಲಿಯೇ ವಿಧೇಯಕ ಮಂಡಿಸಲಾಗುವುದು. ಬಡವರ, ಮಧ್ಯಮ ವರ್ಗದ ಹಿತ ಕಾಯುವುದು ನಮ್ಮ ಸರ್ಕಾರದ ಕರ್ತವ್ಯ ಎಂದು ಹೇಳಿದ್ದಾರೆ. ರಾಜ್ಯದ ವಿವಿಧೆಡೆ ಖಾಸಗಿ ಫೈನಾನ್ಸ್ ಕಿರುಕುಳ ಪ್ರಕರಣಗಳು ಹೆಚ್ಚಾಗಿದ್ದು, ಹೊಸ ಕಾನೂನಿನ ಮೂಲಕ ಮೀಟರ್ ಬಡ್ಡಿ ಮಾಫಿಯಾ, ಖಾಸಗಿ ಹಣಕಾಸು ಸಂಸ್ಥೆಗಳ ದಂಧೆಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆ.

ಸುಲಭವಾಗಿ ಹಣ ಗಳಿಕೆ ಆಸೆಗೆ ಬಿದ್ದು ಲಕ್ಷ ಲಕ್ಷ ಹಣ ಕಳೆದುಕೊಂಡ ವೈದ್ಯ, ಉಪನ್ಯಾಸಕಿ, ಇಂಜಿನಿಯರ್!

ಆನ್‌ಲೈನ್ ಆಮಿಷಕ್ಕೆ ಬಲಿಯಾಗುತ್ತಿರುವ ಸೋ ಕಾಲ್ಡ್ ಬುದ್ಧಿವಂತರು!!



ಮೈಸೂರು, ಜ.21(ಎಸ್‌ಬಿಡಿ)– ವೈದ್ಯ, ಇಂಜಿನಿಯರ್ ಹಾಗೂ ಉಪನ್ಯಾಸಕಿ ಆನ್‌ಲೈನ್ ವಂಚನೆಗೆ ಬಲಿಯಾಗಿ ಲಕ್ಷಾಂತರ ಹಣ ಕಳೆದುಕೊಂಡಿದ್ದಾರೆ.

ಆನ್‌ಲೈನ್ ವಂಚಕರು ಮೈಸೂರಿನ ಶ್ರೀರಾಂಪುರದ ವೈದ್ಯರೊಬ್ಬರಿಗೆ 29.71 ಲಕ್ಷ ರೂ., ರಾಮಕೃಷ್ಣನಗರದ ಉಪನ್ಯಾಸಕಿಗೆ 13.85 ಲಕ್ಷ ಹಾಗೂ ಶಕ್ತಿನಗರದ ಇಂಜಿನಿಯರ್‌ಗೆ 6.30 ಲಕ್ಷ ರೂ. ವಂಚಿಸಿದ್ದಾರೆ. ಈ ಸಂಬಂಧ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ.

ಪ್ರಕರಣ 1: ಶ್ರೀರಾಂಪುರದ ವೈದ್ಯ ಯೂಟ್ಯೂಬ್ ಬಳಸುವಾಗ ಪ್ರತ್ಯಕ್ಷವಾದ ಲಿಂಕ್ ಮೇಲೆ ಕ್ಲಿಕ್ ಮಾಡಿದ್ದೇ ದೊಡ್ಡ ಯಡವಟ್ಟಾಗಿದೆ. ಆ ಲಿಂಕ್ ಕ್ಲಿಕ್ ಮಾಡಿದ ತಕ್ಷಣ ಅವರ ಮೊಬೈಲ್ ನಂಬರ್ ಒಂದು ವಾಟ್ಸಾಪ್ ಗ್ರೂಪ್‌ಗೆ ಸೇರ್ಪಡೆಯಾಗಿದೆ. ಅದರಲ್ಲಿ ಇಂಟರ್ ನ್ಯಾಷನಲ್ ಕಾಂಪಿಟೇಷನ್‌ನಲ್ಲಿ ವೋಟ್ ಮಾಡುವ ಆಸಕ್ತಿ ಇದೆಯೇ ಎಂದು ಪ್ರಶ್ನಿಸಲಾಗಿದೆ. ಹೌದು ಎಂದಾಕ್ಷಣ ಒಂದು ಆ್ಯಪ್ ಲಿಂಕ್ ಕಳುಹಿಸಿ ಡೌನ್ಲೋಡ್ ಮಾಡಿಕೊಳ್ಳಲು ತಿಳಿಸಲಾಗಿದೆ. ಆ್ಯಪ್ ಡೌನ್ಲೋಡ್ ಮಾಡಿಕೊಂಡು ವೋಟ್ ಮಾಡಿದ ವೈದ್ಯ, ಕೆವೈಸಿ ಅಪ್‌ಡೇಟ್ ಕೂಡ ಮಾಡಿದ್ದಾರೆ.

ನಂತರ ಐಪಿಓ ಹೂಡಿಕೆ ಬಗ್ಗೆ ತಿಳಿಸಲಾಗಿದೆ. ಹಾಗೆಯೇ ಖಾತೆ ತೆರೆದು ಕಡಿಮೆ ಮೊತ್ತದ ಒಂದು ಐಪಿಓ ಖರೀದಿಸಿದ್ದು, ಅದಕ್ಕೆ ಲಾಭ ನೀಡಿದ್ದಾರೆ. ನಂತರ 26 ಲಕ್ಷ ರೂ. ಐಪಿಓ ಅಲಾರ್ಟ್ ಮಾಡಿ, ಅದನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ. ಅಷ್ಟೊಂದು ಹಣವಿಲ್ಲ ಎಂದಾಗ ನಿಮ್ಮ ಅಕೌಂಟ್‌ನಲ್ಲಿ 5 ಲಕ್ಷ ಇದೆ. ಕಂಪನಿ ಕಡೆಯಿಂದ 10 ಲಕ್ಷ ಸಪೋರ್ಟ್ ಫಂಡ್ ನೀಡುತ್ತೇವೆ. ಉಳಿಕೆ ಹಣವನ್ನು ಹೊಂದಿಸುವಂತೆ ತಿಳಿಸಿದ್ದಾರೆ. ಹಾಗೆಯೇ ಡಾಕ್ಟರ್ 11 ಲಕ್ಷ ಹಣವನ್ನು ವರ್ಗಾವಣೆ ಮಾಡಿದ್ದಾರೆ. ಬಳಿಕ ಶೇ.73ರಷ್ಟು ಪ್ರಾಫಿಟ್ ಬಂದಿದೆ ಎಂದು ಆ್ಯಪ್‌ನಲ್ಲಿ ತೋರಿಸಲಾಗಿದೆ. ಆದರೆ ಆ ಹಣವನ್ನು ಡ್ರಾ ಮಾಡಲು ಮುಂದಾದಾಗ ಕಂಪನಿ ಕಡೆಯಿಂದ ನೀಡಿದ್ದ ಸಪೋರ್ಟ್ ಫಂಡ್ 10 ಲಕ್ಷ ಹಿಂದಿರುಗಿಸುವಂತೆ ತಿಳಿಸಲಾಗಿದೆ. ಅದನ್ನೂ ಹೇಗೋ ಹೊಂದಿಸಿ ವರ್ಗಾವಣೆ ಮಾಡಿದ್ದಾರೆ. ಅದಲ್ಲದೆ 3 ಲಕ್ಷ ರೂ. ತೆರಿಗೆ ಸೇರಿದಂತೆ ಒಟ್ಟು 29.71 ಲಕ್ಷ ರೂ. ಹಣ ಪೀಕಿದ್ದಾರೆ. ಕಡೆಗೆ ಲಾಭಾಂಶ ನೀಡುವಂತೆ ಕೇಳಿದಾಗ ವೈದ್ಯರ ಮೊಬೈಲ್ ಸಂಖ್ಯೆಯನ್ನು ವಾಟ್ಸಾಪ್ ಗ್ರೂಪ್‌ನಿಂದಲೇ ತೆಗೆದು ಹಾಕಲಾಗಿದೆ.

ಪ್ರಕರಣ 2: ರಾಮಕೃಷ್ಣನಗರದ ಉಪನ್ಯಾಸಕಿ ಫೇಸ್‌ಬುಕ್ ಖಾತೆಯಲ್ಲಿ ಜಾಹೀರಾತು ನೋಡಿ ಸ್ಟಾಕ್ ಇನ್ವೆಸ್ಟ್‌ಮೆಂಟ್ ಸಂಬಂಧಿತ ವಾಟ್ಸಾಪ್ ಗ್ರೂಪ್‌ಗೆ ಸೇರಿದ್ದಾರೆ. ಅದರಲ್ಲಿ ಸ್ಟಾಕ್, ಷೇರು ಮಾರುಕಟ್ಟೆ ಹಾಗೂ ಹೆಚ್ಚು ಲಾಭಾಂಶ ನೀಡುವ ಷೇರುಗಳಲ್ಲಿ ಹೂಡಿಕೆ ಬಗ್ಗೆ ಸಲಹೆ ನೀಡಲಾಗಿದೆ. ಆ ಗ್ರೂಪ್‌ನಲ್ಲಿ ಒಂದು ಆ್ಯಪ್ ಲಿಂಕ್ ಕಳುಹಿಸಿ, ರಿಜಿಸ್ಟರ್ ಮಾಡಿಸಿದ್ದಾರೆ. ನಂತರ ಆ ಆ್ಯಪ್‌ನಲ್ಲಿ ಮೊದಲು 5 ಸಾವಿರ ಇನ್ವೆಸ್ಟ್ ಮಾಡಿದ ಉಪನ್ಯಾಸಕಿ, ನಂತರ ಹಂತ ಹಂತವಾಗಿ 2.55 ಲಕ್ಷ ರೂ. ಹೂಡಿಕೆ ಮಾಡಿದ್ದಾರೆ. ಆರಂಭಿಕ ಲಾಭಾಂಶವೆಂದು 40 ಸಾವಿರ ರೂ. ನೀಡುತ್ತಿದ್ದಂತೆ ಸ್ನೇಹಿತನ ಖಾತೆಯಿಂದಲೂ ಹಂತ ಹಂತವಾಗಿ 11.30 ಲಕ್ಷ ರೂ. ಹಣ ವರ್ಗಾವಣೆ ಮಾಡಿದ್ದಾರೆ. ಆದರೆ ಲಾಭಾಂಶ ಮೊತ್ತವನ್ನು ಡ್ರಾ ಮಾಡಲು ಮುಂದಾದಾಗ ಮತ್ತೊಂದು ಆ್ಯಪ್‌ನಲ್ಲಿ ಹೂಡಿಕೆ ಮಾಡುವಂತೆ ಆಫರ್ ಬಂತೇ ಹೊರತು ಹಣ ಸಿಗಲಿಲ್ಲ.

ಪ್ರಕರಣ 3: ಶಕ್ತಿನಗರದ ಇಂಜಿನಿಯರ್ ವಾಟ್ಸಾಪ್‌ಗೆ ಬಂದ ಸಂದೇಶದಲ್ಲಿ ಮಾರ್ಕೆಟಿಂಗ್ ಪ್ರಮೋಟ್ ಬಗ್ಗೆ ಮಾಹಿತಿ ತಿಳಿಸಲಾಗಿತ್ತು. ನಂತರ ಈ ಪ್ಲಾಟ್‌ಫಾರಂನಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಬರುವುದಾಗಿ ನಂಬಿಸಿ, ಹಂತ ಹಂತವಾಗಿ ಒಂದು ತಿಂಗಳಲ್ಲಿ 6.30 ಲಕ್ಷ ರೂ. ಹಣ ವರ್ಗಾವಣೆ ಮಾಡಿಸಿಕೊಂಡಿದ್ದಾರೆ. ನಂತರ ವಂಚಕರು ಇಂಜಿನಿಯರ್ ಸಂಪರ್ಕಕ್ಕೇ ಸಿಕ್ಕಿಲ್ಲ.

ಎಂ.ಕೆ.ಸವಿತಾ ಮೈಸೂರು ವಿವಿ ನೂತನ ಕುಲಸಚಿವರು



ಎಂ.ಕೆ.ಸವಿತಾ

ಮೈಸೂರು, ಜ.21–ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವ (ಆಡಳಿತ) ರಾಗಿ ಪ್ರವಾಸೋದ್ಯಮ ಇಲಾಖೆ ಮೈಸೂರು ಜಂಟಿ ನಿರ್ದೇಶಕರಾಗಿದ್ದ ಹಿರಿಯ ಕೆಎಎಸ್ ಅಧಿಕಾರಿ ಎಂ.ಕೆ.ಸವಿತಾ ಅವರನ್ನು ವರ್ಗಾಯಿಸಲಾಗಿದೆ. ಆ ಸ್ಥಾನದಲ್ಲಿದ್ದ ವಿ.ಆರ್. ಶೈಲಜಾ ಅವರಿಗೆ ಸ್ಥಳ ನಿಯೋಜಿಸಿಲ್ಲ.

ಕಸಾಯಿಖಾನೆಗೆ ಸಾಗಿಸುತ್ತಿದ್ದ 13 ಹಸು–ಕರುಗಳ ರಕ್ಷಣೆ

ವಾಹನ ಜಪ್ತಿ; ಚಾಲಕ ಸೇರಿ ಇಬ್ಬರು ಪರಾರಿ

ಮೈಸೂರು, ಜ.21(ಎಸ್‌ಬಿಡಿ)– ಕಸಾಯಿಖಾನೆಗೆ ಸಾಗಿಸುತ್ತಿದ್ದ 13 ಜಾನುವಾರುಗಳನ್ನು ಪೊಲೀಸರು ಸೋಮವಾರ ರಕ್ಷಿಸಿ, ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ನಗರದ ಬೋಗಾದಿ–ಗದ್ದಿಗೆ ಮುಖ್ಯ ರಸ್ತೆಯಲ್ಲಿ ಬೊಲೆರೋ ಪಿಕಪ್ ವಾಹನ (ಕೆಎ–13, ಸಿ–2087)ದಲ್ಲಿ 13 ಹಸು–ಕರುಗಳನ್ನು ಕಸಾಯಿಖಾನೆಗೆ ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಸರಸ್ವತಿಪುರಂ ಠಾಣೆಯ 112 ಗರುಡ ವಾಹನ ಸಿಬ್ಬಂದಿ ಸಿ.ಧನರಾಜ್ ಹಾಗೂ ಚಾಲಕ ಅಶೋಕ್ ಬಾನವಿ ಕನ್ವೆನ್ಷನಲ್ ಹಾಲ್ ಬಳಿ ಆ ವಾಹನವನ್ನು ತಡೆದಿದ್ದಾರೆ. ಪೊಲೀಸರನ್ನು ಕಂಡಾಕ್ಷಣ ಬೊಲೆರೋ ಪಿಕಪ್ ವಾಹನದ ಚಾಲಕ ಹಾಗೂ ಆತನ ಜೊತೆಯಲ್ಲಿದ್ದ ಮತ್ತೋರ್ವ ವಾಹನದಿಂದ ಇಳಿದು ಓಡಿ ಹೋಗಿದ್ದಾರೆ. ಬಳಿಕ ಪೊಲೀಸ್ ಸಿಬ್ಬಂದಿ ವಾಹನವನ್ನು ಪರಿಶೀಲಿಸಿದಾಗ 13 ಜಾನುವಾರುಗಳು ಪತ್ತೆಯಾಗಿವೆ. ಪ್ರಾಥಮಿಕ ವಿಚಾರಣೆಯಲ್ಲಿ ಆ ಜಾನುವಾರುಗಳನ್ನು ಕಸಾಯಿಖಾನೆಗೆ ಸಾಗಿಸುತ್ತಿದ್ದರು ಎಂದು ತಿಳಿದಿದೆ. ಕೂಡಲೇ ಜಾನುವಾರುಗಳ ರಕ್ಷಿಸಿ, ವಾಹನವನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ರಾಮಮಂದಿರ ಕಟ್ಟಿದ ನಂತರ ಸ್ವಾತಂತ್ರ್ಯ ಬಂದಿದ್ದು ಭಾರತಕ್ಕಲ್ಲ...!

ಮೈಸೂರು, ಜ. 21– ರಾಮಮಂದಿರ ಕಟ್ಟಿದ ನಂತರ ಭಾರತಕ್ಕೆ ಪೂರ್ಣ ಸ್ವಾತಂತ್ರ್ಯ ಬಂತು ಎಂದು ಹೇಳಿರುವ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿಕೆಯಲ್ಲಿ ಅರ್ಧ ಸತ್ಯವಿದೆ ಎಂದು ಸರ್ವೋದಯ ಕರ್ನಾಟಕದ ಉಗ್ರನರಸಿಂಹೇಗೌಡ ಅಭಿಪ್ರಾಯಪಟ್ಟಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹೇಳದೆ ಇರುವ ಇನ್ನರ್ಧ ಸತ್ಯ ಯಾವುದೆಂದರೆ ನಲವತ್ತೇಳರಲ್ಲಿ ಭಾರತ ಪಡೆದ ಸ್ವಾತಂತ್ರ್ಯ ಈ ಸನಾತನಿ ವೈದಿಕರ ಅರ್ಧ ಸ್ವಾತಂತ್ರ್ಯವನ್ನು ಕಿತ್ತುಕೊಂಡಿತ್ತು ಎನ್ನುವುದು. ಈ ಮೂಲಕ ಅವರು, ಭಾರತದ ಬ್ರಿಟಿಷ್ ಅಧಿಪತ್ಯವನ್ನು ತೊಲಗಿಸಿ ಸ್ವಾತಂತ್ರ್ಯ ಪಡೆದಿದ್ದು ತಮಗೆ ಇಷ್ಟವಾಗಿರಲಿಲ್ಲ. ಸ್ವತಂತ್ರ ಭಾರತದ ಶೂದ್ರರ ಆಳ್ವಿಕೆಯ ಪ್ರಜಾಪ್ರಭುತ್ವದಲ್ಲಿ ಸನಾತನಿ ವೈದಿಕರು ಸಮಾನತೆಯನ್ನು ಒಪ್ಪಿ ಬಾಳುವುದು ತಮಗೆ ಇಷ್ಟವಿರಲಿಲ್ಲ ಎಂಬ ಸತ್ಯವನ್ನು ಬಹಿರಂಗಪಡಿಸಿದ್ದಾರೆ.

ಮುಂದೆ, ಇನ್ನಷ್ಟು ಮಸೀದಿಗಳನ್ನು ಕೆಡವಿ ಅಲ್ಲಿ ಮಂದಿರಗಳನ್ನು ನಿರ್ಮಿಸಿ ಶೂದ್ರ ಶಂಭೂಕನನ್ನು ಕೊಂದ ರಾಮರಾಜ್ಯ ನಿರ್ಮಾಣ ಮಾಡಿ ವೈದಿಕ ರಾಜ್ಯ ಸ್ಥಾಪನೆಗೆ ಸಂಕಲ್ಪ ಮಾಡಿದ್ದಾರೆ ಎಂಬುದನ್ನು ಭಾರತದ ಎಲ್ಲಾ ಶೂದ್ರರು ಅರ್ಥ ಮಾಡಿಕೊಳ್ಳಬೇಕಿದೆ. ಆಧುನಿಕ ಭಾರತದಲ್ಲೂ ಸಂವಿಧಾನದ ನಿರ್ದೇಶನದಂತೆ ಸಮಸಮಾಜ ನಿರ್ಮಾಣದ ಪ್ರಜಾಪ್ರಭುತ್ವ ವ್ಯವಸ್ಥೆಯ ಒಳಗೂ ಶೂದ್ರರು ಎಷ್ಟೇ ದೊಡ್ಡ ಬಂಡವಾಳ ಶಾಹಿಗಳಾಗಿ ಬೆಳೆದರೂ ತಾವು ನಿರ್ಮಿಸಿರುವ ವ್ರತ, ಯಜ್ಞ, ಯಾಗಗಳ ಬಲೆಯಿಂದ ಬಿಡಿಸಿಕೊಳ್ಳಲಾರದೆ ತಮಗೆ ನಿರಂತರ ಧನ ವೃಷ್ಟಿ ಗರೆಯುತ್ತಾರೆ ಎಂಬುದು ಅವರ ನಂಬಿಕೆಯಾಗಿದೆ. ಇದಕ್ಕೆ ಪೂರಕವಾಗಿ ಈಗ ಕರ್ನಾಟಕದಲ್ಲಿ ನಡೆಯುತ್ತಿರುವ ಒಕ್ಕಲಿಗ ಮತ್ತು ವೀರಶೈವ ಲಿಂಗಾಯತರ ಬಂಡವಾಳಶಾಹಿ ಸಮಾವೇಶಗಳನ್ನು ನೋಡಬೇಕಾಗಿದೆ. ಎಲ್ಲಾ ಜಾತಿಯ ಶ್ರಮಜೀವಿಗಳಿಗೆ ಬಂಡವಾಳಶಾಹಿ ದೇಸೀಯ, ವಿದೇಶಿಯ ಒಕ್ಕಲಿಗ ವೀರಶೈವ ಲಿಂಗಾಯತ ಯಾರಾದರೂ ಶೋಷಿಸುವ ಕತ್ತಿಯ ಮೊನೆ ಹಿಂಸೆ ಕ್ರೌರ್ಯದಿಂದ ಕೂಡಿ ಸಂವಿಧಾನದ ಅಡಿಯಲ್ಲೇ ಇರಿಯುತ್ತದೆ ಎಂಬ ಸತ್ಯವನ್ನು ಎಲ್ಲಾ ಜಾತಿಯ ಶ್ರಮಜೀವಿಗಳು ಅರ್ಥ ಮಾಡಿಕೊಳ್ಳಬೇಕೆಂದು ಸರ್ವೋದಯ ಕರ್ನಾಟಕ ಪ್ರೀತಿಯಿಂದ ಎಚ್ಚರಿಸುತ್ತದೆ.

ಸ್ವಪಕ್ಷದವರ ಹೇಳಿಕೆಗಳಿಂದಲೇ ಕಾರ್ಯಕರ್ತರ ಮನಸ್ಸಿಗೆ ನೋವು

ತಾರ್ಕಿಕ ಅಂತ್ಯಕ್ಕೆ ಬಿಜೆಪಿ ಸಂಘಟನಾ ಪರ್ವ ಸಭೆಯಲ್ಲಿ ಶಾಸಕರ ಆಗ್ರಹ



ಬೆಂಗಳೂರು, ಜ.21– ಬಿಜೆಪಿಯ ಕೆಲ ನಾಯಕರು ಸ್ವಪಕ್ಷದವರ ಬಗ್ಗೆಯೇ ಲಘುವಾಗಿ ಮಾತನಾಡುವುದರಿಂದ ಪಕ್ಷದ ಇಮೇಜ್‌ಗೆ ಧಕ್ಕೆ ಆಗುವುದರ ಜೊತೆಗೆ ಕಾರ್ಯಕರ್ತರ ಮನಸ್ಸಿಗೂ ನೋವುಂಟಾಗಿದೆ. ಇಂತಹ ವ್ಯತಿರಿಕ್ತ ಬೆಳವಣಿಗೆ ತಾರ್ಕಿಕ ಅಂತ್ಯ ಕಾಣಬೇಕೆಂಬುದು ಶಾಸಕರುಗಳ ಆಗ್ರಹವಾಗಿದೆ ಎಂದು ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ತಿಳಿಸಿದ್ದಾರೆ.

ಪಕ್ಷದ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ನಡೆದ 'ಸಂಘಟನಾ ಪರ್ವ' ಸಭೆ ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರ್ವಾಲ್ ಅವರ ಸಮ್ಮುಖ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ 'ಸಂಘಟನಾ ಪರ್ವ' ಸಭೆ ನಡೆದಿದೆ. ಬಹುತೇಕ ಎಲ್ಲ ಶಾಸಕರು, ವಿಧಾನಪರಿಷತ್ ಸದಸ್ಯರು ಪಾಲ್ಗೊಂಡು ಪ್ರಸ್ತುತ ರಾಜಕೀಯ ಪರಿಸ್ಥಿತಿ ಬಗ್ಗೆ ಮಾತನಾಡಿದ್ದಾರೆ. ಕಾರ್ಯಕರ್ತರ ಪರವಾಗಿ, ಅವರ ಧ್ವನಿಯಾಗಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಸಭೆಯ ನಡಾವಳಿ ಕೇಂದ್ರದ ನಾಯಕರು ಸೇರಿದಂತೆ ಎಲ್ಲಿಗೆ ತಲುಪಬೇಕೋ ಅಲ್ಲಿಗೆ ಮುಟ್ಟಲಿದೆ ಎಂದರು.

ಇತ್ತೀಚೆಗೆ ಕೆಲವರ ಮಾತುಗಳಿಂದ ಪಕ್ಷದ ಇಮೇಜ್‌ಗೆ ಧಕ್ಕೆ ಆಗುತ್ತಿದೆ. ಕಾರ್ಯಕರ್ತರ ಮನಸ್ಸಿಗೂ ನೋವುಂಟಾಗುತ್ತಿದೆ. ಇದೆಲ್ಲಾ ತಾರ್ಕಿಕ ಅಂತ್ಯ ಕಾಣಬೇಕು. ಹಾದಿಬೀದಿಯಲ್ಲಿ ಮಾತನಾಡುವವರಿಗೆ ರಾಷ್ಟ್ರೀಯ ನಾಯಕರು ತಾಕೀತು ಮಾಡಬೇಕು. ಪರಿಸ್ಥಿತಿ ತಿಳಿಯಾಗಿ ಎಲ್ಲರೂ ಪಕ್ಷದ ಸಂಘಟನೆ ಹಾಗೂ ಬಲವರ್ಧನೆಗೆ ಕೈಜೋಡಿಸಬೇಕು. ರಾಜ್ಯಾಧ್ಯಕ್ಷರಿಗೆ ಶಕ್ತಿ ತುಂಬುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಸದಸ್ಯತ್ವ ಅಭಿಯಾನ, ಮಂಡಲ ಅಧ್ಯಕ್ಷರು, ಜಿಲ್ಲಾ ಅಧ್ಯಕ್ಷರ ನಿಯುಕ್ತಿ ಪ್ರಕ್ರಿಯೆ ಅಚ್ಚುಕಟ್ಟಾಗಿ ನಡೆದಿದ್ದು, 2028ರಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಸಂಘಟಿತವಾಗಿ ಕೆಲಸ ಮಾಡುವ ವಾತಾವರಣ ನಿರ್ಮಾಣವಾಗಬೇಕು. ಪಕ್ಷದಲ್ಲಿ ಗೊಂದಲ ಉಂಟುಮಾಡುವ ಪ್ರಯತ್ನಕ್ಕೆ ತೆರೆ ಎಳೆಯ ಬೇಕೆಂದು ಶಾಸಕರು ಆಗ್ರಹಪೂರ್ವಕ ಮನವಿ ಮಾಡಿದ್ದಾರೆ ಎಂದರು.

ಬಿಜೆಪಿ ನಾಯಕರ ಸಭೆಯಲ್ಲಿ ಮಹತ್ವದ ಚರ್ಚೆ

ಬೆಂಗಳೂರು: ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾಮೋಹನ್ ದಾಸ್ ಅಗರ್ವಾಲ್ ಸಮ್ಮುಖದಲ್ಲಿ ನಡೆದ ಬಿಜೆಪಿ ನಾಯಕರ ಸಭೆಯಲ್ಲಿ ಹಲವು ವಿಚಾರಗಳ ಬಗ್ಗೆ ಮಹತ್ವದ ಚರ್ಚೆ ನಡೆದಿದೆ ಎನ್ನಲಾಗಿದೆ.

ಯತ್ನಾಳ್, ರಮೇಶ್ ಜಾರಕಿಹೊಳಿ, ಕುಮಾರ್ ಬಂಗಾರಪ್ಪ ಹಾಗೂ ಅರವಿಂದ್ ಲಿಂಬಾವಳಿ ಸಾರ್ವಜನಿಕವಾಗಿ ಮನಬಂದಂತೆ ಮಾತನಾಡುತ್ತಿರುವುದರಿಂದ ಪಕ್ಷಕ್ಕೆ ಘಾಸಿಯಾಗುತ್ತಿದೆ. ಅವರು ಕಾಂಗ್ರೆಸ್ ಜೊತೆ ಕೈಜೋಡಿಸಿದಂತಿದೆ. ತಕ್ಷಣ ಈ ನಾಲ್ವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಹೈಕಮಾಂಡ್‌ಗೆ ಪತ್ರ ಬರೆದಿರುವ ಬಗ್ಗೆಯೂ ಸುದೀರ್ಘ ಚರ್ಚೆ ನಡೆದಿದ್ದು, ಈ ಸಂಬಂಧ ಹೈಕಮಾಂಡ್ ನಿರ್ಧಾರಕ್ಕೆ ಬದ್ಧವಾಗಿರಲು ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ತಿಳಿದುಬಂದಿದೆ.

ಮೊದಲ ಹಂತದಲ್ಲಿ ಎಲ್ಲಾ ಜಿಲ್ಲಾ ಘಟಕಗಳಿಗೂ ನೂತನ ಅಧ್ಯಕ್ಷರ ನೇಮಕಾತಿ ನಡೆಯಲಿದ್ದು, ಪ್ರತಿ ಜಿಲ್ಲೆಯಿಂದ ಮೂವರ ಹೆಸರು ಶಿಫಾರಸ್ಸು ಮಾಡಬೇಕು. ಹೈಕಮಾಂಡ್ ಪರಿಶೀಲಿಸಿ ಅಂತಿಮಗೊಳಿಸಲಿದೆ. ಇದಾದ ನಂತರವೇ ರಾಜ್ಯ ಘಟಕದ ಪ್ರಕ್ರಿಯೆ ಶುರುವಾಗಲಿದೆ. 2028ರ ಚುನಾವಣೆಗೆ ಈಗಿನಿಂದಲೇ ಸಂಘಟನೆ ಆಗಬೇಕು. ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡಬೇಕು. ಎಲ್ಲರೂ ಒಟ್ಟಾಗಿ ಪಕ್ಷ ಬಲಪಡಿಸಬೇಕು ಎಂದು ಅಗರ್ವಾಲ್ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

